ವೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 27 ಗುರುವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 219 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಡಿ.ಕೆ.ಶಿವಕುಮಾರ್ ಬಣದಲ್ಲಿ ಅಚ್ಛೇದಿನ್ ಆಶಯ!

ಬೆಂಗಳೂರು, ನ. 26 (ಕೆಎಂಶಿ)–ಕರ್ನಾಟಕದ ಮುಖ್ಯಮಂತ್ರಿ ಆಗಲೇಬೇಕೆಂಬ ಹಠಕ್ಕೆ ಬಿದ್ದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣದ ಶಾಸಕರಲ್ಲಿ ಆಶಾಭಾವನೆಗಳು ಗರಿಗೆದರಿವೆ.

ದೆಹಲಿಯಿಂದ ಆಗಮಿಸಿದ ಶಿವಕುಮಾರ್ ಪರ ಶಾಸಕ ಬಾಲಕೃಷ್ಣ, ತಮ್ಮ ಪ್ರವಾಸ ಫಲಪ್ರದವಾಗುವ ಹಾದಿಯಲ್ಲಿದೆ ಎಂಬ ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

ದೆಹಲಿಯಲ್ಲಿ ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಭೇಟಿ ಮಾಡಿ ನಗರಕ್ಕೆ ಆಗಮಿಸಿದ ಪ್ರಿಯಾಂಕ್ ಖರ್ಗೆ ಉಪಮುಖ್ಯಮಂತ್ರಿ ಶಿವಕುಮಾರ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ದೆಹಲಿ ಸಂದೇಶವನ್ನು ತಲುಪಿಸಿದರು. ಈ ಮಧ್ಯೆ ಶಿವಕುಮಾರ್ ಪಕ್ಷದ ಕೆಲವು ಹಿರಿಯ ನಾಯಕರು, ಅದರಲ್ಲೂ ಸಿದ್ದರಾಮಯ್ಯ ಪರ ಹೆಚ್ಚು ಒಲವು ಇರುವ ಸಚಿವರೊಂದಿಗೆ ಮನವೊಲಿಕೆ ಮಾತುಕತೆಯಲ್ಲಿ ತೊಡಗಿದ್ದಾರೆ. ಸಚಿವರಾದ ಕೆ.ಜೆ.ಜಾರ್ಜ್, ಜಮೀರ್ ಅಹಮದ್, ಸತೀಶ್ ಜಾರಕಿಹೊಳಿ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡುತ್ತಿರುವ ಡಿ.ಕೆ. ಶಿವಕುಮಾರ್, ▶ 6ನೇ ಪುಟಕ್ಕೆ



ಡಿ.ಕೆ.ಶಿವಕುಮಾರ್

ಡಿಕೆಶಿ ಭೇಟಿ ಮಾಡಿದ್ದು ನಿಜ; ನಾಯಕತ್ವ ಚರ್ಚೆ ಆಗಿಲ್ಲ




ಸತೀಶ್ ಜಾರಕಿಹೊಳಿ

ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದು ನಿಜ. ಆದರೆ, ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ಆಗಿಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದರು. ಬೆಂಗಳೂರಲ್ಲಿ ಮಾತನಾಡಿದ ಅವರು, ▶ 6ನೇ ಪುಟಕ್ಕೆ

ದಯವಿಟ್ಟು ಕಾಯಿರಿ...!

ಡಿಕೆಶಿಗೆ ರಾಹುಲ್ ಗಾಂಧಿ ವಾಟ್ಸಾಪ್ ಸಂದೇಶ



ಬೆಂಗಳೂರು, ನ.26– ರಾಹುಲ್ ಗಾಂಧಿ ಅವರು ಶಿವಕುಮಾರ್ ಅವರಿಗೆ ಸಂಕ್ಷಿಪ್ತ ವಾಟ್ಸಾಪ್ ಸಂದೇಶದ ಮೂಲಕ ಪ್ರತಿಕ್ರಿಯಿಸಿದ್ದು, 'ದಯವಿಟ್ಟು ಕಾಯಿರಿ... ನಾನು ನಿಮಗೆ ಕರೆ ಮಾಡುತ್ತೇನೆ' ಎಂದು ಹೇಳಿರುವುದಾಗಿ ವರದಿಯಾಗಿದೆ. ಈ ನಡುವೆ ಇಂದು ಮಾಧ್ಯಮದ ಜೊತೆ ಮಾತನಾಡಿದ ಎಐಸಿಸಿ ಅಧ್ಯಕ್ಷ ಖರ್ಗೆ, ನಾವು ಈ ಸಮಸ್ಯೆಗಳನ್ನು ಪರಿಹರಿಸುತ್ತೇವೆ. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ನಾನು ಒಟ್ಟಿಗೆ ▶ 6ನೇ ಪುಟಕ್ಕೆ

ಉಳಿದ ಅವಧಿಗೆ ಡಿಕೆಶಿ ಸಿಎಂ ಆಗಬೇಕು



ಕುಂದೂರು,ನ.26–ರಾಜ್ಯ ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿ ಹಂಚಿಕೆ ಕುರಿತು ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಕುರಿತು ಆದಿಚುಂಚನಗಿರಿ ಮಠಾಧೀಶರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಹಾಸನ ಜಿಲ್ಲೆ ಚೆನ್ನರಾಯಪಟ್ಟಣ ತಾಲೂಕು ಕುಂದೂರಿನ ಬಿಜಿಎಸ್ ಮಠದಲ್ಲಿ ಮಹತ್ವದ ಹೇಳಿಕೆ ನೀಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪರವಾಗಿ ಬ್ಯಾಟಿಂಗ್ ಮಾಡಿದ ಶ್ರೀಗಳು, ಉಳಿದ ಎರಡೂವರೆ ▶ 6ನೇ ಪುಟಕ್ಕೆ

ಎರಡ್ಮೂರು ದಿನದಲ್ಲಿ ಒಳ್ಳೆಯ ಸುದ್ದಿ...



"ಕೂಲಿ ಮಾಡಿರುವವರಿಗೆ ಕೂಲಿ ಕೊಡುವಂತೆ ರಾಜ್ಯದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತಂದಿರುವ ನಮ್ಮ ನಾಯಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೂ ಕೂಲಿ ಕೊಡಬೇಕು. ಶಿವಕುಮಾರ್ ಅವರು ಪಕ್ಷಕ್ಕಾಗಿ ಬೆವರು ಹರಿಸಿದ್ದಾರೆ. ಹಾಗಾಗಿ, ಅವರನ್ನು ಮುಖ್ಯಮಂತ್ರಿ ಮಾಡಬೇಕು. ಅವರು ಮತ್ತು ನಾನು ಈ ಜಿಲ್ಲೆಯವರು. ಇಂತಹ ಸಂದರ್ಭದಲ್ಲಿ ನಾನು ಅವರ ಜೊತೆಗಿದ್ದು, ಎಲ್ಲಾ ರೀತಿಯ ಸಹಕಾರ ಕೊಡುವುದು ನನ್ನ ಧರ್ಮ. ಆ ನಿಟ್ಟಿನಲ್ಲಿ ಎರಡ್ಮೂರು ದಿನಗಳಲ್ಲಿ ಒಳ್ಳೆಯ ಸುದ್ದಿ ಬರಲಿದೆ ಎಂಬ ವಿಶ್ವಾಸವಿದೆ. ನಮ್ಮ ನಾಯಕರು ಸಹ ಒಳ್ಳೆಯ ಸುದ್ದಿ ಸಿಗಲಿದೆ ಎಂದಿದ್ದಾರೆ. ಹಾಗಾಗಿ, ನಾವು ಬಹಳ ಖುಷಿಯಾಗಿದ್ದೇವೆ. ಬೆಂಗಳೂರಿಗೆ ತುರ್ತಾಗಿ ಬರುವಂತೆ ಡಿಸಿಎಂ ಕರೆದಿದ್ದಾರೆ. ಅಲ್ಲಿ ಶಾಸಕರ ಸಭೆ ಮಾಡುತ್ತಾರೋ ಅಥವಾ ಮಾತುಕತೆ ನಡೆಸುತ್ತಾರೊ ಗೊತ್ತಿಲ್ಲ.


–ಇಕ್ಬಾಲ್ ಹುಸೇನ್, ರಾಮನಗರ ಶಾಸಕ

ಪರಮೇಶ್ವರ್‌ಗೆ ಹಳೇ ಕೂಲಿ ಕ್ಲಿಯರ್ ಆಗಲಿ!



"ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲಿ. ಆದರೆ, ಅದಕ್ಕೆ ಮೊದಲು ಡಾ.ಜಿ.ಪರಮೇಶ್ವರ್‌ಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು. ಅವರ 'ಹಳೇ ಕೂಲಿ' ಮೊದಲು ಕ್ಲಿಯರ್ ಆಗಲಿ. 2013ರಲ್ಲಿ ಪರಮೇಶ್ವರ್ ಪಕ್ಷವನ್ನು ಅಧಿಕಾರಕ್ಕೆ ತಂದರು. ಆದರೆ ಅವರು ಸೋತು ಬಿಟ್ಟರು. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕೂಲಿ ಕೇಳಿದಂತೆ ಮುಖ್ಯಮಂತ್ರಿ ಸ್ಥಾನ ಕೇಳುತ್ತಿದ್ದಾರೆ. ಹಾಗಾದರೆ ಪರಮೇಶ್ವರ್ ಕೂಡ ಸರ್ಕಾರ ಅಧಿಕಾರಕ್ಕೆ ತಂದಿದ್ದಾರೆ ಅಂದ ಮೇಲೆ ಅವರು ಕೂಡ ಕೂಲಿ ಕೇಳಬೇಕಲ್ಲ. ಮೊದಲು ಜಿ.ಪರಮೇಶ್ವರ್ ಅವರ ಹಳೇ ಕೂಲಿ ಕ್ಲಿಯರ್ ಆಗಲಿ ನಂತರ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಬಗ್ಗೆ ನೋಡೋಣ. ನನ್ನ ವೈಯಕ್ತಿಕ ಆಶಯ ಸಿದ್ದರಾಮಯ್ಯನವರೇ ಐದು ವರ್ಷ ಮುಖ್ಯಮಂತ್ರಿ ಆಗಿರಬೇಕು. ಒಂದು ವೇಳೆ ಅನಿವಾರ್ಯತೆ ಬಂದರೆ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿ ಆಗಲಿ. **– ಕೆ.ಎನ್.ರಾಜಣ್ಣ, ಮಾಜಿ ಸಚಿವರು.**

ಸಂವಿಧಾನ ದಿನಾಚರಣೆ



ಡಾ.ಬಿ.ಆರ್.ಅಂಬೇಡ್ಕರ್ ರಚಿತ ಭಾರತದ ಸಂವಿಧಾನ ದಿನಾಚರಣೆಯನ್ನು ಬುಧವಾರ ದೇಶಾದ್ಯಂತ ಗೌರವಪೂರ್ವಕವಾಗಿ ಆಚರಿಸಲಾಯಿತು. ಮೈಸೂರು, ಕೊಡಗು, ಮಂಡ್ಯ, ಚಾಮರಾಜನಗರ, ಹಾಸನ ಸೇರಿದಂತೆ ರಾಜ್ಯದಲ್ಲಿಯೂ ಸಂವಿಧಾನ ದಿನಾಚರಣೆಯನ್ನು ವಿಶಿಷ್ಟ ಕಾರ್ಯಕ್ರಮಗಳ ಮೂಲಕ ಆಚರಿಸಲಾಯಿತು. ಸಚಿತ್ರ–ಸವಿವರ ವರದಿ ಒಳಪುಟಗಳಲ್ಲಿ.

ವಿದ್ಯಾರ್ಥಿನಿಗೆ ದೈಹಿಕವಾಗಿ ಸಹಕರಿಸುವಂತೆ ಕಿರುಕುಳ

ಮೈಸೂರು ವಿವಿ ಪ್ರಾಧ್ಯಾಪಕ ಡಾ.ಉಮಾಕಾಂತ್ ಅಮಾನತು

- ಸಿಂಡಿಕೇಟ್ ಸಭೆ ನಿರ್ಣಯ
- ದೈಹಿಕ ಶಿಕ್ಷಣ ವಿಭಾಗಕ್ಕೆ ಹೊರಗಿನವರ ನಿರ್ದೇಶಕರನ್ನಾಗಿ ನೇಮಿಸಲು ಚಿಂತನೆ
- ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಕಲ್ಪಿಸಲು ತಾಕೀತು

ಮೈಸೂರು, ನ.26– ವಿದ್ಯಾರ್ಥಿನಿಗೆ ಅಸಭ್ಯ ಮೆಸೇಜ್‌ಗಳನ್ನು ಕಳಿಸಿ, ಕಿರುಕುಳ ನೀಡಿದ ಆರೋಪದ ಮೇರೆಗೆ ಮೈಸೂರು ವಿಶ್ವವಿದ್ಯಾನಿಲಯದ ರೇಷ್ಮೆ ವಿಭಾಗದ ಪ್ರಾಧ್ಯಾಪಕನನ್ನು ಸೇವೆಯಿಂದ ಅಮಾನತುಪಡಿಸಿ ಮೈಸೂರು ವಿವಿ ಸಿಂಡಿಕೇಟ್ ಸಭೆ ನಿರ್ಣಯ ಕೈಗೊಂಡಿದೆ.

ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ.ಲೋಕನಾಥ್ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಸಿಂಡಿಕೇಟ್ ಸಭೆಯಲ್ಲಿ ಈ ವಿಷಯ ಪ್ರಸ್ತಾಪವಾಯಿತು. ಪ್ರಾಧ್ಯಾಪಕ ಡಾ.ಉಮಾಕಾಂತ್ ವಿದ್ಯಾರ್ಥಿನಿಗೆ ಅಸಭ್ಯ ಮೆಸೇಜ್‌ಗಳನ್ನು ರವಾನಿಸಿ, ತನಗೆ ದೈಹಿಕವಾಗಿ ಸಹಕರಿಸಬೇಕು ಎಂದು ಕಿರುಕುಳ ನೀಡುತ್ತಿರುವುದಾಗಿ ವಿದ್ಯಾರ್ಥಿನಿ ಸೋಮವಾರ ವಿವಿಗೆ ದೂರು ಸಲ್ಲಿಸಿದ್ದರು. ಸದರಿ ವಿದ್ಯಾರ್ಥಿನಿಯೂ ಸುಮಾರು ನಾಲ್ಕೈದು ತಿಂಗಳ ಕಾಲ ಪ್ರಾಧ್ಯಾಪಕನ ಕಿರುಕುಳವನ್ನು ಸಹಿಸಿಕೊಂಡಿದ್ದು, ಕೊನೆಗೆ ಅನ್ಯ ಮಾರ್ಗ ವಿಲ್ಲದೇ ಲಿಖಿತ ದೂರು ನೀಡಿದ್ದರು. ಈ ಸಂಬಂಧ ಆಂತರಿಕ ತನಿಖೆಗೆ ಸಮಿತಿ ಒಂದನ್ನು ರಚಿಸಲಾಗಿತ್ತು. ಸಮಿತಿಯು ಕೂಲಂಕುಷವಾಗಿ ವಿಚಾರಣೆ ನಡೆಸಿ, ವಿದ್ಯಾರ್ಥಿನಿಗೆ ಪ್ರಾಧ್ಯಾಪಕ ರವಾನಿಸಿರುವ ಮೆಸೇಜ್‌ಗಳನ್ನು ಪರಿಶೀಲಿಸಿ, ಒಂದೇ ದಿನದಲ್ಲಿ ವರದಿ ಸಲ್ಲಿಸಿದ್ದು, ಪ್ರಾಧ್ಯಾಪಕನ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದೆ ಎಂಬುದನ್ನು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ▶ 6ನೇ ಪುಟಕ್ಕೆ

ಇಂದಿನಿಂದ ಜೆಎಸ್‌ಎಸ್ ರಂಗೋತ್ಸವ

ಮೈಸೂರು,ನ.26–ನ.27ರಿಂದ 29ರವರೆಗೆ ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಜೆಎಸ್‌ಎಸ್ ರಂಗೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಈ ರಂಗೋತ್ಸವದಲ್ಲಿ ಮೂರು ನಾಟಕಗಳನ್ನು ಪ್ರದರ್ಶಿಸಲಾಗುವುದು.

ನ.27ರಂದು ಬೆಳಗ್ಗೆ 10.45 ಗಂಟೆಗೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯಾಶೀರ್ವಾದದೊಂದಿಗೆ ರಂಗಾಯಣದ ಹಿರಿಯ ಕಲಾವಿದ ಮೈಮ್ ರಮೇಶ್ ಕಾರ್ಯಕ್ರಮ ಉದ್ಘಾಟಿಸುವರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ವಿದ್ಯಾರ್ಥಿನಿಯರು ಮಂಜುನಾಥ್ ಬಿಳಿಕೆರೆಯವರ 'ಶರೀಫ' ನಾಟಕ ಪ್ರದರ್ಶಿಸಲಿದ್ದಾರೆ.

ನ.28ರಂದು ಮೈಸೂರು ಶಿಕ್ಷಕರ ಬಡಾವಣೆಯ ಜೆಎಸ್‌ಎಸ್ ಪಬ್ಲಿಕ್ ಶಾಲೆ ವಿದ್ಯಾರ್ಥಿಗಳು ಕೃಷ್ಣಮೂರ್ತಿ ಬಿಳಿಗೆರೆಯವರ 'ಅಂಗಭಂಗದ ರಾಜ್ಯದಲ್ಲಿ' ನಾಟಕ ಹಾಗೂ 29 ರಂದು ಮೈಸೂರು ಲಕ್ಷ್ಮೀಪುರಂ ಜೆಎಸ್‌ಎಸ್ ಪ್ರೌಢಶಾಲೆಯ ವಿದ್ಯಾರ್ಥಿಗಳು ಡಾ. ವೈದೇಹಿಯವರ "ಧಾಂ... ಧೂಂ... ಸುಂಟರಗಾಳಿ" ನಾಟಕವನ್ನು ಪ್ರದರ್ಶಿಸುವರು.

ನ. 29ರಂದು ಬೆಳಗ್ಗೆ 11.15 ಗಂಟೆಗೆ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶ್ರೀ ಗೌರೀಶಂಕರ ನಂದಿ ಧ್ವಜ ಸಂಘದ ಅಧ್ಯಕ್ಷ ಮಹದೇವಪ್ಪ ಉಡಿಗಾಲ ಅಧ್ಯಕ್ಷತೆ ವಹಿಸಲಿದ್ದು, ನೂಪುರ ಟ್ರಸ್ಟ್‌ನ ನಿರ್ದೇಶಕ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪ್ರೊ.ಕೆ.ರಾಮಮೂರ್ತಿರಾವ್ ಸಮಾರೋಪ ಭಾಷಣ ಮಾಡಲಿದ್ದಾರೆ.

ಕಬ್ಬಿಗೆ ಏಕರೂಪ ದರ ನಿಗದಿಗೆ ಆಗ್ರಹ

ಮೈಸೂರು,ನ.26(ಜಿಎ)–ಉತ್ತರ ಕರ್ನಾಟಕ, ದಕ್ಷಿಣ ಕರ್ನಾಟಕದ ಕಬ್ಬು ಬೆಳೆಗಳಿಗೆ ಏಕರೂಪ ದರ ನಿಗದಿಗೊಳಿಸಬೇಕು ಎಂದು ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ಎಲ್.ಭರತ್‌ರಾಜ್ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಬ್ಬಿನ ಬೆಲೆಯಲ್ಲಿ ಏಕರೂಪ ಬೆಲೆ ನಿಗದಿಗೊಳಿಸಿ ಕಟಾವು ಮತ್ತು ಸಾಗಾಣಿಕೆ ವೆಚ್ಚ ಕಳೆದು ಪ್ರತಿ ಟನ್‌ಗೆ 3200 ರೂ., ಅಥವಾ ಕಟಾವು ಮತ್ತು ಸಾಗಾಣಿಕೆ ವೆಚ್ಚ ಸೇರಿಸಿ ಪ್ರತಿ ಟನ್‌ಗೆ 4 ಸಾವಿರ ರೂ.ರಿಕವರಿಗೆ ಮಾನದಂಡ ಕೈಬಿಟ್ಟು ರಾಜ್ಯಾದ್ಯಂತ ಏಕರೂಪ ದರ ನಿಗದಿಗೊಳಿಸಬೇಕೆಂದು ತಮ್ಮ ಸಂಘ ಆಗ್ರಹಿಸುತ್ತದೆ ಎಂದರು.



ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹೋರಾಟ ತೀವ್ರವಾದಾಗ ರಾಜ್ಯ ಸರ್ಕಾರ ಮಧ್ಯ ಪ್ರವೇಶ ಮಾಡಿ ಟನ್ ಕಬ್ಬಿಗೆ ಕಟಾವು ಮತ್ತು ಸಾಗಾಣಿಕೆ ವೆಚ್ಚ ಕಳೆದು 3200 ರೂ. ಹಾಗೂ 3300 ರೂ. ನಿಗದಿಪಡಿಸಿದೆ. ಆದರೆ ಈ ದರವನ್ನು ದಕ್ಷಿಣ ಕರ್ನಾಟಕ ಜಿಲ್ಲೆಗಳ ಬೆಳೆಗಾರರಿಗೆ ನೀಡದೇ ತಾರತಮ್ಯ ಮಾಡಲಾಗುತ್ತಿದೆ. ಈ ರೀತಿ ಕಬ್ಬು ಬೆಳೆಗಾರರನ್ನು ಒಡೆದು ಆಳುವ ನೀತಿ ಅನುಸರಿಸಲಾಗುತ್ತಿದೆ. ಇದು ಸರಿಯಲ್ಲ. ಉತ್ತರ ಕರ್ನಾಟಕದ ಕಬ್ಬು ಬೆಳೆಗಾರರಿಗೆ ಹೋಲಿಸಿದರೆ ದಕ್ಷಿಣ ಕರ್ನಾಟಕದ ಕಬ್ಬು ಬೆಳೆಗಾರರಿಗೆ ಸುಮಾರು 1 ಸಾವಿರ ರೂ., ನಷ್ಟವುಂಟಾಗುತ್ತಿದೆ. ಆದರೆ ರಾಜ್ಯದ ಎಲ್ಲೆಡೆ ಕಬ್ಬು ಬೆಳೆಯಲು ತಗಲುವ ವೆಚ್ಚ ಒಂದೇ ಆಗಿರುತ್ತದೆ ಎಂದರು.

ನ್ಯಾಯಯುತ ಲಾಭದಾಯಕ ಬೆಲೆ ಎಫ್‌ಆರ್‌ಪಿ ನಿಗದಿಪಡಿಸುವಲ್ಲಿಯೂ ಕೇಂದ್ರ ಸರ್ಕಾರ ವಂಚನೆ ಮಾಡಿದೆ. ಹರಿಯಾಣ, ಉತ್ತರ ಪ್ರದೇಶ, ತಮಿಳುನಾಡುಗಳ ಮಾದರಿಯಲ್ಲಿ ಪ್ರತಿ ಟನ್‌ಗೆ ಸರ್ಕಾರ 500 ರೂ., ಎಸ್‌ಎಪಿ ನಿಗದಿಗೊಳಿಸಬೇಕು. ಈ ಹಿಂದೆ ನಿಗದಿ ಮಾಡಿದ್ದ ಟನ್‌ಗೆ 150 ರೂ.,ಗಳ ಬಾಕಿಯನ್ನು ಕೂಡಲೇ ಪಾವತಿಸಬೇಕು. ಕಬ್ಬಿನ ಉಪ ಉತ್ಪನ್ನಗಳಾದ ಮೊಲಾಸಸ್, ಕಾಕಂಬಿ, ಬಗಾಸ್, ಡಿಸ್ಟಿಲರಿ, ಕೋಜೆನ್ ಮೊದಲಾದವುಗಳ ಲಾಭಾಂಶದಲ್ಲಿ ಶೇ.50 ಪಾಲು ರೈತರಿಗೆ ನೀಡಬೇಕು. ಈ ಬೇಡಿಕೆ ಈಡೇರಿಸದಿದ್ದರೆ ಹೋರಾಟ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.


ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಪ್ರಾಂತ್ಯ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ಚಿಕ್ಕಣ್ಣೇಗೌಡ, ಸತೀಶ್, ಸಣ್ಣ ನಾಯಕ, ಮಾದಪ್ಪ ಉಪಸ್ಥಿತರಿದ್ದರು.

ಅಭಿನಂದನೆ



ಶ್ರೀ ಬಾಬು ಜಗಜೀವನ್‌ರಾಮ್ ಅವರ ಮೊಮ್ಮಗ ಹಾಗೂ ಲೋಕಸಭಾ ಮಾಜಿ ಸ್ಪೀಕರ್ ಮೀರಾಕುಮಾರ್ ಅವರ ಪುತ್ರ, ಎಐಸಿಸಿ ವಕ್ತಾರ ಆನ್‌ಶುಲ್ ಅವಿಜಿತ್ ಅವರು ಮೈಸೂರಿನ ಟಿಎನ್‌ಎನ್ ಆದರ್ಶ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅಭಿನಂದಿಸಲಾಯಿತು. ಈ ವೇಳೆ ಟಿಎನ್‌ಎನ್ ಅವರ ಮೊಮ್ಮಗ ಪ್ರಫುಲ್‌ಕುಮಾರ್, ವಕೀಲ ಅರವಿಂದ್, ನಿಲಯ ಕಾರ್ಯದರ್ಶಿ ಎಂ. ಪಾಟೀಲ್, ಪುಟ್ಟರಾಜು, ಗ್ರಾಪಂ ಸದಸ್ಯ ಮಹೇಶ್, ಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.

ನೇಮಕಾತಿ ಪತ್ರ ವಿತರಣೆ...



ಮೈಸೂರು ನಗರ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗಕ್ಕೆ ಪ್ರಧಾನ ಕಾರ್ಯದರ್ಶಿಯಾಗಿ ವಿನೋದ್, ಸಂಘಟನಾ ಕಾರ್ಯದರ್ಶಿಯಾಗಿ ಕಾಂತರಾಜ್, ಸಹ ಕಾರ್ಯದರ್ಶಿಯಾಗಿ ಶ್ರೀರಾಮ್, ಸಂಚಾಲಕರಾಗಿ ಶ್ರೀಮತಿ ರೂಪ ಅವರು ನೇಮಕಗೊಂಡಿದ್ದು, ಅವರಿಗೆ ಶಾಸಕ ತನ್ವೀರ್ ಸೇಠ್ ನೇಮಕಾತಿ ಪತ್ರ ವಿತರಿಸಿದರು. ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್.ಮೂರ್ತಿ, ನಗರ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್.ನಾಗೇಶ್, ಇಂದಿರಾ ಗಾಂಧಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರವಿಮಂಚೇಗೌಡನಕೊಪ್ಪಲ್, ಯುವ ಕಾಂಗ್ರೆಸ್ ಮುಖಂಡ ದೀಪಕ್ ಇದ್ದರು.

ಸೂಟ್‌ಕೇಸ್‌ನಲ್ಲಿ ಯುವತಿ ಶವ; ಲಿವ್–ಇನ್ ಪಾರ್ಟನರ್ ಬಂಧನ

ಥಾಣೆ: ಮಹಾರಾಷ್ಟ್ರದ ಥಾಣೆ ಜಿಲ್ಲೆಯ ತೊರೆಯ ದಡದಲ್ಲಿ ಸೂಟ್‌ಕೇಸ್‌ನಲ್ಲಿ ಯುವತಿಯೊಬ್ಬರ ಶವ ಪತ್ತೆಯಾಗಿದ್ದು, ಅವರನ್ನು ಕೊಲೆ ಮಾಡಿದ ಆರೋಪದ ಮೇಲೆ ಅವರ ಲಿವ್–ಇನ್ ಪಾರ್ಟನರ್ ಅನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.

ನ.21ರಂದು ಇಬ್ಬರ ನಡುವೆ ಜಗಳ ನಡೆದಿದ್ದು, ಆರೋಪಿಯು ಯುವತಿ ಕೊಂದು ಮರುದಿನ ಶವವನ್ನು ಸೂಟ್‌ಕೇಸ್‌ನಲ್ಲಿ ತುಂಬಿ, ತೊರೆಯ ಬಳಿ ಎಸೆದಿದ್ದಾರೆ ಎಂದು ಹೇಳಿದ್ದಾರೆ.

ಸೋಮವಾರ ದೇಸಾಯಿ ಗ್ರಾಮದ ಬಳಿಯ ತೊರೆಯ ಸೇತುವೆಯ ಕೆಳಗೆ ಪ್ರಿಯಾಂಕಾ ವಿಶ್ವಕರ್ಮ(22) ಎಂಬ ಯುವತಿಯ ಶವ ಪತ್ತೆಯಾಗಿತ್ತು.

ಮೃತ ಯುವತಿಯ ಕೈ ಮೇಲೆ 'ಪಿ ವಿ ಎಸ್' ಹಚ್ಚೆ ಕಂಡುಬಂದಿದೆ ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ. ತೊರೆಯಲ್ಲಿ ಶವವನ್ನು ಎಸೆಯಲು ಸೂಟ್‌ಕೇಸ್‌ನಲ್ಲಿ ತುಂಬಿಸಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ. ಈ ಸಂಬಂಧ ಕೊಲೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಸಾಮಾಜಿಕ ಮಾಧ್ಯಮ ಮತ್ತು ಪ್ರದೇಶದ ಸಿಸಿಟಿವಿ ದೃಶ್ಯಗಳಿಂದ ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ, ದೇಸಾಯಿ ಗ್ರಾಮದ ವಿನೋದ್ ಶ್ರೀನಿವಾಸ್ ವಿಶ್ವಕರ್ಮ(50) ವ್ಯಕ್ತಿಯನ್ನು ಬಂಧಿಸಿದ್ದಾರೆ.

ವಿಚಾರಣೆಯ ಸಮಯದಲ್ಲಿ, ಆ ವ್ಯಕ್ತಿ ತಾನೇ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮೃತ ಯುವತಿ ಕಳೆದ ಐದು ವರ್ಷಗಳಿಂದ ಆರೋಪಿಯೊಂದಿಗೆ ವಾಸಿಸುತ್ತಿದ್ದರು ಎನ್ನಲಾಗಿದ್ದು, ನವೆಂಬರ್ 21ರ ರಾತ್ರಿ ಅವರ ನಡುವೆ ಜಗಳವಾಗಿದೆ. ನಂತರ ಆರೋಪಿಯು ಆಕೆಯ ಕತ್ತು ಹಿಸುಕಿ ಕೊಂದಿದ್ದಾರೆ ಎಂದು ಆರೋಪಿಸಲಾಗಿದೆ.

ಒಂದು ದಿನ ಶವವನ್ನು ಮನೆಯಲ್ಲಿಯೇ ಇಟ್ಟುಕೊಂಡಿದ್ದು, ಅದು ದುರ್ವಾಸನೆ ಹರಡುತ್ತಿದ್ದಂತೆ, ಶವವನ್ನು ಸೂಟ್‌ಕೇಸ್‌ನಲ್ಲಿ ತುಂಬಿಸಿ, ನವೆಂಬರ್ 22ರ ರಾತ್ರಿ ತೊರೆಯ ಬಳಿ ಕಾಲ್ನಡಿಗೆಯಲ್ಲಿ ತೆಗೆದುಕೊಂಡು ಹೋಗಿ ಸೇತುವೆಯಿಂದ ಎಸೆದಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಮೈಸೂರು, ಮಂಡ್ಯ, ಚಾ.ನಗರ, ಹಾಸನ ಸೇರಿ 9 ಜಿಲ್ಲೆಗಳಲ್ಲಿ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿಗೆ ಕೇಂದ್ರದ ಸ್ಪಂದನೆ

ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಕೈಗಾರಿಕಾ ಸಚಿವ ಪಿಯುಷ್ ಗೋಯಲ್ ಮಾಹಿತಿ

ನವದೆಹಲಿ, ನ.26(ಎಂಕೆ)– ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರಿಂದ ಪ್ರಸ್ತಾಪಿತ ಕರ್ನಾಟಕದ 9 ಜಿಲ್ಲೆಗಳನ್ನು ಒಳಗೊಂಡ 'ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮ'ಕ್ಕೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ.

ಕರ್ನಾಟಕದಲ್ಲಿ ಕೈಗಾರಿಕೆ ಹಾಗೂ ಸಾಗಣೆ ಕ್ಷೇತ್ರಗಳಿಗೆ ಪರಿವರ್ತನಾತ್ಮಕ ಕಾಯಕಲ್ಪ ನೀಡುವ ಈ ಯೋಜನೆ ಕುರಿತು ಸ್ಪಂದಿಸಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ರಾಜ್ಯದ ಪ್ರಮುಖ ಜಿಲ್ಲೆಗಳಲ್ಲಿ 9 ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸುವ ಕುರಿತು ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ.



ಕೇಂದ್ರ ವಾಣಿಜ್ಯ–ಕೈಗಾರಿಕಾ ಸಚಿವ ಪಿಯೂಷ್ ಗೋಯಲ್‌ರೊಂದಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ನವದೆಹಲಿಯಲ್ಲಿ ಚರ್ಚಿಸುತ್ತಿರುವುದು.

ನ.13ರಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿಯಾಗಿದ್ದ ಕೇಂದ್ರ ಸಚಿವ ಕುಮಾರಸ್ವಾಮಿ, ಮೈಸೂರು, ಚಾಮರಾಜನಗರ, ಕೋಲಾರ, ಹಾಸನ, ಮಂಗಳೂರು, ಹುಬ್ಬಳ್ಳಿ–ಧಾರವಾಡ, ರಾಯಚೂರು ಮತ್ತು ಬೀದರ್ ಜಿಲ್ಲೆಗಳನ್ನು ಒಳಗೊಂಡ ಸುವಿಶಾಲವಾದ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮ (NICDP) ಅನುಷ್ಠಾನ ಮಾಡಬೇಕೆಂದು ಕೋರಿ ಮನವಿ ಸಲ್ಲಿಸಿದ್ದರು.

ಮನವಿಗೆ ಸ್ಪಂದಿಸಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಕರ್ನಾಟಕದ ಪ್ರಾದೇಶಿಕ ಸಮತೋಲಿತ ಕೈಗಾರಿಕಾ ಅಭಿವೃದ್ಧಿ ದೃಷ್ಟಿಯಿಂದ ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಮುಂಚೂಣಿ ರಾಜ್ಯವಾಗಿರುವ ಕರ್ನಾಟಕದಾದ್ಯಂತ ಕೈಗಾರಿಕಾ ಕಾರಿಡಾರ್ ಯೋಜನೆ ಅನುಷ್ಠಾನ ಕುರಿತು ಪತ್ರ ಬರೆದಿರುವ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೆಚ್.ಡಿ. ಕುಮಾರಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಯೋಜನೆ ಅನುಷ್ಠಾನದಿಂದ ಕರ್ನಾಟಕದಲ್ಲಿ ಸರಕು, ಕೈಗಾರಿಕಾ ಉತ್ಪನ್ನಗಳ ಸಾಗಣೆ ಸುಲಭವಾಗಿ ಕೈಗಾರಿಕಾಭಿವೃದ್ಧಿ ತ್ವರಿತಗತಿಯಲ್ಲಿ ಸಾಗಲಿದೆ. ಉದ್ದೇಶಿತ ಜಿಲ್ಲೆಗಳಲ್ಲಿ ಯೋಜನೆ ಅನುಷ್ಠಾನಕ್ಕೆ ಬಂದರೆ ಇಡೀ ರಾಜ್ಯಕ್ಕೆ ನಾಲ್ಕು ದಿಕ್ಕುಗಳಲ್ಲಿಯೂ ಅನುಕೂಲವಾಗಲಿದೆ. ಅಲ್ಲದೆ ಸಂಪರ್ಕದ ಜೊತೆಗೆ ಉದ್ಯೋಗ ಸೃಷ್ಟಿಗೆ ಪೂರಕವಾಗಲಿದೆ ಎಂದಿದ್ದಾರೆ.

ಪ್ರಧಾನಿ ಮೋದಿ ಅವರ ವಿಕಸಿತ ಭಾರತ ಸಾಕಾರಕ್ಕೆ ಈ ಯೋಜನೆ ಪೂರಕವಾಗಿದೆ. ಉತ್ಪಾದನೆ ಮತ್ತು ಕೈಗಾರಿಕಾ ಸ್ಪರ್ಧಾತ್ಮಕತೆಯನ್ನು ಬಲಪಡಿಸುವ ಕೇಂದ್ರ ಸರ್ಕಾರದ ವಿಶಾಲ ದೃಷ್ಟಿಕೋನಕ್ಕೆ ಅನುಗುಣವಾಗಿ ಈ ಉಪಕ್ರಮವನ್ನು ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಪಿಎಚ್.ಡಿ ಪದವಿ




ಮೈಸೂರು, ನ. 26– ಡಾ.ವೈ.ಹೆಚ್. ನಾಯಕ್‌ವಾಡಿ ಅವರ ಮಾರ್ಗದರ್ಶನದಲ್ಲಿ ಆರ್.ಭವ್ಯ ಅವರು ಇತಿಹಾಸ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ರಫ್ತು ಉತ್ತೇಜನ; ನಿರ್ವಹಣೆ ತರಬೇತಿ

ಮೈಸೂರು: ಡಿ.2ರಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ 'ರಫ್ತು ಉತ್ತೇಜನ ಮತ್ತು ನಿರ್ವಹಣೆ' ಕುರಿತು ತರಬೇತಿ ಕಾರ್ಯಕ್ರಮವನ್ನು Institute of Engineers, ಮೈಸೂರು ಸಭಾಂಗಣದಲ್ಲಿ ಪೂರ್ವಾಹ್ನ 10.30ಕ್ಕೆ ಏರ್ಪಡಿಸಲಾಗಿದೆ.ಸದರಿ ವಿಷಯವು ಸಣ್ಣ, ಅತೀಸಣ್ಣ ಹಾಗೂ ಮಧ್ಯಮ ವರ್ಗದ (ಎಂ.ಎಸ್.ಎಂ.ಇ) ಕೈಗಾರಿಕಾ ಘಟಕಗಳಿಗೆ ಬಹಳ ಉಪಯುಕ್ತವಾಗಿದೆ. ಆದ ಕಾರಣ, ಕೈಗಾರಿಕಾ ಘಟಕಗಳ ಉದ್ದಿಮೆದಾರರು ಈ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆಯಲು ಕೋರಲಾಗಿದೆ. ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಸಿ.ಟಿ.ಐ ಕಟ್ಟಡ, ಸಯ್ಯಾಜಿರಾವ್ ರಸ್ತೆ, ಮೈಸೂರು ಇಲ್ಲಿರುವ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ. ಪೋನ್ ನಂ: 0821-2520886 ಸಂಪರ್ಕಿಸಿ.

ಶಾಸಕ ಜಿ.ಟಿ.ದೇವೇಗೌಡರಿಗೆ ಹುಟ್ಟುಹಬ್ಬದ ಶುಭಾಶಯ...



ಮೈಸೂರು ತಾಲೂಕು ಜಯಪುರ ಹೋಬಳಿಯ ಗೋಪಾಲಪುರದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ 75ನೇ ಹುಟ್ಟುಹಬ್ಬವನ್ನು ವಿವಿಧ ಸೇವಾ ಕಾರ್ಯಗಳ ಮೂಲಕ ಕೋಟೆಹುಂಡಿ ಮಹದೇವು ಸ್ನೇಹ ಬಳಗದ ಸದಸ್ಯರು, ಧನಗಹಳ್ಳಿ, ಗೋಪಾಲಪುರ ಗ್ರಾಪಂ ವ್ಯಾಪ್ತಿಯ ಜಿ.ಟಿ.ಡಿ ಬೆಂಬಲಿಗರು ಆಚರಿಸಿದರು. ಈ ವೇಳೆ ಶಾಸಕರಿಗೆ ಬೃಹತ್ ಗುಲಾಬಿ ಹಾರ, ಶಾಲು ಹಾಕಿ, ಪೇಟ ತೊಡಿಸಿ, ಕೇಕ್ ಕತ್ತರಿಸಿ ಸಿಹಿ ತಿನ್ನಿಸುವ ಮೂಲಕ ಶುಭ ಕೋರಿದರು. ಈ ವೇಳೆ ಜಯಪುರ ಹೋಬಳಿ ವ್ಯಾಪ್ತಿಯ ಜೆಡಿಎಸ್ ಮುಖಂಡರು, ಜಿಟಿಡಿ ಬೆಂಬಲಿಗರು, ಕಾರ್ಯಕರ್ತರು ನೂರಾರು ಸಂಖ್ಯೆಯಲ್ಲಿ ಹಾಜರಿದ್ದರು.

ಒಕ್ಕಲಿಗ ವುಮೆನ್ಸ್ ವೆಲ್ಫೇರ್ ಟ್ರಸ್ಟ್‌ನಿಂದ ಕನ್ನಡ ರಾಜ್ಯೋತ್ಸವ



ಮೈಸೂರಿನ ವಿಜಯನಗರದಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ ಆವರಣದಲ್ಲಿ ಒಕ್ಕಲಿಗ ವುಮೆನ್ಸ್ ವೆಲ್ಫೇರ್ ಟ್ರಸ್ಟ್ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಈ ವೇಳೆ ದೈಹಿಕ ಶಿಕ್ಷಣ ಶಿಕ್ಷಕ ಶ್ರೀಕಾಂತ್‌ಮೂರ್ತಿ, ಶಿಕ್ಷಕಿ ರಾಣಿ ಪದ್ಮಾವತಿ, ಟ್ರಸ್ಟ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಡಿ.4ರಂದು ಮೈಸೂರು ಕೊಡವ ಸಮಾಜದಿಂದ ಪುತ್ತರಿ ನಮ್ಮೆ ಆಚರಣೆ



ಮೈಸೂರು, ನ. 26–ಮೈಸೂರಿನ ಕೊಡವ ಸಮಾಜದ ವತಿಯಿಂದ ಡಿ.4ರಂದು ಸಂಜೆ 7.30 ರಿಂದ ಎಲ್ಲಾ ಸಾಂಪ್ರದಾಯಿಕ ಕೊಡವ ನೃತ್ಯಗಳ ಪ್ರದರ್ಶನದೊಂದಿಗೆ ಕುವೆಂಪುನಗರದ ಶ್ರೀ ಕಾವೇರಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ಪುತ್ತರಿ ನಮ್ಮೆ ಆಚರಿಸಲಾಗುವುದು. ರಾತ್ರಿ 8.40ಕ್ಕೆ ನೆರೆ ಕಟ್ಟುವ ಕಾರ್ಯಕ್ರಮ, ರಾತ್ರಿ 9.40ಕ್ಕೆ ಕದ್ ಎಡುಪಾ (ಹೊಸ ಭತ್ತದ ಕೊಯ್ಲು), ನಂತರ ತಂಬುಟ್ ಪ್ರಸಾದ ವಿತರಣೆ ನಡೆಯಲಿದೆ.

ಆಚರಣೆಯ ಪೂರ್ವಭಾವಿಯಾಗಿ, ನ.28ರಿಂದ ಡಿ.2ರವರೆಗೆ ಐದು ದಿನಗಳು ವಿಜಯನಗರದ ಸಮಾಜದ ಆವರಣದಲ್ಲಿ ಸಂಜೆ 6.30ರಿಂದ ಈಡು ಕಾರ್ಯಕ್ರಮ ನಡೆಯಲಿದೆ ಎಂದು ಕೊಡವ ಸಮಾಜದ ಪೂಜಂಡ ಎ.ಗಣಪತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೋನ್ ಇನ್ ಕಾರ್ಯಕ್ರಮ



ಯೋಗೇಶ್



ಸಂಪತ್ ಕಟ್ಟಿ

ಮೈಸೂರು,ನ.26–ಬಾಲ್ಯ ವಿವಾಹ ನಿಷೇಧ ಕಾಯ್ದೆ, ಕಾನೂನು ಬದ್ಧ ದತ್ತು ಪಡೆಯುವುದು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಜೆಎಸ್‌ಎಸ್ ರೇಡಿಯೋ 91.2FM ಸಮುದಾಯ ಬಾನುಲಿ ಕೇಂದ್ರವು ಆರ್.ಎಲ್. ಹೆಚ್.ಪಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದೊಂದಿಗೆ ನ.28 ರಂದು ಬೆಳಗ್ಗೆ 11:30ರಿಂದ ಮಧ್ಯಾಹ್ನ 12:30 ರವರೆಗೆ ಮೈಸೂರು ಜಿಲ್ಲೆಯ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎನ್.ಟಿ.ಯೋಗೇಶ್ ಹಾಗೂ ಮೈಸೂರಿನ ಆರ್.ಎಲ್.ಹೆಚ್.ಪಿಯ ಹಿರಿಯ ಯೋಜನಾ ವ್ಯವಸ್ಥಾಪಕ ಸಂಪತ್ ಕಟ್ಟಿ ಅವರೊಂದಿಗೆ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮ ಆಯೋಜಿಸಿದೆ. ಬಾಲ್ಯ ವಿವಾಹ ತಡೆ ಕಾಯ್ದೆ, ಕಾನೂನು ಬದ್ಧ ದತ್ತು ಪಡೆಯುವುದು, ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಯಾವುದೇ ಪ್ರಶ್ನೆಗಳು ಅಥವಾ ಸಲಹೆಗಳು ಇದ್ದಲ್ಲಿ ಕರೆ ಮಾಡಿ ನೇರವಾಗಿ ಮಕ್ಕಳ ರಕ್ಷಣಾಧಿಕಾರಿಗಳ ಜೊತೆ ಮಾತನಾಡಬಹುದು. ಕರೆಮಾಡಬೇಕಾದ ದೂ.ಸಂಖ್ಯೆ: 8296725912/0821-25 46 563.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.11.2025 ಗುರುವಾರ, ಮಳೆ ನಕ್ಷತ್ರ: ಅನೂರಾಧ, 20.11.2025 ರಿಂದ 02.12.2025 ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ, ತಿಥಿ: ಸಪ್ತಮಿ, ನಕ್ಷತ್ರ: ಧನಿಷ್ಠ, ರಾಹುಕಾಲ: ಮಧ್ಯಾಹ್ನ 1.30ರಿಂದ 3 ಗಂಟೆಯವರೆಗೆ

- **ಭರತ ನೃತ್ಯ ಸಂಗೀತ ಅಕಾಡೆಮಿ, ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್, ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ :** ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಅಂತರರಾಷ್ಟ್ರೀಯ ನೃತ್ಯ ಕಲಾವಿದರಾದ ಡಾ. ವಸುಂಧರಾ ದೊರೆಸ್ವಾಮಿ, ಅಧ್ಯಕ್ಷತೆ : ಸಂಗೀತ ವಿವಿ ಕುಲಪತಿ ಡಾ. ನಾಗೇಶ್ ವಿ. ಬೆಟ್ಟಕೋಟೆ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಆಶಯ ಭಾಷಣ : ಪ್ರೊ. ಕೆ. ರಾಮಮೂರ್ತಿರಾವ್, ಮುಖ್ಯ ಭಾಷಣ : ಡಾ. ತುಳಸೀ ರಾಮಚಂದ್ರ, ಸ್ಥಳ: ಕೆಎಸ್‌ಜಿಎಸ್ ಸಂಗೀತ ವಿವಿ ಆವರಣ, ಬೆಳಗ್ಗೆ 10ಕ್ಕೆ.
- **ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್:** ಬ್ರೈಡಲ್ ಜುವೆಲರಿ ಶೋ. ಸ್ಥಳ: ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್, ಬಿ.ಎನ್.ರಸ್ತೆ. ಬೆಳಗ್ಗೆ 10 ರಿಂದ.
- **ಹೈ ಲೈಫ್ ಸಂಸ್ಥೆ :** ಹೈ ಲೈಫ್ ವಸ್ತುಪ್ರದರ್ಶನ, ಸ್ಥಳ: ರ್‍ಯಾಡಿಸನ್ ಬ್ಲೂ ಹೋಟೆಲ್, ಬೆಳಗ್ಗೆ 10 ರಿಂದ.
- **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ. ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ. ಬೆಳಗ್ಗೆ 10 ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಬಂಗು ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ. ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.
- **ಮೈಸೂರು ಜಿಲ್ಲಾ ಪ್ರವಾಸಿ ವಾಹನ ಚಾಲಕರು ಮತ್ತು ಮಾಲೀಕರ ಯೋಗ ಕ್ಷೇಮಾಭಿವೃದ್ಧಿ ಸಂಘ, ಪ್ರವಾಸಿ ವಾಹನ ಚಾಲಕರ ಸಹಕಾರ ಸಂಘ :** ಕನ್ನಡ ರಾಜ್ಯೋತ್ಸವ, ಅಧ್ಯಕ್ಷತೆ : ಸಾಹಿತಿ ಡಾ. ರಾಮೇಗೌಡ, ಸನ್ಮಾನಿತರು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ವಿ.ಎಂ. ಪ್ರಭುಸ್ವಾಮಿ, ಸ್ಥಳ: ಜಿಲ್ಲಾ ಸಾಹಿತ್ಯ ಭವನ, ಕನ್ನಡ ಸಾಹಿತ್ಯ ಪರಿಷತ್, ವಿಜಯನಗರ 1ನೇ ಹಂತ, ಬೆಳಗ್ಗೆ 11.30ಕ್ಕೆ
- **ಜೆಎಸ್‌ಎಸ್ ಮಹಿಳಾ ಕಾಲೇಜು :** ಜೆಎಸ್‌ಎಸ್ ರಂಗೋತ್ಸವ, ಸಾನ್ನಿಧ್ಯ : ಸುತ್ತೂರು ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ರಂಗಾಯಣದ ಹಿರಿಯ ಕಲಾವಿದರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಮೈಮ್ ರಮೇಶ್, ಅಧ್ಯಕ್ಷತೆ : ಹಿರಿಯ ಪತ್ರಕರ್ತ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಅಂಶಿ ಪ್ರಸನ್ನಕುಮಾರ್, ಮೈಸೂರು ಸರಸ್ವತಿಪುಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ವಿದ್ಯಾರ್ಥಿನಿಯರು ಮಂಜುನಾಥ್ ಬಿಳಿಕೆರೆಯವರ 'ಶರೀಫ' ನಾಟಕ ಪ್ರದರ್ಶನ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಬೆಳಗ್ಗೆ 10.45ಕ್ಕೆ
- **ಶೇಷಾದ್ರಿಪುರಂ ಪದವಿ ಕಾಲೇಜು :** ಕನ್ನಡ ರಾಜ್ಯೋತ್ಸವ, ಸಾಧಕರಿಗೆ ಸನ್ಮಾನ, ಮುಖ್ಯ ಅತಿಥಿಗಳು : ಸಾಹಿತಿ ಮೂಡ್ನಾಕೂಡು ಚಿನ್ನಸ್ವಾಮಿ, ಅಧ್ಯಕ್ಷತೆ : ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ. ಕೃಷ್ಣ, ಉಪಸ್ಥಿತರು : ಕಾಲೇಜು ಪ್ರಿನ್ಸಿಪಾಲ್ ಶ್ರೀಮತಿ ಎನ್. ಅರ್ಚನಾಸ್ವಾಮಿ, ಸ್ಥಳ: ಕಾಲೇಜು ಸಭಾಂಗಣ, ಮಧ್ಯಾಹ್ನ 2ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಹೆಣ್ಣು ಮನಸು ಮಾಡಿದರೆ ಸಾಧಕ ಮಹಿಳೆಯರ ಪರಿಚಯ ಮಾಲಿಕೆ, ಪ್ರಸ್ತುತಿ : ಪ್ರೊ ಸಿ.ನಾಗಣ್ಣ, 6.40 ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಡಿ. ಪುರುಷೋತ್ತಮ್, ವ್ಯಾಖ್ಯಾನ– ಪ್ರೊ ಮೈಸೂರು ಕೃಷ್ಣಮೂರ್ತಿ, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು, 8.30 ಕನ್ನಡ ಚಿತ್ರಗೀತೆಗಳು, 9.00 ಕನ್ನಡದ ಕಸ್ತೂರಿ–ನಾ ಕಸ್ತೂರಿ ನೆನಪುಗಳ ಮಾಲಿಕೆ, ಆ ಕನಸಿನ ದಿನಗಳು–ಮಾತನಾಡಿದ್ದಾರೆ ಎನ್. ರಾಮಾನುಜ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಗಣೇಶ್ ಮತ್ತು ಕುಮರೇಶ್–ವೈಯೋಲಿನ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು.

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು– ಹೆಚ್. ಕೆ. ನಾರಾಯಣ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ಕನ್ನಡ ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ಕನ್ನಡ ಭಾರತಿ, 6.50 ಕೃಷಿರಂಗ–ಕಿಸಾನ್ ವಾಣಿ, ಪ್ರಾಯೋಜಕರು–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಕೃಷಿ ಪ್ರವಾಸೋದ್ಯಮದ ಪ್ರಾಮುಖ್ಯತೆ ಕುರಿತು ಸಂವಾದ, ಭಾಗವಹಿಸುತ್ತಾರೆ–ಪಾಂಡವಪುರ ತಾಲೂಕು ಡಿಂಕಾಗ್ರಾಮದ ವಿಶ್ವೇಶ್ವರಯ್ಯ ಡೆವಲಪ್‌ಮೆಂಟ್ ಆರ್ಗನೈಜೇಷನ್‌ನ ನಿರ್ದೇಶಕರಾದ ಡಿ.ಎನ್. ಹರ್ಷ ಮತ್ತು ಅಗ್ರಿಯಾನ ಟೂರಿಸಂ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಆರ್. ಎಸ್. ನವೀನ್, ಪ್ರಸ್ತುತಿ–ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ–ಮೈಸೂರಿನ ವಿಜಯನಗರದ ಸದ್ವಿದ್ಯಾ ಸೆಮಿ ರೆಸಿಡೆನ್ಷಿಯಲ್ ಪದವಿ ಪೂರ್ವ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ವೈವಿಧ್ಯ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಅರುಣ್ ಓ.ಎಸ್. – ಹಾಡುಗಾರಿಕೆ, 10.00 ನಾಟಕ–ಅಮರ ವ್ಯಾಪ್ರ

- **ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ :** ಪದವೀಧರರ ದಿನಾಚರಣೆ, ಮುಖ್ಯ ಅತಿಥಿಗಳು : ರಾಜೀವ್ ಗಾಂಧಿ ಯೂನಿವರ್ಸಿಟಿ ಆಫ್ ಹೆಲ್ತ್ ಸೈನ್ಸಸ್ ಕುಲಪತಿ ಡಾ. ಬಿ.ಸಿ. ಭಗವಾನ್, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರು ಮಠ, ಗೌರವ ಅತಿಥಿಗಳು : ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಸ್ಥಳ: ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 4ಕ್ಕೆ.
- **ಹೋಟೆಲು ಮಾಲೀಕರ ಪತ್ತಿನ ಸಹಕಾರ ಸಂಘ :** ಸಹಕಾರ ವಿಜಯೋತ್ಸವ ಹಾಗೂ ಸಾಧಕ ಹೋಟೆಲು ಉದ್ಯಮಿಗಳಿಗೆ ಅಭಿನಂದನಾ ಸಮಾರಂಭ, ಸಾನ್ನಿಧ್ಯ : ಶ್ರೀ ರಾಮಕೃಷ್ಣ ಆಶ್ರಮದ ಶ್ರೀ ಯುಕ್ತೇಶಾನಂದ ಜಿ. ಮಹಾರಾಜ್, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಅಧ್ಯಕ್ಷತೆ : ಹೋಟೆಲು ಮಾಲೀಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾರಾಯಣ ವಿ. ಹೆಗಡೆ, ಮುಖ್ಯ ಅತಿಥಿಗಳು : ಗೋಪಾಲಗೌಡ ಸ್ಮಾರಕ ನ್ಯೂರೋ ಕೇರ್ ಸೆಂಟರ್ ಮುಖ್ಯಸ್ಥ ಡಾ. ಶುಶ್ರುತ್‌ಗೌಡ, ಉಪಸ್ಥಿತರು : ಎಂ.ಕೆ. ಪುರಾಣಿಕ್, ಸುಧಾಕರ್ ಎಸ್.ಶೆಟ್ಟಿ, ಸುಬ್ರಹ್ಮಣ್ಯ ಆರ್. ತಂತ್ರಿ, ಓ. ಪ್ರತಾಪ್ ಕುಮಾರ್, ಸ್ಥಳ: ದಾಸಪ್ರಕಾಶ್ ಪ್ಯಾರಡೈಸ್ ಹೋಟೆಲ್, ಯಾದವಗಿರಿ, ಸಂಜೆ 4.30ಕ್ಕೆ.
- **ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರ, ಮೈಸೂರು:** ವಸುಂಧರೋತ್ಸವ–2025. 41ನೇ ರಾಷ್ಟ್ರೀಯ ಮಟ್ಟದ ಶಾಸ್ತ್ರೀಯ ನೃತ್ಯ ಮತ್ತು ಸಂಗೀತ ಹಬ್ಬ–2025. ಸಂಜೆ 6 ರಿಂದ ಚಿಗುರು ಸಂಜೆ, ನೃತ್ಯ ನಿರ್ದೇಶಕಿ ವಿದುಷಿ ಪ್ರೇಮಿತಾ ಗೋವಿಂದ್ ಅವರ ಕಲಾಂದಿಕ ನೃತ್ಯ ಅಕಾಡೆಮಿ ವಿದ್ಯಾರ್ಥಿಗಳಿಂದ, ಸಂಜೆ 6.45 ರಿಂದ ಗತಿಶ್ರೀ ಪ್ರದರ್ಶನ ಕಲೆಗಳ ಕೇಂದ್ರದ ನಿರ್ದೇಶಕರಾದ ವಿದುಷಿ ಶ್ರೀ ಲಕ್ಷ್ಮೀ ತೇಜಸ್ ಅವರಿಂದ, ರಾತ್ರಿ 7.30 ರಿಂದ ಜೋಯಿಸ್ ಕಲಾ ಪ್ರತಿಷ್ಠಾನ ನಿರ್ದೇಶಕರಾದ ವಿದುಷಿ ಶ್ರೀಮತಿ ನಮ್ರತಾ ಜೋಯಿಸ್ ಅವರಿಂದ, ಗೌರವ ಸಮರ್ಪಣೆ : ನೃತ್ಯಗಿರಿ ಪ್ರದರ್ಶಕ ಕಲೆಗಳ ನಿರ್ದೇಶಕರಾದ ವಿದುಷಿ ಡಾ. ಕೃಪಾ ಫಡ್ಕೆ, ಸ್ಥಳ: ವಸುಂಧರ ಭವನ, ಕಾಮಾಕ್ಷಿ ಆಸ್ಪತ್ರೆ ರಸ್ತೆ, ಸರಸ್ವತಿಪುರಂ.
- **ಶ್ರೀ ನಟರಾಜ ಪ್ರದರ್ಶಕ ಕಲೆಗಳ ಕೇಂದ್ರ :** ನೃತ್ಯ ಸಂಭ್ರಮ, ಉದ್ಘಾಟನೆ : ಗಾನಭಾರತಿ ಸಂಗೀತ ಮತ್ತು ನೃತ್ಯ ಶಾಲೆ ಅಧ್ಯಕ್ಷ ಹೆಚ್.ಆರ್. ಸುಂದರೇಶನ್, ಮುಖ್ಯ ಅತಿಥಿಗಳು : ನೃತ್ಯಗಿರಿ ಪ್ರದರ್ಶಕ ಕಲೆಗಳ ಕೇಂದ್ರ ನಿರ್ದೇಶಕರಾದ ಶ್ರೀಮತಿ ಡಾ. ಕೃಪಾ ಫಡ್ಕೆ, ಅಧ್ಯಕ್ಷತೆ : ಶ್ರೀ ನಟರಾಜ ಪ್ರದರ್ಶಕ ಕಲೆಗಳ ಕೇಂದ್ರದ ಅಧ್ಯಕ್ಷ ಎಂ.ಕೆ. ಬಾಲರಾಜು, ಸ್ಥಳ: ಶ್ರೀ ನಟರಾಜ ಪ್ರದರ್ಶಕ ಕಲೆಗಳ ಕೇಂದ್ರ, ವಿಜಯನಗರ 3ನೇ ಹಂತ, ಸಂಜೆ 6ಕ್ಕೆ

ಕೇಂದ್ರದ ರೈತಪರ ಯೋಜನೆಗಳಿಗೆ ರಾಜ್ಯ ಕಾಂಗ್ರೆಸ್ ಸರ್ಕಾರದ ಅಸಹಕಾರ

ಹಾಗಾಗಿ ಸದರಿ ಯೋಜನೆಗಳ ಪ್ರಯೋಜನ ರಾಜ್ಯ ರೈತರಿಗೆ ಸಮರ್ಪಕವಾಗಿ ದೊರೆಯದಾಗಿದೆ ; ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆರೋಪ

ಮೈಸೂರು,ನ.26(ಪಿಎಂ)– ಕೇಂದ್ರ ಸರ್ಕಾರ ರೈತಪರ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರದ ಅಸಹಕಾರದಿಂದ ರಾಜ್ಯದ ರೈತರಿಗೆ ಈ ಯೋಜನೆಗಳ ಪ್ರಯೋಜನ ಸಮರ್ಪಕವಾಗಿ ದೊರೆಯುತ್ತಿಲ್ಲವೆಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆರೋಪಿಸಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈತರು, ಕೃಷಿ ಕ್ಷೇತ್ರದ ಕಲ್ಯಾಣಕ್ಕಾಗಿ ಸಾಕಷ್ಟು ಯೋಜನೆ ರೂಪಿಸಿದೆ. ಆದರೆ ರಾಜ್ಯದಲ್ಲಿ ಅವುಗಳ ಅನುಷ್ಠಾನಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಸಹಕಾರ ನೀಡುತ್ತಿಲ್ಲ ಎಂದು ದೂರಿದರು.

ಕಳೆದ 10 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರೈತರಿಗೆ ಅನುಕೂಲ ಕಲ್ಪಿಸಲಾಗುತ್ತಿದೆ. ಹಲವು ಯೋಜನೆಗಳನ್ನು ರೂಪಿಸಿ ಸಕಾರಾತ್ಮಕವಾಗಿ ವಾತಾವರಣ ಸೃಷ್ಟಿಸಲಾಗಿದೆ. ಕೇಂದ್ರದ ಬಜೆಟ್ 2013ರಲ್ಲಿ ಕೇವಲ 77 ಸಾವಿರ ಕೋಟಿ ಇತ್ತು. ಈಗ ಅದು 1.37 ಲಕ್ಷ ಕೋಟಿಯಾಗಿದ್ದು, ಕೃಷಿ ಕ್ಷೇತ್ರಕ್ಕೂ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಅತಿವೃಷ್ಟಿ ಕಾರಣ ಉತ್ತರ ಕರ್ನಾಟಕ, ಮಲೆನಾಡು ವ್ಯಾಪ್ತಿಯಲ್ಲಿ ಬೆಳೆ ನಷ್ಟವಾಗಿದ್ದು, ಈ ಸಂಬಂಧ ರಾಜ್ಯ ಸರ್ಕಾರ ಸಮರ್ಪಕ ಸಮೀಕ್ಷೆ ನಡೆಸಿಲ್ಲ. ಪರಿಹಾರ ಸಹ ನೀಡಿಲ್ಲ. ಕೇಂದ್ರ ಸರ್ಕಾರ ಎನ್‌ಡಿಆರ್‌ಎಫ್ ನಡಿ ರಾಜ್ಯಕ್ಕೆ ಅನುದಾನ ಸಹ ಬಿಡುಗಡೆ ಮಾಡಿದೆ. 'ಕೃಷಿ' ರಾಜ್ಯ ಸರ್ಕಾರಕ್ಕೆ ಸಂಬಂಧಿಸಿದ ವಿಷಯ. ರಾಜ್ಯ ಸರ್ಕಾರವೇ ಪ್ರಾಥಮಿಕವಾಗಿ ಸಮೀಕ್ಷೆ ನಡೆಸಿ ವರದಿ ನೀಡಿ ನಂತರ ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್ ಮೂಲಕ ಪರಿಹಾರ ನೀಡುವ ಸಂಬಂಧ ತೀರ್ಮಾನ ಕೈಗೊಳ್ಳಬೇಕು. ಆದರೆ ರಾಜ್ಯ ಸರ್ಕಾರ ಯಾವುದನ್ನು ಸಮರ್ಪಕವಾಗಿ ಮಾಡುತ್ತಿಲ್ಲ ಎಂದು ಆಪಾದಿಸಿದರು.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಆಡಳಿತಾವಧಿಯಲ್ಲಿ ನೀಡುತ್ತಿದ್ದ ನಾಲ್ಕು ಸಾವಿರ ರೂ. ಕೊಡುವುದನ್ನು ಈಗ ನಿಲ್ಲಿಸಿದ್ದಾರೆ. ಇಂತಹ ರೈತ ವಿರೋಧಿ ನಡೆಯನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಅನುಸರಿಸುತ್ತಿದೆ. ಜೊತೆಗೆ ಹನಿ ನೀರಾವರಿ ಉತ್ತೇಜಿಸಲು ಪ್ರಧಾನಮಂತ್ರಿ ಕೃಷಿ ಸಿಂಚಯ್ ಯೋಜನೆಯಡಿ ಕೇಂದ್ರದಿಂದ ಸುಮಾರು 93 ಸಾವಿರ ಕೋಟಿ ಹಣ ನೀಡಲಾಗಿದೆ. ಆದರೆ ರಾಜ್ಯ ಸರ್ಕಾರ ಇದಕ್ಕೆ ಸಹಕಾರ ನೀಡುತ್ತಿಲ್ಲ. ಇಂತಹ ಯೋಜನೆಗಳ ಅನುಷ್ಠಾನ ರಾಜ್ಯ ಸರ್ಕಾರದ ಮೂಲಕವೇ ಆಗಬೇಕಿದೆ. ಜೊತೆಗೆ ಕೇಂದ್ರದಿಂದ ಆಹಾರ ಸಂಸ್ಕರಣೆಗೂ ಯೋಜನೆಗಳು ಇವೆ. ಇದಕ್ಕೂ ಸ್ಪಂದಿಸುತ್ತಿಲ್ಲ. ಹಲವು ಯೋಜನೆಗಳಿಗೆ ರಾಜ್ಯ ಸರ್ಕಾರ ಸಹಕಾರ ನೀಡುತ್ತಿಲ್ಲ. ಇದರಿಂದ ರೈತರಿಗೆ ಅನಾನುಕೂಲವಾಗುತ್ತಿದೆ ಎಂದು ಆರೋಪಿಸಿದರು.

ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿ, ಎನ್‌ಡಿಆರ್‌ಎಫ್ ಮೂಲಕ ನ್ಯಾಯಯುತವಾಗಿ ಕೇಂದ್ರ ಸರ್ಕಾರ, ರಾಜ್ಯಕ್ಕೆ ಅನುದಾನ ಬಿಡುಗಡೆ ಮಾಡುತ್ತಿದೆ. ಪ್ರಥಮವಾಗಿ 'ಕೃಷಿ' ರಾಜ್ಯದ ವಿಷಯ. ಹಾಗಾಗಿ ರಾಜ್ಯ ಸರ್ಕಾರ ಸಮೀಕ್ಷೆ ಮಾಡಬೇಕು. ಸರಿಯಾದ ಸಮೀಕ್ಷೆ ಬಳಿಕ ಎನ್‌ಡಿಆರ್‌ಎಫ್‌ನಡಿ ಅನುದಾನ ಕೇಳಲಿ ಎಂದರು. ರಾಜ್ಯದ ಪರವಾಗಿ ಬಿಜೆಪಿ ಸಂಸದರು ಕೇಂದ್ರದಲ್ಲಿ ಧ್ವನಿ ಎತ್ತುತ್ತಿಲ್ಲವೆಂಬ ಕಾಂಗ್ರೆಸ್ ಆರೋಪ ಸಂಬಂಧ ಪ್ರತಿಕ್ರಿಯಿಸಿ, ರಾಜ್ಯದ ಪರವಾಗಿ ದನಿ ಎತ್ತುತ್ತಿದ್ದೇವೆಯೇ ಹೊರತು ಕಾಂಗ್ರೆಸ್ ಪರವಾಗಿ ಧ್ವನಿ ಎತ್ತುತ್ತಿಲ್ಲವಷ್ಟೇ ಎಂದು ವ್ಯಂಗ್ಯವಾಡಿದರು.

ನೀತಿ ಆಯೋಗದ ಸಭೆಗೆ ರಾಜ್ಯದ ಸಿಎಂ ಗೈರು: ಕೇಂದ್ರ ಸರ್ಕಾರ, ರಾಜ್ಯದ ವಿಚಾರದಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿದೆ ಎಂಬ ಕಾಂಗ್ರೆಸ್ ಆರೋಪ ಸಂಬಂಧ ಪ್ರತಿಕ್ರಿಯಿಸಿ, ನೀತಿ ಆಯೋಗ ಸಭೆಗೆ ನಮ್ಮ ರಾಜ್ಯದ ಮುಖ್ಯಮಂತ್ರಿಗಳು ಒಬ್ಬರು ಮಾತ್ರವೇ ಗೈರು ಆಗಿದ್ದರು. ವಿರೋಧ ಪಕ್ಷದ ಎಲ್ಲಾ ನಾಯಕರು ಹೋಗಿದ್ದರು. ನೆರೆ ರಾಜ್ಯಗಳ ಸಿಎಂಗಳಾದ ರೇವಂತ್ ರೆಡ್ಡಿ, ಸ್ಟಾಲಿನ್ ಮೊದಲಾದವರು ಹೋಗಿದ್ದರು. ಆದರೆ ನಮ್ಮ ರಾಜ್ಯದ ಮುಖ್ಯಮಂತ್ರಿಗಳು ಮಾತ್ರ ಹೋಗಿಲ್ಲ. ಅವರು ಹೋಗಿ ಸಹಕಾರ ಕೊಡಬೇಕು ಎಂದು ಹೇಳಿದರು.

ಮೆಕ್ಕೆಜೋಳವನ್ನು ಬೇರೆ ದೇಶಗಳಿಂದ ಕೇಂದ್ರ ಸರ್ಕಾರ ಆಮದು ಮಾಡಿಕೊಳ್ಳುವ ಕಾರಣ ನಮ್ಮಿಂದ ಖರೀದಿಸುತ್ತಿಲ್ಲವೆಂದು ಸಿಎಂ ಸಿದ್ದರಾಮಯ್ಯರ ಆರೋಪ ಸಂಬಂಧ ಪ್ರತಿಕ್ರಿಯಿಸಿ, ಸಿದ್ದರಾಮಯ್ಯ ಅವರ ತಂತ್ರಗಾರಿಕೆ ಇದು. ಕೇಂದ್ರದ ಮೇಲೆ ಗೂಬೆ ಕೂರಿಸಿ ತಮ್ಮ ವೈಫಲ್ಯತೆ ಮುಚ್ಚಿಕೊಳ್ಳುತ್ತಾರೆ. ರಾಜಕೀಯ ಸಂಘರ್ಷ ಮಾಡಿಕೊಂಡು ನಮ್ಮ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮಾಜಿ ಶಾಸಕರೂ ಆದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ನಗರದಲ್ಲಿ ಮಾದಕ ವ್ಯಸನಿಗಳು ಹೆಚ್ಚಾಗುತ್ತಿದ್ದಾರೆ. ಮಂಡಿ ಮೊಹಲ್ಲಾ, ಎನ್‌ಆರ್ ಮೊಹಲ್ಲಾ, ರಾಜೀವ್ ನಗರದಲ್ಲಿ ಅತೀ ಹೆಚ್ಚು ವ್ಯಸನಿಗಳಿದ್ದಾರೆ. ಅಲ್ಲದೆ, ಮೈಸೂರು ನಗರದಲ್ಲಿ ಇತ್ತೀಚೆಗೆ ಕೊಲೆಗಳು ಹೆಚ್ಚಾಗುತ್ತಿವೆ. ನಗರದಲ್ಲಿ ಪೊಲೀಸ್ ಅಧಿಕಾರಿಗಳು ಏನು ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಬಿಜೆಪಿಯಿಂದ ನ.28ರಂದು ಸಂಜೆ 4 ಗಂಟೆಗೆ ವಿಕೆ ಫಂಕ್ಷನ್ ಹಾಲ್‌ನಲ್ಲಿ ಸಂವಿಧಾನ ದಿವಸ್ ಸ್ಮರಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ ಮಾಜಿ ಶಾಸಕ ಹರ್ಷವರ್ಧನ್, ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಸುಬ್ಬಣ್ಣ, ರೈತ ಮೋರ್ಚಾ ಪದಾಧಿಕಾರಿಗಳಾದ ದೇವರಾಜೇಗೌಡ, ವಿರ್ಲೇ ಶ್ರೀನಿವಾಸಗೌಡ ಮತ್ತಿತರರು ಹಾಜರಿದ್ದರು.


ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿದರು.

ಪ್ರತಿಭಟನೆ

ರಾಜ್ಯ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದೆ. ಇದನ್ನು ಖಂಡಿಸಿ ರಾಜ್ಯ ಬಿಜೆಪಿ ವತಿಯಿಂದ ರಾಜ್ಯಾದ್ಯಂತ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ನ.27 ಮತ್ತು 28ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಜಿಲ್ಲಾ ಮಟ್ಟದಲ್ಲಿ ಡಿ.1 ಮತ್ತು 2ರಂದು ಪ್ರತಿಭಟನೆ ನಡೆಸಲಾಗುವುದು.

– ಕೆ.ಸುಬ್ಬಣ್ಣ, ಜಿಲ್ಲಾಧ್ಯಕ್ಷರು, ಬಿಜೆಪಿ, ಮೈಸೂರು.

ಮೋದಿಯವರ ಆಡಳಿತದಲ್ಲಿ ಸಂಪೂರ್ಣ ಕ್ರಾಂತಿಯಾಗಿದೆ

ಯುಪಿಎ ಆಡಳಿತಾವಧಿಯಲ್ಲಿ ಎಂಎಸ್‌ಪಿಯಡಿ ಪ್ರತಿ ಕ್ವಿಂಟಾಲ್ ಭತ್ತಕ್ಕೆ 1,443 ರೂ. ಇತ್ತು. ಈಗ 2,203 ಆಗಿದೆ. ದೇಶದ ಕೃಷಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮೋದಿಯವರ ಆಡಳಿತದಲ್ಲಿ ಸಂಪೂರ್ಣ ಕ್ರಾಂತಿಯಾಗಿದೆ. ತೋಟಗಾರಿಕೆ, ಹೈನುಗಾರಿಕೆ, ಮೀನುಗಾರಿಕೆ, ಕೃಷಿ ಅರಣ್ಯ, ಜೇನು ಸಾಗಾಣಿಕೆ ಸೇರಿದಂತೆ ಕೃಷಿ ಉಪ ವಲಯಗಳಿಗೂ ಉತ್ತೇಜಿಸಲು ಕೇಂದ್ರದಿಂದ ಉತ್ತಮ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಗಿದೆ. ಆದರೆ ಕರ್ನಾಟಕದಲ್ಲಿ ರೈತ ವಿರೋಧಿ ಸರ್ಕಾರದ ದುರಾಡಳಿತದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

– ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ

ನಕಲಿ ನಂದಿನಿ ತುಪ್ಪ ಜಾಲ ಭೇದಿಸಿದ ಸಿಸಿಬಿ ಪೊಲೀಸರು: ಕಿಂಗ್‌ಪಿನ್ ದಂಪತಿ ಬಂಧನ

ಬೆಂಗಳೂರು: ತಮಿಳುನಾಡಿನಲ್ಲಿ ನಕಲಿ ನಂದಿನಿ ತುಪ್ಪ ತಯಾರಿಕಾ ಘಟಕವನ್ನು ಸ್ಥಾಪಿಸಿ ರಾಜ್ಯಾದ್ಯಂತ ನಕಲಿ ಉತ್ಪನ್ನಗಳನ್ನು ವಿತರಿಸುತ್ತಿದ್ದ ಪ್ರಮುಖ ಸೂತ್ರಧಾರರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಶಿವಕುಮಾರ್ ಮತ್ತು ಆತನ ಪತ್ನಿ ರಮ್ಯಾ ಎಂದು ಗುರುತಿಸಲಾಗಿದೆ. ಸಿಸಿಬಿ ಪೊಲೀಸರ ತನಿಖೆ ವೇಳೆ ಈ ದಂಪತಿಯೇ ನಕಲಿ ನಂದಿನಿ ಉತ್ಪನ್ನಗಳ ತಯಾರಿಕೆ ಘಟಕದ ಕಿಂಗ್‌ಪಿನ್‌ಗಳು ಎಂಬುದು ದೃಢಪಟ್ಟಿದೆ. ಸಿಸಿಬಿ ಡಿಸಿಪಿ ಶ್ರೀಹರಿ ಬಾಬು ಅವರು ನೀಡಿರುವ ಮಾಹಿತಿ ಪ್ರಕಾರ, ಆರೋಪಿ ದಂಪತಿ ನೆರೆಯ ತಮಿಳುನಾಡಿನಲ್ಲಿ ನಕಲಿ ನಂದಿನಿ ತುಪ್ಪ ತಯಾರಿಕೆ ಘಟಕವನ್ನು ಸ್ಥಾಪಿಸಿದ್ದರು. ಈ ಘಟಕದ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದಾಗ, ನಕಲಿ ತುಪ್ಪ ತಯಾರಿಸಲು ಬಳಸುತ್ತಿದ್ದ ದೊಡ್ಡ ದೊಡ್ಡ ಹೈಟೆಕ್ ಮೆಷಿನರಿಗಳು ಮತ್ತು ಅತ್ಯಾಧುನಿಕ ಯಂತ್ರಗಳು ಪತ್ತೆಯಾಗಿವೆ.

ಈ ಯಂತ್ರಗಳನ್ನು ಬಳಸಿಕೊಂಡು ದಂಪತಿ ನಂದಿನಿ ಲೇಬಲ್‌ನ ನಕಲಿ ತುಪ್ಪಗಳನ್ನು ತಯಾರಿಸಿ, ರೀ–ಪ್ಯಾಕಿಂಗ್ ಮಾಡಿ ಮಾರಾಟ ಮಾಡುತ್ತಿದ್ದರು. ದಾಳಿ ವೇಳೆ ಪೊಲೀಸರು ಮೆಷಿನರಿಗಳನ್ನು ವಶಪಡಿಸಿಕೊಂಡಿದ್ದಾರೆ.

ಕಳೆದ ನವೆಂಬರ್ 14ರಂದು ಚಾಮರಾಜಪೇಟೆಯಲ್ಲಿರುವ ಗೋದಾಮಿನ ಮೇಲೆ ದಾಳಿ ನಡೆಸಿ ನಂದಿನಿ ತುಪ್ಪವನ್ನು ವಶಪಡಿಸಿಕೊಂಡಿದ್ದರು. ಈ ನಕಲಿ ಉತ್ಪನ್ನಗಳನ್ನು ಕೆಲ ನಂದಿನಿ ಪಾರ್ಲರ್‌ಗಳು ಮತ್ತು ಅಂಗಡಿಗಳಲ್ಲಿ ಮಾರಾಟ ಮಾಡಲಾಗುತ್ತಿತ್ತು. ಆ ಸಮಯದಲ್ಲಿ ಪ್ರಕರಣ ದಾಖಲಿಸಿ, ವಿತರಣಾ ಜಾಲದಲ್ಲಿದ್ದ ಡಿಸ್ಟ್ರಿಬ್ಯೂಟರ್ ಮಹೇಂದ್ರ, ಆತನ ಮಗ ದೀಪಕ್, ಮತ್ತು ಮುನಿರಾಜು ಸೇರಿದಂತೆ ಒಟ್ಟು ನಾಲ್ವರನ್ನು ಬಂಧಿಸಲಾಗಿತ್ತು.

ಬಂಧಿತರಾಗಿರುವ ಶಿವಕುಮಾರ್ ಮತ್ತು ರಮ್ಯಾ ದಂಪತಿ ತಯಾರಿಸಿದ ನಕಲಿ ಉತ್ಪನ್ನಗಳನ್ನೇ ಈ ಮಹೇಂದ್ರ ಅಂಡ್ ಗ್ಯಾಂಗ್ ರಾಜ್ಯಾದ್ಯಂತ ವಿತರಿಸುತ್ತಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ.


ಶಿವಕುಮಾರ್


ರಮ್ಯಾ

ಪ್ರಕರಣದ ಗಂಭೀರತೆ ಅರಿತು ತನಿಖೆ ಮುಂದುವರಿಸಿರುವ ಸಿಸಿಬಿ ಪೊಲೀಸರು, ಆರೋಪಿ ದಂಪತಿಗಳ ಬ್ಯಾಂಕ್ ಖಾತೆಯಲ್ಲಿದ್ದ ಸುಮಾರು 60 ಲಕ್ಷ ರೂಪಾಯಿ ಹಣವನ್ನು ಫ್ರೀಜ್ ಮಾಡಿದ್ದಾರೆ. ಅಲ್ಲದೆ, ನಕಲಿ ತುಪ್ಪದಲ್ಲಿ ಏನೆಲ್ಲಾ ಕಳಪೆ ವಸ್ತುಗಳನ್ನು ಮಿಶ್ರಣ ಮಾಡಲಾಗಿದೆ ಎಂಬುದನ್ನು ಪತ್ತೆ ಹಚ್ಚಲು, ವಶಪಡಿಸಿಕೊಂಡ ಮಾದರಿಗಳನ್ನು ಎಫ್‌ಎಸ್‌ಎಲ್ (FSL) ವಿಶ್ಲೇಷಣೆಗಾಗಿ ಕಳುಹಿಸಲಾಗಿದೆ.

ಮೈಸೂರಲ್ಲಿ ಸಂವಿಧಾನ ಪೀಠಿಕೆ ಶತಕಂಠ ಗಾಯನ

ಡಾ.ಅಂಬೇಡ್ಕರ್ ರಚಿತ ನಮ್ಮ ಸಂವಿಧಾನ ಪ್ರಪಂಚದಲ್ಲೇ ಅತ್ಯುತ್ತಮ ಸಂವಿಧಾನ: ಜಿಟಿಡಿ

ಮೈಸೂರು, ನ.26(ವಿವಿಹೆಚ್)– ಇಡೀ ಪ್ರಪಂಚದಲ್ಲೇ ಅತ್ಯುತ್ತಮವಾದ ಸಂವಿಧಾನ ಯಾವುದಾದರೂ ಇದ್ದರೆ ಅದು, ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಭಾರತದ ಸಂವಿಧಾನ. ಬಾಬಾ ಸಾಹೇಬರು ಕೊಟ್ಟ ಸಂವಿಧಾನ ಕೇವಲ ಭಾರತಕ್ಕಲ್ಲ ಇಡೀ ಪ್ರಪಂಚಕ್ಕೆ ದಾರಿದೀಪವಾಗಿದೆ ಎಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯಪಟ್ಟರು.

ನಗರದ ಕಲಾಮಂದಿರದ ಕಿರು ರಂಗಮಂದಿರ ಆವರಣದಲ್ಲಿ ಪದ್ಮ ಪಾಣಿ ಲಲಿತಾ ಕಲಾ ಅಕಾಡೆಮಿ, ಏಕತಾರಿ ಸಾಂಸ್ಕೃತಿಕ ಸಂಘಟನೆ ಸಂಯುಕ್ತಾಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಸಂವಿಧಾನ ಪೀಠಿಕೆ ಶತಕಂಠ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಬಾ ಸಾಹೇಬರ ಬದುಕು, ಬರಹ, ಜೀವನ ಎಲ್ಲವೂ ಸಂವಿಧಾನದಲ್ಲಿ ಅಡಕವಾಗಿವೆ. ಅವರ ಅನುಭವಗಳು, ನೋವು, ಕಷ್ಟಗಳನ್ನ ಜಗತ್ತಿನಲ್ಲಿ ಬೇರ್ಯಾರು ಅನುಭವಿಸಬಾರದು ಎಂದು ಯಾರ ಬೆಂಬಲವೂ ಇಲ್ಲದೇ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿದ ಮಹನೀಯ ಎಂದು ಶ್ಲಾಘಿಸಿದರು.

ಪ್ರತಿಯೊಬ್ಬ ಪ್ರಜೆಗೂ ಸಮಾನತೆ, ಸಾಮಾಜಿಕ ನ್ಯಾಯ ಸಿಗಬೇಕು. ಅದು ಎಲ್ಲರ ಹಕ್ಕು ಎಂದು ಅವರು ಪ್ರತಿಪಾದಿಸಿದರು. ಸತ್ವ ಭರಿತ ಸಂವಿಧಾನದಿಂದಲೇ ಭಾರತ ದೇಶ ಉಳಿದಿದೆ ಎಂಬುದನ್ನು ಅರಿಯಬೇಕು. ಸಂವಿಧಾನ ಜಾರಿಯಾದ ದಿನದಿಂದ ಅದರ ಆಶಯಗಳನ್ನು ಮನವರಿಕೆ ಮಾಡಿಕೊಡುವ ಕೆಲಸ ಆಗಿದ್ದರೆ ಇಲ್ಲಿಯವರೆಗೆ ದೇಶ ದೊಡ್ಡ ಬದಲಾವಣೆಗೆ ಸಾಕ್ಷಿಯಾಗಿರುತ್ತಿತ್ತು ಎಂದರು.

ಸ್ವಾತಂತ್ರ್ಯ ಪೂರ್ವದಲ್ಲಿ ಸಾಕ್ಷರತೆ ಪ್ರಮಾಣ ಅತೀ ಕಡಿಮೆ ಇತ್ತು ಇಂದು ಸಾಕ್ಷರತೆ ಹೆಚ್ಚಿರುವುದಕ್ಕೆ ಡಾ.ಅಂಬೇಡ್ಕರ್ ಅವರೇ ಕಾರಣ. ಅಂಬೇಡ್ಕರ್ ಅವರು ಹೇಳಿರುವಂತೆ ಶಿಕ್ಷಣ–ಸಂಘಟನೆ–ಹೋರಾಟ ವಿಷಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಪ್ರತಿಯೊಬ್ಬರು ಶಿಕ್ಷಿತರಾಗಬೇಕು. ಸಂವಿಧಾನ ಓದಿಕೊಂಡಿರುವವರಿಂದ ಅರಿವು ಮೂಡಿಸುವ ಕೆಲಸ ಆಗಬೇಕು. ಪಾಳೆಗಾರಿಕೆ ಮನಸ್ಥಿತಿ ಹತ್ತಿಕ್ಕುವುದೇ ಸಂವಿಧಾನದ ಆಶಯಗಳು. ಈ ಆಶಯದಂತೆ ಕೆಲಸ ಮಾಡಿರುವ ತೃಪ್ತಿ ನನಗಿದೆ ಎಂದರು.

70ರ ದಶಕದಿಂದ ರಾಜಕೀಯದಲ್ಲಿದ್ದೇನೆ. ಈ ವೇಳೆ ಸಂವಿಧಾನದ ಆಶಯಗಳನ್ನು ಉಳಿಸುವಲ್ಲಿ ಶ್ರಮಿಸಿದ್ದೇನೆ. ಸಂವಿಧಾನ ಓದು ಪ್ರತಿ ಮನೆ ಮನೆಯಲ್ಲೂ ಆಗಬೇಕು. ಬುದ್ಧ, ಬಸವ, ಅಂಬೇಡ್ಕರ್, ವಿವೇಕಾನಂದ ಎಲ್ಲರೂ ಸಮಾನತೆ ಸಾರಿದವರು. ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆಯಬೇಕು. ದೇಶದಲ್ಲಿನ ಅಸಮಾನತೆಯನ್ನು ಸಂವಿಧಾನದ ಮೂಲಕ ತೊಡೆದು ಹಾಕುವ ಪ್ರತಿಜ್ಞೆಯನ್ನು ಯುವ ಸಮೂಹ ಮಾಡಬೇಕು ಎಂದು ಸೂಚಿಸಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಸಂವಿಧಾನದ ಆಶಯಗಳನ್ನು ಹತ್ತಿಕ್ಕುವ ಕೆಲಸ ಇತ್ತೀಚೆಗೆ ಜೋರಾಗಿ ನಡೆಯುತ್ತಿದೆ. ಪ್ರಸ್ತುತ ಸಮಾಜದಲ್ಲಿ ಶಾಲಾ–ಕಾಲೇಜು ಹಂತದಲ್ಲಿಯೇ ಮೌಢ್ಯ ಬಿತ್ತುವ ಕೆಲಸ ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಬೇಸರಿಸಿದರು.

ದೇಶಾದ್ಯಂತ ಸಂವಿಧಾನದ ಮೇಲೆ ಗದಾ ಪ್ರಯೋಗ ನಡೆಯುತ್ತಿದೆ. ಏಕ ಧರ್ಮದ ಮೇಲೆ ದೇಶ ಕಟ್ಟಬೇಕು ಎಂದು ಪ್ರಧಾನಿಯಾದಿಯಾಗಿ ಮಾತನಾಡುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಮೌಢ್ಯ ಧಿಕ್ಕರಿಸಿ ವಿಜ್ಞಾನಕ್ಕೆ ಒತ್ತು ನೀಡಬೇಕು. ವೈಜ್ಞಾನಿಕ, ವೈಚಾರಿಕ ಮನೋಭಾವ ಬೆಳೆಸಿಕೊಳ್ಳುವ ಮೂಲಕ ಸಮಾನತೆ ತರುವತ್ತಾ ಶ್ರಮಿಸಬೇಕು ಎಂದರು.

ಇದೇ ವೇಳೆ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ರಂಗಕರ್ಮಿಗಳಾದ ಹೆಚ್.ಜನಾರ್ಧನ್ (ಜನ್ನಿ), ಮೈಮ್ ರಮೇಶ್ ನಿವೃತ್ತ ಪ್ರಾಧ್ಯಾಪಕ ಪ್ರೊ.ಮೈಸೂರು ಕೃಷ್ಣಮೂರ್ತಿ ಅವರನ್ನು ಸನ್ಮಾನಿಸಲಾಯಿತು. ಅಕ್ಕ ಐಎಎಸ್ ಅಕಾಡೆಮಿ ಅಧ್ಯಕ್ಷ ಡಾ. ಶಿವಕುಮಾರ್ ರಚಿತ 'ಸಂವಿಧಾನ ಓದು' ಕೃತಿಯನ್ನು ಶಾಸಕ ಜಿ.ಟಿ.ದೇವೇಗೌಡ ಬಿಡುಗಡೆ ಮಾಡಿದರು. ಜೊತೆಗೆ ಸೋಸಲೆ ಗಂಗಾಧರ ರಚಿತ 'ನಮ್ಮ ಸಂವಿಧಾನ' ಹಾಡನ್ನು ಮಾಜಿ ಮೇಯರ್ ಪುರುಷೋತ್ತಮ್ ಬಿಡುಗಡೆಗೊಳಿಸಿದರು.

ಸಂವಿಧಾನ ಪೀಠಿಕೆ ಶತಕಂಠ ಗಾಯನದಲ್ಲಿ ವಿವಿ ಮೊಹಲ್ಲಾದ ಡಾ.ಅಂಬೇಡ್ಕರ್ ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರ ನಿಲಯದ 100 ವಿದ್ಯಾರ್ಥಿಗಳು ಪಾಲ್ಗೊಂಡು, 'ಸಂವಿಧಾನ ಪೀಠಿಕೆ' ಗೀತೆ ಮೊಳಗಿಸಿದರು.

ಗಾಯಕರಾದ ಮೈಸೂರು ಮಹಾಲಿಂಗ, ಶೇಷಣ್ಣ ಕೆಂಪನಪುರ, ಮಧುಸೂದನ್, ನಾರಾಯಣಸ್ವಾಮಿ ಅವರು ಡಾ.ಬಿ.ಆರ್.ಅಂಬೇಡ್ಕರ್ ಕುರಿತಾದ ಪರಿವರ್ತನ ಗೀತೆಗಳನ್ನು ಹಾಡಿ, ಡಾ. ಅಂಬೇಡ್ಕರ್ ಅವರನ್ನು ಸ್ಮರಿಸುವಂತೆ ಮಾಡಿದರು.

ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಡಾ.ಪ್ರೇಮ್ ಕುಮಾರ್, ಅಕ್ಕ ಐಎಎಸ್ ಅಕಾಡೆಮಿ ಅಧ್ಯಕ್ಷ ಡಾ.ಶಿವಕುಮಾರ್, ಸಮಾಜ ಸೇವಕ ಅಹಿಂದ ಜವರಪ್ಪ, ಪ್ರಜ್ಞಾ ಸಂಸ್ಥೆ ಅಧ್ಯಕ್ಷ ಸೋಸಲೆ ಸಿದ್ದರಾಜು, ಧಮ್ಮ ದೀಕ್ಷಾ ಪ್ರತಿಷ್ಠಾನ ಅಧ್ಯಕ್ಷ ಡಾ. ಚಿಂ.ಬ.ಬಸವರಾಜು, ಸಮಾಜ ಸೇವಕ ಶ್ರೀನಿವಾಸ್, ವಕೀಲ ಶಿವಪ್ರಸಾದ್, ನಿಲಯ ಪಾಲಕರಾದ ಮೋಹನ್ ಕುಮಾರಿ, ಡಾ.ನವೀನ್ ಮೌರ್ಯ, ಪ್ರತಾಪ್ ಅಶೋಕಪುರಂ, ಮಹದೇವ್ ಕೋಟೆ ಉಪಸ್ಥಿತರಿದ್ದರು.


ಸಂವಿಧಾನ ಪೀಠಿಕೆ ಶತಕಂಠ ಗಾಯನ ಕಾರ್ಯಕ್ರಮದಲ್ಲಿ ಶಾಲಾ–ಕಾಲೇಜು ಮಕ್ಕಳೊಂದಿಗೆ ಶಾಸಕ ಜಿ.ಟಿ.ದೇವೇಗೌಡ, ಮಾಜಿ ಮೇಯರ್ ಪುರುಷೋತ್ತಮ್ ಇತರರು ಧ್ವನಿಗೂಡಿಸಿದರು.

ಶ್ರೀಗಳು, ಗಣ್ಯರಿಂದ ಶಾಸಕ ಜಿ.ಟಿ.ದೇವೇಗೌಡರಿಗೆ ಜನ್ಮದಿನದ ಶುಭಾಶಯ

ಮೈಸೂರು,ನ.26(ಪಿಎಂ)– ಮಾಜಿ ಸಚಿವರು, ಚಾಮುಂಡೇಶ್ವರಿ ಕ್ಷೇತ್ರದ ಹಾಲಿ ಶಾಸಕರೂ ಆದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ.ದೇವೇಗೌಡ ಅವರಿಗೆ ಹಲವು ಗಣ್ಯರು ಜನ್ಮದಿನದ ಶುಭಾಶಯ ಕೋರಿದ್ದಾರೆ.



ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಮೈಸೂರು ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ಕ್ರಿಶ್ಚಿಯನ್ ಧರ್ಮಗುರುಗಳು ಆಶೀರ್ವದಿಸಿ, ಶುಭಾಶಯ ತಿಳಿಸಿದ್ದಾರೆ. ಅಲ್ಲದೆ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಶೋಭಾ ಕರಂದ್ಲಾಜೆ, ವಿ.ಸೋಮಣ್ಣ, ರಾಜ್ಯ ಸರ್ಕಾರದ ಸಚಿವ ಎನ್.ಚಲುವರಾಯಸ್ವಾಮಿ ಅವರು ಶುಭ ಕೋರಿದ್ದಾರೆ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಮಕ್ಕಳಾದ ನಿವೃತ್ತ ಕೆಎಎಸ್ ಅಧಿಕಾರಿ ಹೆಚ್.ಡಿ.ಬಾಲಕೃಷ್ಣ, ಮಾಜಿ ಸಚಿವರು ಹಾಗೂ ಶಾಸಕ ಹೆಚ್.ಡಿ.ರೇವಣ್ಣ ಹೆಚ್.ಡಿ.ಅನಸೂಯ, ಹೆಚ್.ಡಿ.ರಮೇಶ್ ಸಹ ಶುಭಾಶಯ ತಿಳಿಸಿದ್ದಾರೆ.

ಕೋಲಾರ ಲೋಕಸಭಾ ಸದಸ್ಯ ಮಲ್ಲೇಶ್ ಬಾಬು, ಜಾತ್ಯತೀತ ಜನತಾದಳ ಪಕ್ಷದ ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಪಕ್ಷದ ಶಾಸಕಾಂಗ ನಾಯಕ ಸುರೇಶ್‌ಬಾಬು, ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ, ಸಿ.ಎಸ್.ಪುಟ್ಟರಾಜು, ವಿಧಾನ ಪರಿಷತ್ ಸದಸ್ಯರಾದ ಜವರಾಯಿಗೌಡ, ಮಾಜಿ ಶಾಸಕರಾದ ಡಾ.ಕೆ.ಅನ್ನದಾನಿ, ರವೀಂದ್ರ ಶ್ರೀಕಂಠಯ್ಯ, ಅಶ್ವಿನ್‌ಕುಮಾರ್, ಕೆಮಹದೇವ್, ದೊಡ್ಡಪ್ಪಗೌಡ ಪಾಟೀಲ್ ನರಿಬೋಳ್, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮಂಡ್ಯದ ರಮೇಶ್, ಮೈಸೂರು ನರಸಿಂಹಸ್ವಾಮಿ, ಕಾಂಗ್ರೆಸ್ ಪಕ್ಷದ ಶಾಸಕರಾದ ತನ್ವೀರ್‌ಸೇಠ್, ಗಣೇಶ್ ಪ್ರಸಾದ್, ಕೆಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ಪಕ್ಷದ ಮೈಸೂರು ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಬಿಜೆಪಿ ಶಾಸಕ ಟಿ.ಎಸ್.ಶ್ರೀವತ್ಸ, ಮುಖಂಡರಾದ ಮೈ.ವಿ.ರವಿಶಂಕರ್, ಇಂಡವಾಳು ಸಚ್ಚಿದಾನಂದ, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಶುಭಾಶಯ ತಿಳಿಸಿದ್ದಾರೆ.

ಡಾ.ಅಂಬೇಡ್ಕರ್ ಸಾಧನೆಗೆ ಅವರಲ್ಲಿನ ಆತ್ಮವಿಶ್ವಾಸವೇ ಕಾರಣ


• ತುಮಕೂರು ಶ್ರೀರಾಮಕೃಷ್ಣಾಶ್ರಮದ ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಅಭಿಮತ • ಹಕ್ಕುಗಳ ಪ್ರತಿಪಾದನೆಗೂ ಮುನ್ನ ಕರ್ತವ್ಯಗಳ ಪಾಲನೆ ಅತೀ ಮುಖ್ಯ

ಮೈಸೂರು, ನ.26(ಎಸ್‌ಪಿಎನ್)– ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಸಾಧನೆಯ ಹಿಂದೆ ಅವರ ಆತ್ಮವಿಶ್ವಾಸವೇ ಕಾರಣ. ಅವರನ್ನು ಅರ್ಥಮಾಡಿಕೊಳ್ಳಲು ಸಮಾನಾಂತರವಾದ ಮೆದುಳು ಬೇಕು ಎಂದು ತುಮಕೂರು ಶ್ರೀ ರಾಮಕೃಷ್ಣಾಶ್ರಮದ ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಅಭಿಪ್ರಾಯಪಟ್ಟರು.

ಮೈಸೂರು ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಭಾಂಗಣದಲ್ಲಿ ಪರಂಪರೆ ಸಂಸ್ಥೆ ವತಿಯಿಂದ ಏರ್ಪಡಿಸಿದ್ದ ಭಾರತದ ಸಂವಿಧಾನ–ವಿಶೇಷ ಉಪನ್ಯಾಸಗಳು ಕುರಿತು ಮೊದಲನೇ ದಿನದ ಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಅವರ ಸಾಧನೆಯ ಹಿಂದೆ ಅವರ ಆತ್ಮವಿಶ್ವಾಸ ಕಾರಣವಾಗಿತ್ತು. ಅವರಿಗೆ ತಾವು ಶಿಕ್ಷಣ ಪಡೆಯಬೇಕು ಎಂಬ ಅತೀವವಾದ ಹಂಬಲದಿಂದಾಗಿ ಎಷ್ಟೇ ಕಷ್ಟ ಎದುರಾದರೂ ಲೆಕ್ಕಿಸದೇ ಶಿಕ್ಷಣ ಪಡೆದು ಉನ್ನತ ಸಾಧನೆ ಮಾಡಿದ್ದಾರೆ ಎಂದರು.

ಭಾರತ ಸಂವಿಧಾನ ಕರಡು ಪ್ರತಿ ರಚನಾ ಸಮಿತಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಅಧ್ಯಕ್ಷರಾಗಿದ್ದರು. ಇತರೆ ಆರೇಳು ಮಂದಿ ಸದಸ್ಯರು ಈ ಸಮಿತಿಯಲ್ಲಿದ್ದರು. ಇವರುಗಳ ಪರಿಶ್ರಮದಿಂದ ನಮಗೆ ಸುಂದರವಾದ ಸಂವಿಧಾನ ದೊರಕಿದೆ. ಹಾಗಾಗಿ ಪ್ರತಿಯೊಬ್ಬರು ಇದರಲ್ಲಿನ ಹಕ್ಕುಗಳನ್ನು ಪ್ರತಿಪಾದಿಸುವುದಕ್ಕಿಂತ, ಕರ್ತವ್ಯಗಳ ಪಾಲಿಸುವುದು, ಚರ್ಚಿಸುವುದು ಅತೀಮುಖ್ಯ ಎಂದು ಕಿವಿಮಾತು ಹೇಳಿದರು.

ಸಂವಿಧಾನದಲ್ಲಿ ಎಲ್ಲರಿಗೂ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಅಭಿವ್ಯಕ್ತಿ ಸ್ವಾತಂತ್ರ್ಯ ನೀಡಲಾಗಿದೆ. ಅದನ್ನೂ ಸಂವಿಧಾನ ಚೌಕಟ್ಟಿನಲ್ಲಿ ವ್ಯಕ್ತಪಡಿಸಬೇಕು ಎಂಬ ಮಿತಿಯೂ ಇದೆ. ಅದನ್ನು ಮೀರಿ ಮಾತನಾಡಿದರೆ, ಅದು ಅಪರಾಧವಾಗುತ್ತದೆ. ಅಶ್ಲೀಲ ಮಾತುಗಳು, ಅಸಂಸದೀಯ ಮಾತುಗಳಿಗೂ ಒಂದು ಚೌಕಟ್ಟನ್ನು ಸಂವಿಧಾನ ಕಲ್ಪಿಸಿದೆ. ಇದರ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು. ನಮ್ಮ ದೇಶ ಅನಾದಿ ಕಾಲದಿಂದಲೂ ಮೌಲ್ಯಾಧಾರಿತ, ತತ್ವಾಧಾರಿತ ಸಿದ್ಧಾಂತಗಳನ್ನು ಪಾಲಿಸಿಕೊಂಡು ಬಂದಿರುವ ದೇಶ. ಹಾಗಾಗಿ ನಮ್ಮ ಪರಂಪರೆಗೆ ಗಟ್ಟಿ ಬುನಾದಿ ಇದೆ ಎಂದು ಅಭಿಪ್ರಾಯಪಟ್ಟರು.


'ಭಾರತದ ಸಂವಿಧಾನ–ವಿಶೇಷ ಉಪನ್ಯಾಸಗಳು' ಕುರಿತು ಶ್ರೀ ರಾಮಕೃಷ್ಣಾಶ್ರಮದ ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಮಾತನಾಡುತ್ತಿರುವುದು

ಖಡ್ಗ ನೀತಿ ಪಾಲನೆಯಿಂದ ಯಾರೂ ದೊಡ್ಡವರಾಗಲ್ಲ. ತತ್ವ–ಸಿದ್ಧಾಂತ ಪಾಲನೆಯಿಂದ ಮಾತ್ರವೇ ದೊಡ್ಡವರಾಗುತ್ತೇವೆ. ಖಡ್ಗ ನೀತಿ ಕುರಿತು ಫ್ರಾನ್ಸ್ ದೊರೆ ನೆಪೋಲಿಯನ್ ಬದುಕಿನ ಚಿತ್ರಣವನ್ನು ಉದಾಹರಣೆಯಾಗಿ ನೀಡಿದರು. ಹಿಂದೂ ಧರ್ಮ ಯಾವುದೇ ಋಷಿಮುನಿಗಳಿಂದ ಹುಟ್ಟಿದ್ದಲ್ಲ. ಅದು ತತ್ವ ಸಿದ್ಧಾಂತದ ಪಾಲನೆ ಮೂಲಕ ಹುಟ್ಟಿದೆ. ಯಾವುದೇ ಧರ್ಮ ಜನ ಮಾನಸದಲ್ಲಿ ಉಳಿಯಬೇಕಾದರೆ, ಅದರ ತತ್ವ–ಸಿದ್ಧಾಂತಗಳು ಮುಖ್ಯ ಮಹರ್ಷಿ ವಾಲ್ಮೀಕಿ, ವಸಿಷ್ಠರು, ವ್ಯಾಸರು, ಶಂಕರಾಚಾರ್ಯರು, ವಿಶ್ವಾಮಿತ್ರರಿಂದ ಹಿಂದೂ ಧರ್ಮ ಹುಟ್ಟಿಲ್ಲ. ಸನಾನತ ಧರ್ಮದಲ್ಲಿ ಹುಟ್ಟಿ, ಇವರು ಸಮಾಜದಲ್ಲಿ ದೊಡ್ಡವರಾಗಿದ್ದಾರೆ. ಸನಾತನ ಧರ್ಮಕ್ಕೆ ತತ್ವ–ಸಿದ್ಧಾಂತಗಳ ಭದ್ರ ಬುನಾದಿಯಿದೆ.

– ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ, ಶ್ರೀ ರಾಮಕೃಷ್ಣಾಶ್ರಮ ತುಮಕೂರು

ವ್ಯಕ್ತಿಗತವಾಗಿ ಸ್ಥಾಪಿತವಾದ ಧರ್ಮದಲ್ಲಿ ಅದರ ಅನುಯಾಯಿಗಳಲ್ಲಿ ಒಮ್ಮೆ ಅಪನಂಬಿಕೆ ಹುಟ್ಟಿದರೆ, ಆ ಧರ್ಮ ಅಲ್ಲಿಗೆ ಕೊನೆಗೊಳ್ಳುತ್ತದೆ. ಆದರೆ, ಹಿಂದೂ ಧರ್ಮಕ್ಕೆ ಅಂತಹ ಅಪನಂಬಿಕೆಗಳಿಲ್ಲ. ಏಕೆಂದರೆ, ಹಿಂದೂ ಧರ್ಮದಲ್ಲಿ 338 ಕೋಟಿ ದೇವರ ಅವಶ್ಯಕತೆಯಿಲ್ಲ. ಆದರೆ, ಅವರ ತತ್ವಗಳು ಮುಖ್ಯ. ಯಾರೂ ಯಾವ ದೇವರನ್ನಾದರೂ ಪೂಜಿಸಬಹುದು. ಆದರೆ, ಏಕ ವ್ಯಕ್ತಿ ಸ್ಥಾಪಿಸಿದ ಧರ್ಮದಲ್ಲಿ ಬಹುತ್ವಕ್ಕೆ ಜಾಗವಿರಲಿಲ್ಲ ಎಂದು ಹಿಂದೂ ಧರ್ಮ ಹಾಗೂ ಬೇರೆ ಧರ್ಮಗಳು ತೌಲನಿಕ ಸಿದ್ಧಾಂತದ ಮೂಲಕ ವಿವರಿಸಿದರು.

ಕೈ ಕೆಸರಾದರೆ, ಬಾಯ್ ಮೊಸರು ಎಂಬ ಗಾಧೆ ಮಾತನ್ನೇ ನಮ್ಮನಾಳುವವರು ಬದಲಾಯಿಸಿದ್ದಾರೆ. ನಿಮ್ಮ ಕೈ ಕೆಸರಾದರೆ, ನಮ್ಮ ಬಾಯ್ ಮೊಸರಾಗುತ್ತದೆ ಎನ್ನುವ ಭಾವನೆ ಜನರಲ್ಲಿ ಮೂಡಿದೆ. ಬಸವಣ್ಣನವರು ದಯವೇ ಧರ್ಮದ ಮೂಲಯ್ಯ ಎಂದರು. ಡಿವಿಜಿ ಅವರು, ಧರ್ಮ ಇಲ್ಲದಿದ್ದರೆ, ದಯೆಗೆ ಜಾಗವೆಲ್ಲಿರುತ್ತದೆ ಎಂದರಲ್ಲದೆ ಅನಾದಿ ಕಾಲದಿಂದಲೂ ನಮ್ಮ ಋಷಿ ಮುನಿಗಳು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಧರ್ಮದ ಭಾಗವಾಗಿಸಿದ್ದಾರೆ ಎಂದು ಉದಾಹರಣೆ ಸಮೇತ ವಿವರಿಸಿದರು.

ಡಾ.ಬಿ.ಆರ್.ಅಂಬೇಡ್ಕರ್, ಡಾ.ಎಪಿಜೆ ಅಬ್ದುಲ್ ಕಲಾಂ, ಸ್ವಾಮಿ ವಿವೇಕಾನಂದ ಸೇರಿದಂತೆ ಅನೇಕ ದಾರ್ಶನಿಕರು ಸಾಧನೆ ಮಾಡಲು ಅವರ ಪರಿಶ್ರಮ, ಆತ್ಮವಿಶ್ವಾಸವೇ ಕಾರಣ. ಸಾಧಕರ ಮಾರ್ಗವನ್ನು ಅನುಸರಿಸಲು ಯುವಕರು ಮುಂದಾಗಬೇಕು. ಎಲ್ಲಿ ತತ್ವ–ಸಿದ್ಧಾಂತಕ್ಕೆ ಬೆಲೆ ಇರುತ್ತದೆಯೂ ಅಲ್ಲಿ ಮಾನವೀಯತೆಗೆ ಸ್ಥಾನವಿರುತ್ತದೆ. ಹಾಗಾಗಿ ಖಡ್ಗ ನೀತಿಗಿಂತ ನಮ್ಮ ಋಷಿ ಮುನಿಗಳು ಅನುಸರಿಸಿದ ತತ್ವ–ಸಿದ್ಧಾಂತಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಹಾಗಾಗಿ ಹಿಂದೂ ಧರ್ಮಕ್ಕೆ ಸಾವಿರಾರು ವರ್ಷಗಳ ಐತಿಹಾಸಿಕ ಹಿನ್ನೆಲೆಯಿದೆ ಎಂದು ವಿವರಿಸಿದರು.

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ... ಮದುವೆ ನಂತರ ನೀವು ನನ್ನ ಪ್ರೀತಿ ಮಾಡ್ತಾ ಇಲ್ಲ

ಗಂಡ : ಅಲ್ವೇ ಪರೀಕ್ಷೆ ಪಾಸ್ ಆದ ನಂತರ ಯಾರಾದ್ರೆ ಮತ್ತೆ ಓದ್ತಾರೆ ಹೇಳು?!

ಮೈಸೂರು ಮಿತ್ರ

ಗುರುವಾರ, 27 ನವೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ದಾನದಿಂದ ಮನೆ ಸಂಪದ್ಭರಿತ, ಧ್ಯಾನದಿಂದ ಮನಸ್ಸು ಸಂಪದ್ಭರಿತ, ಪ್ರೀತಿಯಿಂದ ಹೃದಯ ಸಂಪದ್ಭರಿತ, ನಂಬಿಕೆಯಿಂದ ಸಂಬಂಧಗಳು ಸಂಪದ್ಭರಿತ.

ವೇದ ಸುಳ್ಳಾದರೂ / ಗಾದೆ ಸುಳ್ಳಾಗದು { ಭಂಗಿದೇವನಿಗೆ / ಹೆಂಡಕುಡುಕ ಪೂಜಾರಿ

ನಿಮ್ಮ ಪತ್ರಗಳು

ಇತ್ತೀಚಿನ ಮುಖ್ಯಮಂತ್ರಿಗಳ ಆಡಳಿತ ಅಳೆದು-ಸುರಿದು ನೋಡಿದರೆ ಕುಮಾರಸ್ವಾಮಿಯೇ ಬೆಸ್ಟ್ ಸಿಎಂ!

ಮಾನ್ಯರೆ,

ಕರ್ನಾಟಕದಲ್ಲಿ ಕಾಂಗ್ರೆಸ್, ಬಿ.ಜೆ.ಪಿ ಹಾಗೂ ಜೆಡಿಎಸ್ ಒಳಗೊಂಡ ಸಮ್ಮಿಶ್ರ ಸರ್ಕಾರಗಳ ಕಾರ್ಯ ವೈಖರಿಯನ್ನು ಕಂಡಿರುವ ಜನತೆ ಇದೀಗ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಹೆಚ್.ಡಿ. ಕುಮಾರಸ್ವಾಮಿಯವರನ್ನು ಮುಖ್ಯಮಂತ್ರಿ ಸ್ಥಾನದಲ್ಲಿ ನೋಡಲು ಕಾತುರರಾಗಿದ್ದಾರೆ. ಕಾರಣ ಯಡಿಯೂರಪ್ಪ, ಸಿದ್ದರಾಮಯ್ಯ ಈ ಹಿಂದಿನ ಎಸ್.ಆರ್. ಬೊಮ್ಮಾಯಿ, ಜಗದೀಶ್ ಶೆಟ್ಟರ್, ಸದಾನಂದಗೌಡ ಅವರ ಆಡಳಿತ ವೈಖರಿಯನ್ನು ಹೋಲಿಕೆ ಮಾಡಿ ನೋಡಿದಾಗ ಎರಡು ಬಾರಿ ಮುಖ್ಯಮಂತ್ರಿಯಾಗಿ ಅಲ್ಪ ಅವಧಿಯಲ್ಲೇ ಉತ್ತಮ ಆಡಳಿತ ನೀಡಿದ್ದ ಕುಮಾರಸ್ವಾಮಿಯವರೇ ಹೆಚ್ಚು ಪ್ರಶಂಸೆಗೆ ಪಾತ್ರರಾಗುತ್ತಾರೆ.

ಕ್ಲಿಷ್ಟಕರ ರಾಜಕೀಯ ಪರಿಸ್ಥಿತಿಯಲ್ಲೂ ಅವರು ಕೈಗೊಂಡ ಗ್ರಾಮ ವಾಸ್ತವ್ಯ, ಲಾಟರಿ ನಿಷೇಧ ಸೇರಿದಂತೆ ರೈತರ ಸಾಲ ಮನ್ನಾ ಮಾಡುವ ಕ್ರಾಂತಿಕಾರಿ ನಿರ್ಧಾರಗಳ ಮೂಲಕ ತಮ್ಮ ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸಿದ್ದರು.

ದುರಾದೃಷ್ಟಕರವೆಂದರೆ ಬಿಜೆಪಿಗೆ ಅಧಿಕಾರ ಹಸ್ತಾಂತರಿಸುವ ವಿಚಾರದಲ್ಲಿ ಮಾತು ತಪ್ಪಿದ ಆರೋಪಕ್ಕೆ ಗುರಿಯಾದರು. ತದ ನಂತರ ಕಾಂಗ್ರೆಸ್ ಸಹಯೋಗದೊಂದಿಗೆ ಮತ್ತೆ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸಿದ ಅವಧಿಯಲ್ಲೂ ಯಾವುದೇ ಕಪ್ಪು ಚುಕ್ಕೆ ಇಲ್ಲದಂತೆ ಉತ್ತಮ ಆಡಳಿತ ನೀಡಿದ್ದು ರಾಜ್ಯದ ಜನತೆಗೆ ಈಗ ಅದರ ವಸ್ತುಸ್ಥಿತಿ ಅರಿವಾಗುತ್ತಿದೆ. ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಕುಮಾರಸ್ವಾಮಿಯವರನ್ನು ಸೂತ್ರದ ಬೊಂಬೆಯಂತೆ ಆಡಿಸಿದ್ದ ಕಾಂಗ್ರೆಸ್ ಎಲ್ಲಾ ನಿರ್ಧಾರಗಳಲ್ಲೂ ಮೂಗು ತೂರಿಸುವ ಮೂಲಕ ಕುಮಾರಸ್ವಾಮಿಯವರ ನೈತಿಕ ಸ್ಥೈರ್ಯವನ್ನು ಹತ್ತಿಕ್ಕಿ ಅವರನ್ನು ಖಳನಾಯಕನಂತೆ ಬಿಂಬಿಸಿದ್ದು ಜನತೆಗೆ ತಡವಾಗಿ ಅರಿವಿಗೆ ಬಂದಿದೆ.

ಹಲವಾರು ಜನಪ್ರಿಯ ಯೋಜನೆಗಳಿಂದ ಕುಮಾರಸ್ವಾಮಿಯವರು ರಾಜಕೀಯವಾಗಿ ಪ್ರಬಲ ವ್ಯಕ್ತಿಯಾಗಿ ಬೆಳೆಯುತ್ತಿರುವುದನ್ನು ಸಹಿಸದ ಕಾಂಗ್ರೆಸ್ ಪಕ್ಷ, ಸರ್ಕಾರ ಪತನವಾಗಲು ಏನೆಲ್ಲಾ ಕಾರ್ಯತಂತ್ರಗಳನ್ನು ಮಾಡಿತೆಂಬುದನ್ನು ಇತಿಹಾಸದ ಪುಟಗಳೇ ಸಾರಿ ಸಾರಿ ಹೇಳುತ್ತಿವೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡರೂ ಮುಖ್ಯಮಂತ್ರಿ ಸ್ಥಾನದಲ್ಲಿ ಕುಮಾರಸ್ವಾಮಿಯವರೇ ರಾರಾಜಿಸಬೇಕೆಂಬುದು ಬಹು ಜನರ ಅಪೇಕ್ಷೆಯಾಗಿದೆ.

– ಹೆಚ್.ಆರ್.ಪ್ರಸಾದ್, ವಿವೇಕಾನಂದ ನಗರ, ಮೈಸೂರು.

ನವಜಾತ ಶಿಶುಗಳಿಗೆ ಉಣಿಸುವ ಎದೆ ಹಾಲಿನಲ್ಲಿ ಯುರೇನಿಯಂ ಆತಂಕಕಾರಿ

ಮಾನ್ಯರೆ,

ಬಿಹಾರದ 6 ಜಿಲ್ಲೆಗಳಲ್ಲಿ, ತಾಯಂದಿರು ತಮ್ಮ ನವಜಾತ ಶಿಶುಗಳಿಗೆ ಉಣಿಸುವ ಎದೆ ಹಾಲಿನಲ್ಲಿ ಯುರೇನಿಯಂ ಅತ್ಯಂತ ವಿಷಕಾರಿ ಅಂಶ ಪತ್ತೆಯಾಗಿರುವ ಆತಂಕಕಾರಿ ಸಂಗತಿಯನ್ನು ಮಾಧ್ಯಮಗಳು ವರದಿ ಮಾಡಿವೆ.

ಇತ್ತೀಚೆಗೆ ದೆಹಲಿಯ ಏಮ್ಸ್ ಸಹಯೋಗದಲ್ಲಿ ಪಾಟ್ನಾದ ಮಹಾವೀರ್ ಕ್ಯಾನ್ಸರ್ ಆಸ್ಪತ್ರೆಯು ನಡೆಸಿರುವ ಸಂಶೋಧನೆಯಿಂದ ಇದು ಧೃಡಪಟ್ಟಿದೆ. ಯುರೇನಿಯಂ ಯುಕ್ತ ಹಾಲನ್ನು ಕುಡಿದ ಮಕ್ಕಳಲ್ಲಿ ಕಿಡ್ನಿ ಹಾಗೂ ನರರೋಗ ಸಮಸ್ಯೆಗಳು ಉಂಟಾಗುವ ಸಾಧ್ಯತೆಗಳಿವೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ. ಕುಡಿಯುವ ನೀರಿನಿಂದ ಇಂತಹ ಸಮಸ್ಯೆಗಳು ಉಂಟಾಗುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ಇದು ಬಿಹಾರದಂತಹ ಒಂದು ರಾಜ್ಯಕ್ಕೆ ಮಾತ್ರ ಸೀಮಿತವಾಗಿದೆಯಾ ಅಥವಾ ಬೇರೆ ಬೇರೆ ರಾಜ್ಯಗಳಲ್ಲೂ ಇಂತಹ ಸಮಸ್ಯೆಗಳು ಇದೆಯಾ ಎಂಬುದನ್ನು ವಿಶ್ವ ಆರೋಗ್ಯ ಸಂಸ್ಥೆ ದೃಢಪಡಿಸಬೇಕು. ಈ ಕಾರಣಕ್ಕಾಗಿಯೇ ಇತ್ತೀಚಿನ ವರ್ಷಗಳಲ್ಲಿ ನವಜಾತ ಶಿಶುಗಳ ಮರಣ ಪ್ರಮಾಣ ಹೆಚ್ಚಾಗಿರಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ಹುಣಸೂರು ರಸ್ತೆಗೆ ಫ್ಲೈಓವರ್ ಅತ್ಯಗತ್ಯ

ಮಾನ್ಯರೆ,

ಮೈಸೂರಿಗೆ ಮೊಟ್ಟ ಮೊದಲ ಮೇಲ್ಸೇತುವೆಯಾಗಿ ಹಿನಕಲ್‌ನಲ್ಲಿ ರಿಂಗ್ ರಸ್ತೆಗೆ ಅಡ್ಡಲಾಗಿ ನಿರ್ಮಾಣವಾಯಿತು. ಇದರಿಂದಾಗಿ ಆ ವೇಳೆಗೆ ಆ ಜಂಕ್ಷನ್‌ನಲ್ಲಿ ಆಗುತ್ತಿದ್ದ ಸಂಚಾರ ದಟ್ಟಣೆ ಸ್ವಲ್ಪ ಕಡಿಮೆ ಆಯಿತು. ಈಗ ಆ ಫ್ಲೈ ಓವರ್ ಕೆಳಗೆ ಬೆಳಗ್ಗೆ ಹಾಗೂ ಸಂಜೆಯ ವೇಳೆಗಳಲ್ಲಿ ಅದೇ ಸಂಚಾರ ದಟ್ಟಣೆ ನಿರ್ಮಾಣವಾಗಿದೆ. ಇದು ಸದ್ಯದ ಹಿನಕಲ್ ರಿಂಗ್ ರಸ್ತೆಯ ಸಮಸ್ಯೆಗಳಲ್ಲಿ ಒಂದು. ಹಾಗೆಯೇ ಹೂಟಗಳ್ಳಿ ಸಿಗ್ನಲ್‌ನಲ್ಲಿ ಹೆಚ್ಚುತ್ತಿರುವ ವಾಹನ ಸಂಚಾರ ದಟ್ಟಣೆಯಿಂದಾಗಿ ಎರಡೆರಡು ಬಾರಿ ಸಿಗ್ನಲ್‌ನಲ್ಲೇ ಉಳಿಯುವಂತಾಗಿದೆ. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕೂಡ ಸಿಗ್ನಲ್‌ನ ಪಕ್ಕದಲ್ಲೇ ಇರುವುದರಿಂದ ಹಾಗೂ ಆ ಬಸ್ಸುಗಳ ಚಾಲಕರ ಅಶಿಸ್ತಿನ ನಿಲುಗಡೆಗಳಿಂದ ಸಂಚಾರ ಸಮಸ್ಯೆ ಸೃಷ್ಟಿಯಾಗುತ್ತಿದೆ.

ಮೈಸೂರು ನಗರದಿಂದ ಹಿನಕಲ್ ಫ್ಲೈ ಓವರ್ ಪ್ರವೇಶಿಸುವಾಗಲೂ ಇದೇ ಬಸ್‌ಗಳ ನಿಲುಗಡೆಯಿಂದ ಸಂಚಾರ ಸಮಸ್ಯೆ ಆಗುತ್ತಿದ್ದು, ಹಿನಕಲ್ ಬಸ್ ನಿಲ್ದಾಣದಲ್ಲಿ ವಾಹನಗಳ ದಟ್ಟಣೆ ಆಗುತ್ತಿದೆ. ಮುಂದುವರಿದು ಹೇಳುವುದಾದರೆ ಹಿನಕಲ್‌ನಲ್ಲಿ ಹೆಚ್ಚು ಕಾರ್ ಹಾಗೂ ಸ್ಕೂಟರ್ ಷೋರೂಮ್‌ಗಳು ಇರುವುದರಿಂದ ರಸ್ತೆಯ ಎರಡೂ ಬದಿಗಳಲ್ಲಿ ಆ ಶೋರೂಂಗಳವರು ಫುಟ್‌ಪಾತ್‌ನಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡಿರುತ್ತಾರೆ. ಹಾಗಾಗಿ ಇಲ್ಲಿ ಸಂಚರಿಸುವ ಯಾವುದಾದರು ವಾಹನ ಕೆಟ್ಟು ನಿಂತರೆ ರಸ್ತೆಯಲ್ಲೇ ನಿಲ್ಲಬೇಕಾದ ಪರಿಸ್ಥಿತಿ ಇದೆ. ಈ ರಸ್ತೆಯಲ್ಲಿ ದಿನನಿತ್ಯ ನೂರಾರು ಸಾರಿಗೆ ಬಸ್ಸುಗಳು ಕೇರಳ, ಮಂಗಳೂರು, ಹಾಸನ, ಮಡಿಕೇರಿ ಕಡೆಗೆ ಸಂಚರಿಸುತ್ತವೆ. ಸಾವಿರಾರು ಕಾರುಗಳು, ಅಸಂಖ್ಯಾತ ಆಂಬುಲೆನ್ಸ್‌ಗಳು ಓಡಾಡುತ್ತವೆ. ಪಡುವಾರಹಳ್ಳಿಯಲ್ಲಿ ಮಹಾರಾಣಿ ಕಾಲೇಜು ಬಂದ ಮೇಲೆ ಇನ್ನಷ್ಟು ಸಂಚಾರ ಜಾಸ್ತಿಯಾಗಿದೆ. ಕೈಗಾರಿಕಾ ವಲಯದ ಉದ್ಯಮಿಗಳು, ನೌಕರರು ಕೂಡ ಓಡಾಡಲು ಇದೇ ರಸ್ತೆಯನ್ನು ಅವಲಂಭಿಸಿದ್ದಾರೆ. ಈಗಿರುವ ಹಿನಕಲ್ ಫ್ಲೈ ಓವರ್ ಅನ್ನು ಮಾಡುವಾಗಲೇ ಬೆಳವಾಡಿಯಿಂದ ಕಡೇ ಪಕ್ಷ ಐಶ್ವರ್ಯ ಪೆಟ್ರೋಲ್ ಬಂಕ್‌ವರೆಗೆ ಮಾಡಿದ್ದರೆ ಬಹಳ ಅನುಕೂಲ ಆಗುತ್ತಿತ್ತು. ಈಗಲೂ ಪರವಾಗಿಲ್ಲ ಸರ್ಕಾರ ಈ ರಸ್ತೆಗೆ ಫ್ಲೈ ಓವರ್ ನಿರ್ಮಿಸಲು ಮುಂದೆ ಬಂದಿದೆ. ಯಾರು ಏನೇ ವಿರೋಧ ಮಾಡಿದರೂ ಸರ್ಕಾರ ಈ ನಿರ್ಧಾರದಿಂದ ಹಿಂದೆ ಸರಿಯಬಾರದು. ಈಗ ಅಲ್ಲದಿದ್ದರೂ ಮುಂದೆ ಈ ರಸ್ತೆಗೆ (ಹುಣಸೂರು ರಸ್ತೆ) ಫ್ಲೈ ಓವರ್ ತೀರಾ ಅಗತ್ಯವಿದೆ. ಮುಂದೆ ಇನ್ನಷ್ಟು ಸಂಚಾರ ಹೆಚ್ಚಾಗಿ ಫ್ಲೈ ಓವರ್ ಮಾಡಲು ಮುಂದಾಗಿ ಹೆಚ್ಚಿನ ಸಮಸ್ಯೆ ಸೃಷ್ಟಿಸಿಕೊಳ್ಳುವ ಬದಲು ಈಗಲೇ ನಿರ್ಮಿಸಲು ಮುಂದಾಗಿರುವುದು ಸರ್ಕಾರದ ಉತ್ತಮ ನಿರ್ಧಾರವಾಗಿದೆ.


–ಸೋಮಶೇಖರ್, ಇಲವಾಲ.




ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಮಹಾರಾಜ ಕಾಲೇಜು
ಮೈಸೂರು.

ಮಂಥನ


ಆನಂದಮಠ... ವಂದೇ ಮಾತರಂ...







ಬಂಕಿಮ ಚಂದ್ರ ಚಟರ್ಜಿ



ಜಾದುನಾಥ ಭಟ್ಟಾಚಾರ್ಯ

ಧೀರಸಮೀರೇ, ತಟಿನೀ ತೀರೆ,
ವಸತಿವನೆ ವರನಾರಿ
ಮಾಕುರುಧನುರ್ದರ, ಗಮನವಿಳಂಬನ
ಅತಿವಿಧುರಾ ವರನಾರಿ...

ಈ ಪದ್ಯದ ಭಾಗವನ್ನು ಓದಿ ನಿಮಗೆ ಜಯದೇವನ ಅಷ್ಟಪದಿ ನೆನಪಾಯಿತೆ... ಆಗಿರಲೇಬೇಕು. ಆದರೆ ಇದೊಂದು ಸಂಕೇತ... ಸಹಾಯಕ್ಕೆ ಸೂಚನೆ ಕೊಡಲು ಅದೇ ಧಾಟಿಯಲ್ಲಿ ಸ್ವಾತಂತ್ರ ಸೇನಾನಿಯೊಬ್ಬ ಹಾಡಿದ ಹಾಡು!

ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲು ಎಷ್ಟು ಬಗೆಯಲ್ಲಿ ಲಕ್ಷೋಪಲಕ್ಷ ಜನರು ಹೋರಾಟ ನಡೆಸಿದ್ದಾರೆ ಎಂಬುದು ನಮಗೆಲ್ಲರಿಗೂ ತಿಳಿದಿದೆ. ಅವರೆಲ್ಲರಿಗೂ ಇದ್ದ ಉದ್ದೇಶ ಗುರಿ ಒಂದೇ... ಭಾರತಮಾತೆಯನ್ನು ದಾಸ್ಯದ ಬೇಡಿಗಳಿಂದ ಮುಕ್ತಗೊಳಿಸಿ ಅವಳನ್ನು ಸ್ವತಂತ್ರಳನ್ನಾಗಿ ಮಾಡುವುದು. ಆ ಗುರಿ ಸಾಧನೆಗಾಗಿ 300–400 ವರ್ಷಗಳ ಪ್ರಯತ್ನ ಸತತವಾಗಿ ನಡೆದಿದೆ. ರಾಜ ಮಹಾರಾಜರು, ರಾಣಿಯರು, ವಿದ್ಯಾರ್ಥಿಗಳು, ಮಹಿಳೆಯರು, ಮಕ್ಕಳು ಹೀಗೆ ಎಲ್ಲ ಸ್ತರದ ಜನರೂ ಸ್ವತಂತ್ರ ಸಂಗ್ರಾಮದಲ್ಲಿ ಭಾಗವಹಿಸಿ ತಮ್ಮ ಅಮೂಲ್ಯ ಕೊಡುಗೆ ನೀಡಿದ್ದಾರೆ.

ಇವರೆಲ್ಲರನ್ನೂ ಒಂದುಗೂಡಿಸಿದ್ದು ದೇಶಭಕ್ತಿ. ಇವರೆಲ್ಲರಲ್ಲೂ ಸ್ಫೂರ್ತಿ ತುಂಬಿದ, ಒಂದೇ ಘೋಷಣೆ 'ವಂದೇ ಮಾತರಂ'! ಹೌದು ಬಂಕಿಮಚಂದ್ರ ಚಟ್ಟೋಪಾಧ್ಯಾಯರು ನೀಡಿದ ಈ ಘೋಷಣೆ ಸ್ವಾತಂತ್ರ್ಯ ಹೋರಾಟಗಾರರ ಉಸಿರುಸಿರಿನಲ್ಲೂ ತುಂಬಿಕೊಂಡು ಅವರ ಧ್ಯೇಯವನ್ನು ಸಾಧಿಸಲು ಕೆಚ್ಚು ತುಂಬಿದ್ದು ಈಗ ಇತಿಹಾಸ. ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ, ಬಂಗಾಳದಿಂದ ಗುಜರಾತಿನವರೆಗೆ ಜನರನ್ನು ಒಗ್ಗೂಡಿಸಿದ್ದು ಇದೇ ವಂದೇ ಮಾತರಂ.

'ವಂದೇ ಮಾತರಂ' ಅನ್ನು ಬಂಕಿಮರು 1876ರ ಸುಮಾರಿಗೆ ರಚಿಸಿದ್ದರೂ, ಅದು ಮೊದಲು ಪ್ರಕಾಶ ಕಂಡಿದ್ದು ಬಂಕಿಮರ ಕಾದಂಬರಿ 'ಆನಂದಮಠ'ದಲ್ಲಿ 1882ರಲ್ಲಿ. ನಾನು ಮೊದಲಿಗೆ ಉದ್ಧರಿಸಿದ ಸಾಲುಗಳು ಆನಂದಮಠ ಕಾದಂಬರಿಯದ್ದೇ!

1857ರಲ್ಲಿ ನಡೆದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮಕ್ಕೂ ಮುಂಚೆ ದೇಶವನ್ನು ಆಳುತ್ತಿದ್ದ ಮುಘಲರಿಂದ ದೇಶವನ್ನು ಮುಕ್ತಗೊಳಿಸಬೇಕೆಂದು ಸಾಕಷ್ಟು ಹೋರಾಟಗಳು ನಡೆಯುತ್ತಿದ್ದವು. ಆಗಿನ್ನೂ ಬ್ರಿಟಿಷರು ಮುಘಲರು ಮತ್ತು ಆಗ ಭಾರತದಲ್ಲಿ ರಾಜ್ಯಭಾರ ನಡೆಸುತ್ತಿದ್ದ ರಾಜರುಗಳ ಸಹಾಯದಿಂದ ನಿಧಾನವಾಗಿ ನೆಲೆಯೂರುತ್ತಿದ್ದ ಸಮಯ. ಫಿರಂಗಿಗಳು ಬಂದೂಕುಗಳು ಯುದ್ಧಭೂಮಿಗಳನ್ನು ಪ್ರವೇಶಿಸುತ್ತಿದ್ದ ಸಮಯ. ಆಗ ಸನ್ಯಾಸಿಗಳು ದಂಗೆಯೆದ್ದು ಭಾರತ ಮಾತೆಯ ದಾಸ್ಯಮುಕ್ತಕ್ಕೆ ಪ್ರಯತ್ನಿಸಿದ್ದು ಇತಿಹಾಸದಲ್ಲಿ ದಾಖಲಾಗಿರುವ ಅಪರೂಪದ ಹೋರಾಟ.

ಆ ಹೋರಾಟವನ್ನು ವಿಷಯವಾಗಿಸಿಕೊಂಡು ಬಂಕಿಮರು 'ಆನಂದಮಠ' ಕಾದಂಬರಿಯನ್ನು ಬರೆದಿದ್ದಾರೆ. 1773ರ ಸುಮಾರಿಗೆ ನಡೆದ ಈ ಹೋರಾಟ ಬಹಳ ರೋಮಾಂಚಕ.

ಆನಂದಮಠ ಕಾದಂಬರಿಯನ್ನು ವಂದೇ ಮಾತರಂ ಗೀತೆಗೆ 150 ತುಂಬಿದ ಸಂದರ್ಭದಲ್ಲಿ ಯಾದರೂ ಓದಲೇ ಬೇಕೆಂದುಕೊಂಡವರಿಗೆ, ನಮ್ಮ ಮನೆಯಲ್ಲಿಯೇ 'ಆನಂದಮಠ' ಕಾದಂಬರಿಯಿದ್ದರೂ ಓದಲಾಗಲಿಲ್ಲ. ಅದು ಜೀರ್ಣ ಸ್ಥಿತಿಯಲ್ಲಿತ್ತು. ನಮ್ಮ ಅಮ್ಮನಿಗೆ ಶಾಲೆಯಲ್ಲಿ ಬಹುಮಾನವಾಗಿ ಬಂದ ಪುಸ್ತಕವದು! ಓದಲೇ ಬೇಕೆಂದು ಹುಡುಕಿದಾಗ ಅಂತರ್ಜಾಲದಲ್ಲಿ ಕಣಜ ತಾಣದಲ್ಲಿ ಉಚಿತವಾಗಿಯೇ ಪುಸ್ತಕ ದೊರೆಯಿತು. ನಮ್ಮ ಕರ್ನಾಟಕದ ಗಣ್ಯ ವಿದ್ವಾಂಸರಾದ ಡಾ ಪ್ರಧಾನ ಗುರುದತ್ತರ ಸಂಪಾದಕತ್ವದಲ್ಲಿ ಕರ್ನಾಟಕ ರಾಜ್ಯೋತ್ಸವದ ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ಮರುಮುದ್ರಣಗೊಂಡ ಹೊತ್ತಗೆ. ಕನ್ನಡ ಸಾಹಿತ್ಯದ ಅನುವಾದ ಸಾಹಿತ್ಯ ಪಿತಾಮಹ ಎಂದೇ ಕರೆಸಿಕೊಳ್ಳುವ ಬಿ ವೆಂಕಟಾಚಾರ್ಯರ ಅನುವಾದದಲ್ಲಿ ಮೂಡಿ ಬಂದಿರುವ 'ಆನಂದಮಠ' ಭಾರತೀಯರು ಓದಲೇಬೇಕಾದ ಕೃತಿ. (ಇನ್ನೂ 3–4 ಅನುವಾದಗಳಿವೆ.)

ಆನಂದಮಠ ಕಾದಂಬರಿ ಐತಿಹಾಸಿಕ ಸನ್ಯಾಸಿಗಳ ಹೋರಾಟದ ಸುತ್ತ ಹೆಣೆದ ಕಥಾನಕವಾಗಿದೆ. 160 ಪುಟಗಳಲ್ಲಿ ಸನ್ಯಾಸಿಗಳ ಹೋರಾಟದ ವಿವಿಧ ಮಜಲುಗಳನ್ನು, ಅದಕ್ಕಾಗಿ ಸಮರೋಪಾದಿಯಲ್ಲಿ ನಡೆದ ತಯಾರಿಗಳ ಚಿತ್ರಣವನ್ನು ನೀಡುತ್ತದೆ. ಒಂದು ಮಹತ್ತರ ಗುರಿ ಸಾಧನೆಗಾಗಿ ಒಂದುಗೂಡಿ ಪ್ರಾಣತ್ಯಾಗದಂತಹ ಪ್ರಕ್ರಿಯೆಗೆ ನಾಮುಂದು ತಾಮುಂದು ಎಂದು ಉತ್ಸಾಹದಿಂದ ಮುಂದಾಗುವ ಪಡೆ ಓದುಗರಲ್ಲಿಯೂ ಕೆಚ್ಚನ್ನು ಮೂಡಿಸುತ್ತಾ ಅಚ್ಚರಿಯನ್ನೂ ಉಂಟು ಮಾಡುತ್ತದೆ.

ಸ್ವತಂತ್ರ ಪೂರ್ವ ಬಂಗಾಳದ ವೀರಭೂಮಿಯಲ್ಲಿ ನಡೆಯುವ ಈ ಕತೆ, ಪದಚಿಹ್ನ ಎಂಬ ಊರಿನಿಂದ ಪ್ರಾರಂಭವಾಗುತ್ತದೆ. 18ನೇ ಶತಮಾನದ ಮಧ್ಯಭಾಗದಲ್ಲಿ ಉಂಟಾದ ಭೀಕರ ಬರಗಾಲ ದೇಶದಲ್ಲಿ ಅನ್ನಕ್ಕಾಗಿ ಹಾಹಾಕಾರವನ್ನು ಉಂಟುಮಾಡಿರುತ್ತದೆ. ಜನರ ಬಳಿ ಹಣವಿದ್ದರೂ, ಕೊಳ್ಳಲು ಧಾನ್ಯಗಳೇ ಇಲ್ಲವೆನ್ನುವಂತಹ ಸ್ಥಿತಿ. ಹಸಿವಿನಿಂದ ಕಂಗಾಲಾಗಿ ಜನ ಮನೆಮಾರುಗಳನ್ನು ತೊರೆದು ಸಿಕ್ಕಸಿಕ್ಕಲ್ಲಿಗೆ ಆಶಾಭಾವನೆಯಿಂದ ಗುಳೆ ಹೋಗುತ್ತಿದ್ದಾರೆ. ಗುಳೆ ಹೋಗಲು ಆಗದವರು, ಸೊಪ್ಪು ಸದೆ ತಿನ್ನುತ್ತಾ, ಸಿಕ್ಕ ಜೀವಿಗಳನ್ನು ಕೊಂದು ಹೊಟ್ಟೆ ತುಂಬಿಸಿಕೊಳ್ಳುವ ಸ್ಥಿತಿ ತಲುಪಿದ್ದಾರೆ. ಅಷ್ಟಲ್ಲದೆ, ಏನೂ ಸಿಗದಿದ್ದಲ್ಲಿ ನರಮಾಂಸವಾದರೂ ಸರಿಯೇ ಎನ್ನುವ ಹತಾಶ ಸ್ಥಿತಿ ತಲುಪಿದ್ದಾರೆ.

ಪದಚಿಹ್ನದ ಜಮೀನ್ದಾರ ಮಹೇಂದ್ರವರ್ಮನ ಬಳಿ ಹಣ ಇದ್ದರೂ, ಏನೂ ಕೊಳ್ಳಲಾಗದ ಸ್ಥಿತಿ. ಕಲಕತ್ತೆಗೋ ಕಾಶಿಗೋ ಹೋದರೆ ತಿನ್ನಲು ಏನಾದರೂ ಸಿಕ್ಕೀತು ಎಂಬ ಭಾವನೆ. ಅದಕ್ಕಾಗಿ ಸಿರಿವಂತಿಕೆ ತುಂಬಿ ತುಳುಕುವ ಮನೆಯನ್ನು ತೊರೆದು ಹೆಂಡತಿ ಮಗಳೊಂದಿಗೆ ಗುಳೆ ಹೊರಡುತ್ತಾನೆ. ಮಾರ್ಗಮಧ್ಯದಲ್ಲಿ ಹಸಿವಾದ ಹೆಂಡತಿ ಮಗಳಿಗೆ ನೀರನ್ನಾದರೂ ಕುಡಿಸೋಣವೆಂದು, ಅವರನ್ನು ಒಂದೆಡೆ ಕುಳ್ಳಿರಿಸಿ ನೀರು ತರಲು ಹೋದಾಗ, ಕಳ್ಳರು ಮಹೇಂದ್ರ ವರ್ಮನ ಹೆಂಡತಿ ಕಲ್ಯಾಣಿ ಮತ್ತು ಮಗಳು ಸುಕುಮಾರಿಯನ್ನು ಹೊತ್ತುಕೊಂಡು ಹೋಗುತ್ತಾರೆ. ಇನ್ನೇನು ಕಲ್ಯಾಣಿಯನ್ನು ಅವರು ಸಾಯಿಸಿ ಭಕ್ಷಿಸಬೇಕು ಎನ್ನುವಷ್ಟರಲ್ಲಿ ಆಕೆ ತಪ್ಪಿಸಿಕೊಳ್ಳುತ್ತಾಳೆ. ಇತ್ತ ಮಹೇಂದ್ರ ಹೆಂಡತಿಯನ್ನು ಹುಡುಕಿಕೊಂಡು ಹೋಗುವಾಗ ಸಂತಾಲರು ಅಂದರೆ ಸನ್ಯಾಸಿಗಳ ಕೈಗೆ ಸಿಗುತ್ತಾನೆ.

ಅಂತಹಾ ಕೇಡಿನ ಬರಗಾಲದಲ್ಲೂ ತೆರಿಗೆಯನ್ನು ವಸೂಲು ಮಾಡಿ ಕಲಕತ್ತೆಗೆ ಸಾಗಿಸುತ್ತಿದ್ದ ಬ್ರಿಟಿಷರ ನೇತೃತ್ವದ ಗುಂಪಿನ ಮೇಲೆ ದಾಳಿ ಮಾಡಿ ಅವರನ್ನು ಲೂಟಿ ಮಾಡಿದ ಸಂತಾಲರ ನಡೆ ಅರ್ಥವಾಗದ ಮಹೇಂದ್ರಸಿಂಹನಿಗೆ ಸಂತಾಲರ ಬಗ್ಗೆ ದುರಭಿಪ್ರಾಯ ಮೂಡುತ್ತದೆ. ನಂತರ ಆ ದಾಳಿಯ ನೇತೃತ್ವ ವಹಿಸಿದ್ದ ಭವಾನಂದನು ಈ ದರೋಡೆ ಭಾರತಮಾತೆಯ ಮುಕ್ತಿಗೆ ಎಂದು ತಿಳುವಳಿಕೆ ನೀಡಿದ ಮೇಲೆ ಪ್ರಸನ್ನನಾಗಿ ಸಂತಾಲರ ಬಗ್ಗೆ ಗೌರವ ತಾಳಿ ತಾನೂ ಆ ಗುಂಪಿನ ಸದಸ್ಯನಾಗಲು ನಿರ್ಧರಿಸುತ್ತಾನೆ. ಹೀಗೆ ಭವಾನಂದನ ಜೊತೆಗೆ ಸಾಗುವಾಗಲೇ ಮೊದಲ ಬಾರಿಗೆ ಭವಾನಂದ 'ವಂದೇ ಮಾತರಂ' ಗೀತೆಯನ್ನು ಹಾಡುತ್ತಾ ಸಾಗುತ್ತಾನೆ. ಮಹೇಂದ್ರವರ್ಮ ಮೂಕವಿಸ್ಮಿತನಾಗುತ್ತಾನೆ.

ಕಾದಂಬರಿಯಲ್ಲಿ ಹೀಗೆ ನಮಗೆ ಸಂತಾಲರ ಪರಿಚಯವಾಗುತ್ತದೆ. ಸಂತಾಲರು ಅಥವಾ ಸನ್ಯಾಸಿಗಳು ಮೂಲತಃ ಸನ್ಯಾಸಿಗಳಲ್ಲ. ಅವರ ಗುರು ಪ್ರಮುಖ ಸನ್ಯಾಸಿ, ಸತ್ಯೇಂದ್ರರು ಬ್ರಹ್ಮಚಾರಿ. ಆದರೆ ಭಾರತಮಾತೆಯ ವಿಮೋಚನೆಗೆ ಅವನ ಜೊತೆಗೂಡಿ ಭಾಗವಹಿಸಬೇಕೆಂಬ ಮನಸ್ಸಿದ್ದವರು. ವಿವಾಹಿತರಾಗಿದ್ದರೂ ಬ್ರಹ್ಮಚರ್ಯ ಸ್ವೀಕಾರಮಾಡಿ ದೀಕ್ಷಿತರಾಗಬೇಕಿತ್ತು. ವೀರಭೂಮಿಯು ಮುಸಲ್ಮಾನ ದೊರೆಗಳಿಂದ ವಿಮುಕ್ತವಾಗುವವರೆಗೂ ಹೆಂಡತಿ ಮಕ್ಕಳ ಮುಖ ನೋಡದಿರುವ ಕಟ್ಟಳೆ ಅವರಿಗೆ ವಿಧಿಸಲಾಗುತ್ತಿತ್ತು. ಹಾಗೆ ಪ್ರತಿಜ್ಞೆಯನ್ನು ಉಲ್ಲಂಘಿಸಿದಲ್ಲಿ ಪ್ರಾಯಶ್ಚಿತ್ತ ರೂಪದಲ್ಲಿ ಪ್ರಾಣ ತ್ಯಾಗ ಮಾಡಬೇಕಿತ್ತು.

ಈ ರೀತಿಯ ಗುಂಪನ್ನು ಕಟ್ಟಿದ ಸತ್ಯೇಂದ್ರರು ಅಕ್ಷರಶಃ ಬ್ರಹ್ಮಚಾರಿಯೇ, ಶುದ್ಧ ಸನ್ಯಾಸಿ. ಆದರೆ ಕಾದಂಬರಿಯ ಕಥನದಲ್ಲಿ ಪ್ರಮುಖ ಪಾತ್ರ ವಹಿಸುವ ಜೀವಾನಂದ, ಭವಾನಂದ, ಧೀರಾನಂದ ಕಠಿಣ ವ್ರತಿಗಳು.

ಸಂತಾಲರು ಕ್ಷಾತ್ರತೇಜದಲ್ಲಿ ನಂಬಿಕೆ ಇಟ್ಟವರು. ಹೋರಾಟದಲ್ಲಿ ಎತ್ತಿದಕೈ ಆದರೂ ಬ್ರಿಟಿಷರ ಮದ್ದುಗುಂಡು ಫಿರಂಗಿಗಳಿಂದ ಪರಾಜಿತರಾಗುತ್ತಿದ್ದವರು. ಮಹೇಂದ್ರಸಿಂಹ ಅವರ ಗುಂಪನ್ನು ಸೇರಿಕೊಂಡ ಬಳಿಕ, ಅವನ ನೇತೃತ್ವದಲ್ಲಿ ಪದಚಿಹ್ನದಲ್ಲಿ ಫಿರಂಗಿಗಳನ್ನು ನಿರ್ಮಿಸಿ ಯುದ್ಧರಂಗಕ್ಕೆ ಇಳಿಯುತ್ತಾರೆ.

ಮತ್ತೆ ಕತೆಗೆ ಬರೋಣವಾದರೆ, ಮಹೇಂದ್ರವರ್ಮನಿಂದ ದೂರಾದ ಕಲ್ಯಾಣಿ ತನ್ನ ಮಗುವಿನೊಂದಿಗೆ ಸಿಗುವುದು ಗುರು ಸತ್ಯೇಂದ್ರರ ಕೈಗೆ. ಭವಾನಂದ ಮಹೇಂದ್ರನೊಂದಿಗೆ ಬಂದಾಗ ಮತ್ತೆ ಪತಿ–ಪತ್ನಿಯರ ಸಮಾಗಮವಾದರೂ, ದೀಕ್ಷಿತನಾಗಬೇಕೆಂದು ನಿಶ್ಚಯಿಸಿದ್ದ ಪತಿಯ ದಾರಿಗೆ ಅಡ್ಡಬರಬಾರದೆಂದು ಕಲ್ಯಾಣಿ ವಿಷಸೇವಿಸುತ್ತಾಳೆ. ಮಗುವಿಗೂ ವಿಷಪ್ರಾಶನವಾಗಿ ಅದು ಬದುಕುತ್ತಾದರೂ, ಕಲ್ಯಾಣಿ ಸತ್ತಳೆಂದೇ ಭಾವಿಸಿದ ಮಹೇಂದ್ರ ಮೂರ್ಛಿತನಾಗುತ್ತಾನೆ. ಸತ್ಯೇಂದ್ರರು ಅವನನ್ನು ರಕ್ಷಿಸಿ ತನ್ನೊಡನೆ ಕರೆದೊಯ್ಯುತ್ತಾರೆ. ಜೀವಾನಂದನಿಗೆ ಮಗುವನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯುವ ಆಜ್ಞೆ ಮಾಡುತ್ತಾರೆ.

ಹಾಗೆ ಅವರು ಆಜ್ಞೆ ನೀಡಿದ್ದು ಮುಖತಃ ಅಲ್ಲ! ಲೇಖನದ ಪ್ರಾರಂಭಕ್ಕೆ ನಾನು ಉದ್ಧರಿಸಿದ ಪುಟ್ಟ ಗೀತೆಯ ಮೂಲಕ!

ಅಲ್ಲಿಯೇ ಕಾಡಿನಲ್ಲಿ ಸಂಚರಿಸುವ ಯಾರಾದರೂ ಸಂತಾಲರ ಕಿವಿಗೆ ಬಿದ್ದು ಮಗು ರಕ್ಷಿಸಲ್ಪಡುತ್ತೆ ಎಂಬ ನಂಬಿಕೆ ಸತ್ಯೇಂದ್ರರಿಗೆ! ನಮ್ಮ ಸ್ವತಂತ್ರ ಹೋರಾಟದ ಸಮಯದಲ್ಲಿ ಈ ರೀತಿಯ ಅದೆಷ್ಟು ಸಂಕೇತ ಭಾಷೆಗಳನ್ನು ನಮ್ಮ ಸ್ವತಂತ್ರವೀರರು ಬಳಸುತ್ತಿದ್ದರು ಎನ್ನುವುದೇ ಒಂದು ಲೇಖನಕ್ಕೆ ಸಾಮಾಗ್ರಿ ಆಗುತ್ತದೆ.

ಜೀವಾನಂದ ಮಗುವನ್ನು ಕರೆದೊಯ್ದು ತನ್ನ ತಂಗಿ ನಿಮಾಯಿಯ ಬಳಿ ಬಿಡುತ್ತಾನೆ. ಹಾಗೆ ಮನೆಗೆ ಹೋದಾಗ ತಂಗಿಯ ಒತ್ತಾಯಕ್ಕೆ ಕಟ್ಟುಬಿದ್ದು ಹೆಂಡತಿ ಶಾಂತಿಯ ಮುಖನೋಡಿ ಮಾತನಾಡಿ ಬಿಡುತ್ತಾನೆ. ಪ್ರತಿಜ್ಞಾಭಂಗವಾದುದರಿಂದ ಆದಷ್ಟು ಬೇಗ ಪ್ರಾಣತ್ಯಾಗ ಮಾಡಲು ತಯಾರಾಗುತ್ತಾನೆ. ಗಂಡನ ಪ್ರತಿಜ್ಞೆ ತನ್ನಿಂದ ಭಂಗವಾದುದಕ್ಕೆ ನೊಂದ ಶಾಂತಿ, ಪತಿಯೊಂದಿಗೇ ಜೀವತ್ಯಾಗ ಮಾಡುವ ನಿರ್ಧಾರ ಮಾಡಿ ಗಂಡಸಾಗಿ ವೇಷ ಮರೆಸಿಕೊಂಡು ಸತ್ಯೇಂದ್ರರ ಬಳಿ ನವೀನಾನಂದ ಎಂದು ದೀಕ್ಷಿತಳಾದರೂ ಸಿಕ್ಕಿಬೀಳುತ್ತಾಳೆ. ಆದರೆ ಆಕೆಯ ಉದ್ದೇಶವನ್ನರಿತ ಸತ್ಯೇಂದ್ರರು, 'ನಿನ್ನ ಪತಿಯ ಅವಶ್ಯಕತೆ ಈ ಹೋರಾಟಕ್ಕೆ ಬಹಳವಿದೆ. ಅವನು ತತ್‌ಕ್ಷಣಕ್ಕೆ ಪ್ರಾಣತ್ಯಾಗ ಮಾಡದಂತೆ ನೋಡಿಕೊಳ್ಳುವ ಜವಾಬ್ದಾರಿ ನಿನ್ನದು' ಎನ್ನುತ್ತಾರೆ. ಅದನ್ನು ಒಪ್ಪಿ ಕೊಂಡ ಶಾಂತಿ ಅಲ್ಲಿಯೇ ಇರಲು ತೊಡಗುತ್ತಾಳೆ.

ಸತ್ಯೇಂದ್ರರ ಆಶ್ರಮವೇ 'ಆನಂದಮಠ'!

ಜೀವಾನಂದನ ನಂತರ ಅತ್ತ ಬಂದ ಭವಾನಂದ ಕಲ್ಯಾಣಿಯ ನಾಡಿಗಳು ಕ್ಷೀಣವಾಗಿ ಮಿಡಿಯುತ್ತಿರುವುದನ್ನು ನೋಡಿ, ಎರಡುಗಂಟೆ ಶ್ರಮಪಟ್ಟು ಅವಳನ್ನು ಬದುಕಿಸಿ ಮತ್ತೊಂದು ಸುರಕ್ಷಿತ ಸ್ಥಳಕ್ಕೆ ಒಯ್ದು ಬಿಡುತ್ತಾನೆ. ಮಗು ಮಾತ್ರ ಜೀವಂತ ಎಂದು ತಿಳಿದಿದ್ದ ಮಹೇಂದ್ರನಿಗೆ ಹೆಂಡತಿಯೂ ಬದುಕಿದ ವಿಷಯದ ಅರಿವಿರುವುದಿಲ್ಲ. ನಂತರ ಮಹೇಂದ್ರ ಪದಚಿಹ್ನದಲ್ಲಿ ಫಿರಂಗಿಗಳ ತಯಾರಿಯಲ್ಲಿ ತೊಡಗುತ್ತಾನೆ.

ನಂತರದ ಬೆಳವಣಿಗೆಗಳಲ್ಲಿ ಬ್ರಿಟಿಷರ ಸಹಾಯದಿಂದ ಮುಸಲ್ಮಾನ ದೊರೆ ಯುದ್ಧಕ್ಕೆ ಬರುತ್ತಾನೆ. ಸಕಾಲದಲ್ಲಿ ಮಹೇಂದ್ರ ಫಿರಂಗಿಗಳೊಡನೆ ಬಂದು ಯುದ್ಧದಲ್ಲಿ ಸಂತಾಲರಿಗೇ ಜಯವಾಗುತ್ತದೆ. ವೀರಭೂಮಿ ಮತ್ತೆ ಹಿಂದುಗಳ ವಶವಾಗಿ ಅಲ್ಲಿಗೆ ಸಂತಾಲರ ಪ್ರತಿಜ್ಞೆ ನೆರವೇರಿದ ಹಾಗೆ ಆಗುತ್ತದೆ. ಎಲ್ಲ ಸುಖಾಂತವಾಗಿ ಮಹೇಂದ್ರ ಮತ್ತೆ ತನ್ನ ಹೆಂಡತಿ ಮಕ್ಕಳೊಡಗೂಡುತ್ತಾನೆ.

ಜೀವತ್ಯಾಗ ಮಾಡಲಿದ್ದ ಜೀವಾನಂದ ಯುದ್ಧದಲ್ಲಿ ಮಡಿಯುತ್ತಾನೆ. ಆದರೆ ಪವಾಡಸದೃಶವೆಂಬಂತೆ, ಅಲ್ಲಿಗೆ ಬಂದ ಪರಮಗುರುವೊಬ್ಬರ ಕೃಪೆಯಿಂದ ಅವನಿಗೆ ಜೀವದಾನವಾಗುತ್ತದೆ. ಗೊಂದಲದಲ್ಲಿದ್ದ ಅವನಿಗೆ ಶಾಂತಿಯು ಸಮಾಧಾನ ಹೇಳುತ್ತಾಳೆ, 'ನಿನ್ನ ಪ್ರತಿಜ್ಞೆಯಂತೆ ಪ್ರಾಣತ್ಯಾಗ ಮಾಡಿದ್ದು ಆಯಿತು. ಇದು ನಿನಗೆ ದೊರೆತ ಪುನರ್ಜನ್ಮ. ಇದರ ಮೇಲೆ ಸಂತಾಲರಿಗೆ ಹಕ್ಕಿಲ್ಲ. ನಾವಿಬ್ಬರೂ ಇಲ್ಲಿಂದ ದೂರ ಹೋಗೋಣ. ಇಲ್ಲಿಯೇ ಇದ್ದರೆ, ಪ್ರತಿಜ್ಞೆಯನ್ನು ಅವಗಣನೆ ಮಾಡಿದನೆಂಬ ಅಪಖ್ಯಾತಿ ಬರುತ್ತದೆ' ಎನ್ನುತ್ತಾಳೆ. ಅದಕ್ಕೆ ಜೀವಾನಂದ ಒಪ್ಪುತ್ತಾನೆ. ಇಬ್ಬರೂ ಚಿರಬ್ರಹ್ಮಚಾರಿಗಳಾಗಿರುವ ಪ್ರತಿಜ್ಞೆ ಮಾಡಿ ತೀರ್ಥಯಾತ್ರೆಗೆ ಹೊರಡುತ್ತಾರೆ.

ಇತ್ತ ಸತ್ಯಾನಂದರು ತಮ್ಮ ಗುರುಗಳಾದ ಮಹಾಪುರುಷರಲ್ಲಿ ತಮ್ಮ ವೇದನೆ ತೋಡಿಕೊಳ್ಳುತ್ತಾರೆ, 'ವೀರಭೂಮಿ ಸ್ವತಂತ್ರವಾದರೂ, ಬ್ರಿಟಿಷರು ಇನ್ನೂ ಈ ನೆಲದ ಮೇಲಿದ್ದಾರೆ. ನಾವು ಪರಾಧೀನರೇ ಆದೆವು' ಎಂದು. ಅದಕ್ಕೆ ಮಹಾಪುರುಷರು, 'ಆರ್ಯಧರ್ಮ ಪುನರುತ್ಥಾನಕ್ಕೆ ಇದು ಅವಶ್ಯಕ. ಇದರಿಂದ ಹಿಂದುಗಳು ಗುಣಾಢ್ಯರಾಗುತ್ತಾರೆ, ಬಲಾಢ್ಯರಾಗುತ್ತಾರೆ, ಜ್ಞಾನಿಗಳಾಗಿ ತಮ್ಮ ಅಂತಃಸತ್ವವನ್ನು ತಿಳಿದು ಕ್ರಮೇಣ ದಾಸ್ಯದಿಂದ ವಿಮುಕ್ತರಾಗುತ್ತಾರೆ' ಎಂದು ಸಮಾಧಾನವನ್ನು ಹೇಳುತ್ತಾರೆ.

ಅಲ್ಲಿಗೆ ಕಾದಂಬರಿ ಮುಗಿಯುತ್ತದೆ.

ಸಂಸ್ಕೃತಭೂಯಿಷ್ಠ ಕನ್ನಡದಲ್ಲಿ ಇರುವ ಈ ಕಾದಂಬರಿ ನಮ್ಮನ್ನು 18ನೇ ಶತಮಾನಕ್ಕೆ ಕೊಂಡೊಯ್ಯುತ್ತದೆ. ಅತ್ಯಂತ ಸಂದಿಗ್ಧ ಪರಿಸ್ಥಿತಿಯ ವಿವರ ಉಳ್ಳ ಕಥನವಾದರೂ ಬಂಕಿಮಚಂದ್ರರು ಎಲ್ಲ ದೇಶಭಕ್ತಿ, ರಾಜಕೀಯಗಳ ಜೊತೆಗೆ ಭಾವಗಳನ್ನೂ ಈ ಕತೆಯಲ್ಲಿ ತಂದಿರುವುದು ಅಚ್ಚರಿ ಮೂಡಿಸುತ್ತದೆ.

ಹೀಗೆ ಹೋರಾಟಕ್ಕಾಗಿ ತಮ್ಮ ಜೀವನವನ್ನೇ ಮುಡಿಪಿಟ್ಟವರ ಕಥನ 'ಆನಂದಮಠ'.

ವಂದೇ ಮಾತರಂ
ಜೈಹಿಂದ್

26/11 ಮುಂಬೈ ದಾಳಿಗೆ 17 ವರ್ಷ; ಕರಾಳ ದಿನ ನೆನೆದ ದೇಶದ ಜನತೆ

ಹುತಾತ್ಮರಿಗೆ ಭಾವಪೂರ್ಣ ಶ್ರದ್ಧಾಂಜಲಿ

ನವದೆಹಲಿ: ಭಾರತದಲ್ಲಿ ಕರಾಳ ಅಧ್ಯಾಯ ಬರೆದ 26/11 2008ರ ಮುಂಬೈ ಭಯೋತ್ಪಾದಕ ದಾಳಿಗೆ 17 ವರ್ಷಗಳು ಕಳೆದಿದ್ದು, ಅಮಾಯಕ ಜನರು, ಹುತಾತ್ಮ ಯೋಧರನ್ನು ಕಳೆದುಕೊಂಡ ಕರಾಳ ದಿನವನ್ನು ದೇಶದ ಜನತೆ ನೆನೆಯುತ್ತಿದೆ.

ಪಾಕಿಸ್ತಾನದ ಕರಾಚಿಯಿಂದ ಸಮುದ್ರ ಮಾರ್ಗದ ಮೂಲಕ ಬಂದಿದ್ದ 10 ಮಂದಿ ಲಷ್ಕರ್–ಇ–ತೊಯ್ಬಾ ಉಗ್ರರು 2008ರ ನ.26ರಂದು ಮುಂಬೈನ ತಾಜ್ ಹೋಟೆಲ್, ಶಿವಾಜಿ ಟರ್ಮಿನಲ್ ಸೇರಿದಂತೆ 12 ಸ್ಥಳಗಳ ಮೇಲೆ ದಾಳಿ ನಡೆಸಿದ್ದರು. ಈ ದಾಳಿಯಲ್ಲಿ ವಿದೇಶಿಗರೂ ಸೇರಿದಂತೆ 174 ಮಂದಿ ನಾಗರಿಕರು ಸಾವನ್ನಪ್ಪಿದ್ದರು.

ಸಮುದ್ರ ಮಾರ್ಗದಿಂದ ಬಂದ ಈ ದುಷ್ಕರ್ಮಿಗಳು ತಾಜ್ ಮಹಲ್ ಹೋಟೆಲ್, ಒಬೆರಾಯ್ ಹೋಟೆಲ್, ಲಿಯೋಪೋಲ್ಡ್ ಕೆಫೆ, ನಾರಿಮನ್ ಹೌಸ್, ಛತ್ರಪತಿ ಶಿವಾಜಿ ರೈಲ್ವೆ ಟರ್ಮಿನಸ್ ಮೊದಲಾದ ಕಡೆ ಮನ



ಬಂದಂತೆ ಬಂದೂಕು ಮತ್ತು ಬಾಂಬಿನ ಮೂಲಕ ದಾಳಿ ನಡೆಸಿದರು. ಒಟ್ಟು ನಾಲ್ಕು ದಿನಗಳ ಕಾಲ ದಾಳಿ ನಡೆಸಿದ್ದರು.

ಈ ದುರ್ಘಟನೆಯಲ್ಲಿ ಆರು ಜನ ಅಮೆರಿಕಾದ ನಾಗರಿಕರು, ಹಲವು ವಿದೇಶೀಯರೂ ಸೇರಿದಂತೆ 166 ಜನರು ಸಾವಿಗೀಡಾಗಿದ್ದರು. 300ಕ್ಕೂ ಅಧಿಕ ಜನರು ಗಾಯಾಳುಗಳಾಗಿದ್ದರು. ಭಾರತದ ಇತಿಹಾಸದಲ್ಲಿ ಕರಾಳ ಅಧ್ಯಾಯ ಆಗಿತ್ತು. ಇಂದಿಗೆ ಆ ಘಟನೆ ನಡೆದು 14 ವರ್ಷಗಳು ಕಳೆದಿವೆ. ಗಾಯ ಮಾಸಿದರೂ, ಗಾಯದ ಗುರುತುಗಳು ಹಾಗೇ ಇವೆ. ಇಂದಿಗೂ ಉಗ್ರರು ತಮ್ಮ ಕ್ರೌರ್ಯ ಮೆರೆಯುತ್ತಿದ್ದಾರೆ.

2008 ನ.21ರಂದು ಪಾಕಿಸ್ತಾನದ 10 ಮಂದಿ ಉಗ್ರರು ಬೋಟ್ ಮೂಲಕ ಭಾರತದತ್ತ ಪ್ರಯಾಣಿಸಿದ್ದರು. ಗುರುತು ಮರೆಸಿಕೊಂಡು ಮುಂಬೈಯನ್ನು ಪ್ರವೇಶಿಸಿದ ಉಗ್ರರು ಮೂರು ದಿನಗಳ ಕಾಲ ಹೋಟೆಲ್, ರೈಲ್ವೆ ನಿಲ್ದಾಣ, ಆಸ್ಪತ್ರೆ, ಯಹೂದಿ ಸಮುದಾಯ ಕೇಂದ್ರ ಸೇರಿದಂತೆ 10ಕ್ಕೂ ಹೆಚ್ಚು ಕಡೆ ಬಾಂಬ್ ಮತ್ತು ಗುಂಡಿನ ದಾಳಿ ನಡೆಸಿದರು. ಒಟ್ಟು 174 ಜನರ ಸಾವಿಗೆ ಕಾರಣರಾದರು. ದಾಳಿಯಲ್ಲಿ 300ಕ್ಕೂ ಹೆಚ್ಚು ಜನರು ಗಾಯಗೊಂಡರು.

ತಾಜ್, ಒಬೇರಾಯ್ ನಂತಹ ಹೋಟೆಲ್‌ಗಳು ಉಗ್ರರ ಗುಂಡಿನ ದಾಳಿ ಮತ್ತು ಬಾಂಬ್ ಬ್ಲಾಸ್ಟ್‌ಗೆ ಹೊತ್ತಿ ಉರಿದವು. ಜನರು ಉಗ್ರರ ಕಪಿಮುಷ್ಠಿಯಲ್ಲಿ ನರಳಿ ಅಕ್ಷರಶಃ ನರಕ ದರ್ಶನ ಕಂಡರು. ರಕ್ಷಣೆಗೆ ಹೋದ ನಮ್ಮ ಸೈನಿಕರು ಕೂಡ ಹುತಾತ್ಮರಾದರು.

ದಾಳಿ ವಿಚಾರ ತಿಳಿಯುತ್ತಲೇ ಜನರ ರಕ್ಷಣೆಗೆ ಆಗಮಿಸಿದ ಪೊಲೀಸ್ ಅಧಿಕಾರಿಗಳಾದ ಹೇಮಂತ್ ಕರ್ಕರೆ, ವಿಜಯ್ ಸಾಲಸ್ಕರ್, ಅಶೋಕ್ ಕಾಮ್ಟೆ ಮತ್ತು ತುಕಾರಾಮ್ ಓಂಬ್ಳೆ ಮತ್ತು ಯೋಧ ಸಂದೀಪ್ ಉನ್ನಿಕೃಷ್ಣನ್ ಉಗ್ರರಿಂದ ಹತರಾದರು. ಈ ಉಗ್ರಗಾಮಿ ಕೃತ್ಯವನ್ನು ಇಡೀ ವಿಶ್ವವೇ ಖಂಡಿಸಿತ್ತು.

ಉಗ್ರರು ಹಾರಿಸಿದ ಗುಂಡುಗಳು ಎದೆಯನ್ನು ಸೀಳಿದರೂ ಅಪ್ರತಿಮ ಶೌರ್ಯ ತೋರಿದ ತುಕಾರಾಮ್ ಕೊನೆಯುಸಿರೆಳೆಯುವ ಹಂತದಲ್ಲಿದ್ದರೂ ಕಸಬ್‌ನ ಮೇಲೆ ಗುಂಡು ಹಾರಿಸಿ, ಆತ ಸೆರೆಸಿಕ್ಕುವಂತೆ ಮಾಡಿದರು. ಈ ಕಾರಣಕ್ಕಾಗಿ ಭಾರತ ಸರ್ಕಾರವು 2009ರಲ್ಲಿ ಓಂಬ್ಳೆಗೆ ಅಶೋಕ ಚಕ್ರ ಗೌರವ ನೀಡಿತು. ತಾಜ್ ಹೋಟೆಲ್, ರೈಲು ನಿಲ್ದಾಣಗಳು ಮತ್ತು ಪ್ರವಾಸಿ ತಾಣಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿ 58 ಜನರನ್ನು ಬಲಿ ಪಡೆದಿದ್ದ ಅಜ್ಮಲ್ ಕಸಬ್‌ನನ್ನು 2012 ನವೆಂಬರ್ 21ರಂದು ಪುಣೆಯ ಯೆರವಾಡ ಜೈಲಿನಲ್ಲಿ ಗಲ್ಲಿಗೇರಿಸಲಾಯಿತು.

ನ.30 ಸಾಲುಮರದ ತಿಮ್ಮಕ್ಕ ಪಾರ್ಕ್‌ನಲ್ಲಿ ರಾಜ್ಯೋತ್ಸವ

ಮೈಸೂರು, ನ.26– ಮೈಸೂರಿನ ರಾಮಕೃಷ್ಣನಗರ ಹೆಚ್ ಬ್ಲಾಕ್‌ನಲ್ಲಿರುವ ಸಾಲು ಮರದ ತಿಮ್ಮಕ್ಕ ಪಾರ್ಕ್‌ನ ಬಯಲು ರಂಗಮಂದಿರದಲ್ಲಿ ನ.30ರಂದು ಸಂಜೆ 5:30ಕ್ಕೆ 70ನೇ ಕನ್ನಡ ರಾಜ್ಯೋತ್ಸವ ಏರ್ಪಡಿಸಲಾಗಿದೆ.

ರಾಮಕೃಷ್ಣನಗರ ಜಿ, ಹೆಚ್ ಬ್ಲಾಕ್ ಹಾಗೂ ಆರೋಗ್ಯ ನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಸುರಭಿ ಮಹಿಳಾ ಸಂಘ, ಶ್ರೀ ಶನೇಶ್ವರ ದೇವಸ್ಥಾನ ಅಭಿವೃದ್ಧಿ ಸಮಿತಿ ಸಂಯುಕ್ತಾಶ್ರಯದಲ್ಲಿ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಂ.ದೇವದಾನಿ ಕಿಣಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಿವೃತ್ತ ತಹಸೀಲ್ದಾರ್ ಡಾ.ವಿ.ರಂಗನಾಥ್, ಶ್ರೀ ಶನೇಶ್ವರ ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷೆ ಶ್ರೀಮತಿ ವಿಜಯಾ ನಂಜುಂಡಯ್ಯ, ಸುರಭಿ ಮಹಿಳಾ ಸಮಾಜದ ಅಧ್ಯಕ್ಷೆ ಶ್ರೀಮತಿ ಶಶಿ ಸಂಪತ್, ಸಂಗೀತ ವಿದುಷಿಗಳಾದ ಶ್ರೀ ಮತಿ ಭಾಗ್ಯ, ಶ್ರೀಮತಿ ವಿಜಯಲಕ್ಷ್ಮಿ, ದೈಹಿಕ ಶಿಕ್ಷಕ ನಾಗಭೂಷಣ್, ಕ್ಷೇಮಾಭಿವೃದ್ಧಿ ಸಂಘದ ಮಾಜಿ ಅಧ್ಯಕ್ಷ ಶಂಕರ್ ಜೆ.ಲಕ್ಕಮಠ ಭಾಗವಹಿಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಲ್ಲಿ ಸಂವಿಧಾನ ದಿನಾಚರಣೆ

ಡಾ.ಬಿ.ಆರ್.ಅಂಬೇಡ್ಕರ್ ಸ್ಮರಣೆ; ಜಾಗೃತಿಯೊಂದಿಗೆ ಅರ್ಥಪೂರ್ಣ ಆಚರಣೆ

- ಎಲ್ಲರಿಗೂ ಎಲ್ಲಾ ರೀತಿಯ ಅವಕಾಶ ನಮ್ಮ ಸಂವಿಧಾನದಿಂದ ಲಭಿಸುವುದು ಖಾತರಿ : ಎಂಎಲ್‌ಸಿ ಮಂಜೇಗೌಡ
- ಎಲ್ಲಾ ರೀತಿಯಲ್ಲೂ ದೇಶದ ಪ್ರಗತಿಗೆ ಡಾ.ಅಂಬೇಡ್ಕರ್ ಕಾರಣ: ಎಂಎಲ್‌ಸಿ ಡಾ.ತಿಮ್ಮಯ್ಯ





ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿಪಂ, ನಗರಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ದಿನಾಚರಣೆ ಆಚರಿಸಲಾಯಿತು. ಮತ್ತೊಂದು ಚಿತ್ರದಲ್ಲಿ 'ಸಂವಿಧಾನ ಜಾಗೃತಿ ಜಾಥಾ' ದಲ್ಲಿ ವಿವಿಧ ಶಾಲೆಗಳ ನೂರಾರು ವಿದ್ಯಾರ್ಥಿಗಳು ಭಾಗವಹಿಸಿ ಸಾರ್ವಜನಿಕರಲ್ಲಿ ಸಂವಿಧಾನ ದಿನದ ಜಾಗೃತಿ ಮೂಡಿಸಿದರು.

ಮೈಸೂರು, ನ.26(ಎಂಕೆ)– ಕರ್ನಾಟಕದ ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಜಿಲ್ಲಾಡಳಿತ ಹಾಗೂ ವಿವಿಧ ಶೈಕ್ಷಣಿಕ ಸಂಸ್ಥೆಗಳು ಸೇರಿದಂತೆ ಹಲವೆಡೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸ್ಮರಣೆ ಹಾಗೂ ಸಂವಿಧಾನ ಪೀಠಿಕೆ ಬೋಧನೆಯೊಂದಿಗೆ 76ನೇ ವರ್ಷದ 'ಸಂವಿಧಾನ ದಿನಾಚರಣೆ' ಆಚರಿಸುವ ಮೂಲಕ ಸಂವಿಧಾನದ ಶ್ರೇಷ್ಠತೆ, ಮಹತ್ವ ಮತ್ತು ಮೌಲ್ಯವನ್ನು ಸಾರಲಾಯಿತು.

ಮೈಸೂರು ಜಿಲ್ಲಾಡಳಿತ, ಜಿಪಂ, ಮೈಸೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಸಂವಿಧಾನ ದಿನಾಚರಣೆ ಆಚರಿಸಲಾಯಿತು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಪುರಭವನ (ಟೌನ್‌ಹಾಲ್)ದಿಂದ ಕಲಾಮಂದಿರವರೆಗೆ ಜಾಗೃತಿ ಜಾಥಾ ನಡೆಸುವ ಮೂಲಕ ಸಂವಿಧಾನ ದಿನದ ಅರಿವು ಮೂಡಿಸಲಾಯಿತು.

ಟೌನ್‌ಹಾಲ್ ಎದುರು ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಸಂವಿಧಾನ ಪೀಠಿಕೆ ಪ್ರತಿಮೆಗೆ ಪುಷ್ಪಾರ್ಚನೆ ಬಳಿಕ ಬೋಧನೆ ಮೂಲಕ ಸಂವಿಧಾನ ಜಾಗೃತಿ ಜಾಥಾಗೆ ಶಾಸಕರಾದ ತನ್ವೀರ್ ಸೇಠ್, ಟಿ.ಎಸ್.ಶ್ರೀವತ್ಸ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಚಾಲನೆ ನೀಡಿದರು.

ಜಾಥಾದಲ್ಲಿ ರಾಷ್ಟ್ರಧ್ವಜಗಳ ಜೊತೆಗೆ ಧರ್ಮ, ಜಾತಿ, ಲಿಂಗ ಮತ್ತು ಜನ್ಮ ಸ್ಥಳದ ಆಧಾರದ ಮೇಲೆ ತಾರತಮ್ಯ ನಿಷೇಧ (ಆರ್ಟಿಕಲ್ 15(1)... ಸಂವಿಧಾನದ ಆತ್ಮ ಮತ್ತು ಹೃದಯ ಸಂವಿಧಾನ ಪರಿಹಾರದ ಹಕ್ಕು... ಸೇರಿದಂತೆ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಮಾಹಿತಿಯನ್ನೊಳಗೊಂಡ ನಾಮಫಲಕಗಳನ್ನು ಹಿಡಿದು ಸಾಗಿದ ನೂರಾರು ವಿದ್ಯಾರ್ಥಿಗಳು ಸಂವಿಧಾನದ ಆಶಯಗಳನ್ನು ಅರಿಯೋಣ ಎಂಬ ಸಂದೇಶ ರವಾನಿಸಿದರು.

ನಂತರ ಕಲಾಮಂದಿರ ವೇದಿಕೆಯಲ್ಲಿ ದೀಪ ಬೆಳಗಿಸಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ಸಮಾಜದಲ್ಲಿ ಎಲ್ಲರಿಗೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆಯ ನ್ಯಾಯ ಕಲ್ಪಿಸಿ ಕೊಡುವುದಕ್ಕೆ ನಮ್ಮ ಸಂವಿಧಾನದಿಂದ ಮಾತ್ರ ಸಾಧ್ಯ. ಸಂವಿಧಾನ ಎಲ್ಲರಿಗೂ ಸಮಾನತೆ ನೀಡಿದೆ. ಅದರಿಂದಲೇ ಎಲ್ಲರ ಮನದಲ್ಲೂ ಅಂಬೇಡ್ಕರ್ ನೆಲೆಸಿದ್ದಾರೆ ಎಂದು ಹೇಳಿದರು.

ನಾನು ವಿಧಾನ ಪರಿಷತ್ ಸದಸ್ಯನಾಗಿ ಅಧಿಕಾರಿಗಳೊಂದಿಗೆ ವೇದಿಕೆ ಹಂಚಿಕೊಂಡಿದ್ದೇನೆ ಎಂದರೆ ಅದು ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನದಿಂದ ಮಾತ್ರ ಸಾಧ್ಯವಾಗಿದೆ. ಸಂವಿಧಾನ ರಚನೆ ಮಾಡದೆ ಇದ್ದಿದ್ದರೆ ನಾವ್ಯಾರು ಬದುಕಲು ಸಾಧ್ಯವಾಗುತ್ತಿರಲಿಲ್ಲ. ಮಹಿಳೆಯರು, ಹಿಂದುಳಿದ ಸಮುದಾಯದವರು ಯಾರು ಸಹ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಹೆಣ್ಣು ಮಕ್ಕಳು ಸ್ವತಂತ್ರವಾಗಿ ಶಿಕ್ಷಣವನ್ನು ಪಡೆದುಕೊಳ್ಳುವುದಕ್ಕೆ ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನವೇ ಕಾರಣ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಮಾತನಾಡಿ, ಬ್ರಿಟಿಷರ ಆಳ್ವಿಕೆ ಮಾಡುತಿದ್ದ ಕಾಲದಲ್ಲಿ ಹಸಿವು, ಅನಾರೋಗ್ಯ ಪೀಡಿತವಾಗಿ ಅನೇಕ ರೋಗಗಳಿಗೆ ತುತ್ತಾಗಿದಂತಹ ದೇಶ ಇಂದು ಈ ಮಟ್ಟಕ್ಕೆ ಬೆಳೆದು ನಿಂತಿದೆ ಎಂದರೆ ಅದಕ್ಕೆ ಕಾರಣ ನಮ್ಮ ಸಂವಿಧಾನ. ಭಾರತ ಬೇರೆ ದೇಶಗಳಿಗಿಂತ ಯಾವುದರಲ್ಲೂ ಕಡಿಮೆಯಿಲ್ಲ. ಕೈಗಾರಿಕೆ, ನೀರಾವರಿ, ಕೃಷಿ, ತಂತ್ರಜ್ಞಾನ, ಐಟಿ–ಬಿಟಿ ಕ್ಷೇತ್ರದಲ್ಲಿ ಹೆಚ್ಚು ಬೆಳೆದಿದೆ ಎಂದರೆ ಅದಕ್ಕೆ ಡಾ.ಅಂಬೇಡ್ಕರ್ ಅವರೇ ಕಾರಣ. ನಮ್ಮ ದೇಶ ಇನ್ನೂ ಹೆಚ್ಚು ಬೆಳೆಯಬೇಕು ಎಂದರೆ ಭಾರತೀಯರು ನಾವೆಲ್ಲರೂ ಒಂದೇ ಎಂಬ ಮನೋಭಾವನೆ ನಮ್ಮಲ್ಲಿ ಬರಬೇಕು ಎಂದರು.

ಸಂವಿಧಾನ ಪಾಲನೆ: ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಮಾತನಾಡಿ, ಡಾ. ಬಿ.ಆರ್.ಅಂಬೇಡ್ಕರ್ ಅವರು ನಮಗೆ ನೀಡಿರುವಂತಹ ಸಂವಿಧಾನವನ್ನು ನಾವೆಲ್ಲರೂ ಶಿಸ್ತು ಬದ್ಧವಾಗಿ ಪಾಲನೆ ಮಾಡಬೇಕು. ಸಂವಿಧಾನದಲ್ಲಿ ನಮಗೆ ಮೂಲಭೂತ ಹಕ್ಕುಗಳನ್ನು ನೀಡಿದ್ದಾರೆ. ಅದನ್ನು ಪಡೆಯುವಂತಹ ಅಧಿಕಾರವನ್ನು ಸಹ ನಮ್ಮ ಸಂವಿಧಾನ ನಮಗೆ ನೀಡಿದೆ. ಹಾಗಾಗಿ ನಾವು–ನೀವೆಲ್ಲರೂ ಸಂವಿಧಾನವನ್ನು ಪಾಲನೆ ಮಾಡಬೇಕು ಎಂದು ಹೇಳಿದರು. ಈ ವೇಳೆ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಜಿಪಂ ಸಿಇಓ ಎಸ್.ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಮಂಟೇಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಬಸವರಾಜು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪ್ರಾಧ್ಯಾಪಕಿ ಪ್ರೊ.ಆರ್.ಹೆಚ್.ಪವಿತ್ರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಸ್.ಹೆಚ್.ನಿರ್ಮಲಾ, ಮುಖಂಡ ಸೋಮಣ್ಣ ಮತ್ತಿತರರು ಉಪಸ್ಥಿತರಿದ್ದರು.

ಪ್ರತಿಯೊಬ್ಬರ ಮನೆಯಲ್ಲಿ ಅಂಬೇಡ್ಕರ್...

ಯಾರೂ ಹೆಚ್ಚು ಶಿಕ್ಷಣ ಪಡೆಯುತ್ತಾರೋ ಅವರೇ ನಾಯಕರಾಗುತ್ತಾರೆ ಎನ್ನುವುದಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಉದಾಹರಣೆಯಾಗಿದ್ದಾರೆ. ಇಂದು ಇಡೀ ಪ್ರಪಂಚದಲ್ಲಿ ಅತೀ ಹೆಚ್ಚು ಪ್ರತಿಮೆಗಳಿರುವುದು ಅಂಬೇಡ್ಕರ್ ಅವರದ್ದು ಮಾತ್ರ, ಹಾಗಾಗಿ ಆ ಮಹಾನಾಯಕ ಅಂಬೇಡ್ಕರ್ ಅವರ ಭಾವಚಿತ್ರವನ್ನು ಪ್ರತಿಯೊಬ್ಬರು ತಮ್ಮ ಮನೆಗಳಲ್ಲಿ ಹಾಕಬೇಕು. ಅದೇ ನಾವು ಅವರಿಗೆ ಕೊಡುವ ಗೌರವ.

- ಸಿ.ಎನ್.ಮಂಜೇಗೌಡ, ವಿಧಾನ ಪರಿಷತ್ ಸದಸ್ಯ

ವಿದ್ಯಾರ್ಥಿಗಳು ಸಂವಿಧಾನ ಅರ್ಥ ಮಾಡಿಕೊಳ್ಳಬೇಕು

ನಟ ಮುಖ್ಯಮಂತ್ರಿ ಚಂದ್ರು ಕಿವಿಮಾತು



ದಾರಿ ಫೌಂಡೇಷನ್ ಮತ್ತು ಸಂತ ಫಿಲೋಮಿನ ಕಾಲೇಜು ವತಿಯಿಂದ ಸಂವಿಧಾನ ದಿನ ಆಚರಣೆ ಅಂಗವಾಗಿ ಕಾಲೇಜಿನಲ್ಲಿ ಆಯೋಜಿಸಿದ್ದ 'ಭವಿಷ್ಯದಲ್ಲಿ ಪ್ರಜಾಪ್ರಭುತ್ವ ರಕ್ಷಣೆ ಜವಾಬ್ದಾರಿ ಯುವ ಶಕ್ತಿ ಕೈಯಲ್ಲಿ' ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ನಟ ಮುಖ್ಯಮಂತ್ರಿ ಚಂದ್ರು ಅವರನ್ನು ಅಭಿನಂದಿಸಲಾಯಿತು.

ಮೈಸೂರು,ನ.26(ಜಿಎ)–ಯಾರು ಏನು ಬೇಕಾದರೂ ಆಗಬಹುದು ಎಂಬುದನ್ನು ಸಂವಿಧಾನ ತೋರಿಸಿಕೊಟ್ಟಿದೆ ಎಂದು ನಟ ಮುಖ್ಯಮಂತ್ರಿ ಚಂದ್ರು ತಿಳಿಸಿದರು.

ದಾರಿ ಫೌಂಡೇಷನ್ ಮತ್ತು ಸಂತ ಫಿಲೋಮಿನ ಕಾಲೇಜು ವತಿಯಿಂದ ಸಂವಿಧಾನ ದಿನ ಆಚರಣೆ ಅಂಗವಾಗಿ ಕಾಲೇಜಿನಲ್ಲಿ ಆಯೋಜಿಸಿದ್ದ 'ಭವಿಷ್ಯದಲ್ಲಿ ಪ್ರಜಾಪ್ರಭುತ್ವ ರಕ್ಷಣೆ ಜವಾಬ್ದಾರಿ ಯುವ ಶಕ್ತಿ ಕೈಯ್ಯಲ್ಲಿ ಮುಕ್ತ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಭವಿಷ್ಯದ ರಾಷ್ಟ್ರದ ದೊಡ್ಡ ಆಸ್ತಿಗಳು. ಎಲ್ಲರೂ ವಿವಿಗಳಲ್ಲಿ ಡಿಗ್ರಿ, ಪಿಹೆಚ್.ಡಿ ಮಾಡುತ್ತೇವೆ. ಅದರೊಟ್ಟಿಗೆ ಜಗತ್ತಿನ ವಿದ್ಯಮಾನದ ಬಗ್ಗೆಯೂ ತಿಳಿದುಕೊಳ್ಳಬೇಕಿದೆ. ಅದರಲ್ಲೂ ಪ್ರಮುಖವಾಗಿ ನಮ್ಮ ಶ್ರೇಷ್ಠ ಸಂವಿಧಾನವನ್ನು ಓದಿಕೊಳ್ಳಬೇಕು. ಅದನ್ನು ಅರ್ಥ ಮಾಡಿಕೊಂಡರೆ ಯಾರು ಏನು ಬೇಕಾದರೂ ಆಗಬಹುದು ಎಂದರು.

ಗಾಂಧಿ, ಅಂಬೇಡ್ಕರ್ ಇಬ್ಬರೂ ನಮಗೆ ಮಾದರಿಯ ಮಹಾನ್ ವ್ಯಕ್ತಿಗಳಾಗಿದ್ದಾರೆ. ಅಂದು ಗಾಂಧೀಜಿ ಅವರು ಭಾರತದಲ್ಲಿ ಜನರು ಪೂರ್ಣ ಪ್ರಮಾಣದಲ್ಲಿ ಬಟ್ಟೆ ಧರಿಸುವವರೆಗೂ ನಾನೂ ಧರಿಸುವುದಿಲ್ಲ ಎಂದು ಹೇಳಿ ಅರ್ಧ ಬಟ್ಟೆ ಧರಿಸಿ, ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಟ್ಟರು. ಆದರೆ ಶೋಷಣೆಯಲ್ಲಿ ಬೆಂದ ಡಾ.ಬಿ.ಆರ್. ಅಂಬೇಡ್ಕರ್ ಅವರು ನಾನು ಧರಿಸುವ ಕೋಟಿನಂತೆ ಎಲ್ಲರೂ ಕೋಟು ಧರಿಸಬೇಕು ಎಂದು ನಿರ್ಧರಿಸಿ ಸರ್ವರಿಗೂ ಸಮಪಾಲು ಸಮಬಾಳು ಎಂಬ ನಿಟ್ಟಿನಲ್ಲಿ ಭಾರತದ ಸಂವಿಧಾನ ಬರೆದುಕೊಟ್ಟಿದ್ದಾರೆ. ವಿಶ್ವದ ಎಲ್ಲಿಯೂ ಈ ರೀತಿ ಗ್ರಂಥವಿಲ್ಲ ಎಲ್ಲರೂ ಇದನ್ನು ಓದಿ ಅರ್ಥ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಇಂದು ನಿಜವಾಗಿಯೂ ಸಂವಿಧಾನದ ರಕ್ಷಣೆ ವಿದ್ಯಾರ್ಥಿಗಳ ಕೈಯಲ್ಲಿ ಇದೆ. ಸ್ವಾತಂತ್ರ್ಯ ಇಂದು ಸ್ವಾತಂತ್ರ್ಯವಾಗಿದೆಯೋ ಅಥವಾ ಅತಂತ್ರವಾಗಿದೆಯೋ ಎಂಬುದನ್ನು ತಿಳಿದುಕೊಳ್ಳಬೇಕು. ದೇಶದಲ್ಲಿ ಶಾಸಕಾಂಗ, ಕಾರ್ಯಾಂಗ ಸತ್ತಿದೆ. ನ್ಯಾಯಾಂಗ ಹಿಡುದುಕೊಂಡಿದ್ದೇವೆ. ಇಂದು ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು 50 ಕೋಟಿ ರೂ. ಅವಶ್ಯಕತೆ ಇದೆ. ಇಷ್ಟು ಖರ್ಚು ಮಾಡಿ ಬರುವವರು ಮುಂದಿನ ದಿನಗಳಲ್ಲಿ ರಸ್ತೆ, ಕಟ್ಟಡ ಎಂದು ಹಣ ದೋಚಲು ಆರಂಭಿಸುತ್ತಾರೆ. ಈ ಹಿನ್ನೆಲೆ ಮತದಾನ ಎಲ್ಲಾ ದಾನಗಳಿಗಿಂತಲೂ ಶ್ರೇಷ್ಠ, ಆಲೋಚನೆಯಿಂದ ಪ್ರತಿಯೊಂದು ಚುನಾವಣೆಯಲ್ಲಿ ಮತದಾನ ಮಾಡಿ ಎಂದು ಕರೆಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರೆಸಿಡೆನ್ಸಿ ವಿವಿಯ ಮಾಜಿ ಉಪ ಕುಲಪತಿ ಡಾ.ನಾಗೇಂದ್ರ ಪರಾಶರ್, ಕಾಲೇಜಿನ ರೆಕ್ಟರ್ ರೆ.ಡಾ. ಲೂರ್ದು ಪ್ರಸಾದ್ ಜೋಸೆಫ್, ದಾರಿ ಫೌಂಡೇಷನ್ ಅಧ್ಯಕ್ಷ ಎಲ್.ರಂಗಯ್ಯ, ಡಾ.ನಂದೀಶ್, ಎ.ಥಾಮಸ್ ಗುಣಶೀಲನ್ ಮತ್ತಿತರು ಪಾಲ್ಗೊಂಡಿದ್ದರು.

ಸಂವಿಧಾನವು ಸಸ್ಯ, ಪ್ರಾಣಿ ಸಂಕುಲಕ್ಕೂ ಬದುಕುವ ಹಕ್ಕು ಕೊಟ್ಟಿದೆ

ಚಿಂತಕ ಶಂಕರ್ ದೇವನೂರು ಪ್ರತಿಪಾದನೆ



ಮೈಸೂರಿನ ವಿವಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಅರಿವು ಸಂಶೋಧನಾ ವಿದ್ಯಾರ್ಥಿಗಳ ವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ ದಿನ ಮತ್ತು ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮವನ್ನು ಚಿಂತಕ ಶಂಕರ ದೇವನೂರು ಉದ್ಘಾಟಿಸಿದರು.

ಮೈಸೂರು, ನ.26(ಜಿಎ)–ಡಾ.ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನ, ಸಸ್ಯ, ಪ್ರಾಣಿ ಸಂಕುಲಗಳಿಗೂ ಬದುಕುವ ಹಕ್ಕನ್ನು ಕೊಟ್ಟಿದೆ ಎಂದು ಚಿಂತಕ ಶಂಕರ ದೇವನೂರು ತಿಳಿಸಿದರು.

ಮೈಸೂರಿನ ವಿವಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಅರಿವು ಸಂಶೋಧನಾ ವಿದ್ಯಾರ್ಥಿಗಳ ವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸಂವಿಧಾನ ದಿನ ಮತ್ತು ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಸಂವಿಧಾನ ಮಾನವ ಕೇಂದ್ರಿತ ಸಂವಿಧಾನವಲ್ಲ, ಜೀವಪರ ಕೇಂದ್ರಿತ ಸಂವಿಧಾನ ಇದು ಜೀವ ಸಂಕುಲಕ್ಕೆ ಜೀವವನ್ನು ಕೊಟ್ಟಿದೆ. ಆರಣ್ಯ ಕಾಯ್ದೆ 1972 ಇಲ್ಲದಿದ್ದರೆ ಇಂದು ಪ್ರಾಣಿ ಸಂಕುಲಗಳು ಮಾನವನ ಕ್ರೌರ್ಯಕ್ಕೆ ಬಲಿಯಾಗುತ್ತಿದ್ದವು ಎಂದರು.

ಭಾರತ ಸಂವಿಧಾನ ಪ್ರಪಂಚದ ಶ್ರೇಷ್ಠ ಸಂವಿಧಾನ. ಇದರಲ್ಲಿ ಮಾನವೀಯ ಚಿಂತನೆ, ದಾರ್ಶನಿಕತೆ ಎಲ್ಲರನ್ನು ಒಂದಾಗಿಸುವ ಅಂಬೇಡ್ಕರ್ ಚಿಂತನೆ ಹಾಗೂ ಬುದ್ಧ ಬಸವಣ್ಣನವರ ತತ್ವಗಳಿವೆ. ಮಕ್ಕಳಿಗೆ ಮೊಬೈಲ್ ನೀಡದೆ ಸಂವಿಧಾನ, ವಚನ, ಕಾವ್ಯ ನೀಡಬೇಕಿದೆ ಹಾಗೂ ಮಕ್ಕಳಲ್ಲಿ ಸಂವಿಧಾನದ ಬೀಜವನ್ನು ಬಿತ್ತಬೇಕಿದೆ ಎಂದು ತಿಳಿಸಿದರು.


ಅಂಬೇಡ್ಕರ್ ಅವನ್ನು ಭಾರತೀಯರಿಗಿಂತ ಪಾಶ್ಚಿಮಾತ್ಯರು ಹೆಚ್ಚು ಗುರುತಿಸಿದ್ದಾರೆ. ಅಂಬೇಡ್ಕರ್ ಸಂವಿಧಾನವನ್ನು ಎಲ್ಲರೂ ಓದಬೇಕು ಇರುವ ತತ್ವಗಳನ್ನು ಅಳವಡಿಸಿಕೊಂಡು ಜೀವನ ನಡೆಸಬೇಕು ಎಂದು ತಿಳಿಸಿದರು.

ಈ ವೇಳೆ ಮದ್ರಾಸ್ ವಿಶ್ವವಿದ್ಯಾನಿಲಯದ ಕನ್ನಡ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾದ ಪ್ರೊ.ತಮಿಳ್ ಸೆಲ್ವಿ ಮಾತನಾಡಿ, ಮನುಷ್ಯ ಸಂಘ ಜೀವಿ, ಮನುಷ್ಯ ವಿಧಿ ನಿಯಮಗಳನ್ನು ಮೀರಿ ಜೀವಿಸುತ್ತಿದ್ದಾನೆ ಇದನ್ನು ಸಂವಿಧಾನ ನಿಯಂತ್ರಿಸುತ್ತಿದೆ ಎಂದರು.

ಕನ್ನಡ ರಾಜ್ಯೋತ್ಸವ ಕನ್ನಡಿಗರ ಹಬ್ಬವಾಗಿದ್ದು, ನಾಡು, ನುಡಿಗಾಗಿ ಮಾಡುವ ಹಬ್ಬ. ಕರ್ನಾಟಕದಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡುವ ಹಾಗೇ ಬೇರೆ ಯಾವ ಭಾಷೆಯವರು ಆಚರಣೆ ಮಾಡುವುದಿಲ್ಲ. ಮದ್ರಾಸ್ ವಿವಿಯಲ್ಲಿ ಕನ್ನಡ ಕಲಿಕೆ ಪ್ರಥಮ ವೇದಿಕೆಯಾಗಿತ್ತು. ಮೈಸೂರು ವಿಶ್ವವಿದ್ಯಾಲಯ ಆರಂಭವಾದ ನಂತರ ತಮಿಳು ನಾಡಿನಲ್ಲೂ ಸರ್ಕಾರ ಕನ್ನಡ ಕಲಿಕೆಗೆ ಅವಕಾಶವಿದೆ ಎಂದರು.

ಕಾರ್ಯಕ್ರಮದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ.ಎನ್.ಕೆ.ಲೋಲಾಕ್ಷಿ, ಕನ್ನಡ ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಅಧ್ಯಾಪಕರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಬಿಜೆಪಿ ಕಚೇರಿಯಲ್ಲಿ ಸಂವಿಧಾನ ದಿನಾಚರಣೆ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಈ ವೇಳೆ ಚಾಮುಂಡೇಶ್ವರಿ ಮಂಡಲ ಅಧ್ಯಕ್ಷ ವೈ. ಟಿ. ರವಿ ಲಕ್ಷ್ಮೀಪುರ, ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಜಿಲ್ಲಾ ಗ್ರಾಮಾಂತರ ಎಸ್‌ಸಿ ಮೋರ್ಚಾ ಅಧ್ಯಕ್ಷ ಎಂ. ಅನಿಲ್ ಕುಮಾರ್, ನಗರ ಮಂಡಲ ಉಪಾಧ್ಯಕ್ಷ ಹಿರಿಯಣ್ಣ, ಯುವ ಮೋರ್ಚಾ ಮಾಜಿ ಅಧ್ಯಕ್ಷ ಡಿ. ಚಂದ್ರಶೇಖರ್, ಪ್ರದೀಪ್, ಎಸ್‌ಟಿ ಮೋರ್ಚಾ ಉಪಾಧ್ಯಕ್ಷ ಸಿದ್ದರಾಜು, ಎಸ್‌ಸಿ ಮೋರ್ಚಾ ಅಧ್ಯಕ್ಷ ರಂಗಸ್ವಾಮಿ ಉಪಸ್ಥಿತರಿದ್ದರು.

ಆಡಳಿತದಲ್ಲಿ ಸಂವಿಧಾನ ಸಂಪೂರ್ಣ ಅಳವಡಿಕೆ ಆಗಿದ್ದರೆ ದೇಶ ಅಭಿವೃದ್ಧಿ ಸಾಧಿಸಬೇಕಿತ್ತು!

- ಮಾಜಿ ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ವಿಷಾದ
- ಮೈಸೂರು ವಿವಿ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್‌ನಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸ

ಮೈಸೂರು, ನ.26(ಎಂಕೆ)– ಭ್ರಷ್ಟಾಚಾರ ಮುಕ್ತ ದೇಶ ನಿರ್ಮಾಣಕ್ಕೆ ವಿದ್ಯಾರ್ಥಿ ದೆಸೆಯಿಂದಲೇ ಸಂವಿಧಾನದ ಅಧ್ಯಯನ, ಅರಿವು ಮತ್ತು ಅಳವಡಿಕೆ ಅವಶ್ಯವಾಗಿದೆ ಎಂದು ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ಹೇಳಿದರು.

ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ಅಧ್ಯಯನ ವಿಭಾಗದ ಸಭಾಂಗಣದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ಕಾನೂನು ಶಾಲೆ ವತಿಯಿಂದ ಸಂವಿಧಾನ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಭಾರತ ಸಂವಿಧಾನ ಮತ್ತು ಸಮಕಾಲೀನ ಸಮಾಜ' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಹಿಂದಿನ ಸರ್ಕಾರದ ಅವಧಿಯಲ್ಲಿ 40 ಪರ್ಸೆಂಟ್ ಕಮಿಷನ್ ಎನ್ನುತ್ತಿದ್ದರು. ಈಗ 80 ಪರ್ಸೆಂಟ್ ಕಮಿಷನ್ ಎನ್ನುತ್ತಿದ್ದಾರೆ. ಆದ್ದರಿಂದ ಭ್ರಷ್ಟಾಚಾರ ಮುಕ್ತ, ದೇಶದ ಅಭಿವೃದ್ಧಿಗಾಗಿ ವಿದ್ಯಾರ್ಥಿಗಳು ಎಚ್ಚೆತ್ತು, ಸಂವಿಧಾನದ ಆಶಯಕ್ಕೆ ಬದ್ಧರಾಗಿ ಜೀವನ ನಡೆಸಬೇಕಿದೆ ಎಂದರು.

ಸಂವಿಧಾನದ ಪರಿಪೂರ್ಣ ಅಳವಡಿಕೆಯಾಗಿದ್ದರೆ ದೇಶ ಅಭಿವೃದ್ಧಿಯತ್ತ ಸಾಗಬೇಕಿತ್ತು. ಆದರೆ, ಭ್ರಷ್ಟ ರಾಜಕಾರಣಿಗಳಿಂದ ಅಭಿವೃದ್ಧಿಯ ಹಿನ್ನಡೆ ಜೊತೆಗೆ ದೇಶದ ಜನರು ನರಳುವಂತಾಗಿದೆ. ಇದಕ್ಕೆ ಹತ್ತು–ಹಲವು ಭ್ರಷ್ಟಾಚಾರ ಪ್ರಕರಣಗಳು ಸಾಕ್ಷಿಯಾಗಿವೆ. ಹಾಗಾಗಿ ದೇಶದಲ್ಲಿ ಬದಲಾವಣೆ ಆಗಬೇಕಾದರೆ ನಮ್ಮ ಕೈಯಲ್ಲಿರುವ ಅಧಿಕಾರ ಜನರಿಗಾಗಿ ಇರಬೇಕೇ ಹೊರತು ಸ್ವಾರ್ಥಕ್ಕಾಗಿ ದುರ್ಬಳಕೆ ಮಾಡಿಕೊಳ್ಳಬಾರದು ಎಂದು ತಿಳಿಸಿದರು.



ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ಅಧ್ಯಯನ ವಿಭಾಗದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಕುಲಸಚಿವರಾದ ಎಂ.ಕೆ.ಸವಿತಾ ಮತ್ತಿತರರಿದ್ದರು.

ದೇಶದ ನ್ಯಾಯಾಂಗ ವ್ಯವಸ್ಥೆಯಲ್ಲಿ ತೀರ್ಪುಗಳನ್ನು ನೀಡಲು ವಿಳಂಬವಾಗುತ್ತಿರುವುದರಿಂದ ಭ್ರಷ್ಟಾಚಾರ ಹೆಚ್ಚಾಗುವುದಲ್ಲದೆ ನ್ಯಾಯಾಂಗ ವ್ಯವಸ್ಥೆ ಮೇಲಿನ ನಂಬಿಕೆ ಮತ್ತು ಭರವಸೆ ಕಡಿಮೆಯಾಗುತ್ತಿದೆ. ಆದ್ದರಿಂದ ನ್ಯಾಯಾಂಗ ವ್ಯವಸ್ಥೆಯಲ್ಲಿ ನೊಂದವರಿಗೆ ಕಡಿಮೆ ಅವಧಿಯಲ್ಲೇ ನ್ಯಾಯ ದೊರೆಯುವಂತಾಗಬೇಕು. ಮೊದಲೆಲ್ಲಾ ಕುಟುಂಬದಲ್ಲಿ ಒಬ್ಬರು ತಪ್ಪು ಮಾಡಿದರೆ, ಇಡೀ ಕುಟುಂಬಕ್ಕೆ ಶಿಕ್ಷೆ ವಿಧಿಸಲಾಗುತ್ತಿತ್ತು. ಅಂತಹ ಶಿಕ್ಷಾ ವಿಧಾನಗಳು ಅಳವಡಿಕೆಯಾದರೆ ಭ್ರಷ್ಟಾಚಾರ ಕಡಿಮೆಯಾಗಬಹುದು ಎಂದು ಅಭಿಪ್ರಾಯಪಟ್ಟರು.

ಮಹತ್ವದ ದಿನ: ಕಾರ್ಯಕ್ರಮ ಉದ್ಘಾಟಿಸಿದ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿ, ಇತಿಹಾಸದ ಮಹತ್ವದ ದಿನವೇ ಸಂವಿಧಾನ ದಿನವಾಗಿದ್ದು, ಭಾರತೀಯರೆಲ್ಲರಿಗೂ ಇದೊಂದು ಪವಿತ್ರ ದಿನವಾಗಿದೆ. ಪ್ರಗತಿ, ಏಕತೆ ಮತ್ತು ಸಮಾನತೆ ತತ್ವ ಸಾರುವ ಈ ದಿನವನ್ನು ಸ್ಮರಿಸುವುದು ದೇಶದ ಪ್ರತಿಯೊಬ್ಬರ ಕರ್ತವ್ಯವಾಗಿದೆ. ಇಂದಿನ ಯುವ ಪೀಳಿಗೆ ಸಂವಿಧಾನವನ್ನು ಆಳವಾಗಿ ಅಧ್ಯಯನ ಮಾಡಬೇಕು. ಬರೀ ಓದುವುದಷ್ಟೇ ಅಲ್ಲ, ಅರಿತು, ಅಳವಡಿಸಿಕೊಳ್ಳಬೇಕು. ಸಂವಿಧಾನದ ಮೌಲ್ಯಗಳನ್ನು ಸಾರಬೇಕು. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಅರಿವು ನೈತಿಕವಾಗಿ ವಿದ್ಯಾರ್ಥಿಗಳನ್ನು ರೂಪಿಸುತ್ತದೆ ಎಂದರು.

ಮೈಸೂರು ವಿವಿ ಕುಲಸಚಿವರಾದ ಎಂ.ಕೆ. ಸವಿತಾ, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ.ಎಸ್.ನರೇಂದ್ರ ಕುಮಾರ್, ಪ್ರೊ.ಜೆ.ಸೋಮಶೇಖರ್, ಕಾನೂನು ಶಾಲೆ ನಿರ್ದೇಶಕ ಪ್ರೊ.ಟಿ.ಆರ್.ಮಾರುತಿ ಮತ್ತಿತರರಿದ್ದರು.

ಪ್ರಾಮಾಣಿಕರಾಗಿರಿ...

ಕಾನೂನು ಚೌಕಟ್ಟಿನಲ್ಲಿ ಪಡೆದ ಆಸ್ತಿಯಿಂದ ದೊರೆಯುವ ತೃಪ್ತಿ ಮತ್ತು ನೆಮ್ಮದಿ ಭ್ರಷ್ಟ ಸಂಪಾದನೆಯಿಂದ ಬರುವುದಿಲ್ಲ. ಕೈ ತುಂಬಾ ಸಂಬಳ ಪಡೆದರೂ ಲಂಚ ಬೇಕು ಎನ್ನುವ ಮನೋಭಾವನೆ ಬದಲಾಗಬೇಕು. ಅಧಿಕಾರ–ಹಣ ಇಲ್ಲದವರ ಗತಿ ಏನೆಂಬುದನ್ನು ಅರ್ಥ ಮಾಡಿಕೊಳ್ಳಬೇಕು. ನಮ್ಮ ಜೀವನ ಸಂತಸದಿಂದ ಕೂಡಿರಬೇಕಾದರೆ, ಅದಕ್ಕೆ ಒಂದೇ ದಾರಿ ಜೀವನದಲ್ಲಿ ತೃಪ್ತಿ ಮತ್ತು ನೆಮ್ಮದಿ ಇರಬೇಕು. ಇದಕ್ಕಾಗಿ ಸಂವಿಧಾನದ ಮೌಲ್ಯಗಳನ್ನು ಅರಿತು, ಪ್ರಾಮಾಣಿಕರಾಗಿ ಬದುಕಬೇಕು.

- ಎನ್.ಸಂತೋಷ್ ಹೆಗ್ಡೆ, ನಿವೃತ್ತ ನ್ಯಾಯಮೂರ್ತಿ

ಡಾ.ಅಂಬೇಡ್ಕರ್ ಅವರಿಂದ ದೇಶಕ್ಕೆ ಮೌಲ್ಯಯುತ ಸಂವಿಧಾನ ದೊರೆಯಿತು

ನಿವೃತ್ತ ಮೇಜರ್ ಜನರಲ್ ಎಸ್.ಜಿ.ಒಂಬತ್ಕೆರೆ ಅಭಿಮತ



ಸಿಎಫ್‌ಟಿಆರ್‌ಐನಲ್ಲಿ ಸಂವಿಧಾನ ದಿನಾಚರಣೆ ಆಚರಿಸಲಾಯಿತು.(ಎಡದಿಂದ) ಶ್ರೀಮತಿ ಆಶಾ ಒಂಬತ್ಕೆರೆ, ನಿವೃತ್ತ ಮೇಜರ್ ಜನರಲ್ ಎಸ್.ಜಿ.ಒಂಬತ್ಕೆರೆ, ಸಿಎಫ್‌ಟಿಆರ್‌ಐ ನಿರ್ದೇಶಕ ಡಾ.ಗಿರಿಧರ್ ಪರ್ವತಂ, ಸಿಎಫ್‌ಟಿಆರ್‌ಐ ಎಸ್ಸಿ–ಎಸ್ಟಿ ಅಸೋಸಿಯೇಷನ್ ಅಧ್ಯಕ್ಷ ಶಿವಸ್ವಾಮಿ, ಆಡಳಿತ ವಿಭಾಗದ ಕೆ.ರವಿಕುಮಾರ್ ಉಪಸ್ಥಿತರಿದ್ದರು.

ಮೈಸೂರು, ನ.26(ಎಂಕೆ)– ರಾಷ್ಟ್ರದ ಆಡಳಿತ ವ್ಯವಸ್ಥೆಯ ನಿಯಮಗಳ ಕೃತಿಯೇ ಸಂವಿಧಾನವಾಗಿದ್ದು, ಅದರಲ್ಲಿ ಸ್ವಾತಂತ್ರ್ಯ, ಸಮಾನತೆ, ಸೋದರತ್ವ, ನ್ಯಾಯ ಅಡಗಿದೆ ಎಂದು ನಿವೃತ್ತ ಮೇಜರ್ ಜನರಲ್ ಎಸ್.ಜಿ.ಒಂಬತ್ಕೆರೆ ಹೇಳಿದರು.

ಮೈಸೂರಿನಲ್ಲಿರುವ ಸಿಎಫ್‌ಟಿಆರ್‌ಐನ ಚೆಲುವಾಂಬ ಸಭಾಂಗಣದಲ್ಲಿ ಆಯೋಜಿಸಿದ್ದ ಸಂವಿಧಾನ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದ ಪೀಠಿಕೆಯಲ್ಲಿ ನಾವೆಲ್ಲರೂ ಭಾರತೀಯರು ಎನ್ನುವ ಮೂಲಕ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಪಾದಿಸಲಾಗಿದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರಲ್ಲಿದ್ದ ವಿದ್ವತ್ ನೋಡಿಯೇ ಅವರನ್ನು ಸಂವಿಧಾನ ರಚನಾ ಕರಡು ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಯಿತು. ಅದರಂತೆ ಅವರು ಮೌಲ್ಯಯುತ ಸಂವಿಧಾನವನ್ನು ದೇಶಕ್ಕೆ ನೀಡಿದ್ದಾರೆ. ಒಂದು ಕಟ್ಟಡ ಸುಭದ್ರವಾಗಿರಲು ಆ ಕಟ್ಟಡಕ್ಕೆ ಪಿಲ್ಲರ್ ಮುಖ್ಯವಾಗುವಂತೆ ಭಾರತ ದೇಶ ಸುಭದ್ರವಾಗಿ ಅಭಿವೃದ್ಧಿಯತ್ತ ಸಾಗಲು ಭಾರತ ಸಂವಿಧಾನ ಮುಖ್ಯವಾಗಿದೆ ಎಂದು ತಿಳಿಸಿದರು. ಸಿಎಫ್‌ಟಿಆರ್ ನಿರ್ದೇಶಕ ಡಾ.ಗಿರಿಧರ್ ಪರ್ವತಂ, ಎಸ್ಸಿ–ಎಸ್ಟಿ ಅಸೋಸಿಯೇಷನ್ ಅಧ್ಯಕ್ಷ ಶಿವಸ್ವಾಮಿ, ಆಡಳಿತ ವಿಭಾಗದ ಕೆ.ರವಿಕುಮಾರ್ ಉಪಸ್ಥಿತರಿದ್ದರು.

ನಾಳೆಯಿಂದ ಮುದ್ದನಘಟ್ಟದಲ್ಲಿ ಧಾರ್ಮಿಕ ಕಾರ್ಯಕ್ರಮ


ಸುದ್ದಿಗೋಷ್ಠಿಯಲ್ಲಿ ಮಹಾಲಿಂಗೇಗೌಡ ಮಾತನಾಡಿದರು.

ಮಂಡ್ಯ, ನ.26– ಮುದ್ದನಘಟ್ಟದಲ್ಲಿ ಪುರಾತನ ಶ್ರೀಬಾಲದಂಡೆ ಹನುಮಂತರಾಯಸ್ವಾಮಿ ದೇವಾಲಯವನ್ನು ನೂತನವಾಗಿ ಜೀರ್ಣೋದ್ಧಾರ ಮಾಡಿದ್ದು, ನ.28ರಿಂದ 30ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಆಂಜನೇಯಸ್ವಾಮಿ ದೇವಾಲಯ ಸೇವಾ ಟ್ರಸ್ಟ್ ಅಧ್ಯಕ್ಷ ಮಹಾಲಿಂಗೇಗೌಡ ಮುದ್ದನಘಟ್ಟ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ದೇವಾಲಯ ಹೊಯ್ಸಳ ದೊರೆ 2ನೇ ವೀರ ನರಸಿಂಹ ಅವರ ದಂಡನಾಯಕ ಹರಿಹರ ಅವರಿಂದ ಸ್ಥಾಪಿತವಾಗಿತ್ತು ಎಂಬುದು ಗ್ರಾಮದ ಸುತ್ತಮುತ್ತಲ ಜಾನಪದರ ಹಾಡುಗಳಿಂದ ತಿಳಿಯುತ್ತದೆ ಎಂದರು.

ನ.28ರಿಂದ ದೇವಾಲಯದಲ್ಲಿ ಬಿಂಬ ಪ್ರಾಣ ಪ್ರತಿಷ್ಠಾಪನೆ, ವಿಮಾನಗೋಪುರ, ಕಳಸ ಪ್ರತಿಷ್ಠಾಪನೆ, ಕುಂಭಾಭಿಷೇಕ, ಸಂಪ್ರೋಕ್ಷಣಾ ಮಹೋತ್ಸವ ಸೇರಿದಂತೆ ಹಲವು ಕಾರ್ಯಕ್ರಮ ಆಯೋಜಿಸಲಾಗಿದೆ. ನ.30ರಂದು ಮಧ್ಯಾಹ್ನ 1 ಗಂಟೆಗೆ ಆದಿಚುಂಚನಗಿರಿ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಮೂರ್ತಿ ಪ್ರತಿಷ್ಠಾಪನೆ ನೆರವೇರಿಸಿ, ಲೋಕಾರ್ಪಣೆ ಮಾಡಲಿದ್ದಾರೆ. ನಂತರ ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಲಿದ್ದಾರೆ ಎಂದರು.

ಶಾಶ್ವತಿ ಧಾರ್ಮಿಕ ಕ್ರಿಯಾ ಸಮಿತಿ ಅಧ್ಯಕ್ಷ ಭಾನುಪ್ರಕಾಶ್ ಶರ್ಮಾ, ಮೇಲುಕೋಟೆ ಚಲುವರಾಯಸ್ವಾಮಿ ದೇವಾಲಯದ ಸ್ಥಾನಿಕ ಶ್ರೀಗಳಾದ ಶ್ರೀನಿವಾಸ ನರಸಿಂಹನ್ ಗುರೂಜಿ ಹಾಗೂ ಪಾಂಚರಾತ್ರ ಆಗಮ ಪುರೋಹಿತರಾದ ಕೃಷ್ಣಮೂರ್ತಿ ತಂಡದಿಂದ ಪೂಜಾ ವಿಧಿವಿಧಾನಗಳು ನೆರವೇರಲಿವೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದಿಂದ ಸಾಂಸ್ಕೃತಿಕ ಕಾರ್ಯಕ್ರಮ, ಶಿವಾರ ಉಮೇಶ್ ತಂಡದಿಂದ ಗೀತಗಾಯನ ಕಾರ್ಯಕ್ರಮ ನೆರವೇರಲಿದೆ. ಇದೇ ವೇಳೆ ಕೆಂಪೇಗೌಡ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ರಾಜ್ಯ ಒಕ್ಕಲಿಗರ ಸಂಘದಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ಎಲ್ಲರಿಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ ಎಂದರು.

ಗೋಷ್ಠಿಯಲ್ಲಿ ಗ್ರಾಮದ ಪರಮೇಶ್ವರ್, ಶಶಿಕುಮಾರ್, ತೇಜಸ್‌ಗೌಡ ಇದ್ದರು.

ಕೊಲೆ, ದರೋಡೆ ಪ್ರಕರಣ: 9 ಮಂದಿ ಬಂಧನ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾಹಿತಿ

ಮಂಡ್ಯ, ನ.26– ಜಿಲ್ಲೆಯಲ್ಲಿ ನಡೆದಿದ್ದ ಕೊಲೆ ಮತ್ತು ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ 9 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.


ಸುದ್ದಿಗೋಷ್ಠಿಯಲ್ಲಿ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿದರು.

ನಗರದ ಎಸ್ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊಲೆ ಪ್ರಕರಣದಲ್ಲಿ ಶ್ರೀರಂಗಪಟ್ಟಣ ತಾಲೂಕಿನ ಮಿಣಜಿ ಬೋರಕೊಪ್ಪಲಿನ ಶಿವಕುಮಾರ್, ಪಾಲಹಳ್ಳಿಯ ಹರ್ಷ, ಕ್ಯಾತನಹಳ್ಳಿಯ ಅಭಿಷೇಕ್, ಬ್ಯಾಟೆತಿಮ್ಮನಕೊಪ್ಪಲು ಶಿವು ಹಾಗೂ ದರೋಡೆ ಪ್ರಕರಣದಲ್ಲಿ ಬಿಡದಿ ಪಟ್ಟಣದ ಶೇಷಗಿರಿಹಳ್ಳಿ ಕಾಲೋನಿಯ ಗಂಗರಾಜು ಅಲಿಯಾಸ್ ಗಂಗ(ರಮೇಶ್), ರಾಮನಗರ ಟೌನ್ ನಿವಾಸಿಗಳಾದ ಮಂಜುನಾಥ್ ಅಲಿಯಾಸ್ ಕೆಂಪ, ಎಂ.ಶಶಿಕುಮಾರ್ ಅಲಿಯಾಸ್ ಗೆಂಡೆ, ಐಜೂರು ಕೃಷ್ಣ ಅಲಿಯಸ್ ರಾಜು, ಮದ್ದೂರು ಟೌನ್ ನಿವಾಸಿ ಎಂ.ಕೆ.ಸಂದೇಶ್ ಅಲಿಯಾಸ್ ಕಲರ್ ಬಂಧಿತ ಆರೋಪಿಗಳು. ಇವರೆಲ್ಲರನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಎರಡೂ ಪ್ರಕರಣಗಳನ್ನು ಬೇಧಿಸಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಬಹುಮಾನ ಘೋಷಿಸಲಾಗಿದೆ ಎಂದರು.

ಕೊಲೆ ಪ್ರಕರಣ: ಶ್ರೀರಂಗಪಟ್ಟಣ ತಾಲೂಕಿನ ಮಿಣಜಿಬೋರಕೊಪ್ಪಲು ಗ್ರಾಮದ ಹೊರವಲಯದ ಖಾಲಿ ಜಾಗದಲ್ಲಿ ಮಿಣಜಿಬೋರಕೊಪ್ಪಲು ಗ್ರಾಮದ ನಿವಾಸಿ ಶಿವಕುಮಾರ್, ಪಾಲಹಳ್ಳಿಯ ಹರ್ಷ, ಕ್ಯಾತನಹಳ್ಳಿಯ ಅಭಿಷೇಕ್, ಬ್ಯಾಟೆತಿಮ್ಮನಕೊಪ್ಪಲು ಶಿವು ಮತ್ತು ಶಶಾಂಕ್‌ಗೌಡ ನ.18ರಂದು ಪಾರ್ಟಿ ಮಾಡುತ್ತಿದ್ದರು. ಈ ವೇಳೆ ಶಿವಕುಮಾರ್ ಮತ್ತು ಕ್ಯಾತನಹಳ್ಳಿ ಶಶಾಂಕ್‌ಗೌಡ ನಡುವೆ ಮಾತಿಗೆ ಮಾತು ಬೆಳೆದು ಜಗಳವಾಗಿ ಶಶಾಂಕ್ ಮೇಲೆ ಶಿವಕುಮಾರ್ ಹಲ್ಲೆ ನಡೆಸಿದ್ದರು. ಈ ವೇಳೆ ಕಿವಿ ಮತ್ತು ಮೂಗಿನಲ್ಲಿ ರಕ್ತ ಬಂದಿದ್ದರಿಂದ ಹರ್ಷ, ಅಭಿಷೇಕ್, ಶಿವು ಅವರು ಶಶಾಂಕ್‌ಗೌಡನನ್ನು ಬೈಕ್‌ನಲ್ಲಿ ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ಚಿಕಿತ್ಸೆಗೆ ಕರೆದೊಯ್ಯುವ ಮಾರ್ಗಮಧ್ಯೆ ಮೃತಪಟ್ಟಿದ್ದನು. ಆದಾಗ್ಯೂ ಆಸ್ಪತ್ರೆಗೆ ಕರೆದೊಯ್ದಾಗ ಶಶಾಂತ್ ಸಾವನ್ನಪ್ಪಿರುವುದು ಖಚಿತವಾಗಿದೆ. ಆಗ ಅಲ್ಲೇ ಇದ್ದ ಆಟೋದಲ್ಲಿ ಕ್ಯಾತನಹಳ್ಳಿಗೆ ಶಶಾಂಕ್‌ನ ಶವವನ್ನು ಅವರ ಮನೆಗೆ ತೆಗೆದುಕೊಂಡು ಹೋಗಿ ಅಪಘಾತದಲ್ಲಿ ಮೃತಪಟ್ಟಿದ್ದಾನೆಂದು ಹೇಳಿದ್ದರು.

ಈ ಸಂಬಂಧ ಶಶಾಂಕ್ ತಾಯಿ ಶ್ರೀರಂಗಪಟ್ಟಣ ಪೊಲೀಸರಿಗೆ ದೂರು ನೀಡಿದ್ದರು. ಆದರೆ, ಶಶಾಂಕ್ ಸಾವಿನ ಬಗ್ಗೆ ಅನುಮಾನವಿತ್ತು. ಜೊತೆಗೆ ಮರಣೋತ್ತರ ಪರೀಕ್ಷೆ ನಡೆಸಿದ ವೈದ್ಯರು, ಶಶಾಂಕ್‌ನ ದೇಹದ ಮೇಲಾಗಿರುವ ಗಾಯಗಳು ಅಪಘಾತದಿಂದ ಆಗಿರುವ ಸಾಧ್ಯತೆ ಕಡಿಮೆ ಎಂದು ಅನುಮಾನ ವ್ಯಕ್ತಪಡಿಸಿದ್ದರು. ಹೀಗಾಗಿ ಆತನ ಸ್ನೇಹಿತರನ್ನು ವಿಚಾರಣೆಗೆ ಒಳಪಡಿಸಿದಾಗ ಕೊಲೆ ಪ್ರಕರಣ ಬೆಳಕಿಗೆ ಬಂದಿದ್ದು, ನಾಲ್ವರನ್ನು ಬಂಧಿಸಲಾಗಿದೆ ಎಂದರು.

ಗೋಷ್ಠಿಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಈ.ಗಂಗಾಧರಸ್ವಾಮಿ, ಇನ್ಸ್‌ಪೆಕ್ಟರ್ ಶರತ್‌ಕುಮಾರ್ ಇತರರಿದ್ದರು.

ಐವರು ಅಂತರ ಜಿಲ್ಲಾ ದರೋಡೆಕೋರರ ಬಂಧನ

ಮಂಡ್ಯ: ರಾಜ್ಯದ ವಿವಿಧೆಡೆ 90ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಭಾಗಿಯಾಗಿದ್ದ ವ್ಯಕ್ತಿ ಸೇರಿದಂತೆ ಐವರು ಅಂತರ ಜಿಲ್ಲಾ ದರೋಡೆಕೋರರನ್ನು ಬಂಧಿಸಲಾಗಿದೆ ಎಂದು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.

ಬಿಡದಿ ಪಟ್ಟಣದ ಶೇಷಗಿರಿಹಳ್ಳಿ ಕಾಲೋನಿಯ ಗಂಗರಾಜು ಅಲಿಯಾಸ್ ಗಂಗ ಉರುಫ್ ರಮೇಶ್(56), ರಾಮನಗರ ಟೌನ್ ನಿವಾಸಿಗಳಾದ ಮಂಜುನಾಥ್ ಅಲಿಯಾಸ್ ಕೆಂಪ(25), ಎಂ.ಶಶಿಕುಮಾರ್ ಅಲಿಯಾಸ್ ಗೆಂಡೆ(25), ಐಜೂರು ಕೃಷ್ಣ ಅಲಿಯಸ್ ರಾಜು(25), ಮದ್ದೂರು ಟೌನ್ ನಿವಾಸಿ ಎಂ.ಕೆ.ಸಂದೇಶ್ ಅಲಿಯಾಸ್ ಕಲರ್(2) ಬಂಧಿತರು. ಇವರಿಂದ 5.50 ಲಕ್ಷ ರೂ. ಮೌಲ್ಯದ 55 ಗ್ರಾಂ ತೂಕದ ಚಿನ್ನಾಭರಣಗಳು, ಕೃತ್ಯಕ್ಕೆ ಬಳಸಿದ ಪಲ್ಸರ್ ಬೈಕ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ಶ್ರೀರಂಗಪಟ್ಟಣ ತಾಲೂಕು ಕೂಡಲಕುಪ್ಪೆ ಗ್ರಾಮದ ನಿವಾಸಿ ನಿಸರ್ಗ ಎಂಬುವರ ಮನೆಗೆ ನ.6ರಂದು ನಸುಕಿನ ಜಾವ ದರೋಡೆಕೋರರು ನುಗ್ಗಿ ನಿಸರ್ಗ ಮತ್ತವರ ತಾಯಿಯನ್ನು ಬೆದರಿಸಿ ಹಣ ಮತ್ತು ಚಿನ್ನಾಭರಣ ಕಸಿದು ಪರಾರಿಯಾಗಿದ್ದರು. ಜೊತೆಗೆ ಪಕ್ಕದ ಮನೆಯ ಸುವರ್ಣಲತಾ ಎಂಬುವರ ಮನೆಗೂ ನುಗ್ಗಿದ ಆರೋಪಿಗಳು ಅಲ್ಲಿಯೂ ಚಿನ್ನಾಭರಣ ಲೂಟಿ ಮಾಡಿದ್ದರು.

ಈ ಸಂಬಂಧ ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ಆರೋಪಿಗಳ ಜಾಡು ಹಿಡಿದು ಶೋಧ ಕಾರ್ಯ ಆರಂಭಿಸಿದ ತಂಡವು ನ.22 ಮತ್ತು 24ರಂದು ಅಂತರ ಜಿಲ್ಲಾ ದರೋಡೆಕೋರರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದರು.

ಈ ಪೈಕಿ ಪ್ರಮುಖ ಆರೋಪಿ ಗಂಗರಾಜು ಅಲಿಯಾಸ್ ಗಂಗಾಧರನ ಮೇಲೆ 90ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿದೆ. ಬೆಂಗಳೂರಿನ ಸೆಂಟ್ರಲ್ ಠಾಣೆಯಲ್ಲಿ 56, ಮಂಡ್ಯ ಪಶ್ಚಿಮ ಠಾಣೆಯಲ್ಲಿ 8, ಹಲಗೂರು ಠಾಣೆಯಲ್ಲಿ 26 ದರೋಡೆ, ಸುಲಿಗೆ, ಕಳ್ಳತನ ಪ್ರಕರಣಗಳು ದಾಖಲಾಗಿವೆ ಎಂಬ ಅಚ್ಚರಿಯ ಸಂಗತಿ ಬಹಿರಂಗಪಡಿಸಿದರು. ಆರೋಪಿ ಎಂ.ಶಶಿಕುಮಾರ್ ವಿರುದ್ಧ ಬಿಡದಿ, ರಾಮನಗರದಲ್ಲಿ ಕೊಲೆಯತ್ನ ಸಂಬಂಧ 2 ಪ್ರಕರಣ, ಮತ್ತೊಬ್ಬ ಆರೋಪಿ ಸಂದೇಶ್ ವಿರುದ್ಧ ಮಂಡ್ಯ ಗ್ರಾಮಾಂತರ ಠಾಣೆಯಲ್ಲಿ ಸುಲಿಗೆ ಪ್ರಕರಣ, ಮದ್ದೂರು ಅರಣ್ಯ ಇಲಾಖೆಯಲ್ಲಿ ವನ್ಯಜೀವಿ ಕಾಯಿದೆಯಡಿ ಪ್ರಕರಣ ದಾಖಲಾಗಿದೆ ಎಂದು ವಿವರಿಸಿದರು.

ಕೆ.ಆರ್.ಪೇಟೆಯಲ್ಲಿ ಸಂವಿಧಾನ ದಿನಾಚರಣೆ

ಕೆ.ಆರ್.ಪೇಟೆ, ನ.26– ಪಟ್ಟಣದ ನಾಲ್ವಡಿ ಕೃಷ್ಣರಾಜ ಒಡೆಯರ್ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಸಂವಿಧಾನ ದಿನಾಚರಣೆ ನಡೆಯಿತು.


ಕೆ.ಆರ್.ಪೇಟೆಯಲ್ಲಿ ಸಂವಿಧಾನ ದಿನಾಚರಣೆ ನಡೆಯಿತು.

ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರ ಹಾಗೂ ಸಂವಿಧಾನ ಪ್ರಸ್ತಾವನೆ ಪೀಠಿಕೆ ಫಲಕಕ್ಕೆ ಪುಷ್ಪ ನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್, ಅಂಬೇಡ್ಕರ್ ಅವರು ಆಳವಾದ ಅಧ್ಯಯನ ನಡೆಸಿ ಸಂವಿಧಾನ ರಚಿಸದಿದ್ದರೇ ದೇಶದ ಪ್ರಜೆಗಳಾದ ನಾವು ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗುತ್ತಿರಲಿಲ್ಲ. ಅಂಬೇಡ್ಕರ್ ಅತೀ ಹೆಚ್ಚು ಡಿಗ್ರಿಗಳನ್ನು ವ್ಯಾಸಾಂಗ ಮಾಡಿದ ಮಹಾನ್ ಮಾನವತಾವಾದಿಯಾಗಿದ್ದಾರೆ. ಇದರಿಂದಾಗಿ ಗಟ್ಟಿತನದಿಂದ ಕೂಡಿದ, ಸರ್ವ ಜನಾಂಗಕ್ಕೂ ಸಮಪಾಲು, ಸಮಬಾಳು ನೀಡುವಂತಹ ಅತ್ಯುತ್ತಮ ಸಂವಿಧಾನ ರಚಿಸಲು ಅಂಬೇಡ್ಕರ್ ಅವರಿಗೆ ಸಾಧ್ಯವಾಯಿತು ಎಂದರು.

ಇಂತಹ ಶ್ರೇಷ್ಠ ಸಂವಿಧಾನ ನೀಡಿದ ಅಂಬೇಡ್ಕರ್ ಅವರನ್ನು ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತಗೊಳಿಸಬಾರದು. ದೇಶದ ಪ್ರತಿಯೊಬ್ಬರೂ ಅಂಬೇಡ್ಕರ್ ಅವರನ್ನು ಗೌರವಿಸಬೇಕು. ಸಂವಿಧಾನಕ್ಕೆ ಗೌರವ ಕೊಡಬೇಕು. ಈ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಸಂವಿಧಾನ ಜಾಥಾಕ್ಕೆ ಶತಮಾನದ ಶಾಲಾ ವರಣದಲ್ಲಿ ಚಾಲನೆ ನೀಡಿದರು. ಬಿಇಓ ವೈ.ಕೆ.ತಿಮ್ಮೇಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಉಪನ್ಯಾಸಕ ವೆಂಕಟರಾಮು ಸಂವಿಧಾನ ದಿನಾಚರಣೆ ಕುರಿತು ಭಾಷಣ ಮಾಡಿದರು. ತಾಪಂ ಇಓ ಕೆ.ಸುಷ್ಮಾ, ತಾಲೂಕು ಸಮಾಜ ಕಲ್ಯಾಣಾಧಿಕಾರಿ ಕೆ.ದಿವಾಕರ್, ಪುರಸಭಾ ಸದಸ್ಯ ಡಿ.ಪ್ರೇಮಕುಮಾರ್, ಜಿಪಂ ಮಾಜಿ ಸದಸ್ಯ ರಾಮದಾಸ್, ತಾಲೂಕು ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ರಾಜಯ್ಯ, ತಾಲೂಕು ಪ.ಜಾ, ಪ.ಪಂ ಶಿಕ್ಷಕರ ಸಂಘದ ಅಧ್ಯಕ್ಷ ಯೋಗೇಶ್, ತಾಲೂಕು ಕಸಾಪ ಅಧ್ಯಕ್ಷ ಹೆಚ್.ಆರ್.ಪೂರ್ಣಚಂದ್ರತೇಜಸ್ವಿ, ಬಿಸಿಎಂ ಅಧಿಕಾರಿ ವೆಂಕಟೇಶ್, ಎಸಿಡಿಪಿಓ ಶಾಂತವ್ವ, ಕೆಪಿಎಸ್ ಶಾಲೆ ಎಸ್‌ಡಿಎಂಸಿ ಉಪಾಧ್ಯಕ್ಷ ಸಿ.ಬಿ.ಚೇತನ್ ಕುಮಾರ್, ಮುಖಂಡರಾದ ರಂಗಪ್ಪ, ಕಾಂತರಾಜು, ನಟರಾಜು, ರಂಗಸ್ವಾಮಿ, ದೇವರಾಜು, ರಮೇಶ್, ಎನ್.ಜೆ.ಮಂಜು, ಸೋಮಸುಂದರ್, ಜಯರಾಂ, ಯಾಲಕ್ಕಯ್ಯ ಮತ್ತಿತರರಿದ್ದರು.

40 ಸಾವಿರ ಸರ್ಕಾರಿ ಶಾಲೆ ಮುಚ್ಚುವ ಹುನ್ನಾರ

ಮಂಡ್ಯ, ನ.26– ರಾಜ್ಯ ಸರ್ಕಾರ 'ಕೆಪಿಎಸ್ ಮ್ಯಾಗ್ನೆಟ್' ಯೋಜನೆ ಮೂಲಕ 40 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚುವ ಹುನ್ನಾರ ನಡೆಸುತ್ತಿದ್ದು, ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಡ್ಸ್ ಆರ್ಗನೈಜೇಷನ್ (ಎಐಡಿಎಸ್‌ಓ) ಈ ಯೋಜನೆಯನ್ನು ತೀವ್ರವಾಗಿ ವಿರೋಧಿಸುತ್ತದೆ ಎಂದು ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿ ಸ್ವಾತಿ ತಿಳಿಸಿದರು.


ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿ ಸ್ವಾತಿ ಮಾತನಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ 'ಕೆಪಿಎಸ್ ಮ್ಯಾಗ್ನೆಟ್' ಯೋಜನೆಯು ಗ್ರಾಮೀಣ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿಯುವ ಯೋಜನೆಯಾಗಿದೆ. ಆ ಮೂಲಕ ಬಡವರ್ಗದ ಶಿಕ್ಷಣದ ಹಕ್ಕಿನ ಮೇಲೆ ಪ್ರಹಾರ ನಡೆಸಲಾಗುತ್ತಿದೆ ಎಂದು ಖಂಡಿಸಿದರು.

ಕರ್ನಾಟಕ ಪಬ್ಲಿಕ್ ಶಾಲೆ(ಕೆಪಿಎಸ್) ಮೂಲಕ ಹೆಚ್ಚಿನ ಶಿಕ್ಷಣಕ್ಕೆ ಆದ್ಯತೆ ನೀಡಿರುವುದು ಸ್ವಾಗತಾರ್ಹ. ಆದರೆ 'ಕೆಪಿಎಸ್ ಮ್ಯಾಗ್ನೆಟ್' ಯೋಜನೆ ತಂದು ಪ್ರತಿ ಗ್ರಾಪಂನ 1ರಿಂದ 6 ಕಿಮೀ ವ್ಯಾಪ್ತಿಯ ಶಾಲೆಗಳನ್ನು ವಿಲೀನಗೊಳಿಸುವುದು ಬಡವರನ್ನು ಶಿಕ್ಷಣದಿಂದ ವಿಮುಖ ಮಾಡಿದಂತಾಗುತ್ತದೆ. ಗ್ರಾಪಂಗೆ ಒಂದರಂತೆ 6 ಸಾವಿರ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ತೆರೆಯುವ ಗುರಿ ನಿಗದಿಪಡಿಸಿದೆ ಮೊದಲ ಹಂತದಲ್ಲಿ ರಾಜ್ಯದ 800 ಶಾಲೆಗಳನ್ನು 'ಕೆಪಿಎಸ್ ಮ್ಯಾಗ್ನೆಟ್' ಶಾಲೆಗಳೆಂದು ಗುರುತಿಸಿ ಇದೇ ಅ.15ರಂದು ಸುತ್ತೋಲೆ ಹೊರಡಿಸಿದೆ ಎಂದರು.

ಚನ್ನಪಟ್ಟಣ ತಾಲೂಕಿನ ಹೊಂಗನೂರು ಗ್ರಾಮದ ಶಾಲೆಯನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಿ, 6 ಕಿಮೀ ವ್ಯಾಪ್ತಿಯ ಶಾಲೆಗಳನ್ನು ತುರ್ತಾಗಿ ವಿಲೀನಗೊಳಿಸಲು ಅ.23ರಂದು ಆದೇಶ ನೀಡಲಾಗಿದೆ. ಈ ರೀತಿ ಮುಂದುವರೆದರೆ ರಾಜ್ಯದ 40 ಸಾವಿರಕ್ಕೂ ಅಧಿಕ ಶಾಲೆಗಳು ವಿಲೀನಗೊಂಡು ಮುಚ್ಚಲ್ಪಡುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಕೆಆರ್.ಪೇಟೆಯಲ್ಲಿಯೂ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಆರಂಭಿಸಿ ಸರ್ಕಾರಿ ಶಾಲೆಗಳ 900 ವಿದ್ಯಾರ್ಥಿಗಳನ್ನು ವಿಲೀನಗೊಳಿಸಲಾಗಿದೆ. ಶಿಕ್ಷಕರ ನೇಮಕಕ್ಕೆ ಶಾಲೆಗಳಲ್ಲಿ ಪ್ರತಿ ವಿದ್ಯಾರ್ಥಿಯಿಂದ 5 ಸಾವಿರ ಪಡೆಯುತ್ತಿರುವುದಾಗಿ ಎಐಡಿಎಸ್‌ಓಗೆ ಮಾಹಿತಿ ದೊರೆತಿದೆ ಎಂದು ಗಂಭೀರ ಆರೋಪ ಮಾಡಿದರು.

ಒಂದನೇ ಪುಟದಿಂದ

ಡಿ.ಕೆ.ಶಿವಕುಮಾರ್ ಬಣದಲ್ಲಿ ಅಚ್ಛೇದಿನ್ ಆಶಯ!

ಮುಂದಿನ ದಿನಗಳ ರಾಜಕೀಯ ಬೆಳವಣಿಗೆಯಲ್ಲಿ ಸಹಕರಿಸುವಂತೆ ಕೋರಿದ್ದಾರೆ ಎನ್ನಲಾಗಿದೆ. ಅಲ್ಲದೆ, ಸಿದ್ದರಾಮಯ್ಯ ಬಣದ ಶಾಸಕರ ಬಳಿಯೂ ಚರ್ಚೆ ನಡೆಸುತ್ತಿದ್ದಾರೆಂಬ ಮಾಹಿತಿಗಳು ಉನ್ನತ ಮೂಲಗಳಿಂದ ಲಭ್ಯವಾಗಿವೆ.

ಈ ಎಲ್ಲಾ ವಿದ್ಯಮಾನಗಳನ್ನು ಗಮನಿಸಿದಲ್ಲಿ ಶಿವಕುಮಾರ್ ಪಾಲಿಗೆ ಒಳ್ಳೆಯ ಕ್ಷಣಗಳು ಬರುವ ಸಾಧ್ಯತೆ ಕಂಡು ಬರುತ್ತಿವೆ. ಸುದ್ದಿಗಾರರೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಕಾಂಗ್ರೆಸ್‌ಗೆ ಯಾರೂ ಅನಿವಾರ್ಯ ಅಲ್ಲ, ಸಿದ್ದರಾಮಯ್ಯ ಅಂದರೆ ಕಾಂಗ್ರೆಸ್.., ಕಾಂಗ್ರೆಸ್ ಅಂದರೆ ಸಿದ್ದರಾಮಯ್ಯ ಎಂಬುದು ಸರಿಯಲ್ಲ. ಅವರು ಪಕ್ಷಕ್ಕೆ ಬರುವ ಮೊದಲೂ ಕಾಂಗ್ರೆಸ್ ಇತ್ತು, ಈಗಲೂ ಇದೆ, ಮುಂದೆಯೂ ಇರುತ್ತದೆ.

ಸಿದ್ದರಾಮಯ್ಯ ಪಕ್ಷಕ್ಕಾಗಿ ದುಡಿದಿರುವ ನಾಯಕರಲ್ಲಿ ಒಬ್ಬರು ಎಂಬುದರಲ್ಲಿ ಸಂಶಯವಿಲ್ಲ ಎಂದರು. ಕಾಂಗ್ರೆಸ್‌ನಲ್ಲಿ ಬಿರುಸುಗೊಂಡಿರುವ ನಾಯಕತ್ವ ವಿಚಾರದ ಗೊಂದಲದ ನಡುವೆಯೇ ಒಂದೆಡೆ ಸೇರಿದ್ದ ಸಚಿವ ಸತೀಶ್ ಜಾರಕಿಹೊಳಿ ಅಂಡ್ ಟೀಂ ಗಹನವಾದ ಚರ್ಚೆ ನಡೆಸಿತು.

ಎರಡು–ಮೂರು ದಿನದಲ್ಲಿ ಪರಿಹಾರ

ಕರ್ನಾಟಕದಲ್ಲಿ ಅಧಿಕಾರ ಹಸ್ತಾಂತರ ಗೊಂದಲಕ್ಕೆ ಕಾಂಗ್ರೆಸ್ ಹೈಕಮಾಂಡ್ ಎರಡು–ಮೂರು ದಿನದಲ್ಲಿ ಪರಿಹಾರ ಸೂಚಿಸಲಿದೆ. ದೆಹಲಿಯ ಇಂದಿರಾ ಭವನದಲ್ಲಿ ನಾಳೆ ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಭುಗಿಲೆದ್ದಿರುವ ವಿವಾದ ಕುರಿತು ಪೂರ್ಣ ಮಾಹಿತಿ ಪಡೆಯಲಿದ್ದಾರೆ. ಅಲ್ಲದೆ ರಾಹುಲ್ ಗೌಪ್ಯವಾಗಿಯೂ ಕೆಲವರಿಂದ ಮಾಹಿತಿ ಪಡೆಯಲಿದ್ದು, ರಾಜ್ಯದ ಐವರು ಪ್ರಮುಖ ನಾಯಕರಿಗೆ ದೆಹಲಿಗೆ ಬರುವಂತೆ ಸೂಚಿಸಲಾಗಿದೆ.

ಪಕ್ಷದ ಅಧಿನಾಯಕಿ ಸೋನಿಯಾ ಗಾಂಧಿ ನವೆಂಬರ್ 28ಕ್ಕೆ ದೆಹಲಿಗೆ ಆಗಮಿಸಲಿದ್ದು, ಹೈಕಮಾಂಡ್ ಮಟ್ಟದಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ.

ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ದೆಹಲಿಗೆ ಬರುವಂತೆ ಬುಲಾವ್ ನೀಡಲಿದ್ದು, ಅವರ ಸಮ್ಮುಖದಲ್ಲಿ ಪಕ್ಷ ಅಧಿಕಾರಕ್ಕೆ ಬಂದ ಸಂದರ್ಭದಲ್ಲಿನ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚೆ ನಡೆಯಲಿದೆ. ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಪಕ್ಷದ ಹೈಕಮಾಂಡ್ ಒಂದು ಸ್ಪಷ್ಟ ನಿರ್ಧಾರಕ್ಕೆ ಬರುವವರೆಗೆ ಕರ್ನಾಟಕ ಕಾಂಗ್ರೆಸ್‌ನಲ್ಲಿ ಯಾವುದೇ ಗುಂಪುಗಾರಿಕೆಗೆ ಅವಕಾಶ ನೀಡದಂತೆ ಎಚ್ಚರಿಸಲಾಗಿದೆ. ಇದರ ಪರಿಣಾಮವಾಗಿ ಸಿದ್ದರಾಮಯ್ಯ ಗುಂಪಿನ ಔತಣಕೂಟ ಮತ್ತು ಶಿವಕುಮಾರ್ ಪರ ಶಾಸಕರ ದೆಹಲಿ ಪ್ರವಾಸಕ್ಕೆ ಬ್ರೇಕ್ ಹಾಕಲಾಗಿದೆ ಎಂದು ಮೂಲಗಳು ತಿಳಿಸಿವೆ.

ಶಿವಕುಮಾರ್ ಅವರೊಂದಿಗೆ ನಿನ್ನೆ ಮಿಡ್ ನೈಟ್ ಮೀಟಿಂಗ್ ನಡೆಸಿರುವ ಬೆನ್ನಲ್ಲೆ ಜಾರಕಿಹೊಳಿ ಆಪ್ತರ ಡಿನ್ನರ್ ಮೀಟಿಂಗ್ ಕುತೂಹಲ ಮೂಡಿಸಿದ್ದು, ಪಕ್ಷದ ಪ್ರಚಲಿತ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚಿಸಿದರು ಎನ್ನಲಾಗಿದೆ.

ಡಿನ್ನರ್ ಮೀಟಿಂಗ್‌ನಲ್ಲಿ ಸತೀಶ್ ಜಾರಕಿಹೊಳಿ ಆಪ್ತ ಶಾಸಕರಾದ ಪ್ರಕಾಶ್ ಕೋಳಿವಾಡ, ವಿಶ್ವಾಸ್ ವೈದ್ಯ, ಕಂಪ್ಲಿ ಗಣೇಶ್, ಹಂಪನಗೌಡ ನಾಯಕ್, ಬಾಬಾ ಸಾಹೇಬ್ ಪಾಟೀಲ್, ಆಸೀಫ್ ಪಠಾಣ್, ಪಾವಗಡ ವೆಂಕಟೇಶ್ ಮತ್ತಿತರರು ಉಪಸ್ಥಿತರಿದ್ದರು.

ನಾಯಕತ್ವ ಚರ್ಚೆ ಆಗಿಲ್ಲ

ಭೇಟಿ ವೇಳೆ ಪಕ್ಷ ಸಂಘಟನೆ ಹಾಗೂ ಮುಂದಿನ ಚುನಾವಣೆಯ ಬಗ್ಗೆ ಚರ್ಚೆ ಆಗಿದೆ ಎಂದು ಹೇಳಿದರು.

ಅಧ್ಯಕ್ಷರ ಭೇಟಿಗೆ ಸಿಮೀತವಾಗಿ ಮಾತಾಡುತ್ತೇನೆ. ಮೂರನೇ ಆಯ್ಕೆಯಂತಹ ಸನ್ನಿವೇಶ ಬಂದಿಲ್ಲ. ಸನ್ನಿವೇಶ ಬರದೆ ಕೋಟ್ ಹೋಲಿಸಿಕೊಳ್ಳಬಹುದು. ಇವಾಗಲೇ ಹೊಲಿಸಿಕೊಂಡರೆ ಕೋಟ್ ಹಾಕಿಕೊಳ್ಳಲು ಆಗದೆ, ಬಿಚ್ಚಲು ಆಗದ ರೀತಿ ಆಗಬಾರದು. ಅಂತಹ ಸನ್ನಿವೇಶ ಬಂದಿಲ್ಲ ಎಂದು ಸ್ಪಷ್ಟಪಡಿಸಿದರು.

ಪಕ್ಷದ ಅಧ್ಯಕ್ಷರನ್ನು ಪಕ್ಷದ ಕಚೇರಿಯಲ್ಲಿ ಭೇಟಿಯಾಗಿದ್ದೇನೆ. ಅಷ್ಟೇ ಅಲ್ಲದೆ, ಅವರ ಮನೆಯಲ್ಲೂ ಭೇಟಿಯಾಗಿದ್ದೇನೆ ಎಂದು ತಿಳಿಸಿದರು. ಎಲ್ಲರೂ ಒಗ್ಗಟ್ಟಿನಿಂದ ಇರುವುದು ಅಷ್ಟೇ ನಮ್ಮ ಉದ್ದೇಶ.

ಡಿ.ಕೆ.ಶಿವಕುಮಾರ್ ಅವರು ಎಲ್ಲಾ ಸಚಿವರನ್ನು ಹಾಗೂ ಶಾಸಕರನ್ನು ಭೇಟಿ ಮಾಡುತ್ತಿದ್ದಾರೆ. ನನಗಿರುವ ಮಾಹಿತಿ ಪ್ರಕಾರ ನಾನೇ ಕೊನೆಯವನು ಇರಬೇಕು. ಅಷ್ಟೇ ಅಲ್ಲದೆ, ಡಿಕೆ ಸುರೇಶ್ ಕೂಡ ಈ ಹಿಂದೆ ಭೇಟಿಯಾಗಿದ್ದರು. ನಾವು ಅವರ ಮನೆಗೆ ಹೋಗಿ ಬಂದಿದ್ದೇವೆ ಎಂದರು.

ಡಿಕೆಶಿ ಅವರಿಗೆ ಸಿಎಂ ಆಗುವ ಆಸೆ ಸಹಜ: ಡಿ.ಕೆ.ಶಿವಕುಮಾರ್ ಅವರಿಗೆ ಸಿಎಂ ಆಗಬೇಕು ಎಂದು ಆಸೆ ಇರುತ್ತದೆ. ಮೊದಲ ದಿನದಿಂದಲೂ ಅವರು ಸಿಎಂ ಸ್ಥಾನ ಕ್ಲೇಮ್ ಮಾಡಿದ್ದಾರೆ. ಆದರೆ, ಹೈಕಮಾಂಡ್ ಸಿದ್ದರಾಮಯ್ಯ ಸಿಎಂ ಎಂದು ತೀರ್ಮಾನ ಮಾಡಿದೆ. ಈಗಲೂ ಹೈಕಮಾಂಡ್ ತೀರ್ಮಾನ ಮಾಡಬೇಕು ಎಂದರು.

ಖರ್ಗೆಯನ್ನು ಭೇಟಿ ಮಾಡುತ್ತೇನೆ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡುತ್ತೇನೆ. ಈ ನಿಟ್ಟಿನಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ಸಮಯ ಕೇಳುತ್ತೇನೆ. ಸಮಯ ಸಿಕ್ಕರೆ ಭೇಟಿ ಮಾಡಿ ನನ್ನ ಅಭಿಪ್ರಾಯ ಹೇಳುತ್ತೇನೆ ಎಂದರು. ಸಿಎಂ ಸ್ಥಾನಕ್ಕೆ ನಾನೂ ಆಕಾಂಕ್ಷಿ ಎಂಬ ಡಾ. ಜಿ ಪರಮೇಶ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಇದರಲ್ಲಿ ತಪ್ಪೇನಿದೆ ಅವರು ಎಂಟು ವರ್ಷ ಅಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ. ಆದರೆ ಹೈಕಮಾಂಡ್ ತೀರ್ಮಾನ ಮಾಡಬೇಕು ಎಂದು ಹೇಳಿದರು.

ಡಿಕೆಶಿ ಸಿಎಂ ಆಗಬೇಕು

ವರ್ಷಗಳ ಅವಧಿಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂಬ ಅಭಿಲಾಷೆ ನಮಗಿದೆ ಎಂದು ಹೇಳಿದರು.

ಸದ್ಯ ರಾಜಕೀಯ ಬೆಳವಣಿಗೆಯನ್ನು ಮಾಧ್ಯಮಗಳಲ್ಲಿ ನೋಡುತ್ತಿದ್ದೇನೆ. ಡಿ.ಕೆ.ಶಿವಕುಮಾರ್ ಅವರು ಸಿಎಂ ಆಗುವ ಆಕಾಂಕ್ಷಿಯಾಗಿದ್ದು, ಪ್ರಸ್ತುತ ಉಪಮುಖ್ಯಮಂತ್ರಿ ಆಗಿದ್ದಾರೆ. ಕಾಂಗ್ರೆಸ್ ಸರ್ಕಾರ ಬಂದ ಎರಡೂವರೆ ವರ್ಷ ಆದ ಮೇಲೆ ನಮ್ಮ ಸಮುದಾಯದವರು (ಒಕ್ಕಲಿಗ ಸಮುದಾಯ) ಮುಖ್ಯಮಂತ್ರಿ ಆಗುತ್ತಾರೆ ಎಂದು ಅಂದುಕೊಂಡಿದ್ದೆವು. ಡಿ.ಕೆ.ಶಿವಕುಮಾರ್ ಶಿಸ್ತಿನ ಸಿಪಾಯಿ ಹಾಗೂ ಕಾಂಗ್ರೆಸ್ ಪಕ್ಷದ ಏಳಿಗೆಗಾಗಿ ದುಡಿದಿದ್ದಾರೆ. ಹೀಗಾಗಿ ಅವರು ಸಿಎಂ ಆಗಬೇಕು ಎಂದು ಸಾವಿರಾರು ಭಕ್ತರು ಮಠಕ್ಕೆ ಕರೆ ಮಾಡಿ ತಮ್ಮ ಆಸೆ ವ್ಯಕ್ತಪಡಿಸಿದ್ದಾರೆ ಎಂದು ಶ್ರೀ ನಿರ್ಮಲಾನಂದನಾಥ ಶ್ರೀಗಳು ತಿಳಿಸಿದರು.

ಅಧಿಕಾರ ಹಂಚಿಕೆ ಕುರಿತು ಜನರು ಚರ್ಚೆ ಮಾಡುತ್ತಿರುವ ಈ ಸಂದರ್ಭದಲ್ಲಿ, ಡಿಕೆಶಿಯವರಿಗೆ ರಾಜಕೀಯ ಒಳಸುಳಿಗಳ ಬಗ್ಗೆ ಚೆನ್ನಾಗಿ ಗೊತ್ತಿದೆ. ರಾಜ್ಯದಲ್ಲಿ ರಾಜಕೀಯ ಅಸ್ಥಿರತೆ ಉಂಟಾದರೆ ಅಭಿವೃದ್ಧಿ ಕುಂಠಿತವಾಗುತ್ತದೆ ಮತ್ತು ಅಭಿವೃದ್ಧಿಗೆ ಮಾರಕವಾಗುತ್ತದೆ ಎಂದು ಶ್ರೀಗಳು ಕಳವಳ ವ್ಯಕ್ತಪಡಿಸಿದರು.

ರಾಜ್ಯದ ಹಿತದೃಷ್ಟಿಯಿಂದ ಕಾಂಗ್ರೆಸ್ ಹೈಕಮಾಂಡ್ ಈ ಸಮಸ್ಯೆಯನ್ನು ಶೀಘ್ರವಾಗಿ ಬಗೆಹರಿಸಬೇಕು ಎಂದು ಆಗ್ರಹಿಸಿದರು. ಈ ವಿಚಾರವಾಗಿ ಈವರೆವಿಗೂ ಡಿ.ಕೆ.ಶಿವಕುಮಾರ್ ತಮ್ಮೊಂದಿಗೆ ಮಾತನಾಡಿಲ್ಲ. ಬಿಕ್ಕಟ್ಟು ಮುಂದುವರೆದರೆ ಶ್ರೀಮಠದ ಸದ್ಭಕ್ತರಾಗಿರುವ ಡಿಕೆ ಶಿವಕುಮಾರ್ ಅವರು ನಮ್ಮೊಂದಿಗೆ ಚರ್ಚಿಸುತ್ತಾರೆ ಎಂದು ಶ್ರೀ ನಿರ್ಮಲಾನಂದ ಸ್ವಾಮೀಜಿ ವಿಶ್ವಾಸ ವ್ಯಕ್ತಪಡಿಸಿದರು.

ದಯವಿಟ್ಟು ಕಾಯಿರಿ...!

ಕುಳಿತು ಚರ್ಚಿಸುತ್ತೇವೆ ಎಂದು ಹೇಳಿದ್ದಾರೆ.

ಮತ್ತೊಂದೆಡೆ ಬೆಂಗಳೂರಲ್ಲಿ ಮಾಧ್ಯಮದ ಜೊತೆ ಮಾತನಾಡಿದ ಡಿಕೆಶಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಂದ ಸಂದೇಶ ಬಂದಿದ್ದು, ರಾಹುಲ್ ಗಾಂಧಿ ನನಗೆ ಹೇಳಿರುವುದು ಮಾಧ್ಯಮಗಳ ಮುಂದೆ ಚರ್ಚಿಸಬೇಕಾದ ವಿಷಯವಲ್ಲ. ಅದರ ಬಗ್ಗೆ ನಾನು ಮಾತನಾಡುವ ಅಗತ್ಯವಿಲ್ಲ. ನಮ್ಮ ಗುರಿ 2028ರಲ್ಲಿ ಕರ್ನಾಟಕವನ್ನು ಗೆಲ್ಲುವುದು ಮತ್ತು 2029ರಲ್ಲಿ ರಾಷ್ಟ್ರಮಟ್ಟದಲ್ಲಿ ಗೆಲ್ಲುವುದು ಹಾಗೂ ರಾಹುಲ್ ಗಾಂಧಿಯನ್ನು ಪ್ರಧಾನಿಯನ್ನಾಗಿ ಮಾಡುವುದು. ಈ ಗುರಿಯತ್ತ ನಾವು ಕೆಲಸ ಮಾಡುತ್ತೇವೆ ಎಂದರು. ಹೈಕಮಾಂಡ್ ಭೇಟಿಗೆ ಸಮಯ ಕೇಳುವುದಾಗಿ ಹೇಳಿದ ಅವರು, ಇಂದು ಸಂವಿಧಾನ ದಿನ. ಹೀಗಾಗಿ ದೆಹಲಿಗೆ ಹೋಗಲು ಸಾಧ್ಯವಾಗಲಿಲ್ಲ. ನಾಳೆ ಸಚಿವ ಸಂಪುಟ ಸಭೆ ಇದೆ. ಅದರ ನಂತರ ಏನಾದರೂ ಕೆಲಸ ಇದ್ದರೆ ಖಂಡಿತವಾಗಿಯೂ ನಾನು ಹೈಕಮಾಂಡ್ ಭೇಟಿಗೆ ಸಮಯ ಕೇಳುತ್ತೇನೆ. ಏಕೆಂದರೆ ನಾನು 4 ಎಂಎಲ್‌ಸಿ ಸ್ಥಾನಗಳನ್ನು ಅಂತಿಮಗೊಳಿಸಬೇಕಿದೆ. ಕೆಪಿಸಿಸಿ ಟ್ರಸ್ಟ್ ಅನ್ನು ಸಹ ಮರುಸಂಘಟಿಸಲು ಬಯಸುತ್ತೇನೆ. ಪಕ್ಷದ ಆಸ್ತಿಗಳ ಬಗ್ಗೆ ಹಿರಿಯ ನಾಯಕರೊಂದಿಗೆ ಚರ್ಚಿಸಲು ಬಯಸುತ್ತೇನೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತರು ಎಂದು ಪರಿಗಣಿಸಲಾದ ಹಿರಿಯ ಸಚಿವ ಸತೀಶ್ ಜಾರಕಿಹೊಳಿ ಅವರೊಂದಿಗಿನ ಭೇಟಿಯ ಕುರಿತ ಪ್ರಶ್ನೆಗೆ ಉತ್ತರಿಸಿದ ಡಿ.ಕೆ.ಶಿವಕುಮಾರ್, ರಾಜಕೀಯ ಕಾರ್ಯ ತಂತ್ರ ಮತ್ತು ಪಕ್ಷ ಬಲಪಡಿಸುವ ಬಗ್ಗೆ ಚರ್ಚಿಸಲಾಗಿದೆ ಎಂದು ಹೇಳಿದರು.

ಡಾ.ಉಮಾಕಾಂತ್ ಅಮಾನತು

ಈ ಸಂಬಂಧ ಚರ್ಚೆ ನಡೆದು, ಪ್ರಾಧ್ಯಾಪಕ ಡಾ.ಉಮಾಕಾಂತ್ ಅವರನ್ನು ಅಮಾನತುಪಡಿಸಿ ಮುಂದಿನ ಕ್ರಮ ಕೈಗೊಳ್ಳುವ ಬಗ್ಗೆ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಯಿತು.

ದೈಹಿಕ ವಿಭಾಗದ ಚರ್ಚೆ: ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗಕ್ಕೆ ಹೊರಗಿನವರನ್ನು ನಿರ್ದೇಶಕರನ್ನಾಗಿ ನೇಮಕ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಸಲಾಯಿತು.

ಮೈಸೂರು ವಿವಿಯ ದೈಹಿಕ ಶಿಕ್ಷಣ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರಲ್ಲಿ ಒಳಜಗಳ ಹೆಚ್ಚಾಗಿದೆ. ಒಬ್ಬರ ವಿರುದ್ಧ ಒಬ್ಬರು ಆರೋಪ–ಪ್ರತ್ಯಾರೋಪ ಮಾಡುತ್ತಾ, ಮೈಸೂರು ವಿವಿಯ ವರ್ಚಸ್ಸಿಗೆ ಮಸಿ ಬಳಿಯುತ್ತಿದ್ದಾರೆ ಎಂಬ ಆರೋಪಗಳು ಸಭೆಯಲ್ಲಿ ಕೇಳಿಬಂದವು.

ಈ ವಿಭಾಗದಲ್ಲೇ ನಿಯಮ ಮೀರಿ ಒಳಜಗಳದಲ್ಲಿ ತೊಡಗಿಸಿಕೊಳ್ಳುವವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವ ಬಗ್ಗೆಯೂ ಚರ್ಚಿಸಲಾಯಿತು.

ಗುಣಮಟ್ಟದ ಆಹಾರಕ್ಕೆ ತಾಕೀತು: ಮೈಸೂರು ವಿವಿ ವ್ಯಾಪ್ತಿಗೆ ಒಳಪಟ್ಟಿರುವ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಪೂರೈಕೆ ಮಾಡುತ್ತಿಲ್ಲ ಎಂಬುದು ಮೇಲ್ನೋಟಕ್ಕೆ ಕಂಡು ಬಂದಿದೆ. ಹೀಗಾಗಿ ಗುಣಮಟ್ಟದ ಆಹಾರ ಪೂರೈಸುವಂತೆ ಗುತ್ತಿಗೆದಾರರಿಗೆ ತಾಕೀತು ಮಾಡಬೇಕೆಂದು ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ.

ಅಂಬೇಡ್ಕರ್ ಫ್ಲೆಕ್ಸ್, ಬುದ್ಧನ ಪ್ರತಿಮೆ ಹಾನಿ ಪ್ರಕರಣದ ನಿಷ್ಪಕ್ಷಪಾತ ತನಿಖೆಗೆ ಆಗ್ರಹ


ಸುದ್ದಿಗೋಷ್ಠಿಯಲ್ಲಿ ದ್ಯಾವಪ್ಪ ನಾಯಕ ಮಾತನಾಡಿದರು.

ಮೈಸೂರು,ನ.26(ಜಿಎ)– ಚಾಮರಾಜನಗರದ ಜ್ಯೋತಿಗೌಡನಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಫ್ಲೆಕ್ಸ್, ಬುದ್ಧ ಪ್ರತಿಮೆ ಹಾನಿ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ಸಮುದಾಯಗಳ ನಡುವೆ ಸಮನ್ವಯತೆ ಕಾಪಾಡುವಂತೆ ಜಿಲ್ಲಾಡಳಿತಕ್ಕೆ ಕರ್ನಾಟಕ ರಾಜ್ಯ ನಾಯಕ ಜನಾಂಗದ ಹಿತರಕ್ಷಣಾ ವೇದಿಕೆ ಆಗ್ರಹಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ವೇದಿಕೆ ಗೌರವಾಧ್ಯಕ್ಷ ದ್ಯಾವಪ್ಪ ನಾಯಕ ಮಾತನಾಡಿ, ಈ ಘಟನೆಯ ತನಿಖೆಯ ಹೊಣೆ ಹೊತ್ತಿರುವವರು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಎಸ್‌ಐಟಿ ಅಥವಾ ಸಿಐಡಿಗೆ ವಹಿಸಬೇಕು. ಯಾರದೋ ರಾಜಕೀಯ ಪ್ರಭಾವಕ್ಕೆ ಒಳಗಾಗಿ, ಸಾಕ್ಷ್ಯಾಧಾರ ಪರಿಗಣಿಸದೇ ಅದೇ ಗ್ರಾಮದ ಮಂಜ ಎಂಬ ವ್ಯಕ್ತಿಯನ್ನು ಬಂಧಿಸಿರುವುದು ಸರಿಯಲ್ಲ ಎಂದರು.

ಡಾ.ಅಂಬೇಡ್ಕರ್ ಅವರ ಬಗ್ಗೆ ಎಲ್ಲರಿಗೂ ಅಪಾರ ಗೌರವವಿದೆ. ಆದರೆ ಘಟನೆಗೆ ಸಂಬಂಧಿಸಿದಂತೆ ಚಾಮರಾಜನಗರ ತಾಲೂಕಿನ ಹರದನಹಳ್ಳಿ ಗ್ರಾಮದ ಶಿವಣ್ಣ ಎಂಬ ವ್ಯಕ್ತಿಯನ್ನು ತನಿಖೆಗೆ ಕರೆಯಿಸಿಕೊಂಡು ಆರೋಪಿ ವಿರುದ್ಧ ಸಾಕ್ಷಿ ಹೇಳಬೇಕೆಂದು ಒತ್ತಾಯಿಸುತ್ತಿರುವುದು ಖಂಡನೀಯ. ಗ್ರಾಮದಲ್ಲಿ ಶಾಂತಿಯುತ ವಾತಾವರಣ ನೆಲೆಸುವಂತೆ ನೋಡಿಕೊಳ್ಳಲು ಕೂಡಲೇ ಶಾಂತಿ ಸಭೆ ಆಯೋಜಿಸಬೇಕೆಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಪ್ರಭಾಕರ್ ಹುಣಸೂರು, ಶ್ರೀಧರ್ ಚಾಮುಂಡಿಬೆಟ್ಟ, ಕೆರೆಹಳ್ಳಿ ಮಾದೇಶ್, ರಾಜು ಮಾರ್ಕೆಟ್, ಮೂರ್ತಿ, ಕೆ.ಎಸ್.ಗಣೇಶ್, ಜಿ.ಡಿ.ಸ್ವಾಮಿ ಉಪಸ್ಥಿತರಿದ್ದರು.

ಗ್ರಾಮಾಂತರ ಪ್ರದೇಶದಲ್ಲಿ ಹೆಲ್ಮೆಟ್, ಸೀಟ್ ಬೆಲ್ಟ್ ಧರಿಸುವ ಸಂಬಂಧ ಅರಿವು ಮೂಡಿಸಲು ನ.29ಕ್ಕೆ ಬೈಕಥಾನ್

ಮೈಸೂರು,ನ.26(ಜಿಎ)– ಜೀವರಕ್ಷ, ರೋಟರಿ ಮೈಸೂರು ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಹಯೋಗದೊಂದಿಗೆ 8ನೇ ಜೀವರಕ್ಷ ಬೈಕಥಾನ್ ನ.29ರಂದು ಬೆಳಗ್ಗೆ 7ಗಂಟೆಗೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಆರಂಭವಾಗಲಿದೆ ಎಂದು ಜೀವ ರಕ್ಷದ ಮುಖ್ಯಸ್ಥ ಡಾ.ಪ್ರಕಾಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಅಪಘಾತಗಳಿಂದ ಸಾವಿನ ಪ್ರಮಾಣ ಹೆಚ್ಚಳವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಲ್ಲಿ ಅರಿವು ಮೂಡಿಸಲು ಗ್ರಾಮೀಣ ಪ್ರದೇಶದಲ್ಲಿ ಬೈಕಥಾನ್ ನಡೆಸಲು ನಿರ್ಧರಿಸಲಾಗಿದೆ. ಅಲ್ಲಿ ಹೆಲ್ಮೆಟ್ ಮತ್ತು ಸೀಟ್ ಬೆಲ್ಟ್ ಬಳಕೆ ಕುರಿತು ಜಾಗೃತಿ ಮೂಡಿಸಲಾವುದು. ಬೈಕಥಾನ್ ಮಾರ್ಗದುದ್ದಕ್ಕೂ ಬೈಕರ್‌ಗಳು, ಆರೋಗ್ಯ ವೃತ್ತಿಪರರು, ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತೆ, ಪ್ರಥಮ ಚಿಕಿತ್ಸೆ, ತುರ್ತು ಸಂದರ್ಭದಲ್ಲಿ ಹೇಗೆ ಪರಿಸ್ಥಿತಿ ನಿಭಾಯಿಸಬೇಕು ಎಂಬುದರ ಬಗ್ಗೆ ವಿಶೇಷವಾಗಿ ಅರಿವು ಮೂಡಿಸ ಲಾಗುತ್ತದೆ. 2018ರಿಂದ ಆರಂಭವಾದ ಬೈಕಥಾನ್‌ನಿಂದ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಅರಿವು ಮೂಡಿಸಿದ ಪರಿಣಾಮ 4 ಲಕ್ಷಕ್ಕೂ ಹೆಚ್ಚು ಯುವಕರನ್ನು ತಲುಪಿದ್ದೇವೆ. ಮೊದಲ ಮೂರು ವರ್ಷದ ಸಮೀಕ್ಷೆಯಲ್ಲಿ ಬೈಕಥಾನ್ ನಡೆಸಿದ ಪ್ರದೇಶದಲ್ಲಿ ಶೇ.40ರಷ್ಟು ಹೆಲ್ಮೆಟ್ ಬಳಕೆ ಹೆಚ್ಚಳಗೊಂಡಿದೆ ಎಂದರು.

28ರಂದು ಬೆಳಗ್ಗೆ 7 ಗಂಟೆಗೆ ಬೈಕಥಾನ್ ತಂಡವು ಬೆಂಗಳೂರಿನ ಜೀವ ರಕ್ಷ ಕಚೇರಿಯಿಂದ ಹೊರಟು ಕನಕಪುರ ಮಾರ್ಗವಾಗಿ ಮೈಸೂರಿಗೆ ಸಂಜೆ 6.30ಕ್ಕೆ ತಲುಪಿ ಮರುದಿನ ನ.29ರಂದು ಬೆಳಗ್ಗೆ 7 ಗಂಟೆಗೆ ಅರಮನೆ ಮುಂಭಾಗದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಬೈಕಥಾನ್ ಆರಂಭಿಸಿ, ನಂಜನಗೂಡು, ಬೇಗೂರು, ಗುಂಡ್ಲಪೇಟೆಗೆ ತಲುಪಲಿದೆ. ಈ ಮಾರ್ಗದುದ್ದಕ್ಕೂ ಅರಿವು ಮೂಡಿಸಲಾಗುತ್ತದೆ ಎಂದರು.

ಎನ್.ಆರ್.ಕ್ಷೇತ್ರದಲ್ಲಿ ರಾಜ್ಯೋತ್ಸವ

ಮೈಸೂರು,ನ.26 (ಎಸ್‌ಪಿಎನ್)– ಮೈಸೂರು ಎನ್.ಆರ್.ಕ್ಷೇತ್ರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್.ಶಿವರಾಮೇಗೌಡರ ಸಾರಥ್ಯ) ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನ.27ರಂದು ಸಂಜೆ 5 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಈ ವೇಳೆ ಸಂಸದ ಯದುವೀರ ಒಡೆಯರ್, ಶಾಸಕರಾದ ಜಿ.ಟಿ.ದೇವೇಗೌಡ, ಕೆ.ಹರೀಶ್‌ಗೌಡ, ಜಿ.ಡಿ.ಹರೀಶ್‌ಗೌಡ, ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಮೈಸೂರು ಜಿಲ್ಲಾ ವಾಣಿಜ್ಯ ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ವಿಪ್ರ ಮುಖಂಡ ಕೆ.ರಘುರಾಂ ವಾಜಪೇಯಿ, ಕನ್ನಡ ಪರ ಹೋರಾಟಗಾರ ಬಿ.ಎ.ಶಿವಶಂಕರ್ ಉಪಸ್ಥಿತರಿರುತ್ತಾರೆ.

ರೈತರ ಪಾಲಿಗೆ ಸಂಜೀವಿನಿಯಾದ ಹೈನೋದ್ಯಮ

● ಶಾಸಕ ಜಿ.ಟಿ.ದೇವೇಗೌಡ ಬಣ್ಣನೆ ● ಕ್ಷೀರಕ್ರಾಂತಿಯ ಪಿತಾಮಹ ಡಾ.ವರ್ಗೀಸ್ ಕುರಿಯನ್ ಜನ್ಮ ದಿನಾಚರಣೆ ಅಂಗವಾಗಿ ಶ್ರೀಯುತರಿಗೆ ನಮನ ● ಮೈಸೂರು ಮೆಗಾ ಡೈರಿಯಲ್ಲಿ 'ರಾಷ್ಟ್ರೀಯ ಹಾಲು ದಿನಾಚರಣೆ'




ಮೈಸೂರಿನ ಮೆಗಾ ಡೈರಿ ಆವರಣದಲ್ಲಿ ಕ್ಷೀರಕ್ರಾಂತಿಯ ಪಿತಾಮಹ ಡಾ.ವರ್ಗೀಸ್ ಕುರಿಯನ್ ಜನ್ಮದಿನದ ಅಂಗವಾಗಿ ಬುಧವಾರ ಆಯೋಜಿಸಿದ್ದ 'ರಾಷ್ಟ್ರೀಯ ಹಾಲು ದಿನಾಚರಣೆ' ಕಾರ್ಯಕ್ರಮದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅವರು ವರ್ಗೀಸ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. (ಬಲಚಿತ್ರ) ರಾಜ್ಯದ ಉತ್ತಮ ಹಾಲು ಉತ್ಪಾದಕ ಮಹಿಳೆಯರಾದ ಶಿವಾನಿ ರಾಜಶೇಖರ್(ಧಾರವಾಡ), ಡಾ.ಜ್ಯೋತಿ ಉಮೇಶ್(ಮೈಸೂರು), ಮಂಜುಳಾ(ಚಿಕ್ಕಬಳ್ಳಾಪುರ) ಅವರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮೈಸೂರು,ನ.26(ಎಂಟಿವೈ)–ಅತಿವೃಷ್ಟಿ–ಅನಾವೃಷ್ಟಿಯಿಂದಾಗಿ ಬೆಳೆ ನಷ್ಟಕ್ಕೆ ಸಿಲುಕುವ ರೈತರಿಗೆ ಹೈನುಗಾರಿಕೆ ಸಂಜೀವಿನಿಯಾಗಿದ್ದು, ಇದರಿಂದ ಸಾಕಷ್ಟು ಮಹಿಳೆಯರು ಸ್ವಾವಲಂಬಿಗಳಾಗಿ ಹೊರ ಹೊಮ್ಮಲು ಸಹಕಾರಿಯಾಗಿದೆ ಎಂದು ಶಾಸಕ, ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ.ದೇವೇಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮೆಗಾ ಡೈರಿ ಆವರಣದಲ್ಲಿ ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ಮತ್ತು ಭಾರತೀಯ ಡೇರಿ ಅಸೋಸಿಯೇಷನ್, ಕರ್ನಾಟಕ ರಾಜ್ಯ ಶಾಖೆ ಸಂಯುಕ್ತಾಶ್ರಯದಲ್ಲಿ ಕ್ಷೀರ ಕ್ರಾಂತಿಯ ಪಿತಾಮಹ ಡಾ.ವರ್ಗೀಸ್ ಕುರಿಯನ್ ಜನ್ಮ ದಿನದ ಅಂಗವಾಗಿ ಆಯೋಜಿಸಿದ್ದ 'ರಾಷ್ಟ್ರೀಯ ಹಾಲು ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ, ಡಾ.ವರ್ಗೀಸ್ ಕುರಿಯನ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ರೈತರು ಅತಿವೃಷ್ಟಿ–ಅನಾವೃಷ್ಟಿಯಿಂದ ಉಂಟಾಗುವ ಬೆಳೆ ನಷ್ಟದಿಂದ ತತ್ತರಿಸುತ್ತಲೇ ಇದ್ದಾರೆ. ಇಂತಹ ರೈತ ಕುಟುಂಬಗಳಿಗೆ ಎಲ್ಲಾ ಸಮಯದಲ್ಲೂ ಹೈನುಗಾರಿಕೆ ಕೈ ಹಿಡಿಯುತ್ತಲೇ ಇದೆ. ಅಲ್ಲದೆ, ಮಹಿಳೆಯರು ಸ್ವಾವಲಂಬಿಗಳಾಗಲು ಹೈನೋದ್ಯಮ ಸಹಕಾರಿಯಾಗಿದೆ. ಮಕ್ಕಳ ವಿದ್ಯಾಭ್ಯಾಸ, ಕೃಷಿ, ಆರೋಗ್ಯ ಹಾಗೂ ತುರ್ತು ವೆಚ್ಚದ ವೇಳೆ ಕುಟುಂಬ ಕಾಪಾಡಲು ಸಹಕಾರಿಯಾಗಿದೆ ಎಂದರು.

ಹೈನುಗಾರಿಕೆ ಪಿತಾಮಹ ಡಾ.ವರ್ಗೀಸ್ ಕುರಿಯನ್ ಅವರಿಂದ ಹಾಲಿನ ಕ್ಷೇತ್ರ ಇಂದು ದೇಶದಾದ್ಯಂತ ಒಂದು ದೊಡ್ಡ ಉದ್ಯಮವಾಗಿ ಬೆಳೆದಿದೆ. ಅವರನ್ನು ಎಲ್ಲರೂ ಸ್ಮರಿಸಬೇಕು. ಈ ಹಿಂದೆ ಎಂ.ಕೃಷ್ಣಪ್ಪ ಕೇಂದ್ರದಲ್ಲಿ ಕೃಷಿ ಮಂತ್ರಿಯಾಗಿದ್ದ ವೇಳೆ ಹಾಲೆಂಡ್ ತಳಿಯೊಂದನ್ನು ಕರ್ನಾಟಕಕ್ಕೆ ಪರಿಚಯಿಸಿದರು. ಅಲ್ಲದೆ, ರಾಜ್ಯದಲ್ಲಿ ಕೆಎಂಎಫ್ ಸ್ಥಾಪನೆ ಮಾಡಿದರು. ಹೆಚ್.ಡಿ.ದೇವೇಗೌಡ ಪ್ರಧಾನಿಯಾಗಿದ್ದ ವೇಳೆ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಕೆಎಂಎಫ್ ಅಧ್ಯಕ್ಷರಾಗಿದ್ದಾಗ ಸ್ಟೇಪ್ ಯೋಜನೆ ಜಾರಿಗೆ ತಂದು, ಮಹಿಳಾ ಉತ್ಪಾದಕರು ದೇಶದಾದ್ಯಂತ ಪ್ರವಾಸ ಮಾಡುವಂತೆ ಮಾಡಿದರು. ಇದರಿಂದ ಹೆಚ್ಚು ಹೈನೋದ್ಯಮ ಬೆಳವಣಿಗೆಗೆ ಅನೂಕೂಲವಾಯಿತು. ಈ ಕಾರಣಕ್ಕಾಗಿಯೇ 167 ಉತ್ಪನ್ನಗಳ ಪ್ರಚಾರ ಮಾಡಿ ಮಾರಾಟ ಮಾಡುತ್ತಿದ್ದಾರೆ. ಈ ಹಿಂದೆ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ರೈತರಿಗೆ 2 ರೂ. ಈಗ ಮುಖ್ಯಮಂತ್ರಿ ಸಿದ್ದರಾಮಯ್ಯ 3.ರೂ ಪ್ರೋತ್ಸಾಹ ಧನ ನೀಡಿದ್ದಾರೆ. ಅಲ್ಲದೆ, ನೇರವಾಗಿ 5 ರೂ. ರೈತರಿಗೆ ಹೆಚ್ಚುವರಿ ಸಿಗುತ್ತಿದೆ. ಮಕ್ಕಳಿಗೆ ಕ್ಷೀರಭಾಗ್ಯ ಜಾರಿಗೊಳಿಸುವ ಯೋಜನೆ ಮೂಲಕ ಡೇರಿಗಳ ಉಳಿವಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

> “ಸೊಸೈಟಿ ಕಾರ್ಯದರ್ಶಿಯಾಗಿ ಬಡವರ ಪರ ಸಾಲ, ಸಕ್ಕರೆ, ಸೀಮೆಎಣ್ಣೆ ಕೊಟ್ಟಿದ್ದರ ಫಲವಾಗಿ ಹಣವಂತರ ಎದುರು ನನ್ನನ್ನು ಈ ಎತ್ತರಕ್ಕೆ ಬೆಳೆಸಿದ್ದಾರೆ. ಬಡವರು, ಅನಾಥರ ಕಣ್ಣೀರು ಒರೆಸಿದರೆ ದೇವಾಲಯಗಳಿಗೆ ಹೋಗುವ ಅವಶ್ಯಕತೆಯಿಲ್ಲ. ದೇಶ ಅಭಿವೃದ್ಧಿ ಕಾಣಬೇಕಾದರೆ ಸದ್ಯದ ಮಟ್ಟಿಗೆ ಇರುವ ಏಕೈಕ ಕ್ಷೇತ್ರ ಎಂದರೆ ಅದು ಹಾಲಿನ ಕ್ಷೇತ್ರವಾಗಿದ್ದು, ಇಂತಹ ಕ್ಷೇತ್ರ ಉಳಿಯಲೇಬೇಕಿದೆ. **–ಜಿ.ಟಿ.ದೇವೇಗೌಡ, ಶಾಸಕ**

ಇದೇ ವೇಳೆ ಐಡಿಎ ದಕ್ಷಿಣ ವಲಯ ಅಧ್ಯಕ್ಷ ಡಾ.ಸತೀಶ್ ಕುಲಕರ್ಣಿ ಮಾತನಾಡಿ, ಪ್ರಪಂಚದಲ್ಲಿಯೇ ಹಾಲು ಉತ್ಪಾದನೆಯಲ್ಲಿ 20 ವರ್ಷದಿಂದಲೂ ನಮ್ಮ ದೇಶ ಮೊದಲ ಸ್ಥಾನದಲ್ಲಿದೆ. ದೇಶದಲ್ಲಿ ಹೈನುಗಾರಿಕೆಯಿಂದ 12 ಲಕ್ಷ ಕೋಟಿ ರೂ. ಆದಾಯ ಬರುತ್ತಿದೆ. ಯಾವ ದೇಶದಲ್ಲೂ ಹಾಲಿನ ಉತ್ಪನ್ನ ಹೆಚ್ಚಳ ಆಗುತ್ತಿಲ್ಲ. ಈ ಬಗ್ಗೆ ಮಾರ್ಗದರ್ಶನ ನೀಡಿದವರು ಕುರಿಯನ್. 17 ರಾಷ್ಟ್ರೀಯ ಸಂಸ್ಥೆ ಪ್ರಾರಂಭಿಸಿದ ಕೀರ್ತಿ ಅವರದ್ದು, ಅಂತಾರಾಷ್ಟ್ರೀಯ ಮಟ್ಟಕ್ಕೆ ಡೇರಿ ಉದ್ಯಮವನ್ನು ಕೊಂಡೊಯ್ದರು. ಆಹಾರ ಉದ್ಯಮದಲ್ಲಿ ನೊಬೆಲ್ ಮಾದರಿಯ ಕ್ಷೀರ ಕ್ರಾಂತಿಯ ಪಿತಾಮಹ ಪ್ರಶಸ್ತಿ ಪಡೆದು, 18 ಗೌರವ ಡಾಕ್ಟರೇಟ್ ಪಡೆದ ಮಹನೀಯರನ್ನು ಸ್ಮರಿಸುವ ದಿನ ಇದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯದ ಉತ್ತಮ ಹಾಲು ಉತ್ಪಾದಕ ಮಹಿಳೆಯರಾದ ಶಿವಾನಿ ರಾಜಶೇಖರ್(ಧಾರವಾಡ), ಡಾ.ಜ್ಯೋತಿ ಉಮೇಶ್(ಮೈಸೂರು), ಮಂಜುಳಾ (ಚಿಕ್ಕಬಳ್ಳಾಪುರ) ಅವರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಿವೃತ್ತ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಚನ್ನೇಗೌಡ, ಬಿ.ಎಸ್.ಗಂಗಾಧರ್, ಎನ್‌ಡಿಡಿಬಿ ನಿರ್ದೇಶಕ ಡಾ.ಬೆಳವಾಡಿರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮೈಮುಲ್ ಅಧ್ಯಕ್ಷ ಕೆ.ಈರೇಗೌಡ, ನಿರ್ದೇಶಕರಾದ ಎ.ಟಿ.ಸೋಮಶೇಖರ, ಕೆ.ಜಿ.ಮಹೇಶ್, ಕೆ.ಉಮಾಶಂಕರ್, ಸಿ.ಓಂ.ಪ್ರಕಾಶ್, ಪಿ.ಎಂ.ಪ್ರಸನ್ನ, ಆರ್.ಚೆಲುವರಾಜು, ಕೆ.ಎಸ್.ಕುಮಾರ್, ದ್ರಾಕ್ಷಯಿಣಿ ಬಸವರಾಜಪ್ಪ, ಲೀಲಾ ಬಿ.ಕೆ.ನಾಗರಾಜು, ನೀಲಾಂಬಿಕೆ ಮಹೇಶ್ ಕುರಹಟ್ಟಿ, ಶಿವಗಾಮಿ ಷಣ್ಮುಗಂ, ಬಿ.ಎನ್.ಸದಾನಂದ, ಬಿ.ಗುರುಸ್ವಾಮಿ, ಬಿ.ಎ.ಪ್ರಕಾಶ್, ಎ.ಬಿ.ಮಲ್ಲಿಕಾ ರವಿಕುಮಾರ್ ಇನ್ನಿತರರು ಪಾಲ್ಗೊಂಡಿದ್ದರು.

ಸಂವಿಧಾನವ ಸೈನಿಕರಂತೆ ರಕ್ಷಿಸಬೇಕಿದೆ

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಪ್ರತಿಪಾದನೆ



ಮುಕ್ತ ವಿವಿಯಲ್ಲಿ ಸಂವಿಧಾನ ದಿನಾಚರಣೆ ಆಚರಿಸಲಾಯಿತು.

ಮೈಸೂರು, ನ.26(ಎಂಕೆ)– ಸಂವಿಧಾನ ವಿರೋಧಿ ಮನಸ್ಸು ದೇಶಕ್ಕೆ ಮಾರಕವಾಗಿದ್ದು, ನಮ್ಮೆಲ್ಲರ ಭವಿಷ್ಯವಾದ ಭಾರತ ಸಂವಿಧಾನವನ್ನು ಸೈನಿಕರಂತೆ ರಕ್ಷಿಸಬೇಕಿದೆ ಎಂದು ಶಾಸಕ ಪಿ.ಎಂ.ನರೇಂದ್ರ ಸ್ವಾಮಿ ಕರೆ ನೀಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದ ಆಶಯ ಪೂರ್ಣಗೊಂಡಿದೆಯೇ.. ಬಾಬಾ ಸಾಹೇಬರ ಆಸೆ ಈಡೇರಿದೆಯೇ.. ವಿದ್ಯಾವಂತರಲ್ಲಿ ಜಾಗೃತಿ ಮೂಡಿದೆಯೇ ಎಂಬುದೆಲ್ಲವನ್ನು ಅವಲೋಕನ ಮಾಡಬೇಕಿದೆ ಎಂದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಸಮಾನತೆ ಆಶಯಕ್ಕೆ ತಳಹದಿ ಹಾಕುವ ಮೂಲಕ ರಾಷ್ಟ್ರಕ್ಕೆ ಮಾದರಿಯಾದರೆ, ಅಂಬೇಡ್ಕರ್ ಜಗತ್ತಿನ ಜ್ಞಾನವನ್ನು ಸಂಪಾದಿಸಿ ಉತ್ಕೃಷ್ಟವಾದ ಸಂವಿಧಾನ ಬರೆದರು. ಸತತ 17 ದಿನಗಳ ಕಾಲ ಸಂವಿಧಾನದ ಪ್ರತಿ ವಿಧಿಗಳ ಪ್ರಶ್ನೆಗಳಿಗೆ ಉತ್ತರಿಸಿದರು ಎಂದು ಸ್ಮರಿಸಿದರಲ್ಲದೆ ದೇಶದಲ್ಲಿ ಇವತ್ತಿಗೂ ಸಮಾನತೆ ಬಂದಿಲ್ಲ. ಜಾತಿ, ಧರ್ಮದ ಹೆಸರಿನಲ್ಲಿ ರಾಷ್ಟ್ರವನ್ನು ಛಿದ್ರ ಮಾಡುತ್ತಿದ್ದೇವೆ. ಜಾತ್ಯಾತೀತ ಭಾರತೀಯ ಭಾವನೆ ಇದ್ದರಷ್ಟೇ ದೇಶ ಉಳಿಯುತ್ತದೆ ಎಂದು ಹೇಳಿದರು.

ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಸಾಮಾಜಿಕ ಆರ್ಥಿಕ ಬದಲಾವಣೆ ಅಧ್ಯಯನ ಸಂಸ್ಥೆಯ ಪ್ರೊ.ಕೃಷ್ಣರಾಜ್, ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ್, ಶೈಕ್ಷಣಿಕ ಡೀನ್ ಪ್ರೊ.ರಾಮನಾಥಂ ನಾಯ್ಡು, ಪರೀಕ್ಷಾಂಗ ಕುಲಸಚಿವ ಡಾ.ಆನಂದಕುಮಾರ್, ಹಣಕಾಸು ಅಧಿಕಾರಿ ಪ್ರೊ.ನಿರಂಜನ, ಅಧ್ಯಯನ ಕೇಂದ್ರದ ಡೀನ್ ಡಾ.ಚಂದ್ರೇಗೌಡ, ಡಾ.ಶಿವ ಕುಮಾರ ಸ್ವಾಮಿ, ಡಾ.ರಮ್ಯಾ ಮತ್ತಿತರರಿದ್ದರು.

ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಆತಂಕ ಪರಿಸ್ಥಿತಿಯಲ್ಲಿದೆ

ವಿಶ್ವ ಮೈತ್ರಿ ಬುದ್ಧವಿಹಾರದ ಡಾ.ಕಲ್ಯಾಣಸಿರಿ ಬಂತೇಜಿ ಅಭಿಮತ



ಮೈಸೂರು ಜಿಲ್ಲಾ ಕಾಂಗ್ರೆಸ್ ಭವನದಲ್ಲಿ 'ಭಾರತ ಸಂವಿಧಾನ ಬಚಾವೋ ದಿವಸ್' ಆಚರಿಸಲಾಯಿತು.

ಮೈಸೂರು, ನ.26(ಎಂಕೆ)– ದೇಶದಲ್ಲಿ ಸಂವಿಧಾನವನ್ನು ಉಳಿಸಿಕೊಳ್ಳಬೇಕಾದ ಸಂದಿಗ್ಧ ಪರಿಸ್ಥಿತಿ ನಿರ್ಮಾಣವಾಗಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆ ಆತಂಕದಲ್ಲಿದೆ ವಿಶ್ವಮೈತ್ರಿ ಬುದ್ಧವಿಹಾರದ ಡಾ.ಕಲ್ಯಾಣಸಿರಿ ಬಂತೇಜಿ ತಿಳಿಸಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಭಾರತ ಸಂವಿಧಾನ ಬಚಾವೋ ದಿವಸ್' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಹುಸಂಸ್ಕೃತಿಯ ಭಾರತದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಸಬೇಕಾದರೆ ಸಂವಿಧಾನದ ನಿಲುವು ಅತ್ಯಗತ್ಯವಾಗಿದೆ ಎಂದರು.

ದೇಶದಲ್ಲಿಂದು ಯಾವಾಗ ನಮ್ಮ ಸಂತೋಷವನ್ನು ಕಳೆದುಕೊಂಡು ಸ್ವಾತಂತ್ರ್ಯ ಪೂರ್ವಕ್ಕೆ ಹೋಗುತ್ತೇವೋ ಎಂಬ ಆತಂಕ ಮನೆ ಮಾಡಿದೆ. ಜಾತ್ಯಾತೀತ ಭಾವನೆ, ಸಾಮರಸ್ಯ, ಸಹಜೀವನ ಕಣ್ಮರೆಯಾಗುತ್ತಿದೆ. ಅಕಸ್ಮಾತ್ ದೇಶದ ಸಂವಿಧಾನ ಕಳೆದುಕೊಂಡರೆ ಪ್ರಜಾಸತ್ತಾತ್ಮಕ ನಿಲುವುಗಳು ನಾಶವಾಗಿ ಅಸಮಾನತೆ, ಕೋಮುವಾದ, ಅರಾಜಕತೆ ಸೃಷ್ಟಿಯಾಗಲಿದೆ ಎಂಬ ಬಾಬಾ ಸಾಹೇಬರ ಮಾತುಗಳು ನಿಜವಾಗಲಿವೆ. ಆದ್ದರಿಂದ ಭಾರತ ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ ಎಂದರು.

ದೇಶ ಎಂದರೆ ಮನುಷ್ಯ ಎಂಬುದನ್ನರಿತು ಮಾನವೀಯತೆ ಮೌಲ್ಯವನ್ನು ಅಳವಡಿಸಿಕೊಳ್ಳಬೇಕು. ಸಂವಿಧಾನ ಜಾರಿಗೊಂಡು 76 ವರ್ಷವಾಗಿದೆ. ಆಗಲೇ ಸಂವಿಧಾನ ರಕ್ಷಣೆ ಮಾಡುವ ಪರಿಸ್ಥಿತಿ ಬಂದಿದೆ ಎಂದರೆ ನೋವುಂಟಾಗುತ್ತದೆ. ಸಾಮಾಜಿಕ, ಆರ್ಥಿಕ, ರಾಜಕೀಯ ಸಮಾನತೆಯೊಂದಿಗೆ ದೇಶದ ಪ್ರತಿಯೊಬ್ಬ ನಾಗರಿಕರು ನೆಮ್ಮದಿಯಿಂದ ನಿದ್ರಿಸಬೇಕಾದರೆ ಡಾ.ಅಂಬೇಡ್ಕರ್ ರಚಿತ ಸಂವಿಧಾನ ಸದಾ ಇರಬೇಕು ಎಂದು ಪ್ರತಿಪಾದಿಸಿದರು.

ಜಗತ್ತಿನ ಶ್ರೇಷ್ಠ ಸಂವಿಧಾನ: ಸಾಹಿತಿ ಪ್ರೊ.ಜಯಪ್ರಕಾಶ್‌ಗೌಡ ಮಾತನಾಡಿ, ಸಮಾನತೆಯ ಪರಿಕಲ್ಪನೆಯನ್ನೊಳಗೊಂಡ ಭಾರತದ ಸಂವಿಧಾನ ಜಗತ್ತಿನ ಎಲ್ಲಾ ಸಂವಿಧಾನಗಳಿಗಿಂತ ಶ್ರೇಷ್ಠ ಸಂವಿಧಾನವಾಗಿದೆ. ಇಂತಹ ಸಂವಿಧಾನವನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ. ಅದಕ್ಕೂ ಮೊದಲು ಸಂವಿಧಾನವನ್ನು ಓದಬೇಕು, ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾಂಗ್ರೆಸ್ ಸದಾ ಚಲಾವಣೆ ಸಂಸ್ಥೆ: ದೇಶದ ಸಂವಿಧಾನವನ್ನು ಉಳಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಆಂದೋಲನ ನಡೆಸುತ್ತಿದೆ. ಏಕೆಂದರೆ ಕಾಂಗ್ರೆಸ್ ಕೇವಲ ರಾಜಕೀಯ ಪಕ್ಷವಲ್ಲ. ಈ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಪಕ್ಷ ಮಾತ್ರವಲ್ಲದೆ ದೇಶ ಮತ್ತು ದೇಶದ ಸಂವಿಧಾನವನ್ನು ಉಳಿಸಲು ಸದಾ ಚಲಾವಣೆಯಲ್ಲಿರುವ ಸಂಸ್ಥೆಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.



ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯಲ್ಲಿ ಬುಧವಾರ ಸಂವಿಧಾನ ದಿನ ಆಚರಿಸಲಾಯಿತು. ವಿದ್ಯಾರ್ಥಿಗಳಿಗೆ ಸಂವಿಧಾನದ ಮಹತ್ವ ತಿಳಿಸಿ, ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಸೆಸ್ಕ್ ವತಿಯಿಂದ ಸಂವಿಧಾನ ದಿನಾಚರಣೆ



ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ನಿಯಮಿತ(ಸೆಸ್ಕ್)ದ ವತಿಯಿಂದ ಸಂವಿಧಾನ ದಿನಾಚರಣೆ ಆಚರಿಸಲಾಯಿತು.

ಮೈಸೂರು, ನ.26(ಎಂಕೆ)– ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ನಿಯಮಿತ (ಸೆಸ್ಕ್)ಕಚೇರಿಯಲ್ಲಿ ಸಂವಿಧಾನ ಪೀಠಿಕೆಯ ಬೋಧನೆ ಹಾಗೂ ಪ್ರತಿಜ್ಞಾ ವಿಧಿ ಸ್ವೀಕರಿಸುವ ಮೂಲಕ 'ಸಂವಿಧಾನ ದಿನಾಚರಣೆ' ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಂ.ಮುನಿಗೋಪಾಲ್ ರಾಜು, ಸಂವಿಧಾನ ಪೀಠಿಕೆಗೆ ಪುಷ್ಪಾರ್ಚನೆ ಸಲ್ಲಿಸಿ, ಪೂರ್ವ ಪೀಠಿಕೆ ಪಠಿಸಿದರು. ಇದೇ ವೇಳೆ ಅಕಾಲಿಕ ಮರಣಕ್ಕಿಡಾದ ಐಎಎಸ್ ಅಧಿಕಾರಿ ಮಹಾಂತೇಶ್ ಬೀಳಗಿ ಅವರ ನಿಧನಕ್ಕೆ ಮೌನಾಚರಣೆ ಮೂಲಕ ಸಂತಾಪ ಸೂಚಿಸಲಾಯಿತು. ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ.ದಿವಾಕರ್, ಮುಖ್ಯ ಪ್ರಧಾನ ವ್ಯವಸ್ಥಾಪಕ(ತಾಂತ್ರಿಕ)ರಾದ ಶರಣಮ್ಮ ಎಸ್.ಜಂಗಿನ, ಮುಖ್ಯ ಆರ್ಥಿಕ ಅಧಿಕಾರಿ ಜಿ.ರೇಣುಕಾ, ಆಂತರಿಕ ಲೆಕ್ಕ ಪರಿಶೋಧನೆ ವಿಭಾಗದ ಮುಖ್ಯ ಪ್ರಧಾನ ವ್ಯವಸ್ಥಾಪಕಿ ಲಿಂಗರಾಜಮ್ಮ, ಪ್ರಧಾನ ವ್ಯವಸ್ಥಾಪಕರಾದ ಲೋಕೇಶ್, ರಾಮಸ್ವಾಮಿ ಮತ್ತಿತರರಿದ್ದರು.



ಮೈಸೂರು ತಾಲೂಕು ಜಯಪುರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಡಾ.ಅಂಬೇಡ್ಕರ್ ಮತ್ತು ಸಂವಿಧಾನ ಪೀಠಿಕೆಗೆ ಪುಷ್ಪನಮನ ಸಲ್ಲಿಸಿ, ಸಂವಿಧಾನ ಪೀಠಿಕೆ ಪಠಣ ಮಾಡಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಮಾದೇವಯ್ಯ, ಸದಸ್ಯರಾದ ಬಸವಣ್ಣ, ಮರಿಸಿದ್ದೇಗೌಡ, ಎಂ.ನಾಗರಾಜು, ಬಿ.ರೇಣುಕಾ, ಪಿಡಿಓ ಬಸವಣ್ಣ, ಕಾರ್ಯದರ್ಶಿ ವೈ.ಕೆ.ಅನ್ನಪೂರ್ಣ, ಲೆಕ್ಕ ಸಹಾಯಕ ಆನಂದೇಗೌಡ, ಗ್ರಂಥಾಲಯ ಮೇಲ್ವಿಚಾರಕ ಎಸ್.ಸೋಮೇಗೌಡ, ಮುರುಡಪ್ಪ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.



ಶುಭಾಶಯ

ಶಾಸಕ ಜಿ.ಟಿ.ದೇವೇಗೌಡರಿಗೆ ಬಿಜೆಪಿ ಮುಖಂಡರಾದ ಇಂಡವಾಳು ಸಚ್ಚಿದಾನಂದ, ಅಜಿತ್ ಶಂಕರೇಗೌಡ, ಭೈರತಿ ಲಿಂಗರಾಜು ಸ್ನೇಹಿತರು ಹುಟ್ಟುಹಬ್ಬದ ಶುಭಾಶಯ ಕೋರಿದರು.

ದೇಶ - ವಿದೇಶ

ಬ್ಯಾಸ್ಕೆಟ್‌ಬಾಲ್ ಕಂಬ ಬಿದ್ದು ಅಂಕಣದಲ್ಲೇ ಪ್ರಾಣಬಿಟ್ಟ ರಾಷ್ಟ್ರ ಮಟ್ಟದ ಆಟಗಾರ!



ಚಂಡೀಗಢ: ಹರಿಯಾಣದ ರೋಹ್ಟಕ್‌ನ ಬ್ಯಾಸ್ಕೆಟ್‌ಬಾಲ್ ಅಂಕಣದಲ್ಲಿ ಅಭ್ಯಾಸದ ಸಮಯದಲ್ಲಿ ಕಬ್ಬಿಣದ ಕಂಬ ಎದೆಯ ಮೇಲೆ ಬಿದ್ದು ರಾಷ್ಟ್ರ ಮಟ್ಟದ ಆಟಗಾರ ದುರಂತ ಸಾವಿಗೀಡಾಗಿರುವ ಧಾರುಣ ಘಟನೆ ನಡೆದಿದೆ. ಮಂಗಳವಾರ ನಡೆದ ಈ ದುರಂತ ಘಟನೆ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಬ್ ಜೂನಿಯರ್ ರಾಷ್ಟ್ರೀಯ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿದ್ದ 16 ವರ್ಷದ ಹಾರ್ದಿಕ್ ಸಾವಿಗೀಡಾಗಿದ್ದಾನೆ.

ಕಂಬ ಕುಸಿದು ಬೀಳಲು ಕಾರಣವಾದ ಸಂದರ್ಭಗಳು, ಉಪಕರಣಗಳ ಸ್ಥಿತಿ ಸೇರಿದಂತೆ ಎಲ್ಲವನ್ನೂ ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ, ಮೊದಲು ಈ ವಿಷಯಕ್ಕೆ ಸಂಬಂಧಿಸಿದ ಎಲ್ಲ ವಿವರಗಳನ್ನು ಸಂಗ್ರಹಿಸುವುದಾಗಿ ಹೇಳಿದರು. ಸಿಸಿಟಿವಿ ದೃಶ್ಯಾವಳಿಯಲ್ಲಿ 16 ವರ್ಷದ ಬಾಲಕ ಕಬ್ಬಿಣದ ಕಂಬದ ಬಳಿ ಜಂಪ್ ಮಾಡಿ ಬ್ಯಾಸ್ಕೆಟ್ ಹಿಡಿದು ನೇತಾಡಲು ಯತ್ನಿಸಿದಾಗ, ಕಂಬದ ಅರ್ಧಭಾಗ ಆತನ ಮೇಲೆ ಬಿದ್ದಿದೆ. ಕೂಡಲೇ ಅಲ್ಲೇ ಇದ್ದ ಇತರ ಆಟಗಾರರು ಕಂಬವನ್ನು ಎತ್ತಿಹಿಡಿದು ಆತನನ್ನು ರಕ್ಷಿಸಿದ್ದಾರೆ. ಈ ವೇಳೆ ಪೂರ್ತಿ ಕಂಬ ಕೆಳಗೆ ಬಿದ್ದಿದೆ.

ಸುಮಾತ್ರಾದಲ್ಲಿ ಪ್ರವಾಹ, ಭೂಕುಸಿತ: 17 ಸಾವು

ಮೆಡಾನ್: ಇಂಡೋನೇಷ್ಯಾದ ಸುಮಾತ್ರಾ ದ್ವೀಪದಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಪ್ರವಾಹ–




ಭೂಕುಸಿತ ಸಂಭವಿಸಿದ್ದು, ಕನಿಷ್ಠ 17 ಜನರು ಮೃತಪಟ್ಟು, 6 ಮಂದಿ ಗಾಯಗೊಂಡಿದ್ದಾರೆ.

ರಸ್ತೆಗೆ ಮಣ್ಣು ಕುಸಿದಿದ್ದು, ಬಂಡೆಗಳು ಉರುಳಿವೆ. ಮರಗಳು ಅಡ್ಡಲಾಗಿ ಬಿದ್ದಿರುವುದರಿಂದ ಸ್ಥಳಕ್ಕೆ ತೆರಳಲು ರಕ್ಷಣಾ ಸಿಬ್ಬಂದಿ ಹರಸಾಹಸ ಮಾಡಬೇಕಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ರಕ್ಷಣಾ ಸಿಬ್ಬಂದಿಯು ಐವರ ಮೃತದೇಹಗಳನ್ನು ಪತ್ತೆಹಚ್ಚಿದ್ದು, ಗಾಯಗೊಂಡಿದ್ದ ಮೂವರನ್ನು ರಕ್ಷಿಸಿದ್ದಾರೆ. ನಾಪತ್ತೆಯಾಗಿರುವ ನಾಲ್ವರಿಗಾಗಿ ಶೋಧ ನಡೆಸಿದ್ದಾರೆ ಎಂದಿದ್ದಾರೆ. ಪ್ರವಾಹದಿಂದಾಗಿ 2,470 ಮನೆಗಳಿಗೆ ಹಾನಿಯಾಗಿದ್ದು, ಹಲವು ಕಟ್ಟಡಗಳು ಮುಳುಗಿವೆ. ಗುಡ್ಡಗಾಡು ಪ್ರದೇಶದಲ್ಲಿ ಭೂಕುಸಿತ ಸಂಭವಿಸಿದ್ದು, 17 ಮನೆಗಳು ನೆಲಸಮವಾಗಿವೆ ಎಂದು ಮೂಲಗಳು ತಿಳಿಸಿವೆ. ಪ್ರತಿಕೂಲ ಹವಾಮಾನವು ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗಿದೆ.

ನಕಲಿ ಪಾಸ್‌ಪೋರ್ಟ್ ಬಳಸಿ ಭಾರತದಿಂದ ಒಮನ್‌ಗೆ ತೆರಳಲು ಯತ್ನಿಸಿದ ನೇಪಾಳ ಮಹಿಳೆ ಸೆರೆ

ಮುಂಬೈ: ನಕಲಿ ಭಾರತೀಯ ಪಾಸ್‌ಪೋರ್ಟ್




ಬಳಸಿ ಒಮನ್‌ಗೆ ತೆರಳಲು ಯತ್ನಿಸಿದ ನೇಪಾಳದ ಮಹಿಳೆಯನ್ನು ಮುಂಬೈ ವಿಮಾನ ನಿಲ್ದಾಣದಲ್ಲಿ ಪೊಲೀಸರು ಬಂಧಿಸಿದ್ದಾರೆ. ಕಳೆದ ವಾರ ಮಸ್ಕತ್‌ಗೆ ತೆರಳಲು ಮಹಿಳೆ, ಶಿವಾಜಿ ಮಹಾರಾಜ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ವಲಸೆ ವಿಭಾಗದ ಕೌಂಟರ್‌ಗೆ ಬಂದಿದ್ದರು.

ಕಾಜಲ್ ಎಂದು ಗುರುತಿಸಿಕೊಂಡ ಅವರು, ಭಾರತೀಯ ಪಾಸ್‌ಪೋರ್ಟ್ ಸಲ್ಲಿಸಿದ್ದಾರೆ. ಅದರಲ್ಲಿ ಆಕೆಯ ಜನ್ಮಸ್ಥಳ ಹಿಮಾಚಲ ಪ್ರದೇಶದ ನೋಹ್ರಾ ಎಂಬುದಾಗಿ ಉಲ್ಲೇಖಿಸಲಾಗಿತ್ತು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆದರೆ, ಆಕೆಯ ಮುಖಲಕ್ಷಣಗಳು ನೇಪಾಳದವರಂತೆ ಕಾಣಿಸಿ, ಅನುಮಾನಗೊಂಡ ಅಧಿಕಾರಿಗಳು ಹೆಚ್ಚಿನ ಪರಿಶೀಲನೆಗೆ ಸಂಬಂಧಪಟ್ಟ ಅಧಿಕಾರಿಗಳ ಬಳಿ ಕಳುಹಿಸಿದ್ದಾರೆ. ಅಲ್ಲಿ ವಿಚಾರಣೆ ನಡೆಸಿದಾಗ ಆಕೆ ಭಾರತೀಯರಲ್ಲ, ನೇಪಾಳದ ಪ್ರಜೆ ಎಂದು ಒಪ್ಪಿಕೊಂಡಿದ್ದಾರೆ. ಬಳಿಕ, ಆಕೆಯ ನಿಜವಾದ ಹೆಸರು ಕಾಜಲ್ ಲಾಮಾ ಮತ್ತು ನೇಪಾಳದ ಪಾರ್ಸಾ ಜಿಲ್ಲೆಯವರು ಎಂದು ಹೇಳಿದ್ದಾರೆ.

ಬಹುಮಹಡಿ ಕಟ್ಟಡಗಳಲ್ಲಿ ಬೆಂಕಿ ಅವಘಡ; 13 ಸಾವು

ಬೀಜಿಂಗ್: ಹಾಂಕಾಂಗ್ ವಸತಿ ಸಮುಚ್ಚಯವೊಂದ



ರಲ್ಲಿ ಏಳು ಬಹುಮಹಡಿ ಅಪಾರ್ಟ್‌ಮೆಂಟ್ ಕಟ್ಟಡಗಳಿಗೆ ಬೆಂಕಿ ಬಿದ್ದು, 13 ಜನರು ಸಾವನ್ನಪ್ಪಿದ್ದಾರೆ. ಹಲವರು ಕಟ್ಟಡದಲ್ಲಿ ಸಿಲುಕಿಕೊಂಡಿದ್ದಾರೆ. ಬೆಂಕಿ ಅವಘಡದಿಂದ ಸ್ಥಳದಲ್ಲೇ 9 ಮಂದಿ ಮೃತಪಟ್ಟಿದ್ದರು. ಆಸ್ಪತ್ರೆಯಲ್ಲಿ ನಾಲ್ವರು ಸಾವಿಗೀಡಾದರು. 15 ಮಂದಿ ಗಂಭೀರ ಗಾಯಗೊಂಡಿದ್ದು, ಅವರಿಗೆ ಚಿಕಿತ್ಸೆ ಮುಂದುವರಿದಿದೆ. ಸುಮಾರು 700 ಜನರನ್ನು ತಾತ್ಕಾಲಿಕ ಆಶ್ರಯ ತಾಣಗಳಿಗೆ ಸ್ಥಳಾಂತರಿಸಲಾಗಿದೆ.

ನ್ಯೂ ಟೆರಿಟರಿಸ್‌ನ ತೈ ಪೋ ಜಿಲ್ಲೆಯ ವಸತಿ ಸಂಕೀರ್ಣದ ಹೊರಭಾಗದಲ್ಲಿ ಸ್ಥಾಪಿಸಲಾದ ಬಿದಿರಿನ ಸ್ಕ್ಯಾಫೋಲ್ಡಿಂಗ್‌ನಲ್ಲಿ ದಟ್ಟ ಬೆಂಕಿ ಕಾಣಿಸಿಕೊಂಡಿತು. ವಸತಿ ಸಂಕೀರ್ಣವು 8 ಬ್ಲಾಕ್ ಹೊಂದಿದ್ದು, ಸುಮಾರು 2,000 ಅಪಾರ್ಟ್‌ಮೆಂಟ್‌ಗಳನ್ನು ಹೊಂದಿದೆ. ಸುಮಾರು 4,800 ಜನರು ಇದ್ದರು ಎಂದು ತಿಳಿಸಲಾಗಿದೆ. 128 ಅಗ್ನಿಶಾಮಕ ವಾಹನಗಳು ಮತ್ತು 57 ಅಂಬುಲೆನ್ಸ್‌ಗಳು ರಕ್ಷಣಾ ಕಾರ್ಯಾಚರಣೆ ನಡೆಸಿದವು. ಮೃತರಲ್ಲಿ ಒಬ್ಬ ಅಗ್ನಿಶಾಮಕ ಸಿಬ್ಬಂದಿ ಸೇರಿದ್ದಾರೆ ಎಂದು ಅಗ್ನಿಶಾಮಕ ಸೇವೆಗಳ ಇಲಾಖೆಯ ನಿರ್ದೇಶಕ ಆಂಡಿ ಯೆಂಗ್ ಸುದ್ದಿಗಾರರಿಗೆ ತಿಳಿಸಿದ್ದಾರೆ.

32 ನಕ್ಸಲರು ಸೇರಿ 41 ಮಾವೋವಾದಿಗಳು ಶರಣು

ಬಿಜಾಪುರ: ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಬುಧವಾರ 41 ನಕ್ಸಲರು ಶರಣಾಗಿದ್ದಾರೆ.



ಅವರಲ್ಲಿ 32 ಮಂದಿಯ ತಲೆಗೆ ಒಟ್ಟಾರೆ 1.19 ಕೋಟಿ ಬಹುಮಾನ ಘೋಷಿಸಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. 12 ಮಹಿಳೆಯರು ಸೇರಿದಂತೆ 41 ನಕ್ಸಲರು ಇಂದು ಹಿರಿಯ ಪೊಲೀಸ್ ಅಧಿಕಾರಿಗಳ ಮುಂದೆ ಶರಣಾದರು. ರಾಜ್ಯ ಸರ್ಕಾರದ ಹೊಸ ಶರಣಾಗತಿ ಮತ್ತು ಪುನರ್ವಸತಿ ನೀತಿ ಹಾಗೂ "ಪೂನಾ ಮಾರ್ಗಮ್"(ಬಸ್ತರ್ ರೇಂಜ್ ಪೊಲೀಸರ ಸಾಮಾಜಿಕ ಪುನರ್ವಸತಿ ಅಭಿಯಾನ)ದಿಂದ ಪ್ರಭಾವಿತರಾಗಿ ನಕ್ಸಲರು ಶರಣಾಗಿದ್ದಾರೆ ಎಂದು ಬಿಜಾಪುರ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ಯಾದವ್ ಹೇಳಿದ್ದಾರೆ. ಶರಣಾದ ನಕ್ಸಲರ ಪೈಕಿ ನಾಲ್ವರು ಪಿಎಲ್‌ಜಿಎ(ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿ) ಬೆಟಾಲಿಯನ್ ನಂ.1 ಮತ್ತು ಮಾವೋವಾದಿಗಳ ವಿವಿಧ ಕಂಪನಿಗಳ ಸದಸ್ಯರು, ಏರಿಯಾ ಸಮಿತಿಗಳ ಮೂವರು, 11 ಪ್ಲಟೂನ್ ಮತ್ತು ಏರಿಯಾ ಸಮಿತಿ ಪಕ್ಷದ ಸದಸ್ಯರು, ಇಬ್ಬರು ಪಿಎಲ್‌ಜಿಎ ಸದಸ್ಯರು, ನಾಲ್ಕು ಮಿಲಿಟಿಯಾ ಪ್ಲಟೂನ್ ಕಮಾಂಡರ್‌ಗಳು, ಒಬ್ಬ ಉಪ ಕಮಾಂಡರ್, ಆರು ಮಿಲಿಟಿಯಾ ಪ್ಲಟೂನ್ ಸದಸ್ಯರಾಗಿದ್ದಾರೆ.ಈ 41 ಕಾರ್ಯಕರ್ತರಲ್ಲಿ ಮೂವತ್ತೊಂಬತ್ತು ಮಾವೋವಾದಿ ಗಳ ದಕ್ಷಿಣ ಉಪ–ವಲಯ ಬ್ಯೂರೋಗೆ ಸೇರಿದವರಾಗಿದ್ದಾರೆ.

ಮೈಸೂರು ಮಿತ್ರ ಗುರುವಾರ 27 ನವೆಂಬರ್ 2025

ಭಾರತ ಸಂವಿಧಾನ ಪ್ರಜಾಪ್ರಭುತ್ವದ ಬೆನ್ನೆಲುಬು

ಮಡಿಕೇರಿ, ನ26–ಸಂವಿಧಾನ ಶಿಲ್ಪಿ ಅಂಬೇಡ್ಕರ್ ಬರೆದಿರುವ ಸಂವಿಧಾನವು ಪ್ರಜಾಪ್ರಭುತ್ವದ ಬೆನ್ನೆಲುಬಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಗರದ ಗಾಂಧಿ ಭವನದಲ್ಲಿ ಬುಧವಾರ ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಭಾರತ ಸಂವಿಧಾನವು ಸ್ವಾತಂತ್ರ್ಯದ ರಕ್ಷಣೆಯಾಗಿದ್ದು, ಪ್ರತಿಯೊಬ್ಬರಲ್ಲೂ ಹೊಣೆಗಾರಿಕೆಯನ್ನು ಹೆಚ್ಚಿಸಿ, ಸ್ವಾತಂತ್ರ್ಯ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯನ್ನು ಎತ್ತಿ ಹಿಡಿದಿದೆ. ಪ್ರತಿಯೊಬ್ಬರೂ ಸಂವಿಧಾನದ ಮೌಲ್ಯ ಎತ್ತಿ ಹಿಡಿದು ಪ್ರಜಾಪ್ರಭುತ್ವವನ್ನು ಬಲಪಡಿಸಲು ಮುಂದಾಗಬೇಕು ಎಂದರು.

ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ದೀಪಕ್ ಪೊನ್ನಪ್ಪ ಮಾತನಾಡಿ, ಸಂವಿಧಾನವು ಜಗತ್ತಿನಲ್ಲಿಯೇ ಅತ್ಯಂತ ವಿಶಿಷ್ಟ ಸ್ಥಾನ ಹೊಂದಿದ್ದು, ಹಲವು ದಾಖಲೆಗಳಿಗೆ ಪಾತ್ರವಾಗಿದೆ. ಶಿಕ್ಷಣ, ಉದ್ಯೋಗ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಸಾಮಾಜಿಕ ನ್ಯಾಯ ದೊರೆಯಬೇಕು ಎಂದರು.


ಗಾಂಧಿ ಮೈದಾನದಿಂದ ಗಾಂಧಿ ಭವನದವರೆಗೆ ನಡೆದ ಜಾಥಾ ಎಲ್ಲರ ಗಮನ ಸೆಳೆಯಿತು.

ನಗರಸಭೆ ಅಧ್ಯಕ್ಷೆ ಪಿ.ಕಲಾವತಿ ಮಾತನಾಡಿ ಸಂವಿಧಾನದಲ್ಲಿರುವ ಮೌಲ್ಯಗಳನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳುವಂತಾಗಬೇಕು. ಪ್ರತಿಯೊಬ್ಬರೂ ಶಿಕ್ಷಣ ಪಡೆದು, ಸ್ವಾತಂತ್ರ್ಯ ಸಮಾನತೆ ಅವಕಾಶಗಳನ್ನು ಪಡೆಯುವಂತಾಗಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಶೇಖರ್ ಅವರು ಸಂವಿಧಾನ ಪೀಠಿಕೆ ಓದಿದರು. ಚಿತ್ರಕಲೆ ಮತ್ತು ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ 25 ಸಾವಿರ, ದ್ವಿತೀಯ 15 ಸಾವಿರ ಮತ್ತು ತೃತೀಯ 10 ಸಾವಿರವನ್ನು ಆರ್‌ಟಿಜಿಎಸ್ ಮೂಲಕ ಕಳಿಸಿ ಗೌರವಿಸಲಾಯಿತು. ಜಿಲ್ಲಾ ವಿದ್ಯಾಸಾಗರ ಕಲಾವೇದಿಕೆಯ ಈ.ರಾಜು ಮತ್ತು ತಂಡದವರು ನಾಡಗೀತೆ ಮತ್ತು ಸಂವಿಧಾನ ಗೀತೆಯನ್ನು ಹಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಜಿ.ಪಂ.ಸಿಇಒ ಆನಂದ್ ಪ್ರಕಾಶ್ ಮೀನಾ, ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಘಟಕದ ಅಧ್ಯಕ್ಷ ಮಂದ್ರಿರ ಮೋಹನ್ ದಾಸ್, ಐಟಿಡಿಪಿ ಇಲಾಖಾ ಅಧಿಕಾರಿ ಎಸ್.ಹೊನ್ನೇಗೌಡ, ತಹಶೀಲ್ದಾರ್ ಶ್ರೀಧರ, ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಸಂಚಾಲಕರಾದ ದಮಯಂತಿ, ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಅಧ್ಯಕ್ಷ ದಿವಾಕರ, ಪ್ರಮುಖರಾದ ಕುಮಾರ, ಸಿದ್ದೇಶ್, ಚಂದನ್, ಇತರರು ಇದ್ದರು. ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶಿಕ್ಷಕರಾದ ರಮೇಶ್ ನಿರೂಪಿಸಿ, ವಂದಿಸಿದರು.

ಗಮನ ಸೆಳೆದ ಜಾಥಾ: ನಗರದ ಗಾಂಧಿ ಮೈದಾನದಿಂದ ಗಾಂಧಿ ಭವನದವರೆಗೆ ನಡೆದ ಜಾಥಾದಲ್ಲಿ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿವಿಧ ಜಾನಪದ ಕಲಾತಂಡ, ಡೊಳ್ಳು ಕುಣಿತ, ಅಲ್ಲದೆ ವಿದ್ಯಾರ್ಥಿಯೊಬ್ಬ ಅಂಬೇಡ್ಕರ್ ವೇಷ ಧರಿಸಿ ಸಂವಿಧಾನ ಪುಸ್ತಕ ಹಿಡಿದು ಕೈ ತೋರಿಸುತ್ತಿದ್ದ ದೃಶ್ಯ ಜಾಥಾ ವಾಹನದಲ್ಲಿದ್ದು ಎಲ್ಲರ ಗಮನ ಸೆಳೆಯಿತು.

ವಿವಿಧ ಶಾಲಾ–ಕಾಲೇಜಿನ ಎನ್‌ಸಿಸಿ, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಸಂವಿಧಾನದ ಮಹತ್ವ ಕುರಿತ ಘೋಷವಾಕ್ಯ ಪ್ರದರ್ಶನ ಗಮನ ಸೆಳೆಯಿತು. ಶಾಲಾ–ಕಾಲೇಜಿನ ಶಿಕ್ಷಕರು, ಉಪನ್ಯಾಸಕರು, ಅಧಿಕಾರಿಗಳು ಸಿಬ್ಬಂದಿಗಳು ಪಾಲ್ಗೊಂಡಿದ್ದರು. ನಗರಸಭೆ ಸದಸ್ಯ ಸತೀಶ್, ಪ್ರಮುಖರಾದ ದಿವಾಕರ, ಕುಮಾರ, ಸಿದ್ದೇಶ್, ಚಂದನ್ ಇತರರಿದ್ದರು.

ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಲು ಶಿಕ್ಷಣ ನೀಡಿ



ಗಿರೀಶ್ ಮತ್ತು ಸಂಗಡಿಗರು ಕ್ರಾಂತಿಗೀತೆ ಹಾಡಿದರು.

ವಿರಾಜಪೇಟೆ, ನ.26–ಜನರು ಆಸ್ತಿ ಮಾಡುವ ಬದಲು ತಮ್ಮ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಲು ಅವರಿಗೆ ಆಗತ್ಯವಾದ ಶಿಕ್ಷಣ ನೀಡಿ ಎಂದು ಪೊನ್ನಂಪೇಟೆ ತಾಲೂಕು ತಹಶೀಲ್ದಾರ್ ಮೋಹನ್ ಕುಮಾರ್ ಕಿವಿಮಾತು ಹೇಳಿದ್ದಾರೆ.

ಅಂಬೇಡ್ಕರ್ ಭವನದಲ್ಲಿ ವಿರಾಜಪೇಟೆ–ಪೊನ್ನಂಪೇಟೆ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ವಿರಾಜಪೇಟೆ ಪುರಸಭೆ, ಪೊನ್ನಂಪೇಟೆ ಪಪಂ ಮತ್ತು ಸಮಾಜ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಅಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಇಂದು ದೇಶದಲ್ಲಿ ಅನೇಕ ಜಾತಿ ಧರ್ಮಗಳಿದ್ದು ಎಲ್ಲರೂ ಒಂದುಗೂಡಿ ಮುನ್ನಡೆಯುತ್ತಿದ್ದರೆ ಅದಕ್ಕೆ ನಮ್ಮ ಸಂವಿಧಾನವೇ ಕಾರಣ ಎಂದರು. ಅಮ್ಮಸಂದ್ರ ಸುರೇಶ್ ಮುಖ್ಯ ಭಾಷಣಕಾರರಾಗಿದ್ದರು. ಅಂಬೇಡ್ಕರ್ ಭವನ ಸಮಿತಿ ಸದಸ್ಯರಾದ ವಿ.ಕೆ ಸತೀಶ್ ಮತ್ತು ವೀರಭದ್ರಯ್ಯ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಜಾನ್ಸನ್ ವಹಿಸಿದ್ದರು. ಗಿರೀಶ್ ಮತ್ತು ಸಂಗಡಿಗರು ಕ್ರಾಂತಿಗೀತೆ ಹಾಡಿದರು.

ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ವಿರಾಜಪೇಟೆಯ ತಹಶೀಲ್ದಾರ್ ಪ್ರವೀಣ್, ಪುರಸಭೆ ಮುಖ್ಯಾಧಿಕಾರಿ ಪಟ್ಟಚರುವಂಡ ನಾಚಪ್ಪ, ತಾಪಂ ಅಪ್ಪಣ್ಣ, ಸಮಾಜಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಕವಿತಾ ಉಪಸ್ಥಿತರಿದ್ದರು. ಸ್ಕೌಟ್ ಮತ್ತು ಗೈಡ್ಸ್ ಮತ್ತು ಶಾಲಾ ವಿದ್ಯಾರ್ಥಿಗಳು ಮತ್ತು ಪ್ರಮುಖರು ಪಟ್ಟಣದ ಮಾರಿಗುಡಿಯಿಂದ ಮುಖ್ಯ ರಸ್ತೆಯಲ್ಲಿ ಅಂಬೇಡ್ಕರ್ ಭವನದವರಗೆ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಕೊಡಗಿನಾದ್ಯಂತ ಶ್ರದ್ಧಾಭಕ್ತಿಯಿಂದ ನಡೆದ ಸುಬ್ರಹ್ಮಣ್ಯ ಷಷ್ಠಿ


ಷಷ್ಠಿ ಅಂಗವಾಗಿ ದೇವಾಲಯದಲ್ಲಿ ನಡೆದ ಪೂಜಾ ಕಾರ್ಯದಲ್ಲಿ ಭಕ್ತಾದಿಗಳು ಪಾಲ್ಗೊಂಡಿದ್ದರು.

ಮಡಿಕೇರಿ, ನ.26–ಕೊಡಗಿನ ವಿವಿಧ ದೇವಾಲಯದಲ್ಲಿ ಸುಬ್ರಹ್ಮಣ್ಯ ಷಷ್ಠಿ ಶ್ರದ್ಧಾಭಕ್ತಿಯಿಂದ ಜರುಗಿತು. ನಗರದ ಕುಂದುರುಮೊಟ್ಟೆ ಶ್ರೀ ಚೌಟಿ ಮಾರಿಯಮ್ಮ ದೇವಾಲಯದ ನಾಗಬನದಲ್ಲಿ ವಿಶೇಷ ಪೂಜೆ, ಎಳನೀರು ಅಭಿಷೇಕ, ಹಾಲಿನ ಅಭಿಷೇಕ ಹಾಗೂ ಮಹಾಮಂಗಳಾರತಿ ನೆರವೇರಿತು.

ಶ್ರೀ ಮುತ್ತಪ್ಪ ದೇವಾಲಯ ಉತ್ಸವ ಸಮಿತಿಯಿಂದ ಶ್ರೀ ಮುತ್ತಪ್ಪ ದೇವಾಲಯದಲ್ಲಿ ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ಷಷ್ಠಿ ಮಹೋತ್ಸವ ಶ್ರದ್ಧಾಭಕ್ತಿಯಿಂದ ನಡೆಸಲಾಯಿತು. ದೇವಾಲಯದ ಆವರಣದಲ್ಲಿರುವ ಶ್ರೀ ಸುಬ್ರಹ್ಮಣ್ಯ ದೇವಾಲಯದಲ್ಲಿ ಮುಂಜಾನೆಯಿಂದ ದೇವರಿಗೆ ಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ, ಅಪ್ಪಂಸೇವೆ, ಪಂಚ ಕಜ್ಜಾಯ ಸೇವೆ, ಹಣ್ಣುಕಾಯಿ ಪೂಜೆ, ಪುಷ್ಪಾರ್ಚನೆ, ಮಂಗಳಾರತಿ, ಮಹಾಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆಯಿತು. ಮಧ್ಯಾಹ್ನ ಶ್ರೀ ಸುಬಹ್ಮಣ್ಯ ದೇವರ ಶ್ರೀ ಭೂತ ಬಲಿ(ಕ್ಷೇತ್ರ ಪ್ರದಕ್ಷಿಣೆ), ಮಹಾಮಂಗಳಾರತಿ ನಂತರ ಅನ್ನಸಂತರ್ಪಣೆ ನೆರವೇರಿತು.

ಬೆಳಿಗ್ಗೆ ಶ್ರೀ ಕುಟ್ಟಿಚಾತನ್ ದೇವರ ವಳ್ಳಾಟಂ, ಶ್ರೀ ಮುತ್ತಪ್ಪ ದೇವರ ವೆಳ್ಳಾಟಂ, ಶ್ರೀ ಗುಳಿಗ ದೇವರ ವೆಳ್ಳಾಟಂ, ಶ್ರೀ ಪೋದಿದೇವರ ವೆಳ್ಳಾಟಂ ಜರುಗಿತು. ಸಂಜೆ ಶ್ರೀ ಮುತ್ತಪ್ಪ ಮಹಿಳಾ ವೇದಿಕೆಯಿಂದ ಭಜನಾ ಕಾರ್ಯಕ್ರಮ, ರಂಗಪೂಜೆ, ರಾತ್ರಿ ಮಹಾಪೂಜೆಯ ನಂತರ ಪ್ರಸಾದ ವಿತರಣೆ ನಡೆಯಿತು.

ಓಂಕಾರೇಶ್ವರ ದೇವಾಲಯದಲ್ಲಿ ಮುಂಜಾನೆಯಿಂದಲೇ ಶ್ರೀ ಸುಬ್ರಹ್ಮಣ್ಯ ದೇವರಿಗೆ ಅಭಿಷೇಕ, ಅಲಂಕಾರ, ಅರ್ಚನೆ ಸೇರಿದಂತೆ ವಿವಿಧ ಪೂಜಾ ವಿಧಿ ವಿಧಾನಗಳು ಜರುಗಿತು. ಮಹಾಪೂಜೆ ಮತ್ತು ಮಹಾಮಂಗಳಾರತಿ ನಂತರ ನೆರೆದಿದ್ದ ಭಕ್ತಾದಿಗಳಿಗೆ ಅನ್ನಸಂತರ್ಪಣೆ ನೆರವೇರಿತು. ನಗರದ ವಿವಿದೆಡೆಗಳಿಂದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಕೋಟೆ ಮಾರಿಯಮ್ಮ ದೇವಾಲಯದ ನಾಗಬನದಲ್ಲಿ ಸುಬ್ರಹ್ಮಣ್ಯ ಷಷ್ಠಿ ಪ್ರಯುಕ್ತ ವಿಶೇಷ ಪೂಜೆ ನಡೆಯಿತು. ನಾಗದೇವರಿಗೆ ಎಳನೀರು ಅಭಿಷೇಕ, ಹಾಲಿನ ಅಭಿಷೇಕ ಪೂಜೆ ಹಾಗೂ ಮಹಾಮಂಗಳಾರತಿ ನೆರವೇರಿತು. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿದರು.

ಬೈರಂಬಾಡದ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಷಷ್ಠಿ ಆಚರಣೆ



ಸಿದ್ದಾಪುರ: ಇತಿಹಾಸ ಪ್ರಸಿದ್ಧ ಬೈರಂಬಾಡದ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ಶ್ರದ್ಧಾಭಕ್ತಿಯೊಂದಿಗೆ ಷಷ್ಠಿ ಹಬ್ಬದ ಉತ್ಸವ ವಿಜೃಂಭಣೆಯಿಂದ ನಡೆಯಿತು. ದೇವಾಲಯ ಪ್ರಧಾನ ಅರ್ಚಕ ಗೋಪಾಲಕೃಷ್ಣ ಸಮ್ಮುಖದಲ್ಲಿ ವಿವಿಧ ಪೂಜಾ ಕೈಂಕರ್ಯಗಳು ನಡೆಯಿತು.

ಮಡಿಕೇರಿ, ಗೋಣಿಕೊಪ್ಪ, ಕುಶಾಲನಗರ, ಮೂರ್ನಾಡು, ನಾಪೊಕ್ಲು, ವಿರಾಜಪೇಟೆ, ಸಿದ್ದಾಪುರ, ಅಮ್ಮತ್ತಿ, ಪಾಲಿಬೆಟ್ಟ, ಒಂಟಿಯಂಗಡಿ, ಮರಗೋಡು, ಹಾಕತ್ತೂರು ಸೇರಿದಂತೆ ಜಿಲ್ಲೆಯ ನಾನಾ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಬಂದಿದ್ದ ಭಕ್ತರು, ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ ತೀರ್ಥಪ್ರಸಾದ ಸ್ವೀಕರಿಸಿದರು. ಸಾವಿರ ಭಕ್ತರು ತಂಡೋಪತಂಡವಾಗಿ ಬಂದು ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದರು. ದೇವರಿಗೆ ಮಹಾಮಂಗಳಾರತಿ ಸೇವೆ ನಡೆದ ಬಳಿಕ ಮಧ್ಯಾಹ್ನ ಭಕ್ತರಿಗೆ ದೇವಾಲಯದ ವತಿಯಿಂದ ಅನ್ನಸಂತರ್ಪಣೆ ನಡೆಯಿತು. ದೇವಾಲಯದ ಹೊರಭಾಗದಲ್ಲಿ ಹರಕೆ ಹೊತ್ತ ಭಕ್ತಾದಿಗಳು ಬೆಳಿಗ್ಗೆಯಿಂದ ಕೇಶ ಮುಂಡನ ಮಾಡಿಸಿಕೊಂಡರು.

ಸರ್ಕಲ್ ಇನ್ಸ್‌ಪೆಕ್ಟರ್ ಪಿ.ಕೆ.ರಾಜು, ಸಿದ್ದಾಪುರ ಪೊಲೀಸ್ ಠಾಣಾಧಿಕಾರಿ ಮಂಜುನಾಥ್ ನೇತೃತ್ವದಲ್ಲಿ ಸೂಕ್ತ ಬಂದೋಬಸ್ತ್ ಕಲ್ಪಿಸಲಾಗಿತ್ತು.

ವಿರಾಜಪೇಟೆಯಲ್ಲಿ ಸುಬ್ರಹ್ಮಣ್ಯ ಷಷ್ಠಿ ಆಚರಣೆ

ವಿರಾಜಪೇಟೆ: ಶ್ರೀ ಸುಬ್ರಹ್ಮಣ್ಯ ಷಷ್ಠಿ ಪ್ರಯುಕ್ತ ಇಲ್ಲಿನ ಶಿವಕೇರಿಯಲ್ಲಿರುವ ಶ್ರೀ ದುರ್ಗಿ, ವಿಷ್ಣುಮೂರ್ತಿ, ನಾಗ ದೇವಸ್ಥಾನದಲ್ಲಿ ಹಾಗೂ ತೆಲುಗರ ಬೀದಿಯಲ್ಲಿರುವ ಶ್ರೀ ಮಾರಿಯಮ್ಮ ದೇವಸ್ಥಾನದಲ್ಲಿ ಮತ್ತು ಮಿನುಪೇಟೆಯಲ್ಲಿರುವ ಕಂಚಿ ಕಾಮಾಕ್ಷಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಅಭಿಷೇಕ ನೆರವೇರಿತು. ದೇವಾಲಯಗಳ ಆಡಳಿತ ಮಂಡಳಿ ಅಧ್ಯಕ್ಷರು, ಸದಸ್ಯರು, ಭಕ್ತಾದಿಗಳು ಅಧಿಕ ಸಂಖ್ಯೆಯಲ್ಲಿದ್ದರು.





ಬಲ್ಲಮಾವಟಿಯಲ್ಲಿ ಷಷ್ಠಿ ಹಬ್ಬ

ನಾಪೋಕ್ಲು, ನ.26–ಹೋಬಳಿ ವ್ಯಾಪ್ತಿಯ ವಿವಿಧ ದೇವಾಲಯಗಳಲ್ಲಿ ಷಷ್ಠಿಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಇಲ್ಲಿಗೆ ಸಮೀಪದ ಬಲ್ಲಮಾವಟಿ ಗ್ರಾಮದ ಭಗವತಿ ದೇವಾಲಯದಲ್ಲಿ ವಿಶೇಷ ನಾಗನ ಪೂಜೆಯನ್ನು ನೆರವೇರಿಸಲಾಯಿತು.


ಬಲ್ಲಮಾವಟಿ, ನೆಲಜಿ, ಪುಲಿಕೋಟು ಗ್ರಾಮದ ಭಕ್ತರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ದೇವಾಲಯದ ಆಡಳಿತ ಮಂಡಳಿ ಸದಸ್ಯರು, ತಕ್ಕ ಮುಖ್ಯಸ್ಥರು, ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಕೆ.ಎಂ.ಚಂಗಪ್ಪ ನಿಧನ



ಕುಶಾಲನಗರ, ನ.26– ಪಟ್ಟಣದ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಅಭಿಯಂತರ ಕಚೇರಿಯಲ್ಲಿ ಗುಮಾಸ್ತರಾಗಿ ಕಾರ್ಯ ನಿರ್ವಹಿಸುತ್ತಿದ್ದ ಕೆ.ಎಂ.ಚಂಗಪ್ಪ (49) ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಮತ್ತು ಬಂಧುಗಳನ್ನು ಅಗಲಿದ್ದಾರೆ. ಮಾರುಕಟ್ಟೆ ಬಳಿ ಇರುವ ರುದ್ರಭೂಮಿಯಲ್ಲಿ ಅಂತ್ಯಸಂಸ್ಕಾರ ನಡೆಸಲಾಯಿತು.

ನಮ್ಮ ಸಂವಿಧಾನ ಅತ್ಯಂತ ಶ್ರೇಷ್ಠ


ಶಾಲಾ ಮಕ್ಕಳು ಸಾಲಾಗಿ ನಿಂತು ಸಂವಿಧಾನ ಪೀಠಿಕೆ, ಸಂವಿಧಾನ ಗ್ರಂಥ ಮಾದರಿಯನ್ನು ರಚಿಸಿ ಗಮನ ಸೆಳೆದರು.

ಚಾಮರಾಜನಗರ, ನ.26–ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರಚಿಸಿದ ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠ ಸಂವಿಧಾನವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ.

ನಗರದ ಪೊಲೀಸ್ ಕವಾಯಿತು ಮೈದಾನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿಂದು ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ನಾಗರಿಕರಿಗೆ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ, ಉಪಾಸನ ಸ್ವಾತಂತ್ರ್ಯ ಸ್ಥಾನಮಾನ ಹಾಗೂ ಅವಕಾಶ ಸಮಾನತೆಯನ್ನು ಸಂವಿಧಾನವು ಕಲ್ಪಿಸಿಕೊಟ್ಟಿದೆ. ಕಟ್ಟ ಕಡೆಯ ವ್ಯಕ್ತಿಗೂ ಸಮಾನತೆ ಅವಕಾಶವನ್ನು ಪ್ರತಿಪಾದಿಸಲಾಗಿದೆ. ವ್ಯಕ್ತಿಗೌರವ, ದೇಶದ ಏಕತೆ, ಸಮಗ್ರತೆ, ಭ್ರಾತೃತ್ವದಂತಹ ಮಹತ್ತರ ಅಂಶಗಳು ಸಂವಿಧಾನದಲ್ಲಿ ಅಡಕವಾಗಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ಆಶಯ ಡಾ. ಬಿ.ಆರ್.ಅಂಬೇಡ್ಕರ್ ನೀಡಿದ ಸಂವಿಧಾನದಲ್ಲಿ ಕಾಣಬಹುದಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರೂ ಸಮಾನರು, ಧರ್ಮ, ಜಾತಿ, ಭಾಷೆಯಾವುದಾದರು ವಿವಿಧತೆಯಲ್ಲಿ ಏಕತೆ ಎಂದು ಸಂವಿಧಾನವು ತಿಳಿಸುತ್ತದೆ. ಸಂವಿಧಾನದ ಮಹತ್ವವನ್ನು ಪ್ರತಿಯೊಬ್ಬರೂ ಅರಿಯಬೇಕು. ಸರ್ಕಾರಿ ಕಾರ್ಯಕ್ರಮದಲ್ಲಿ ಮೊದಲಿಗೆ ಸಂವಿಧಾನದ ಪೀಠಿಕೆಯನ್ನು ವಾಚನ ಮಾಡಲಾಗುತ್ತಿದೆ ಎಂದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ ದೇಶದ ಸಂವಿಧಾನ ವಿಶ್ವದಲ್ಲಿಯೇ ಶ್ರೇಷ್ಠವಾದ ಸಂವಿಧಾನವಾಗಿದೆ. ದೇಶದ ಏಕತೆ ಮತ್ತು ಸಮಗ್ರತೆ ಸಂವಿಧಾನದ ಕೊಡುಗೆಯಾಗಿದೆ. ಗೌರವ ಘನತೆಯ ಬಾಳ್ವೆಗೆ ಸಂವಿಧಾನ ಅವಕಾಶ ಕಲ್ಪಿಸಿದೆ. ಪ್ರತಿಯೊಬ್ಬರು ಮೂಲಭೂತ ಹಕ್ಕು ಕರ್ತವ್ಯಗಳ ಬಗ್ಗೆಯೂ ತಿಳಿದುಕೊಳ್ಳಬೇಕಿದೆ. ಸಂವಿಧಾನ ದಿನಾಚರಣೆ ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದರು.

ಭೋಗಾಪುರ ಸರ್ಕಾರಿ ಪ್ರಥಮ ದರ್ಜೆ ವಸತಿ ಕಾಲೇಜಿನ ಪ್ರಾಂಶುಪಾಲ ಡಾ. ಪಿ. ದೇವರಾಜು ಸಂವಿಧಾನದ ಆಶಯ ಕುರಿತು ಮುಖ್ಯ ಭಾಷಣ ಮಾಡಿದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು ಸಾಲಾಗಿ ನಿಂತು ಸಂವಿಧಾನ ಪೀಠಿಕೆ, ಸಂವಿಧಾನ ಗ್ರಂಥ ಮಾದರಿಯನ್ನು ರಚಿಸಿ ಪ್ರದರ್ಶಿಸುವ ಮೂಲಕ ಗಮನ ಸೆಳೆದರು. ದೇಶದ ವಿವಿಧ ರಾಜ್ಯಗಳ ಕಲೆ, ಪರಂಪರೆ ಬಿಂಬಿಸುವ ವೇಷಭೂಷಣ ತೊಟ್ಟ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಭಿಕರ ಮನಗೆದ್ದರು.

ಬಳಿಕ ಸಂವಿಧಾನ ಜಾಗೃತಿ ಜಾಥಾಗೆ ಚಾಲನೆ ನೀಡಿದರು. ಜಾಥಾದಲ್ಲಿ ಡಾ. ಅಂಬೇಡ್ಕರ್ ಅವರ ವೇಷ ಭೂಷಣ ಧರಿಸಿ ವಿದ್ಯಾರ್ಥಿಗಳು ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಸಾಗಿದ್ದು ವಿಶೇಷವಾಗಿತ್ತು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ. ಚಂದ್ರು, ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಪಂ ಸಿಇಓ ಮೋನಾರೋತ್, ಎಸ್‌ಪಿ ಬಿ.ಟಿ ಕವಿತಾ, ಎಡಿಸಿ ಟಿ.ಜವರೇಗೌಡ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮುನಿರಾಜು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಯಳಂದೂರಲ್ಲಿ ಷಷ್ಠಿ ಆಚರಣೆ

ಯಳಂದೂರು, ನ.26(ವಿ.ನಾಗ ರಾಜು)– ತಾಲೂಕಿನಲ್ಲಿ ಷಷ್ಠಿ ಹಬ್ಬ ಸಂಭ್ರಮ ಸಡಗರದಿಂದ ಜರುಗಿತು.

ತಾಲೂಕಿನ ಅಂಬಳೆ ಗ್ರಾಮದಲ್ಲಿ ಸುಬ್ರಮಣ್ಯ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಹಬ್ಬದ ವಿಶೇಷವಾಗಿ ಭಕ್ತರು ಹುತ್ತಗಳಿಗೆ ಹಾಲುಬೆಣ್ಣೆ ಅರ್ಪಿಸುವ ಮೂಲಕ ತಮ್ಮ ಭಕ್ತಿ ಪರಾಕಾಷ್ಠೆ ಮೆರೆದರು. ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ಹುತ್ತಕ್ಕೆ ಕೋಳಿ ಬಲಿ ನೀಡುವ ಮೂಲಕ ಭಕ್ತರು ತಮ್ಮ ಹರಕೆ ತೀರಿಸಿಕೊಂಡರು.

ಹುತ್ತಕ್ಕಾಗಿ ಭಕ್ತರ ಪರದಾಟ : ಗ್ರಾಮೀಣ ಪ್ರದೇಶ ಸೇರಿದಂತೆ ಇತ್ತಿಚಿನ ದಿನಗಳಲ್ಲಿ ಹುತ್ತಗಳನ್ನು ನಾಶಪಡಿಸಿರುವುದರಿಂದ ಭಕ್ತರು ಷಷ್ಠಿ ಅಂಗವಾಗಿ ಹಾಲು ಬೆಣ್ಣೆ ಎರೆಯಲು ಮತ್ತು ಕೋಳಿ ಬಲಿ ನೀಡಲು ಊರಿನಿಂದ ಕಿಲೊ ಮೀಟರ್ ದೂರು ನಡೆದು ಹುತ್ತಗಳಿಗೆ ಪೂಜೆ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು.


ಹುತ್ತಕ್ಕೆ ಕೋಳಿ ಬಲಿ ನೀಡುವ ಮೂಲಕ ಭಕ್ತರು ತಮ್ಮ ಹರಕೆ ತೀರಿಸಿಕೊಂಡರು.

ಗುಂಡ್ಲುಪೇಟೆಯಲ್ಲಿ ಷಷ್ಠಿ ಆಚರಣೆ



ಗುಂಡ್ಲುಪೇಟೆ, ನ.26(ಸೋಮ್.ಜಿ)–ಪಟ್ಟಣ ಹಾಗೂ ತಾಲೂಕಿನಾದ್ಯಂತ ಸುಬ್ರಹ್ಮಣ್ಯ ಷಷ್ಠಿ ಹಬ್ಬವನ್ನು ಜನತೆ ಶ್ರದ್ಧಾ ಭಕ್ತಿಯಿಂದ ನೆರವೇರಿಸಿದರು.

ಪಟ್ಟಣದಲ್ಲಿ ಮುಂಜಾನೆಯಿಂದಲೇ ಪ್ರಮುಖ ದೇವಾಲಯಗಳಲ್ಲಿ ವಿಶೇಷ ಪೂಜೆ ನೆರವೇರಿತು ಭಕ್ತರು ದೇವಾಲಯದ ಆವರಣದಲ್ಲಿರುವ ನಾಗರಕಲ್ಲಿಗೆ ಹಾಗೂ ಹುತ್ತಕ್ಕೆ ಪೂಜೆ ಸಲ್ಲಿಸಿ ನೈವೇದ್ಯ ಅರ್ಪಿಸಿದರು. ಇದಲ್ಲದೆ ಪಟ್ಟಣದ ವಿವಿಧ ಬಡಾವಣೆಗಳಲ್ಲಿರುವ ಹುತ್ತಗಳಿಗೂ ಸಹ ಅಲ್ಲಿನ ನಿವಾಸಿಗಳು ಪೂಜೆ ಸಲ್ಲಿಸಿ ಪುನೀತರಾದರು.

ಕೊಳ್ಳೇಗಾಲದಲ್ಲಿ ಸುಬ್ರಹ್ಮಣ್ಯೇಶ್ವರ ರಥೋತ್ಸವ

ಕೊಳ್ಳೇಗಾಲ,ನ.26(ಎನ್‌ಎನ್)–ಪಟ್ಟಣದ ಶ್ರೀ ಮರುಳೇಶ್ವರ ದೇವಸ್ಥಾನದಲ್ಲಿ ಷಷ್ಠಿ ಹಬ್ಬದ ಪ್ರಯುಕ್ತ ಸುಬ್ರಹ್ಮಣ್ಯೇಶ್ವರ ರಥೋತ್ಸವ ವಿಜೃಂಭಣೆಯಿಂದ ನಡೆಯಿತು.

ಸುಬ್ರಹ್ಮಣ್ಯೇಶ್ವರಸ್ವಾಮಿ ಮೂರ್ತಿಯನ್ನು ಅಲಂಕೃತಗೊಂಡಿದ್ದ ರಥದಲ್ಲಿ ಉತ್ಸವಮೂರ್ತಿಯನ್ನು ಇಟ್ಟು ಪೂಜೆ ಸಲ್ಲಿಸಿ ಬಳಿಕ ರಾಜಬೀದಿಗಳಲ್ಲಿ ಮೆರವಣಿಗೆ ನಡೆಸಿದರು. ಇಂದಿನ ಪೂಜಾಕಾರ್ಯವನ್ನು ಪ್ರಧಾನ ಅರ್ಚಕ ನಾಗೇಂದ್ರ ಭಟ್ ನೆರವೇರಿಸಿದರು. ರಥಯಾತ್ರೆಯಲ್ಲಿ ತಹಸೀಲ್ದಾರ್ ಬಸವರಾಜು ಹಾಗೂ ಇತರರಿದ್ದರು.





ಚಾಮರಾಜೇಶ್ವರ ದೇವಸ್ಥಾನದಿಂದ ಶ್ರೀ ಸುಬ್ರಮಣ್ಯಸ್ವಾಮಿ ವಿಗ್ರಹ ಮೆರವಣಿಗೆ

ಚಾಮರಾಜನಗರ, ನ.26–ಕುಕ್ಕೆ ಸುಬ್ರಹ್ಮಣ್ಯ ಸೇರಿದಂತೆ ಇನ್ನಿತರ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಅದ್ದೂರಿ ಪೂಜೆ, ಉತ್ಸವ ನಡೆಯುತ್ತದೆ. ಅದರಂತೆ ಚಾಮರಾಜೇಶ್ವರ ದೇವಸ್ಥಾನದಲ್ಲಿಯೂ ಸುಬ್ರಮಣ್ಯ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಾದಿಗಳು ಮೆರವಣಿಗೆ ನಡೆಸಿದರು.

ಮೆರವಣಿಗೆಯಲ್ಲಿ ವರ್ತಕರಾದ ವೆಂಕಟನಾಗಪ್ಪಶೆಟ್ಟಿ ಹಾಗೂ ಕುಟುಂಬದವರು ಸೇರಿದಂತೆ ದೇವಸ್ಥಾನದ ಆಗಮಿಕ ಅನೀಲ್ ದಿಕ್ಷತ್, ನೌಕರರಾದ ಬಂಡಾಗರ್ ಮಹೇಶ್, ಅಂಗಡಿ ರಮೇಶ್, ಸಂಜು, ಕಾರ್‌ದೇವರಾಜು, ಜಯಕುಮಾರ್ ಹಾಗೂ ಇನ್ನು ಮುಂತಾದವರು ಇದ್ದರು.


ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ಸಚಿವ ವೆಂಕಟೇಶ್ ಉದ್ಘಾಟಿಸಿದರು.

ಸರ್ಕಾರದ ವಿರುದ್ಧ ಅಪಪ್ರಚಾರ; ವಿಪಕ್ಷಗಳಿಂದ ಚಿಲ್ಲರೆ ರಾಜಕೀಯ

ಕೊಳ್ಳೇಗಾಲ,(ಎನ್‌ಎನ್) ನ.26– ರಾಜ್ಯ ಸರ್ಕಾರ ಇಡೀ ರಾಜ್ಯಾದ್ಯಂತ ಅನೇಕ ಅಭಿವೃದ್ಧಿ ಕೆಲಸಗಳನ್ನು ಗ್ಯಾರಂಟಿ ಅನುಷ್ಠಾನದ ಜೊತೆ ಮಾಡುತ್ತಾ ಬಂದಿದ್ದರೂ ಸಹ ಸರ್ಕಾರದ ಅಭಿವೃದ್ಧಿ ಸಹಿಸದೆ ಜನರ ನಡುವೆ ಅಪಪ್ರಚಾರ ಬಿತ್ತುವ ಮೂಲಕ ವಿಪಕ್ಷಗಳು ಚಿಲ್ಲರೆ ಕೆಲಸ ಮಾಡುತ್ತಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ವೆಂಕಟೇಶ್ ಲೇವಡಿ ಮಾಡಿದ್ದಾರೆ.

ತಾಲೂಕಿನ ಚಿಲಕವಾಡಿ ಬೆಟ್ಟದ ಬಳಿ ಸರ್ಕಾರಿ ಪಾಲಿಟೆಕ್ನಿಕ್ ಬಾಲಕರ ವಿದ್ಯಾರ್ಥಿ ನಿಲಯದ ನೂತನ ಕಟ್ಟಡವನ್ನು ಉದ್ಘಾಟಿಸಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದ ಸರ್ಕಾರವಾಗಿದೆ. ರಾಜ್ಯದ ಅಭಿವೃದ್ಧಿಗೆ ಗ್ಯಾರಂಟಿ ಅನುಷ್ಠಾನದ ಜೊತೆ ಸ್ಪಂದಿಸುತ್ತಿದೆ. ಆದರೆ ಬಿಜೆಪಿ, ಜೆಡಿಎಸ್‌ನವರು ಅಭಿವೃದ್ಧಿ ಕೆಲಸ ಆಗುತ್ತಿಲ್ಲ, ಕಾಂಗ್ರೆಸ್ ಸರ್ಕಾರ ಪಾಪರ್ ಸರ್ಕಾರ ಎಂದು ಜನರಿಗೆ ತಪ್ಪು ಸಂದೇಶ ನೀಡುತ್ತಿದ್ದಾರೆ. ನಮ್ಮ ಸಣ್ಣ ತಪ್ಪನ್ನೆ ದೊಡ್ಡ ತಪ್ಪು ಎಂಬಂತೆ ಬಿಂಬಿಸಿ ಅಪಪ್ರಚಾರದಲ್ಲಿ ತೊಡಗಿದ್ದಾರೆ, ವಿಪಕ್ಷ ನಾಯಕ ಅಶೋಕ್ ವಿವೇಚನೆ ಇಲ್ಲದೆ ಸರ್ಕಾರದ ವಿರುದ್ಧ ತಪ್ಪು ಸಂದೇಶ ರವಾನಿಸುತ್ತಿದ್ದಾರೆ. ನಮ್ಮ ಸರ್ಕಾರವನ್ನು ಟೀಕಿಸುವುದನ್ನ ಬಿಟ್ಟು ಅವರಿಗೆ ಬೇರೆ ಕೆಲಸ ಇಲ್ಲ ಎಂದು ವ್ಯಂಗ್ಯವಾಡಿದರು

ಸರ್ಕಾರ ಟೀಕಿಸುವ ವಿಪಕ್ಷದವರು ರಾಜ್ಯದ ಜನರ ಹಿತ ಕಾಯುವಲ್ಲಿ ಧ್ವನಿ ತೆಗೆದು ರಾಜ್ಯದ ಜೊತೆ ಸ್ಪಂದಿಸುವಂತೆ ಮನವಿ ಮಾಡಲಿ, ರಾಜ್ಯದ ರೈತರ ಹಿತ ಕಾಯಲಿ, ಅದನ್ನ ಬಿಟ್ಟು ರೈತರ ಸಮಸ್ಯೆ ನಮಗೆ ಬೇಕಿಲ್ಲ ಎಂಬ ರೀತಿ ಉಡಾಫೆಯಾಗಿ ವರ್ತಿಸುತ್ತಾ ನಮ್ಮನ್ನು ಟೀಕಿಸುವ ಚಿಲ್ಲರೆ ಕೆಲಸ ಮಾಡುತ್ತಿದ್ದಾರೆ ಎಂದು ಮೂದಲಿಸಿದರು

ನಾವು ರೈತರ ಸಮಸ್ಯೆಗೆ ಸ್ಪಂದಿಸಿ ಜೋಳ ಖರೀದಿಗೆ ಮುಂದಾಗಿದ್ದೇವೆ. ಈಕುರಿತು ಮುಖ್ಯಮಂತ್ರಿಗಳೆ ಖುದ್ದು ಅಸಕ್ತಿ ವಹಿಸಿ ಕೆಎಂಎಫ್ ನಿಂದಲೇ151 ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿಗೆ ಮುಂದಾಗಿದ್ದಾರೆ, ಆದರೆ ಈ ವಿಚಾರದಲ್ಲಿ ಕೇಂದ್ರ ಸರ್ಕಾರ ಮೆಧು ಧೋರಣೆ ತಾಳಿದೆ, ವಾಸ್ತವ ವಿಚಾರ ಗಮನಕ್ಕೆ ತರುವಲ್ಲಿ ಸಂಸದರೂ ಸಹ ಮೌನ ತಾಳಿದ್ದಾರೆ, ಆದರೆ ನಮ್ಮ ಸರ್ಕಾರದ ವಿರುದ್ದ ತಪ್ಪು ಸಂದೇಶ ಬಿತ್ತುವ ಕೆಲಸದಲ್ಲಿ ನಿರತರಾಗಿದ್ದಾರೆ, ಅವರಿಗೆ ಜನರ ಹಿತ ಕಾಯುವುದಕ್ಕಿಂತ ನಮ್ಮನ್ನು ಟೀಕಿಸುವುದೆ ದೊಡ್ಡ ಕೆಲಸವಾಗಿದೆ ಎಂದರು

ಶಾಸಕ ಎ.ಆರ್.ಕೃಷ್ಣಮೂರ್ತಿ, ಜಿಲ್ಲಾಧಿಕಾರಿ ಶಿಲ್ಪಾನಾಗ್, ಉಪವಿಭಾಗಾಧಿಕಾರಿ ದಿಲೀಪ್ ಕುಮಾರ್ ಮೀನಾ, ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ಸಿಇಓ ಮೋನಾರೋತ್, ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೊಂಗನೂರು ಚಂದ್ರು, ತಾಲೂಕು ಅಧ್ಯಕ್ಷರಾದ ಕುಂತೂರು ರಾಜೇಂದ್ರ, ಕಿನಕಹಳ್ಳಿ ಪ್ರಭುಪ್ರಸಾದ್, ಇಓ ಗುರುಶಾಂತಪ್ಪ, ಗ್ರಾಪಂ ಅಧ್ಯಕ್ಷೆ ಗಂಗಾಮಣಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ಇನ್ನಿತರರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ
ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

HOUSE FOR LEASE / RENT
2 BHK HOUSE IN LAKSHMIPURAM
Contact No: 9845124430, 9845427522

ಹೊಸ ಮನೆ ಮಾರಾಟಕ್ಕಿದೆ
20'x30' -3 BHK-3 floor-E/F ಲಲಿತಾದ್ರಿನಗರ(ಬಾಲಾಜಿ ಲೇಔಟ್)ನಲ್ಲಿ (Site Cost + Construction Cost)ಗೆ ಮಾತ್ರ ಮಾರಾಟಕ್ಕಿದೆ. Only Buyers Call ಮಾಡಿ
Ph. 7760065890

FLAT FOR RENT
Prakruthi Dream, near Aishwarya Petrol Bunk, 3 BHK, 2 Floor, No. 202. Contact:
Mob: 9448108048
AGENTS EXCUSE

SITE FOR SALE
BVL Premio 1st Phase (Ready Layout) 30x50 West Face
Mob: 9945789945

FOR SALE
30x40 Sites Near RT Nagar BSNL Layout @ Just 22 Lakhs
20x30, 30x40 MUDA Approved Sites Near Rainbow School Bogadi
30x40|30x50 MUDA Sites KHB Attach, HD Kote Road. | 2 & 3 BHK Apartments @ Ramakrishna Ngr
Commercial Properties Also Available
PRAKRUTHI PROPERTIES
95386 90359, 90359 90359

WANTED
Electrical Engineers. Designation: Site Engineer. Freshers or experienced. Diploma / BE in EEE.
Mob: 6366006603
Email: epowerele@gmail.com
www.epowerelectricals.com

ಬೇಕಾಗಿದ್ದಾರೆ
ಅಡುಗೆ ಕೆಲಸ ಹಾಗೂ ಮನೆ ಕೆಲಸ ಮಾಡಲು ಮಹಿಳೆಯರು ಬೇಕಾಗಿದ್ದಾರೆ. ಆಸಕ್ತಿಯುಳ್ಳವರು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
9900515650

SITE FOR SALE
30x40 RESIDENCIAL PROPERTY AVAILABLE, MUDA AUCTION SITE ADDRESS : NEAR HAMPI CIRCLE, HEBBAL 2ND STAGE, VIJAYANAGAR 2ND STAGE, ATTACHED MYSORE -570017, CALL
9900121370, 7019737431

CHANGE OF NAME
By this deed I, the undersigned hereafter MAHALAKSHMI P D/O PUTTAMADAPPA [New Name] previously called MAHALAKSHMI P, D/O PUTTAMADU [Old Name], Residing at #499, 3rd Cross, 2nd Stage Near PF OFFICE, Gayathripuram, Mysore 570019, Karnataka, India, do hereby solemnly affirm and state on oath.That for the purpose of evidencing such my determination declare that I shall at all times hereafter in all records, deeds and writings and in all proceedings, dealings and transactions.
Sd/- Mahalakshmi P

ಮನೆ ಬಾಡಿಗೆಗೆ ಬೇಕಾಗಿದೆ
ವಿಜಯನಗರ 3 ಮತ್ತು 4ನೇ ಹಂತ, ದಟ್ಟಗಳ್ಳಿ, ಕನಕದಾಸನಗರ, ಸೋಮನಾಥನಗರ, ಕೆರ್ಗಳ್ಳಿ, ಬೋಗಾದಿ ಬಡಾವಣೆ ಸುತ್ತಮುತ್ತ 1 ಅಥವಾ 2 ರೂಂಗಳುಳ್ಳ ಇಂಡಿಪೆಂಡೆಂಟ್ ಮನೆ ಬಾಡಿಗೆಗೆ ಬೇಕಾಗಿದೆ.
ಸಂಪರ್ಕಿಸಿ: 91106 28353

SITE REQUIRED
ದೇವನೂರು 3ನೇ ಹಂತ, ರಾಜೀವ್ ನಗರ, ಸಾತಗಳ್ಳಿ 'ಎ' ಜೋನ್, 'ಬಿ' ಜೋನ್, ಡಿಟಿಎಸ್ ರಾವ್ ನಗರ 30x40, 40x60, 50x80
ಓನರ್ ಸಂಪರ್ಕಿಸಿ:
Mob: 7338648879

RAI ESTATES
RERA APPROVED · MUDA APPROVED · E-KHATA
ಮೈಸೂರಿನ ಸುತ್ತ ರೈ ಎಸ್ಟೇಟ್ ನಿರ್ಮಿಸಿರುವ ಲೇಔಟ್‌ಗಳಲ್ಲಿ ಸೈಟ್ ಕೊಳ್ಳಲು ಸಂಪರ್ಕಿಸಿ
- King City
- Golden Palms
- Green Park
- Vardaman Nagar
- Paradise Enclave
- Green Acres
- Spring Meadows
- Dream City
- Dream Valley
- Eastern Hills

9448181488, 9945061604
#10, 1st Floor, New Sayyaji Rao Road, Bamboo Bazar, Mysuru - 570 001

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಹೊಸ ಲೇಔಟ್ಸ್ ಆರಂಭವಾಗಿದೆ
- T.N ಪುರ ರಸ್ತೆ – ಸಪ್ತಮಾತೃಕ, ಪ್ರಶಾಂತ ಛಾಯ ಹೌಸಿಂಗ್ ಪ್ರಾಜೆಕ್ಟ್ ಪಕ್ಕ 14–25 ಲಕ್ಷ
- ಬನ್ನೂರು ರಸ್ತೆ – ಮಾನಸಿ ನಗರ ಹಿಂಭಾಗ ವಿದ್ಯಾವಿಕಾಸ್ ಕಾಲೇಜ್ ಎದುರು 25–49 ಲಕ್ಷ
- ಬೋಗಾದಿ ರಸ್ತೆ – ಹೊಸ ಕ್ರಿಕೆಟ್ ಸ್ಟೇಡಿಯಂ ಜಟ್ಟಿ ಹುಂಡಿ ಹಿಂಭಾಗ 29 ಲಕ್ಷ
- 30X50 ಮರಟಿಕ್ಯಾತನಹಳ್ಳಿ 42 ಲಕ್ಷ

Brokers Excuse
81230 75038

ಜಾಯಿಂಟ್ ಡೆವಲಪ್ಮೆಂಟ್/ JV ಮೈಸೂರು
ಭೂ ಮಾಲೀಕರಿಗೆ ಆಹ್ವಾನ ಅಪಾರ್ಟ್‌ಮೆಂಟ್, ಕಮರ್ಷಿಯಲ್ ಮತ್ತು ಪ್ಲಾಟೆಡ್ ರೆಸಿಡೆನ್ಷಿಯಲ್ ಸೈಟ್ ಡೆವಲಪ್ಮೆಂಟ್‌ಗಾಗಿ • ಆಕರ್ಷಕ ಶೇರ್, • ಸ್ಪಷ್ಟ & ವಿಶ್ವಾಸಾರ್ಹ ಒಪ್ಪಂದ • ಉತ್ತಮ ಗುಣಮಟ್ಟದ ನಿರ್ಮಾಣ
Contact / WhatsApp:
8431558439

ಸೈಟುಗಳು ಮಾರಾಟಕ್ಕಿದೆ
ಜ್ಞಾನಭಾರತಿ(ದಡದಹಳ್ಳಿ), 30x47(E/S) ಕಾರ್ನರ್ ಎದುರು ಪಾರ್ಕ್, ವಿಮಾನ ನಗರ (ದಡದ ಹಳ್ಳಿ), 30x40 (S/F) ಎದುರು ಪಾರ್ಕ್, ವಿಶಾಖನಗರ (ಹೊಸ ಆರ್.ಟಿ.ನಗರ) 30x50 ಪೂರ್ವದಿಕ್ಕು
9980325199

REQUIRED- NURSES
GNM, AMN, B.Sc/ M.Sc. Nursing
Salary: 20,000/ to 35,0000/-
CARETAKER WANTED
SSLC, PUC/ Any Education
Salary: 18,000 to 25,000/-
9035157180

ಬ್ಯೂಟಿ ಪಾರ್ಲರ್ ಬಾಡಿಗೆಗಿದೆ
ರನ್ನಿಂಗ್ ಇದೆ. ಅಡುಗೆ ಕೆಲಸಕ್ಕೆ ಬೇಕಾಗಿದ್ದಾರೆ ಮತ್ತು ಹೆಲ್ಪರ್. ಸರಸ್ವತಿಪುರಂ, ಮೈಸೂರು.
9611736458, 7795267413

ಜಮೀನು ಮಾರಾಟಕ್ಕಿದೆ
ಕುಶಾಲನಗರದ ಬಳಿ ಇರುವ ಬೈಲುಕೊಪ್ಪದಲ್ಲಿ 5 ಎಕರೆ 9 ಗುಂಟೆ ಜಮೀನು ಮಾರಾಟಕ್ಕೆ ಇದೆ, ಸುತ್ತಲೂ ಫೆನ್ಸ್ ಹಾಕಲಾಗಿದೆ, ಒಳ್ಳೆ ನೀರಿನ ವ್ಯವಸ್ಥೆ ಇದೆ, ಲೇಔಟ್, ರೆಸಾರ್ಟ್, ಹೋಂಸ್ಟೇ, ಕಾಫಿ ಎಸ್ಟೇಟ್ ಮಾಡಲು ಒಳ್ಳೆ ಜಾಗ. ಆಸಕ್ತಿವುಳ್ಳವರು ಕರೆ ಮಾಡಿ. ಕಮಿಷನ್ ಅನ್ವಯವಾಗುತ್ತದೆ.
Mob: 9900846129

ಬೇಕಾಗಿದ್ದಾರೆ
ಮೆಡಿಕಲ್ ಸ್ಟೋರ್‌ಗಳಲ್ಲಿ ಕೆಲಸ ಮಾಡಿ ಅನುಭವ ಇರುವ ಹುಡುಗರು Salesman ಕೆಲಸಕ್ಕೆ ಬೇಕಾಗಿದ್ದಾರೆ, ಮೈಸೂರು ನಗರದಲ್ಲಿ. ಸಂಪರ್ಕಿಸಿ:
Mob: 8310848018

ಬೇಕಾಗಿದ್ದಾರೆ
ಕನ್‌ಸ್ಟ್ರಕ್ಷನ್ ಕಂಪನಿಗೆ ಅನುಭವವುಳ್ಳ ಅಕೌಂಟೆಂಟ್ ಬೇಕಾಗಿದ್ದಾರೆ. ಸ್ಥಳ: ರಾಮಕೃಷ್ಣನಗರ, 'ಐ' ಬ್ಲಾಕ್.
Mob: 9008519600

ಸೈಟು ಮಾರಾಟಕ್ಕಿದೆ
40x60 ಉತ್ತರ ದಿಕ್ಕು, ಶಾರದನಗರ ರೈಲ್ವೆ ಲೇಔಟ್, ಬೋಗಾದಿ, ಮೈಸೂರು, ಸಂಪರ್ಕಿಸಿ
8050257887, 8762705887

ಬೇಕಾಗಿದ್ದಾರೆ
ಲೇಡಿಸ್ ಮತ್ತು ಜೆಂಟ್ಸ್ ಹೆಲ್ಪರ್, ಕ್ಯಾಶಿಯರ್ ಹಾಗೂ ಸೂಪರ್‌ವೈಸರ್, ಮೇಟಗಳ್ಳಿ ರಿಂಗ್‌ರೋಡ್‌ನಲ್ಲಿರುವ ಭಾರತ್ ಪೆಟ್ರೋಲಿಯಂ ಪೆಟ್ರೋಲ್ ಬಂಕ್, ಊಟ, ವಸತಿ ಲಭ್ಯವಿದೆ. ಸಂಪರ್ಕಿಸಿ
7892835168, 7026480147

ಬೇಕಾಗಿದ್ದಾರೆ
ಮೈಸೂರು ಗುಡ್ ವಿಶ್ ಫೌಂಡೇಶನ್ ಸೇವಾ ಸಂಸ್ಥೆಯೊಂದರಲ್ಲಿ ಪುರುಷ or ಮಹಿಳಾ ಅಭ್ಯರ್ಥಿ ಯಾವುದೇ ಪದವಿ ಅಥವಾ MSW ಅಭ್ಯರ್ಥಿ ವಸತಿ ಮೇಲ್ವಿಚಾರಕರ ಕೆಲಸಕ್ಕೆ ಬೇಕಾಗಿದ್ದಾರೆ. ದ್ವಿಚಕ್ರವಾಹನ Compulsory. ಸ್ಥಳ: (ಎನ್‌ಪಿಎಸ್ ಸ್ಕೂಲ್ ಹಿಂಭಾಗ), ವಿಜಯನಗರ ಮೈಸೂರು. ಸಂಪರ್ಕಿಸಬಹುದಾದ ಸಂಖ್ಯೆ:
7795708156 / 9148502314

ವರ ಬೇಕಾಗಿದ್ದಾರೆ
ಬೆಂಗಳೂರಿನಲ್ಲಿ ವಾಸವಾಗಿರುವ ವಯಸ್ಸು 42, B.Sc., ಕೇಂದ್ರ ಸರ್ಕಾರಿ ಹುದ್ದೆಯಲ್ಲಿರುವ ವಿಚ್ಛೇದಿತ ಮಹಿಳೆಗೆ ಸೂಕ್ತ ವರ ಬೇಕಾಗಿದ್ದಾರೆ. (Caste no bar).
Mob: 9902358147

ಕೆಲಸ ಖಾಲಿ ಇದೆ
ಕರ್ನಾಟಕದಾದ್ಯಂತ ಮಹಿಳೆಯರಿಗೆ & ವಿದ್ಯಾರ್ಥಿಗಳಿಗೆ ಆಫೀಸ್ ಕೆಲಸಗಳಿಗೆ ನೇರವಾಗಿ ಆಯ್ಕೆ. 7ನೇ, 10ನೇ, ಪಿಯುಸಿ, ಡಿಗ್ರಿ ಪಾಸ್, ಫೇಲ್ ಆದಂತವರಿಗೆ ವಿದ್ಯಾರ್ಹತೆಯಿಲ್ಲದವರಿಗೆ. 20,000 – 45,000. ಸಂಪರ್ಕಿಸಿ:
Mob: 9019593297

ಬಾಡಿಗೆಗೆ
5 ಮಳಿಗೆಗಳು, ಖಾಲಿ ಜಾಗ NH ಹೆದ್ದಾರಿಯಲ್ಲಿ ವಾಣಿಜ್ಯ ಜಾಗ, ಮಡಿಕೇರಿಯಿಂದ, 5.5 ಕಿ.ಮೀ. ಸಿಂಕೋನದ ಹತ್ತಿರ ಲಭ್ಯವಿರುತ್ತದೆ. ಸಂಪರ್ಕಿಸಿ:
Mob: 9611656766

ಬೇಕಾಗಿದ್ದಾರೆ
ಮೈಸೂರಿನ ನಜರ್‌ಬಾದ್‌ನಲ್ಲಿ ಮನೆ ಕೆಲಸಕ್ಕೆ ಮತ್ತು ಅಡುಗೆ ಸಹಾಯಕ್ಕೆ ಮಹಿಳಾ ಕೆಲಸಗಾರರು ಬೇಕಾಗಿದ್ದಾರೆ. ಸಮಯ: 9.30 ರಿಂದ 4.30 ರವರೆಗೆ. ವೇತನ: 10,000 + ಊಟ.
Mob: 95353-25223

ನಿವೃತ್ತರಿಗೆ ಅವಕಾಶ
ನಿವೃತ್ತರು, ವಿದ್ಯಾವಂತ ಗೃಹಿಣಿಯರು, ಬಿಸಿನೆಸ್ ವಲಯ ಇವರಿಗೆ ಆಹ್ವಾನ
ದಿನಾಂಕ: 29.11.2025 ಶನಿವಾರ 11 ಗಂಟೆ
ಸ್ಥಳ: ಹೋಟೆಲ್ ಗೋವರ್ಧನ್ ಶ್ರೀ ಹರ್ಷ ರಸ್ತೆ, ಮೈಸೂರು. ಸ್ಯಾಲರಿ, ಇನ್ಸೆಂಟಿವ್ಸ್ ಇತರೆ ಸೌಲಭ್ಯವಿದೆ. Lunch Arranged
Contact: 9448188504 / 9611073077 / 7349052084

OLD AGE HOME
ನಮ್ಮಲ್ಲಿ ಎಲ್ಲಾ ತರಹದ ಹಿರಿಯ ನಾಗರಿಕರನ್ನು ಅಥವಾ ವೃದ್ಧರನ್ನು ಮನೆಯ ವಾತಾವರಣದಲ್ಲಿ ಊಟ, ವಸತಿ, ನರ್ಸಿಂಗ್‌ಕೇರ್ ಮತ್ತು ವೈದ್ಯರ ಆರೈಕೆಯೊಂದಿಗೆ ನೋಡಿಕೊಳ್ಳುತ್ತೇವೆ. ಹೆಚ್ಚಿನ ಮಾಹಿತಿಗಾಗಿ ಕರೆಮಾಡಿ
Mob: 9607172737

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ. ಸ್ಥಳ : ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ
6364748485

FOR SALE
Newly constructed house (30x40) E-F in Vasantha Nagar. 30x50 site in Pragati Dreams Layout, near to Infosys. Contact:
MoB: 9008099499

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7975101020

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಸಂಪು ಮತ್ತು ಟ್ಯಾಂಕ್ ಸೋಲಾರ್ ಸರ್ವೀಸ್
Mob: 9964733988

SITE FOR SALE
40/60 North Roopa nagar
Call: 9880273834

ಉದ್ಯೋಗವಕಾಶ
7th, 10th, PUC, any Degree ಮಹಿಳೆಯರು, ಯುವತಿಯರು, ಹಾಗೂ ಯುವಕರು ನಮ್ಮ ಸಂಸ್ಥೆಯಲ್ಲಿ ಹೋಂ ನರ್ಸಿಂಗ್ ಕೆಲಸ ಮಾಡಲು ಬೇಕಾಗಿದ್ದಾರೆ, ಉಚಿತ ಊಟ ಮತ್ತು ವಸತಿಯೊಂದಿಗೆ ಆಕರ್ಷಕ ಸಂಬಳ ಇರುತ್ತದೆ ಸರ್ಕಾರಿ ನೊಂದಾಯಿತ ಸಂಸ್ಥೆ
Mob: 9739292222

FOR SALE
20x30 Old Houses @ Kuvempunagar, RK Nagar
40x120 Site@ 80 Feet Road in Dattagalli
20x30 New Duplex House @ Utthanahalli & Dattagalli
40x60@ JP Ngr, Shardha Lyt
30x40 House Near Kamakshi Hospital, JP Nagar
20x30 House @ Srirampura
PRAKRUTHI PROPERTIES
95386 90359, 90359 90359

ಬೇಕಾಗಿದ್ದಾರೆ
ನುಡಿ ಟೈಪ್ ಮಾಡಲು ಹುಡುಗ / ಹುಡುಗಿಯರು ಬೇಕಾಗಿದ್ದಾರೆ
ಸಂಬಳ 15000/-
Ph.7353116004

ಬೇಕಾಗಿದ್ದಾರೆ
ಮೈಸೂರು ಜಿಲ್ಲೆಯಲ್ಲಿ ನೂತನವಾಗಿ ಪ್ರಾರಂಭವಾಗಿರುವ ಕಾರ್ ಶೋರೂಮ್ ಹಾಗೂ ಬೈಕ್ ಶೋರೂಂಗಳಿಗೆ, CASHIER, RECEPTIONIST, HR, ADMIN, ACCOUNT, ಕೆಲಸಕ್ಕೆ, ತಕ್ಷಣ ಯುವಕ, ಯುವತಿಯರು ಬೇಕಾಗಿದ್ದಾರೆ, (18k -38k), SSLC, PUC, DEGREE.
9739121355, 6366718368

WANTED
Female candidates working front office, any Degree, age 20 to 35 years, working place Vijayanagar, Mysore.
Mob: 89048 12796

ಆಲ್ಟ್ರೇಷನ್ ಕೆಲಸ ಮಾಡಿಕೊಡಲಾಗುತ್ತದೆ
ಹಳೇಮನೆ ಕೆಲಸ ಮತ್ತು ಬಣ್ಣದ ಕೆಲಸ, ಗಾರೆ ರಿಪೇರಿ ಮತ್ತು ತಾರಸಿ ಸೋರುವಿಕೆ ಸರಿಪಡಿಸಿಕೊಡಲಾಗುತ್ತದೆ.
Mob: 6360884930

ಬೇಕಾಗಿದ್ದಾರೆ
ಮೈಸೂರಿನಲ್ಲಿರುವ Govt. registered A.W. Group of ಕಂಪನಿಗೆ SSLC, PUC, ITI, Any Degree, Diploma etc. ಆದಂತಹ 219 ಅಭ್ಯರ್ಥಿಗಳು ಬೇಕಾಗಿದ್ದಾರೆ. ತಿಂಗಳಿಗೆ : 21000 - 25,500 ವಯೋಮಿತಿ : 18-31 years (ಉಚಿತ, ಊಟ + ವಸತಿ+ Promotions) Freshers ಗಳಿಗೆ ಹೆಚ್ಚಿನ ಆದ್ಯತೆ. ಸ್ಫೂರ್ತಿ
7349699460, 7090212014

S.K. CONSTRUCTION
ನಿಮ್ಮ ಕನಸಿನ ಮನೆ ಕಟ್ಟಬೇಕೆ ಚಿಂತೆ ಬೇಡ ಅತಿ ಉತ್ತಮ ಗುಣಮಟ್ಟದಲ್ಲಿ ನಿಮ್ಮ ಕೈಗೆಟುಕುವ ಬೆಲೆಯಲ್ಲಿ – Plan-3.D. Elevation ಮತ್ತು Loan ಸಹಿತ ಮಾಡಿ ಮನೆ ಕಟ್ಟಿಕೊಡುತ್ತೇವೆ
Ph: 9620528490

SITES WANTED
@ Nagawala, Yelwala, Acharya Vidyakula, Central St. Joseph School & Mys-surroundings.
QUICK REGN.
Mob: 95388-39926

ಕೆಲಸಕ್ಕೆ ಬೇಕಾಗಿದ್ದಾರೆ ಹುಡುಗಿಯರು
ಕಂಪ್ಯೂಟರ್ ತಿಳಿದವರು (ಸೈಬರ್ ಸೆಂಟರ್) ವಿದ್ಯಾರಣ್ಯಪುರಂನ ಅಂಗಡಿಗೆ ಕೆಲಸಕ್ಕೆ ಬೇಕಾಗಿದ್ದಾರೆ. (ವಿದ್ಯಾರಣ್ಯಪುರಂನವರಿಗೆ ಆದ್ಯತೆ)
Mob: 9686096366

WANTED
Home Nurse & ANM Staff Nurse for senior living.
Call: 8095598555

ಮನೆ ಬಾಡಿಗೆಗೆ ಇದೆ
ವಿಜಯನಗರ 2ನೇ ಹಂತ, ಕೆ.ಡಿ. ಸರ್ಕಲ್, ಕೆನರಾ ಬ್ಯಾಂಕ್ ಹಿಂಭಾಗ, 1621, 6ನೇ ಮೇನ್, 5ನೇ ಕ್ರಾಸ್, ಗ್ರೌಂಡ್ ಫ್ಲೋರ್ 3 BHK.
Mob: 9900194232

Move Goods Fast !
Tata ACC / Jeeto Van on Rent
City & Inter City
7892156457, 8310381391

ಸೈಟು ಮಾರಾಟಕ್ಕಿದೆ
ನಿವೇಶನ ಸಂಖ್ಯೆ 47, 40'x70' W/F ಬಸವೇಶ್ವರ ಬಡಾವಣೆ SVIE ಸ್ಕೂಲ್ ಹತ್ತಿರ, ವಿಜಯನಗರ 4ನೇ ಹಂತ,
ಮೊ: 9880196931

HOUSE FOR RENT
40x60 2 BHK N/F, 2nd Floor Italian Kitchen with Solar (Behind Hunsemara) Srirampura 2nd Stage, Mysore
Ph: 9900357807

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್, 40 ವರ್ಷದ ಒಳಗೆ, ಹೌಸ್‌ಕೀಪಿಂಗ್ ಪುರುಷ ಹೌಸ್‌ಕೀಪಿಂಗ್ ಸೂಪರ್‌ವೈಸರ್. ಸ್ಥಳ: ಗೋಕುಲಂ, ಮೈಸೂರು.
8088716663, 9353046663

Ready to work in bank & finance as a recovery service.
1) Required female & male telecaller, fresher 8K salary + incentive. Experience will discuss. (2) Required field executive, freshers 12K salary + incentive + petrol allowance. Experience 20% hike. Work place: SLV Enterprises, 423, 3rd Floor, Chamaraja Double Road, Near Ramaswamy Circle, above Kanakadurga Finance, Mysore-570 004. Contact:
Mob: 9945166614 or landline 0821-4502039

ಶ್ರೀ ಸಾಯಿ ಎಲೆಕ್ಟ್ರಾನಿಕ್ಸ್
ಸಾರ್ವಜನಿಕ ಸ್ಥಳಗಳಲ್ಲಿ ಪಾಂಪ್ಲೆಟ್ಸ್ ಹಂಚಲು ಹುಡುಗರು ಕೆಲಸಕ್ಕೆ ಬೇಕಾಗಿದ್ದಾರೆ. ಸಂಪರ್ಕಿಸಿ:
Mob: 8660845940

SITE FOR SALE
40x23 north facing site for sale in Panchacharya Layout, attached to Vijayanagar 4th Stage. Total 900 sqft. 5750 rupees/sqft.
Call: 8884616461, 8073300783

ಮಾರಾಟಕ್ಕಿದೆ
2 BHK ಅಪಾರ್ಟ್‌ಮೆಂಟ್ 2nd Floor, 1050 Sq.Ft. 80 ಅಡಿ ರಸ್ತೆ, ರೂ. 85 ಲಕ್ಷ, ದಿವ್ಯರೂಪ ಕಲ್ಯಾಣ ಮಂಟಪದ ಎದುರು, ವಿಜಯನಗರ 1ನೇ ಹಂತ, ಮೈಸೂರು
8762705887, 9845955369

ನೇರ ಆಯ್ಕೆ ಉದ್ಯೋಗವಕಾಶ
ವರ್ಕ್ ಫ್ರಮ್ ಹೋಂ ಮನೆಯಿಂದಲೇ ಕೆಲಸ ಪಾರ್ಟ್ ಟೈಮ್ & ಫುಲ್ ಟೈಮ್ ವರ್ಕ್‌ಗಳಿಗೆ ವಿದ್ಯಾರ್ಥಿಗಳಿಗೆ + ಮಹಿಳೆಯರಿಗೆ ಹಾಗೂ ವಯಸ್ಕರಿಗೆ ಮೊದಲ ಆದ್ಯತೆ ಕೊರಿಯರ್ ಸೌಲಭ್ಯವಿದೆ. 7th, 10th, PUC, Any Degree ಪಾಸ್ ಫೇಲ್ ಆದವರು 20000/- ದಿಂದ 25000/- ಸಂಪರ್ಕಿಸಿ
8095133188 / 6362024878

ನಿವೃತ್ತ ಅಧಿಕಾರಿಗಳಿಗೆ ಉದ್ಯೋಗವಕಾಶ
ನಿವೃತ್ತ ಅಧಿಕಾರಿಗಳಿಗೆ ಉದ್ಯೋಗಾವಕಾಶಗಳು ವಿದ್ಯಾರ್ಹತೆ : SSLC, PUC, Degree ವೇತನ : 10,000/-, 20,000/-, 30,000/- ಮತ್ತು ಉಚಿತ ವಿದೇಶ ಪ್ರವಾಸ ಮತ್ತು ಇತರೆ ಭತ್ಯೆಗಳು. ಸಂಪರ್ಕಿಸಿ
9686665262

ಸೈಟು ಮಾರಾಟಕ್ಕಿದೆ
33x33 ಸೌತ್‌ಫೇಸ್, ರೂ.30 ಲಕ್ಷ, ಪಟ್ಟಣ ಪಂಚಾಯಿತಿ ಖಾತೆ, ಮಾದಗಳ್ಳಿ, 30x40 ವೆಸ್ಟ್‌ಫೇಸ್, ರೂ.60 ಲಕ್ಷ ರಾಮಯ್ಯ ಲೇಔಟ್, ವಿಜಯನಗರ 4ನೇ ಹಂತ,
8050257887, 8762705887

2 ಸೈಟು ಮಾರಾಟಕ್ಕಿದೆ
30x40 ವೆಸ್ಟ್‌ಫೇಸ್, ಹ್ಯಾಪಿಟೌನ್, ಮನುಗನಹಳ್ಳಿ ಚೆಕ್ ಪೋಸ್ಟ್ ಹತ್ತಿರ, ಚದುರಡಿಗೆ 1650/– ರೂ.ಗಳು
8050257887, 8762705887

ಕಡಿಮೆ ಬಾಡಿಗೆಗೆ ಜಮೀನು ಲಭ್ಯ
ಬೋಗಾದಿ ಸಿಗ್ನಲ್‌ನಿಂದ 4 ಕಿಮೀ ದೂರದಲ್ಲಿ ಚದರಡಿಗೆ 99 ಪೈಸೆಗೆ 59999 ಚದರಡಿ–ಅಲಿನೇಶನ್ ಜಮೀನು ಎಲ್ಲಾ ಸೌಕರ್ಯವಿರುವ, ವಿವಿಧ ಉದ್ದೇಶಕ್ಕೆ(ರೆಸಾರ್ಟ್, ಪಶುಸಂಗೋಪನೆ, ಕೈಗಾರಿಕೆಗೆ)ಬಾಡಿಗೆಗಿದೆ. ಸಂಪರ್ಕಿಸಿ
8197609290

ಬೇಕಾಗಿದ್ದಾರೆ
ಹುಡುಗ & ಹುಡುಗಿಯರು ಬೇಕಾಗಿದ್ದಾರೆ.
SSLC/PUC Pass/Fail
Vinayaka Associates, # 1251, New No D 26, Desai Empire 2nd Floor, Narayana Shastri Road, Mysore -570001
Contact : 9845156619
9902356331, 9902356334

ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್ಸ್ ಸಂಬಳ : 15000/– ರಿಂದ 16000/– (12 ಗಂಟೆ) ಅರ್ಹತೆ : ಎಸ್.ಎಸ್.ಎಲ್.ಸಿ ಯಿಂದ ಡಿಗ್ರಿವರಿಗೂ, ವಯಸ್ಸು : 30 ರಿಂದ 45 ರವರಿಗೂ ಸ್ಥಳ : ನಜರ್‌ಬಾದ್, ಸಿದ್ಧಾರ್ಥ ಲೇಔಟ್, ಸಂಪರ್ಕಿಸಿ
7483638113

ತಕ್ಷಣ ಬೇಕಾಗಿದ್ದಾರೆ
ಮೈಸೂರು ಮತ್ತು ಬೆಂಗಳೂರಿನಲ್ಲಿರುವ ಕಂಪನಿ ಮತ್ತು ಆಫೀಸ್‌ಗಳಿಗೆ 7ನೇ, 10ನೇ, ಪಿಯುಸಿ, ಡಿಗ್ರಿ ಪಾಸ್ / ಫೇಲ್ ಆದಂತಹ ಯುವಕರು ಯುವತಿಯರಿಗೆ 20,000 ದಿಂದ 45,000+ ಓಟಿ(ವಿದ್ಯಾರ್ಹತೆಯಿಲ್ಲದವರಿಗೂ) ವಸತಿಯೂಟವಿದೆ. ಸಂಪರ್ಕಿಸಿ
9916744622

ಸದ್ಗುರು ಮ್ಯಾರೇಜಸ್
ಎಲ್ಲಾ ಜಾತಿಯ ವಧುವರರು ವಿಧುರರು, ವಿಧವೆಯರು ವಿಚ್ಛೇದಿತರು ನೇರ ಸಂಪರ್ಕಿಸಿ, ಪ್ರತಿದಿನ ವಧುವರರ ನೇರ ಸಂದರ್ಶನ ಇರುತ್ತದೆ.
9448229184, 7899625268

ಬಸ್ ಚಾಲಕರು ಬೇಕಾಗಿದ್ದಾರೆ
ಮೈಸೂರಿನ ವಿಜಯನಗರದಲ್ಲಿರುವ ರಾಷ್ಟ್ರೋತ್ಥಾನ ವಿದ್ಯಾಕೇಂದ್ರ ಶಾಲೆಗೆ ಬಸ್ ಚಾಲಕರು ಬೇಕಾಗಿದ್ದಾರೆ. ಸಂಪರ್ಕಿಸಿ
9483670193

ಸೆಕ್ಯೂರಿಟಿಗಾರ್ಡ್ಸ್ ಬೇಕಾಗಿದ್ದಾರೆ
ಮೈಸೂರಿನ ಸುತ್ತಮುತ್ತ ಕೆಲಸ ನಿರ್ವಹಿಸಲು ಸೆಕ್ಯೂರಿಟಿ ಗಾರ್ಡ್ಸ್‌ಗಳು ಬೇಕಾಗಿದ್ದಾರೆ. ವಯೋಮಿತಿಯು 50 ವರ್ಷದೊಳಗೆ ವಿದ್ಯಾಭ್ಯಾಸ ಹತ್ತನೇ ತರಗತಿ ಪಾಸ್ ಅಥವಾ ಫೇಲ್, ಪಿಎಫ್, ಇಎಸ್‌ಐ ಇರುತ್ತದೆ. ಸಂಪರ್ಕಿಸಿ
6361765969, 8792815411

WANTED
ಫರ್ನಿಶಿಂಗ್ ಅಂಗಡಿಯಲ್ಲಿ ಅಕೌಂಟೆಂಟ್ ಕೆಲಸಕ್ಕೆ 1 Year Experience ಇರುವವರು ಬೇಕಾಗಿದ್ದಾರೆ Near Ashoka Road
9916514950

ಗ್ರಾವೆಲ್, ಕೆಮ್ಮಣ್ಣು ದೊರೆಯುತ್ತದೆ
ಜಮೀನು 10 ಕುಂಟೆ, 5 ಕುಂಟೆ, 20 ಕುಂಟೆ, ಬೇಕಾದವರು. ಸಂಪರ್ಕಿಸಿ
7259407518

ಬೇಕಾಗಿದ್ದಾರೆ
ಸೋನಾಲಿಕಾ ಟ್ರ್ಯಾಕ್ಟರ್ ಶೋರೂಂ ಶ್ರೀ ಮಂಜುನಾಥ ಟ್ರ್ಯಾಕ್ಟರ್ಸ್, ಮೈಸೂರು ಬೋಗಾದಿ ರಿಂಗ್ ರೋಡ್ ಜಂಕ್ಷನ್, ಮೈಸೂರು, ನಂಜನಗೂಡು, ಟಿ.ನರಸೀಪುರ ಶಾಖೆಗಳಿಗೆ ಸೇಲ್ ಎಕ್ಸಿಕ್ಯೂಟಿವ್ ಮತ್ತು ಮೆಕ್ಯಾನಿಕ್‌ಗಳು ಕೆಲಸಕ್ಕೆ ಬೇಕಾಗಿದ್ದಾರೆ. ಆಕರ್ಷಕ ವೇತನ ಮತ್ತು ಟಿ.ಎ., ಡಿಎ ನೀಡಲಾಗುತ್ತದೆ. ಆಸಕ್ತರು ಸಂಪರ್ಕಿಸಿ
9880111533, 9880999411

ಉದ್ಯೋಗ ಅವಕಾಶ
ಕರ್ನಾಟಕದಾದ್ಯಂತ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ ಮತ್ತು ವೇರ್‌ಹೌಸ್/ಬ್ಯಾಂಕ್/ ಆಫೀಸ್ ಕೆಲಸಗಳಿಗೆ 4th, 10th, ITI, B.Com, B.Sc, BE, B.Tech, Any Degree ಪಾಸ್/ಫೇಲ್ ಆದ ಯುವಕ/ ಯುವತಿಯರು ಹಾಗೂ ಚಾಲಕರು ಇಂದೇ ಬೇಕಾಗಿದ್ದಾರೆ. ESI, PF ನೊಂದಿಗೆ ಊಟ ವಸತಿಯಿರುತ್ತದೆ. ಸಂಬಳ+ ಓಟಿ, 15200 – 86000
7406996362

ಬೇಕಾಗಿದ್ದಾರೆ
ಅನುಭವವುಳ್ಳ ಅಕೌಂಟೆಂಟ್‌ಗಳು ವೆಲ್ಡರ್ ಹಾಗೂ ಸೆಕ್ಯೂರಿಟಿ ಗಾರ್ಡ್ ಹೆಲ್ಪರ್‌ಗಳು(ಹುಡುಗರು, ಹುಡುಗಿಯರು) ಬೇಕಾಗಿದ್ದಾರೆ. ಸಂಪರ್ಕಿಸಿ
8105248880, 7795285485

ಮನೆ ಮಾರಾಟಕ್ಕಿದೆ
20x30 North Face Ground Floor & First Floor # No. 554, 2nd Cross
Broker Excuse
ಬೋಗಾದಿ ಉತ್ತರ, Mysore- 54
Contact : 9945616945

SITE FOR SALE
30x40 (MUDA Approved) near Sri Rampura Ring Road, Mysuru
Mob : 8050345574

WANTED
FOR WHOLESALE PHARMA
Male Staff - 3 (Collection, Packing, Office work)
Driving Cum Distribution - 1 (4 wheel commercial Vehicle)
Store Keeping work -3(Female)
Computer work Cum Office work -1(Female), SSLC/PUC/ Degree Pass/Fail with or without experience
9986108208, 9739377827

ಮೈಸೂರು ಮಿತ್ರ 46 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ ರೂ. 630 ಮಾತ್ರ

ಮಾಜಿ ಸಚಿವ ಸಾ.ರಾ.ಮಹೇಶ್ ಸಮ್ಮುಖದಲ್ಲಿ

'ಕೈ' ತೊರೆದು ಜೆಡಿಎಸ್ ಸೇರ್ಪಡೆಗೊಂಡ ಕುರುಬ ಸಮುದಾಯದ ಮುಖಂಡರು

ಸರ್ಕಾರ ಬಂದು ಎರಡೂವರೆ ವರ್ಷವಾದರೂ ಗ್ರಾಮದ ಅಭಿವೃದ್ಧಿ ಮಾಡಿಲ್ಲ; ಶಾಸಕ ಡಿ.ರವಿಶಂಕರ್ ವಿರುದ್ಧ ಆರೋಪ



ಕುರುಬ ಸಮುದಾಯದ ಮುಖಂಡರು ಮಾಜಿ ಸಚಿವ ಸಾರಾ ಮಹೇಶ್ ಸಮ್ಮುಖದಲ್ಲಿ ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಯಾದರು.

ಭೇರ್ಯ, ನ.26– ಜಿಪಂ ಮಾಜಿ ಸದಸ್ಯರೂ ಆದ ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಪುತ್ರ ಅಮಿತ್ ವಿ.ದೇವರಹಟ್ಟಿ ನೇತೃತ್ವದಲ್ಲಿ ಕುರುಬ ಸಮುದಾಯದ ಹಲವು ಮುಖಂಡರು ಹಾಗು ಯುವಕರು ಮಾಜಿ ಸಚಿವ ಸಾರಾ ಮಹೇಶ್ ಸಮ್ಮುಖದಲ್ಲಿ ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಗೊಂಡರು.

ಈ ವೇಳೆ ಮಾತನಾಡಿದ ಕುರುಬ ಸಮುದಾಯದ ಮುಖಂಡರು, ಸರ್ಕಾರ ಬಂದು ಎರಡೂವರೆ ವರ್ಷ ಕಳೆದರೂ ಗ್ರಾಮದ ಅಭಿವೃದ್ಧಿ ಆಗಿಲ್ಲ. ಚುನಾವಣಾ ಸಮಯದಲ್ಲಿ ಕೊಟ್ಟ ಭರವಸೆಗಳು ಬರಿ ಭರವಸೆಗಳಾಗಿಯೇ ಉಳಿದಿವೆ ಇದರಿಂದ ಬೇಸತ್ತು ಸಾಲಿಗ್ರಾಮ ತಾಲೂಕಿನ ಬಾಚಹಳ್ಳಿ ಗ್ರಾಮದ ಯುವಕರು ಮತ್ತು ಮುಖಂಡರು ಕಾಂಗ್ರೆಸ್ ತೊರೆದು ಜೆಡಿಎಸ್ ಸೇರುತ್ತಿದ್ದೇವೆ ಎಂದು ತಿಳಿಸಿದರು.

ನಮ್ಮೂರಿನ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ನಿಷ್ಠಾವಂತರಾಗಿ ಮತ ನೀಡಿದೆವು. ಆದರೆ ಇದುವರೆವಿಗೂ ಅಭಿವೃದ್ಧಿ ಭಾಗ್ಯ ಕಾಣಲಿಲ್ಲ. ಎಂದು ಬೇಸರ ವ್ಯಕ್ತಪಡಿಸಿದ ಮುಖಂಡರು, ಯುವಕರು ಕಳೆದ ಮೂರು ವಿಧಾನಸಭಾ ಚುನಾವಣೆಗಳಲ್ಲೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿದ್ದೇವೆ. ಇಡೀ ಗ್ರಾಮವೇ ಒಗ್ಗೂಡಿಸಿ 2013 ಚುನಾವಣೆಯಲ್ಲಿ ದೊಡ್ಡಸ್ವಾಮೇಗೌಡರಿಗೆ, 2018 ಮತ್ತು 2023ರಲ್ಲಿ ಶಾಸಕರಾದ ಡಿ.ರವಿಶಂಕರ್ ಅವರಿಗೆ ಮತ ನೀಡಿದ್ದೇವೆ. ಇಷ್ಟಾದರೂ ಗ್ರಾಮಕ್ಕೆ ಎರಡೂವರೆ ವರ್ಷಗಳಿಂದ ಒಂದು ಇಡೀ ಮಣ್ಣು ಕೂಡ ಹಾಕಲಿಲ್ಲ ಎಂದು ಶಾಸಕ ಡಿ.ರವಿಶಂಕರ್ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಇನ್ನಾದರು ನಾವೇಕೆ ಕಾಂಗ್ರೆಸ್ ಪಕ್ಷ ಬೆಂಬಲಿಸಬೇಕು ಎಂದು ನಮ್ಮ ಯುವಕರು ಒಂದಡೆ ಸೇರಿ ಚರ್ಚಿಸಿ ಜೆಡಿಎಸ್ ಸೇರಲು ಅಮಿತ್ ವಿ.ದೇವರಹಟ್ಟಿ ಅವರೊಂದಿಗೆ ದೂರವಾಣಿ ಮೂಲಕ ತಿಳಿಸಿದಾಗ ಮನೆಗೆ ಬನ್ನಿ ಮಾತನಾಡೋಣ ಎಂದು ತಿಳಿಸಿದರು. ನಾವೆಲ್ಲರೂ ಅವರೊಂದಿಗೆ ಪಕ್ಷ ಸೇರುವ ಬಗ್ಗೆ ಚರ್ಚಿಸಿ ಧೃಡ ನಿರ್ಧಾರ ಕೈಗೊಂಡು ಇಂದು ಸಾರಾ ಮಹೇಶ್ ಅವರ ಸಮುಖದಲ್ಲಿ ಜೆಡಿಎಸ್ ಸೇರಿದ್ದೇವೆ. ನಾವುಗಳು ಯಾರು ಏನೇ ಆಸೆ, ಆಮಿಷ ಒಡ್ಡಿದರೂ ಯಾವುದೇ ಕಾರಣಕ್ಕೂ ಜೆಡಿಎಸ್ ಬಿಡುವ ಪ್ರಶ್ನೇ ಇಲ್ಲ, ಇದರಲ್ಲಿ ಯಾವುದೇ ಅನುಮಾನ ಬೇಡ ಎಂದು ಹೇಳಿದರು.

ಬಳಿಕ ಜಿಪಂ ಮಾಜಿ ಸದಸ್ಯ ಅಮಿತ್ ವಿ.ದೇವರಹಟ್ಟಿ ಅವರು ಮಾತನಾಡಿ, ಮಾಜಿ ಸಚಿವ ಸಾರಾ ಮಹೇಶ್ ಅವರಿಗೆ ಬಾಚಹಳ್ಳಿ ಕುರುಬ ಸಮಯದಾಯ ಹೆಚ್ಚಾಗಿ ಓಟ್ ಕೊಡದಿದ್ದರೂ, ಶಾಲಾ ಮಕ್ಕಳಿಗೆ ನೋಟ್ ಪುಸ್ತಕ, ಬಾಚಹಳ್ಳಿ ಮುಖ್ಯ ರಸ್ತೆ, ದೇವಸ್ಥಾನಕ್ಕೆ ಎರಡು ಲಕ್ಷ ಅನುದಾನ ನೀಡಿದ್ದರು. ಅಲ್ಲದೆ ಸಾವು–ನೋವು, ಸಮಾರಂಭಗಳಿಗೆ ಆರ್ಥಿಕ ನೆರವು ನೀಡುತ್ತಿದ್ದರು ಈ ಭಾಗದ ಕೆರೆ–ಕಟ್ಟೆಗಳು ತುಂಬಿಸಲು, ನೀರಾವರಿ ಅಚ್ಚುಕಟ್ಟು ಪ್ರದೇಶ ಮಾಡಲು ಮುಕ್ಕನಹಳ್ಳಿ ಕೆರೆಯಿಂದ ಏತ ನೀರಾವರಿ ಯೋಜನೆ ಮಾಡಿದ್ದರಿಂದ ಇಂದು ಹಾರಂಗಿ ನಾಲೆ ಮೂಲಕ ಸಮಗ್ರವಾಗಿ ಕೊನೆ ಹಂತದವರೆಗೆ ನಾಲೆಯಲ್ಲಿ ನೀರು ಹರಿಯುತ್ತಿದೆ ಎಂದರು.

ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದಲ್ಲಿ ಈಗಾಗಲೇ ಶಾಸಕ ಡಿ.ರವಿಶಂಕರ್ ವಿರುದ್ಧವಾಗಿ ಕುರುಬ ಸಮುದಾಯದ ಹಲವರು ಅಸಮಾಧಾನ ಹೊಂದಿದ್ದು ಸದ್ಯದಲ್ಲಿ ಇನ್ನೂ ಕೆಲವು ಗ್ರಾಮದ ಕುರುಬ ಸಮುದಾಯದ ಯುವಕರು, ಮುಖಂಡರು ಜೆಡಿಎಸ್ ಸೇರಲಿದ್ದಾರೆ ಎಂದು ಅಮಿತ್ ವಿ.ದೇವರಹಟ್ಟಿ ತಮ್ಮ ಇಂಗಿತವನ್ನು ವ್ಯಕ್ತಪಡಿಸಿದರು.

ಈ ವೇಳೆ ಬಾಚಹಳ್ಳಿ ಗ್ರಾಮದ ಕುರುಬ ಸಮುದಾಯದ ಯಜಮಾನ್ ಮಾಕೇಗೌಡ, ರಂಗೇಗೌಡ, ಜವರೇಗೌಡ, ರಾಜೇಗೌಡ, ಜಯರಾಮೇಗೌಡ, ನಾಗೇಶ್, ಚಂದ್ರು ಮಹದೇವ್, ವಡ್ಡಮನು, ಅಶೋಕ, ಮಂಜು, ಪದ್ಮರಾಜ್, ಪ್ರಸನ್ನ, ಭಾಸ್ಕರ್, ಯೋಗೇಶ್, ಚೆಲುವಶೆಟ್ಟಿ, ಅಮಾಸೆ ಮಹದೇವ್, ಬಿ.ಎಂ. ದರ್ಶನ್, ಅಭಿ, ರಾಜು, ಮೂಗಣ್ಣ ಆನಂದ್ ಇನ್ನಿತರರು ಮಾಜಿ ಸಚಿವರ ಸಮ್ಮುಖದಲ್ಲಿ ಜೆಡಿಎಸ್ ಸೇರ್ಪಡೆಯಾದರು.

ಜೆಡಿಎಸ್ ಮುಖಂಡರಾದ ಗಂಧನಹಳ್ಳಿ ಸಾ.ರಾ.ಜಲೇಂದ್ರ, ಸಾಲಿಗ್ರಾಮ ಎಸ್.ಪಿ.ಆನಂದ್, ಬಾಚಹಳ್ಳಿ ರಘು ಮೊದಲಾದವರು ಇದ್ದರು.

ವಿಜೃಂಭಣೆಯ ಶ್ರೀ ಸುಬ್ರಹ್ಮಣ್ಯೇಶ್ವರ ರಥೋತ್ಸವ



ಮಾದಾಪುರದಲ್ಲಿ ಶ್ರೀಸುಬ್ರಹ್ಮಣ್ಯೇಶ್ವರ ರಥೋತ್ಸವ ನಡೆಯಿತು.

ತಿ.ನರಸೀಪುರ, ನ.26– ಷಷ್ಠಿ ಹಬ್ಬದ ಪ್ರಯುಕ್ತ ತಾಲೂಕಿನ ಮಾದಾಪುರ ಗ್ರಾಮದಲ್ಲಿರುವ ಶ್ರೀ ಮರುಡೇಶ್ವರ ದೇವಸ್ಥಾನದ ಪಕ್ಕದಲ್ಲಿರುವ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದ ಬಳಿ ಭಕ್ತರು ಹುತ್ತಕ್ಕೆ ತನಿಯೆರೆದು ದೇವಸ್ಥಾನದಲ್ಲಿ ಮಧ್ಯಾಹ್ನ 1 ಗಂಟೆಗೆ ನಡೆದ ಶ್ರೀ ಸುಬ್ರಹ್ಮಣ್ಯೇಶ್ವರ ರಥೋತ್ಸವದಲ್ಲಿ ಪಾಲ್ಗೊಂಡರು. ಶ್ರೀ ಸುಬ್ರಮಣ್ಯಸ್ವಾಮಿ ಉತ್ಸವ ಮೂರ್ತಿಯನ್ನು ಕೂರಿಸಿ ದೇವಸ್ಥಾನದ ಮುಂಭಾಗದಲ್ಲಿರುವ ರಥದ ಬೀದಿಯಲ್ಲಿ ಒಂದು ಸುತ್ತು ತೇರನ್ನು ಎಳೆಯಲಾಯಿತು. ಸುತ್ತಮುತ್ತಲಿನ ಗ್ರಾಮದವರು ಬಂದು ಸ್ವಾಮಿಯ ದರ್ಶನವನ್ನು ಪಡೆದರು. ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಯಿತು. ದೇವಸ್ಥಾನದ ಪ್ರಧಾನ ಅರ್ಚಕರಾದ ಪರಶಿವಮೂರ್ತಿಯವರು ಹಾಗೂ ಮಂಜುನಾಥ್ ಅವರು ಪೂಜಾ ಕಾರ್ಯವನ್ನು ನೆರವೇರಿಸಿದರು.

ಶ್ರೀಕಂಠೇಶ್ವರನ ಹುಂಡಿಯಲ್ಲಿ 3.2 ಕೋಟಿ ರೂ. ಸಂಗ್ರಹ

ನಂಜನಗೂಡು: ಇಲ್ಲಿನ ಪುರಾಣ ಪ್ರಸಿದ್ಧ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದಲ್ಲಿ ಮಂಗಳವಾರ ಹುಂಡಿಗಳಲ್ಲಿ ಭಕ್ತರು ಸಲ್ಲಿಸಿದ ಕಾಣಿಕೆ ಎಣಿಕೆ ಕಾರ್ಯ ನಡೆಸಲಾಗಿ 3.2 ಕೋಟಿ ನಗದು ಆದಾಯ ದೊರೆತಿದೆ.

ದೇವಾಲಯದ ದಾಸೋಹ ಭವನದಲ್ಲಿ 31 ಹುಂಡಿಗಳನ್ನು ತೆರೆದು ಎಣಿಕೆ ಕಾರ್ಯ ನಡೆಸಿದಾಗ 3,02,63,795 ರೂಪಾಯಿ ನಗದು, ಚಿನ್ನ 82 ಗ್ರಾಮ್, ಬೆಳ್ಳಿ 2.6 ಕೆ.ಜಿ ಹಾಗೂ 34 ವಿದೇಶಿ ಕರೆನ್ಸಿಗಳು ಲಭ್ಯವಾದವು.

ಹುಂಡಿ ಏಣಿಕೆ ಕಾರ್ಯದಲ್ಲಿ ಸ್ವಸಹಾಯ ಸಂಘದ ನೂರಕ್ಕು ಹೆಚ್ಚು ಮಹಿಳೆಯರು, ದೇವಾಲಯದ ಸಿಬ್ಬಂದಿಗಳು ನೆರವಾದರು ಎಂದು ದೇವಾಲಯದ ಇಓ ಜಗದೀಶ್ ಕುಮಾರ್ ತಿಳಿಸಿದರು.

ಸಂವಿಧಾನ ದಿನಾಚರಣೆ



ಹುಣಸೂರಿನ ಕೊತ್ತೇಗಾಲ ಸರ್ಕಾರಿ ಪ್ರೌಢಶಾಲೆಯಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಈ ವೇಳೆ ಪ್ರಭಾರ ಮುಖ್ಯಶಿಕ್ಷಕ ಆರ್.ಎಲ್.ರಾಮಕೃಷ್ಣ, ಸಹಶಿಕ್ಷಕರಾದ ಜೆ.ಮಹದೇವ್, ಮಹೇಶ್‌ಕುಮಾರ್, ಕೃಷ್ಣನಾಯಕ, ಶಿವಣ್ಣ ಸಂಪತ್‌ಕುಮಾರಿ, ಸೌಭಾಗ್ಯ ಇತರರಿದ್ದರು.

ನಂಜನಗೂಡಲ್ಲಿ ನಾಳೆ ಅದ್ದೂರಿ ವಾಲ್ಮೀಕಿ ಜಯಂತಿ



ಸುದ್ದಿಗೋಷ್ಠಿಯಲ್ಲಿ ತಾಲೂಕು ನಾಯಕರ ಸಂಘದ ಅಧ್ಯಕ್ಷ ಕೆ.ನಾಗರಾಜು ಮಾತನಾಡಿದರು.


ನಂಜನಗೂಡು, ನ.26– ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ನಂಜನಗೂಡಿನಲ್ಲಿ 28ರಂದು ಅದ್ದೂರಿ ವಾಲ್ಮೀಕಿ ಜಯಂತಿ ಮಹೋತ್ಸವ ಮತ್ತು ಮಹರ್ಷಿ ವಾಲ್ಮೀಕಿ ಸಮುದಾಯ ಭವನದ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ನಾಯಕರ ಸಂಘದ ಅಧ್ಯಕ್ಷ ಕೆ.ನಾಗರಾಜು ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಜಯಂತಿ ಮಹೋತ್ಸವವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಲಿದ್ದಾರೆ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ, ಸಂಸದ ಸುನಿಲ್ ಬೋಸ್, ಶಾಸಕರಾದ ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ, ಡಾ.ಯತೀಂದ್ರ ಸೇರಿದಂತೆ ಹಲವಾರು ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ, ಆದ್ದರಿಂದ ತಾಲೂಕಿನ ಎಲ್ಲಾ ಗ್ರಾಮಗಳ ನಾಯಕ ಸಮುದಾಯದ ಗಡಿಯ ಯಜಮಾನರುಗಳು, ವಿವಿಧ ನಾಯಕ ಸಂಘಟನೆ ಪದಾಧಿಕಾರಿಗಳು ಮತ್ತು ಗ್ರಾಮಸ್ಥರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

ಮುಖಂಡರಾದ ದೊರೆಸ್ವಾಮಿ ನಾಯಕ ಮಾತನಾಡಿ, ಜಯಂತಿ ಮಹೋತ್ಸವದ ಅಂಗವಾಗಿ ನಗರದ ಜೂನಿಯರ್ ಕಾಲೇಜು ಮೈದಾನದಿಂದ ರಾಷ್ಟ್ರಪತಿ ರಸ್ತೆಗಳ ಮೂಲಕ ಮಹರ್ಷಿ ವಾಲ್ಮೀಕಿ ಅವರ ಅದ್ದೂರಿ ಮೆರವಣಿಗೆಯನ್ನು ನಡೆಸಲಾಗುವುದು ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗಿಯಾಗಲಿವೆ ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಶಿವನಂಜನಾಯಕ, ಸುಧೀಂದ್ರಕುಮಾರ್, ಆರ್.ಶ್ರೀಕಂಠಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠನಾಯಕ, ಬಂಗಾರಸ್ವಾಮಿ, ರವಿಕುಮಾರ್, ಲಕ್ಷ್ಮಣ, ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಡಿ.6, ಮೈಸೂರಿನಲ್ಲಿ ಡಿಎಸ್‌ಎಸ್ ಪ್ರತಿರೋಧ ಸಮಾವೇಶ



ಸಭೆಯಲ್ಲಿ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಕರಪತ್ರ ಬಿಡುಗಡೆಗೊಳಿಸಿದರು.

ತಿ.ನರಸೀಪುರ, ನ.26– ಸ್ವಾತಂತ್ರ್ಯ ನಂತರ ದೇಶದಲ್ಲಿ ಸಂವಿಧಾನ ಮತ್ತು ಪ್ರಜಾಪ್ರಭುತ್ವವಿದ್ದರೂ ದಲಿತರು ಮತ್ತು ಹಿಂದುಳಿದ ವರ್ಗದವರ ಜೀವನದಲ್ಲಿ ಸುಧಾರಣೆ ಕಾಣುತ್ತಿಲ್ಲ ಎಂದು ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಮೈಸೂರಿನಲ್ಲಿ ಡಿ.6ರಂದು ನಡೆಯುವ ಡಾ.ಬಿ.ಆರ್.ಅಂಬೇಡ್ಕರ್ ಮಹಾ ಪರಿನಿಬ್ಬಾಣ ದಿನದ ಅಂಗವಾಗಿ ದಸಂಸ ಆಯೋಜಿಸಿರುವ ಪ್ರತಿರೋಧ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕೋಮುವಾದ ಮತ್ತು ಧರ್ಮಾಂಧತೆ ಆಡಳಿತದಲ್ಲಿ ಹಿಡಿತ ಸಾಧಿಸಿರುವುದರಿಂದ ಆಧುನಿಕ ಭಾರತದಲ್ಲಿ ಪ್ರಜಾಪ್ರಭುತ್ವದ ಆಶಯಗಳ ಅನುಷ್ಠಾನಕ್ಕೆ ತೀವ್ರ ಹಿನ್ನೆಡೆಯಾಗಿದೆ. ಆರ್‌ಎಸ್‌ಎಸ್ ನಂತಹ ಪ್ರಜಾಪ್ರಭುತ್ವ ವಿರೋಧಿ ಸಂಘಟನೆಗೆ ಪರ್ಯಾಯವಾಗಿ ಡಿಎಸ್‌ಎಸ್ ಪ್ರತಿರೋಧದ ಅಗತ್ಯವಿದೆ ಎಂದರು.

ತಾಲೂಕು ಸಂಚಾಲಕ ಯಾಚೇನಹಳ್ಳಿ ಸೋಮಶೇಖರ್ ಮಾತನಾಡಿ, ಮೈಸೂರಿನ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಡಿ.6ರಂದು ಬಹುತ್ವದ ಭಾರತವನ್ನು ಅಸ್ಥಿರ ಗೊಳಿಸುತ್ತಿರುವ ಧರ್ಮಾಂಧ ರಾಜಕಾರಣದ ವಿರುದ್ಧ ಡಿಎಸ್‌ಎಸ್ ಪ್ರತಿರೋಧ ಸಮಾವೇಶ ಹಮ್ಮಿಕೊಂಡಿದೆ. ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ ಅಧ್ಯಕ್ಷತೆ ವಹಿಸಲಿದ್ದು, ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಸಮಾವೇಶ ಉದ್ಘಾಟಿಸುವರು. ರಾಜ್ಯ ಸಂಚಾಲಕ ಗುರು ಪ್ರಸಾದ್ ಕೆರಗೋಡು ಅಂಬೇಡ್ಕರ್ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಚಿಂತಕ ಹಾಗೂ ಪತ್ರಕರ್ತ ದಿನೇಶ್ ಅಮೀನ್ ಮಟ್ಟು ವಿಚಾರ ಮಂಡನೆ ಮಾಡುವರು. ಮುಖ್ಯ ಅತಿಥಿಗಳಾಗಿ ಶಾಸಕ ಎ.ಆರ್.ಕೃಷ್ಣಮೂರ್ತಿ ಹಾಗೂ ಇನ್ನಿತರ ಗಣ್ಯರು ಭಾಗವಹಿಸುವವರು ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ತುಂಬಲ ಡೇರಿ ಅಧ್ಯಕ್ಷ ಬಿ.ಸಿದ್ದರಾಜು, ಗ್ರಾಪಂ ಸದಸ್ಯ ನಾಗರಾಜು, ಮುಖಂಡರಾದ ಉಮೇಶ್, ನಾಗೇಶ, ಶಿವಯ್ಯ, ಹರೀಶ, ಮಲ್ಲೇಶ್, ರವಿಶಂಕರ್, ನಂಜುಂಡ, ಮಹೇಶ, ಬಾಲು, ನಾಗರಾಜು, ಕೃಷ್ಣ ಶಿವಣ್ಣ ಶೇಷಣ್ಣ ನಾಗರಾಜ್ ಮೂರ್ತಿ, ರಾಜು, ಮದನ್‌ರಾಜ್ ಇತರರಿದ್ದರು.

ಅಂಬೇಡ್ಕರ್ ಭಾರತೀಯರ ಪಾಲಿನ ಮಹಾಬೆಳಕು



ಕಾರ್ಯಕ್ರಮವನ್ನು ತಹಸೀಲ್ದಾರ್ ಮೋಹನಕುಮಾರಿ ಉದ್ಘಾಟಿಸಿದರು.

ಸರಗೂರು, ನ.26– ಸಂವಿಧಾನ ರಚಿಸುವ ಮೂಲಕ ಶೋಷಿತರು, ಕಾರ್ಮಿಕರು ಸೇರಿದಂತೆ ಎಲ್ಲಾ ವರ್ಗದವರ ಬದುಕನ್ನು ಹಸನಾಗಿಸಿದ ಡಾ.ಬಿ.ಆರ್.ಅಂಬೇಡ್ಕರ್ ಭಾರತೀಯರ ಪಾಲಿನ ಮಹಾ ಬೆಳಕು ಎಂದು ಸಾಹಿತಿ ಚಿಂತಕ ವೈ.ಡಿ.ರಾಜಣ್ಣ ಬಣ್ಣಿಸಿದರು.


ಪಟ್ಟಣದ ತಹಸೀಲ್ದಾರ್ ಕಚೇರಿ ಎದುರು ಬುಧವಾರ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ನಡೆದ ಸಂವಿಧಾನ ಸಮರ್ಪಣಾ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಸೀಲ್ದಾರ್ ಮೋಹನ ಕುಮಾರಿ, ಡಾ.ಅಂಬೇಡ್ಕರ್ ಅವರು ಹತ್ತಾರು ದೇಶಗಳ ಸಂವಿಧಾನ ಅಧ್ಯಯನ ಮಾಡುವ ಮೂಲಕ ಭಾರತಕ್ಕೆ ಶ್ರೇಷ್ಠ ಸಂವಿಧಾನ ನೀಡಿದ್ದಾರೆ ಎಂದರು.

ಆದಿ ಕರ್ನಾಟಕ ಮಹಾಸಭಾ ತಾಲೂಕು ಅಧ್ಯಕ್ಷ ಇಟ್ನ ರಾಜಣ್ಣ, ತುಂಬಸೋಗೆ ನಾಗಣ್ಣ, ಗ್ರಾಮೀಣ ಮಹೇಶ್, ಸಂವಿಧಾನ ಕುರಿತು ಮಾತನಾಡಿದರು. ಇದಕ್ಕೂ ಮುನ್ನ ಸಂವಿಧಾನ ಜಾಗೃತಿ ರಥಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಜಯಚಾಮರಾಜೇಂದ್ರ ಕ್ರೀಡಾಂಗಣದಿಂದ ಹೊರಟ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ತಹಸೀಲ್ದಾರ್ ಕಚೇರಿ ಬಳಿ ಅಂತ್ಯಗೊಂಡಿತು.

ಸಂವಿಧಾನ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಸ್ಪರ್ಧೆಯಲ್ಲಿ ವಿಜೇತರಾದ ಶಾಲಾ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಆರೋಗ್ಯಾಧಿಕಾರಿ ಪಾರ್ಥಸಾರಥಿ, ಚೆಸ್ಕಾಂ ಎಇಇ ರಮೇಶ್, ಇಓ ಪ್ರೇಮ್ ಕುಮಾರ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಚಲುವರಾಜು, ಅಕ್ರಮ ಸಕ್ರಮ ಸಮಿತಿ ಸದಸ್ಯ ಶಿವಶಂಕರನ್, ಪಪಂ ಪ್ರಭಾರ ಅಧ್ಯಕ್ಷ ಶಿವಕುಮಾರ್, ಮಹಾಸಭಾ ಮಾಜಿ ಅಧ್ಯಕ್ಷ ಶಿವಣ್ಣ, ಜಿಪಂ ಮಾಜಿ ಸದಸ್ಯ ಚಿಕ್ಕವೀರನಾಯಕ, ಜೆಡಿಎಸ್ ತಾಲೂಕು ಅಧ್ಯಕ್ಷ ಜಿ.ಗೋಪಾಲಸ್ವಾಮಿ, ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಪಪಂ ಸದಸ್ಯ ನೂರಾಳಸ್ವಾಮಿ, ಟ್ರಸ್ಟ್ ಅಧ್ಯಕ್ಷ ನಾಗರಾಜು, ಅಂಬೇಡ್ಕರ್ ಭವನ ಟ್ರಸ್ಟ್ ಅಧ್ಯಕ್ಷ ಎಸ್.ಡಿ.ಸಣ್ಣಸ್ವಾಮಿ, ಚಿನ್ನಣ್ಣ, ಸೋಮಣ್ಣ, ಮಂಜು, ಪ್ರಭಾಕರ್, ಶಿವಣ್ಣ ಎಸ್ಸಿ ಎಸ್ಟಿ ಸಮಿತಿ ಹಾಗೂ ಗ್ರಾಪಂ ಸದಸ್ಯ ಬೆಟ್ಟಸ್ವಾಮಿ ಇನ್ನಿತರರಿದ್ದರು.

ಶಾಸಕ ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಣೆ



ಮೈಸೂರು ತಾಲೂಕಿನ ಗೋಪಾಲಪುರದಲ್ಲಿ ಶಾಸಕ ಜಿ.ಟಿ.ದೇವೇಗೌಡರ ಹುಟ್ಟುಹಬ್ಬ ಆಚರಿಸಲಾಯಿತು. ಈ ವೇಳೆ ಮೈಮುಲ್ ಅಧ್ಯಕ್ಷ ಈರೇಗೌಡ, ಎಪಿಎಂಸಿ ಮಾಜಿ ಸದಸ್ಯ ಮಹದೇವ್, ಗೋಪಾಲಪುರ ಗ್ರಾಪಂ ಅಧ್ಯಕ್ಷ ಮಹದೇವ್, ಗ್ರಾಪಂ ಮಾಜಿ ಅಧ್ಯಕ್ಷರಾದ ಬಸವೇಗೌಡ, ಸ್ವಾಮಿಗೌಡ, ಮುಖಂಡರಾದ ವಿಶ್ವ, ಪುಟ್ಟೇಗೌಡ, ಸುರೇಶ್, ಅಪ್ಪಣ್ಣ, ರಾಮಲಿಂಗಚಾರಿ ಇತರರಿದ್ದರು.

ಮೈಸೂರು ಜಿಲ್ಲೆಯ ವಿವಿಧೆಡೆ ಸಂವಿಧಾನ ದಿನಾಚರಣೆ

ಸರ್ವ ಧರ್ಮೀಯರ ನೆಮ್ಮದಿ ಜೀವನಕ್ಕೆ ಸಂವಿಧಾನ ಕಾರಣ

ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್ ಅಭಿಮತ



ತಿ.ನರಸೀಪುರ ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್ ಉದ್ಘಾಟಿಸಿದರು.

ತಿ.ನರಸೀಪುರ, ನ.26– ಆದರೆ ಭಾರತದ ಸಂವಿಧಾನ ಎಲ್ಲಾ ಧರ್ಮಿಯರೂ ಯಾವ ರೀತಿ ಅತ್ಯುತ್ತಮವಾದ ಜೀವನವನ್ನು ನಡೆಸಬೇಕು ಎಂಬುದನ್ನು ಹೇಳುತ್ತದೆ ಇದುವೇ ನಮ್ಮ ಸಂವಿಧಾನದ ಶ್ರೇಷ್ಠತೆ ಎಂದು ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್ ಹೇಳಿದರು.

ತಾಲೂಕು ಆಡಳಿತ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿ ಧಾನ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಪಂಚದಲ್ಲಿ ಒಂದೇ ಧರ್ಮದ ಜನರಿರುವ ದೇಶದಲ್ಲಿ ಅರಾಜಕತೆ ಉಂಟಾಗುವುದನ್ನು ನಾವು ನೋಡಿದ್ದೇವೆ. ರಾಜಕೀಯ ವಿಪ್ಲವ ಕಂಡಿದ್ದೇವೆ. ಆದರೆ ಭಾರತ ದೇಶದಲ್ಲಿ ನಾನಾ ಧರ್ಮದ ಜನರು ವಾಸ ಮಾಡುತ್ತಿದ್ದರೂ ಯಾವುದೇ ಸಂಘರ್ಷಕ್ಕೆ ಎಡೆ ಮಾಡಿಕೊಡದೇ ನೆಮ್ಮದಿ ಯಿಂದ ಜೀವನ ಮಾಡುತ್ತಿದ್ದೇವೆ ಎಂದರೆ ಅದಕ್ಕೆ ಮೂಲ ಕಾರಣ ನಮ್ಮ ಭಾರತೀಯ ಸಂವಿಧಾನವಾಗಿದೆ ಎಂದರು.

ಮುಖ್ಯ ಭಾಷಣ ಮಾಡಿದ ವಿದ್ಯೋದಯ ಬಾಲಿಕ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಡಾ.ಸಿ.ಕೆ. ಚಂದ್ರಪ್ಪ ಭಾರತ ಸಂವಿಧಾನ ಜನರನ್ನು ಸಶಕ್ತಗೊಳಿಸಿದೆ. ಸರ್ವರಿಗೂ ಸಮಾನತೆ ಒದಗಿಸಿದೆ. ಮೂಲಭೂತ ಹಕ್ಕುಗಳನ್ನು ನೀಡಿದೆ. ಭಾರತಕ್ಕೆ ಸಂವಿಧಾನವೇ ಬಹುದೊಡ್ಡ ಬಲ ಎಂದರು.

ತಾ.ಪಂ. ಸಾಮಾಜಿಕ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಕುಕ್ಕೂರ್ ಗಣೇಶ್, ಸದಸ್ಯ ರಾಮಲಿಂಗಯ್ಯ, ಮಾಜಿ ಉಪಾಧ್ಯಕ್ಷ ಪ್ರಸನ್ನ, ತಾಲೂಕು ಕುರುಬರ ಸಂಘದ ಕಾರ್ಯದರ್ಶಿ ಕೊತ್ತೇಗಾಲ ಬಸವರಾಜು, ಬಾಬುಜೀ ಸಂಘದ ಮಾಜಿ ಅಧ್ಯಕ್ಷರಾದ ಮೂಗೂರು ಸಿದ್ದರಾಜು, ಪುಟ್ಟಯ್ಯ, ಡಾ.ಮನ್ಸೂರ್ ಆಲಿ, ಸೋಸಲೆ ನಂಜುಂಡಯ್ಯ, ಪುಟ್ಟಮಲ್ಲಯ್ಯ, ಮಹದೇವಮ್ಮ, ಬಿ.ಆರ್.ಪುಟ್ಟಸ್ವಾಮಿ, ಕಾರ್ಯಪಾಲಕ ಅಭಿಯಂತರರಾದ ಸತೀಶ್ ಚಂದ್ರ, ಸಹಾಯಕ ಕೃಷಿ ನಿರ್ದೇಶಕಿ ಎಂ.ರೂಪ, ಬಿಆರ್‌ಸಿ ನಾಗೇಶ್, ಪರಿಶಿಷ್ಟ ವರ್ಗಗಳ ಇಲಾಖೆ ಅಧಿಕಾರಿ ಕೋಮಲ, ಚೆಸ್ಕಾಂ ಕಾರ್ಯಪಾಲಕ ಅಭಿಯಂತರ ವೀರೇಶ್, ಸಮಾಜ ಕಲ್ಯಾಣ ಇಲಾಖೆಯ ಮಹೇಶ್, ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಎಂ.ವಿ. ಶಿವಶಂಕರಮೂರ್ತಿ ಮತ್ತಿತರರಿದ್ದರು.

ಡಾ.ಅಂಬೇಡ್ಕರ್ ರಚಿತ ಸಂವಿಧಾನದಿಂದ ಭಾರತ ಸುಭದ್ರ ಪ್ರಜಾಪ್ರಭುತ್ವ ದೇಶವಾಗಿ ಉಳಿದಿದೆ

ಶಾಸಕ ದರ್ಶನ್ ಧ್ರುವನಾರಾಯಣ್ ಅಭಿಮತ

ನಂಜನಗೂಡು, ನ.26– ವಿವಿಧ ಭಾಷೆ, ಧರ್ಮ, ಜಾತಿ, ಸಂಸ್ಕೃತಿಯ ಆಚರಣೆಯಿರುವ ಭಾರತ ದೇಶದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಸದೃಢವಾದ ಸಂವಿಧಾನದಿಂದ ವಿವಿಧತೆಯಲ್ಲಿ ಏಕತೆಯನ್ನು ಕಾಪಾಡಿಕೊಂಡು ಬಾಳುವೆ ಮಾಡುವಂತಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ಅವರು ನಗರದ ಡಾ.ಬಿ.ಆರ್. ಅಂಬೇಡ್ಕರ್ ರವರ ಸಮುದಾಯ ಭವನದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ, ಸಮಾಜ ಕಲ್ಯಾಣ ಇಲಾಖೆ, ನಗರಸಭೆಯ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಭಾರತ ಸಂವಿಧಾನ ಪ್ರಪಂಚದಲ್ಲಿ ಅತ್ಯಂತ ಶ್ರೇಷ್ಠ ಸಂವಿಧಾನವಾಗಿರುವುದರಿಂದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿ ಉಳಿಯುವಂತಾಗಿದೆ, ಸಂವಿಧಾನವಿದ್ದಲ್ಲಿ ಮಾತ್ರ ನಮಗೆ ರಕ್ಷಣೆ ಸಾಧ್ಯ. ಆದ್ದರಿಂದ ಎಲ್ಲರೂ ಸಂವಿಧಾನದ ಸಂರಕ್ಷಣೆಗೆ ಮುಂದಾಗಬೇಕು, ಪ್ರಮುಖವಾಗಿ ವಿದ್ಯಾರ್ಥಿಗಳು ಬಾಬಾ ಸಾಹೇಬರ ಸಂವಿಧಾನವನ್ನು ಓದಿ ನಮ್ಮ ಹಕ್ಕು ಮತ್ತು ಕರ್ತವ್ಯಗಳನ್ನು ತಿಳಿಯಬೇಕಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಸಂವಿಧಾನ ಜಾಥಾ, ಸಂವಿಧಾನ ಪೀಠಿಕೆ ಓದುವುದು, ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಜನಸಾಮಾನ್ಯರಿಗೆ ಸಂವಿಧಾನದ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಮುಖ್ಯ ಭಾಷಣಕಾರರಾಗಿದ್ದ ಮೈಸೂರು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ.ಡಿ. ಆನಂದ್ ಮಾತನಾಡಿ, ಸಂವಿಧಾನ ಜಾರಿಗೊಂಡು 76 ವರ್ಷಗಳು ಕಳೆದರೂ ದೇಶದಲ್ಲಿ ಶೋಷಣೆ, ಅಸ್ಪೃಶ್ಯತೆ ನಿಂತಿಲ್ಲ, ಇವೆಲ್ಲದರ ನಡುವೆ ಸಂವಿಧಾನವೆಂಬ ಬೃಹತ್ ಅಸ್ತ್ರದಿಂದ ನಮಗೆ ರಕ್ಷಣೆ ದೊರಕಿದೆ ಆದ್ದರಿಂದ ಎಲ್ಲರೂ ಸಂವಿಧಾನದ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಚರ್ಚಾ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ತಾಪಂ ಇಓ ಜರಾಲ್ಡ್ ರಾಜೇಶ್, ನಗರಸಭಾ ಆಯುಕ್ತ ವಿಜಯ್, ಕ್ಷೇತ್ರ ಶಿಕ್ಷಣಾ ಧಿಕಾರಿ ಮಹೇಶ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಮಾರುತಿ ಮುಖಂಡರಾದ ಹಾಡ್ಯ ಜಯರಾಮ, ಗೋವಿಂದರಾಜು, ಕಳಲೆ ರಾಜೇಶ್, ಸೋಮು, ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.



ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿದ ಶಾಸಕ ದರ್ಶನ್ ಧ್ರುವನಾರಾಯಣ್.

ಸಂವಿಧಾನ ದಿನ ಪ್ರತಿಯೊಬ್ಬರಲ್ಲೂ ಅರಿವು ಮೂಡಿಸುವ ದಿನವಾಗಬೇಕು

ತಹಸೀಲ್ದಾರ್ ಶ್ರೀನಿವಾಸ್ ಅಭಿಪ್ರಾಯ



ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ನ.26– ಭಾರತ ಸಂವಿಧಾನ ಜೀವ ನೀಡುವ ಸಂಜೀವಿನಿ ಎಂದು ತಹಸೀಲ್ದಾರ್ ಶ್ರೀನಿವಾಸ್ ತಿಳಿಸಿದರು. ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದ ಆವರಣದಲ್ಲಿ ತಾಲೂಕು ಆಡಳಿತ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಶ್ವದ ಅತಿದೊಡ್ಡ 'ಪ್ರಜಾಪ್ರಭುತ್ವ' ವಾದ ಭಾರತವು ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿ, ಅಭಿವೃದ್ಧಿಯ ಪಥದಲ್ಲಿ ಮುಂದುವರಿಯಲು ದಿಕ್ಕು ತೋರಿಸಿದ ನಮ್ಮ ದೇಶದ ಶ್ರೇಷ್ಠ ಸಂವಿಧಾನ ಎಂದು ಬಣ್ಣಿಸಿದರು.

ಪ್ರತಿಯೊಬ್ಬ ಪ್ರಜೆಗೂ ರಾಜಕೀಯ, ಸಾಮಾಜಿಕ, ಆರ್ಥಿಕ ಸಮಾನತೆಯನ್ನು ಒದಗಿಸಿದ ಸಂವಿಧಾನದ ಮೌಲ್ಯಗಳನ್ನು ಭಾರತೀಯರಾದ ನಾವು ಕಾಪಾಡಬೇಕು. ಪ್ರಜಾಪ್ರಭುತ್ವ ರಾಷ್ಟ್ರ ನಮ್ಮ ಭಾರತಕ್ಕೆ ಉತ್ತಮ ಸಂವಿಧಾನವನ್ನು ಕೊಟ್ಟ ಮಹಾನಾಯಕ ಅಂಬೇಡ್ಕರ್. ಸಂವಿಧಾನ ಸಮರ್ಪಣಾ ದಿನ ಒಂದು ದಿನದ ಕಾರ್ಯಕ್ರಮವಾಗದೇ ಪ್ರತಿ ಹಳ್ಳಿಯ ಮನೆಯ ಮಕ್ಕಳಿಗೂ ಅರಿವು ಮೂಡಿಸುವ ಕಾರ್ಯಕ್ರಮವಾಗಬೇಕು ಎಂದು ಅಭಿಪ್ರಾಯ ಪಟ್ಟರು.

ಮುಖ್ಯ ಭಾಷಣಕಾರರಾಗಿ ಆಗಮಿಸಿ ಕ್ಷೇತ್ರ ಶಿಕ್ಷಣ ಸಮನ್ವಯ ಅಧಿಕಾರಿ ಕೃಷ್ಣಯ್ಯ ಮಾತನಾಡಿ, ಸಂವಿಧಾನ ಬಗ್ಗೆ ಮಾತನಾಡಲು ಮಿತಿ ಇರುವುದಿಲ್ಲ, ಸಂವಿಧಾನ ಎಂದರೆ ಅದೊಂದು ಕಾನೂನು ಪುಸ್ತಕ ಎಂದರು. ನಮ್ಮ ದೇಶದ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಅವರು ಅಧಿಕಾರ ಪಡೆಯಲು ಸಂವಿಧಾನ ಕಾರಣ. ದೇಶದ ಸಂವಿಧಾನವನ್ನು ಮಹಿಳೆಯರು ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಓ ಧರಣೀಶ್, ಟಿಎಚ್‌ಓ ಡಾ.ರವಿಕುಮಾರ್, ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷ ಹೈರಿಗೆ ಶಿವರಾಜು, ನರಸಿಂಹಮೂರ್ತಿ, ಸೋಗಹಳ್ಳಿ ಶಿವಣ್ಣ, ಅಕ್ಬರ್ ಪಾಷ, ಪೊಲೀಸ್ ಇನ್ಸ್‌ಪೆಕ್ಟರ್ ಗಂಗಾಧರ್, ಬಿಇಓ ರಾಜು, ಜವರಯ್ಯ, ಬಸವರಾಜು, ವೇಣುಗೋಪಾಲ್, ಅನುಷಾ , ಶೈಲಾ ಸುಧಾಮಣಿ, ನಾಗರಾಜು, ಸಣ್ಣಕುಮಾರ್, ಕಾಳಸ್ವಾಮಿ, ಎಡಿಎಲ್‌ಆರ್ ಬಸವರಾಜು ಇದ್ದರು.

ವೆಂಕಟಾಚಲಶೆಟ್ಟಿ ನಿಧನ



ಸರಗೂರು, ನ.26– ಪಟ್ಟಣದ ಮಾತಾ ಮಿಲ್ಟ್ರಿ ಹೋಟೆಲ್ ಮಾಲೀಕ ವೆಂಕಟಾಚಲಶೆಟ್ಟಿ (76) ಬುಧವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ತೋಗಟವೀರ ರುದ್ರಭೂಮಿಯಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿದ್ದಲಿಂಗಪುರ ಶ್ರೀ ಷಷ್ಠಿ ಸುಬ್ರಹ್ಮಣ್ಯೇಶ್ವರಸ್ವಾಮಿ ದೇವಸ್ಥಾನದಲ್ಲಿ ಅದ್ಧೂರಿ ಜಾತ್ರಾ ಮಹೋತ್ಸವ

●ಅಪಾರ ಭಕ್ತರಿಂದ ದರ್ಶನ; ವಿಶೇಷ ಪೂಜೆ ●ಭಕ್ತರಿಗೆ ಅನುಕೂಲ ಕಲ್ಪಿಸಲು ವಾಹನ ಸಂಚಾರಕ್ಕೆ ನಿರ್ಬಂಧ



ದೇವಾಲಯದ ಮೂಲ ವಿಗ್ರಹಕ್ಕೆ ಬೆಳ್ಳಿ ನಾಗಾಭರಣ ಧರಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು.



ಸಿದ್ದಲಿಂಗಪುರದಲ್ಲಿರುವ ಶ್ರೀ ಷಷ್ಠಿ ಸುಬ್ರಹ್ಮಣ್ಯೇಶ್ವರ ಸ್ವಾಮಿ ದೇವಾಲಯದಲ್ಲಿ ಷಷ್ಠಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು.

ಮೈಸೂರು,ನ.26(ಎಂಟಿವೈ)– ಮೈಸೂರು ತಾಲೂಕಿನ ಸಿದ್ದಲಿಂಗಪುರದಲ್ಲಿರುವ ಶ್ರೀ ಷಷ್ಠಿ ಸುಬ್ರಹ್ಮಣ್ಯೇಶ್ವರಸ್ವಾಮಿ ದೇವಾಲಯದಲ್ಲಿ ಇಂದು ಬೆಳಗ್ಗೆ ವಿಜೃಂಭಣೆಯಿಂದ ನೆರವೇರಿದ ಶ್ರೀ ಸುಬ್ರಹ್ಮಣ್ಯೇಶ್ವರ ಸ್ವಾಮಿ ಷಷ್ಠಿ ಜಾತ್ರಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ವಿಶೇಷ ಪೂಜೆ ಸಲ್ಲಿಸಿ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.

ಮೈಸೂರು ಭಾಗದಲ್ಲಿ ಷಷ್ಠಿ ಜಾತ್ರೆಯೆಂದೇ ಪ್ರಸಿದ್ಧಿ ಪಡೆದಿರುವ ಸಿದ್ದಲಿಂಗಪುರದ ಶ್ರೀ ಷಷ್ಠಿ ಸುಬ್ರಹ್ಮಣ್ಯೇಶ್ವರಸ್ವಾಮಿ ದೇವಾಲಯದಲ್ಲಿ ನಡೆದ ಷಷ್ಠಿ ಜಾತ್ರಾ ಮಹೋತ್ಸವದಲ್ಲಿ ಮೈಸೂರು, ಚಾಮರಾಜನಗರ, ಮಂಡ್ಯ ಸೇರಿದಂತೆ ವಿವಿಧೆಡೆಯಿಂದ ಅಪಾರ ಸಂಖ್ಯೆ ಭಕ್ತರು ಆಗಮಿಸಿ, ಮುಂಜಾನೆಯಿಂದ ದೇವಾಲಯಕ್ಕೆ ಬಂದು ಬೆಳ್ಳಿ ನಾಗಾಭರಣದಿಂದ ಕಂಗೊಳಿಸುತ್ತಿದ್ದ ಸುಬ್ರಹ್ಮಣ್ಯೇಶ್ವರಸ್ವಾಮಿ ಮೂರ್ತಿಯನ್ನು ಕಣ್ತುಂಬಿಕೊಂಡರು.

ಮುಂಜಾನೆಯಿಂದಲೇ ಪೂಜೆ: ಷಷ್ಠಿ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಸುಬ್ರಹ್ಮಣ್ಯೇಶ್ವರಸ್ವಾಮಿ ದೇವಾಲಯದ ಗರ್ಭಗುಡಿಯಲ್ಲಿರುವ ಮೂಲ ವಿಗ್ರಹಕ್ಕೆ ಮುಂಜಾನೆ 1.30ರಿಂದಲೇ ಅರ್ಚಕ ಎಂ.ವಿ.ಸುಬ್ರಹ್ಮಣ್ಯ ನೇತೃತ್ವದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗಲಿವೆ. ಶ್ರೀ ಷಷ್ಠಿ ಸುಬ್ರಹ್ಮಣ್ಯೇಶ್ವರಸ್ವಾಮಿಯ ಮೂರ್ತಿಗೆ ರುದ್ರಾಭಿಷೇಕ, ಸ್ತ್ರೀ ಸೂಕ್ತ, ಪುರುಷ ಸೂಕ್ತ, ದುರ್ಗಾ ಸೂಕ್ತ ಮಾಡಲಾಯಿತು. ಬಳಿಕ ಸಹಸ್ರನಾಮಾರ್ಚನೆ, ಅಷ್ಟೋತ್ತರ ಮಾಡಿದ ಬಳಿಕ ಮಂಗಳಾರತಿ ಬೆಳಗಿದ ನಂತರ ಮುಂಜಾನೆ 4.30ರಿಂದ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಯಿತು.

ವರ್ಷಕ್ಕೊಮ್ಮೆ ಬೆಳ್ಳಿ ನಾಗಾಭರಣ ಧಾರಣೆ: ಕುಕ್ಕೆ ಸುಬ್ರಹ್ಮಣ್ಯದಷ್ಟೇ ಶ್ರೇಷ್ಠ ಹಾಗೂ ಪ್ರಭಾವವಿರುವ ದೇವಾಲಯ ಎನಿಸಿರುವ ಸಿದ್ಧಲಿಂಗಪುರದ ಷಷ್ಠಿ ಸುಬ್ರಹ್ಮಣ್ಯೇಶ್ವರ ದೇವಾಲಯಕ್ಕೆ ಬಂದು ಪೂಜೆ ಸಲ್ಲಿಸುವ ಭಕ್ತರ ಸಂಖ್ಯೆ ಹೆಚ್ಚಾಗಿದ್ದು, ಷಷ್ಠಿ ಜಾತ್ರಾ ಸಮಯದಲ್ಲಿ ಮಾತ್ರ ಮೂಲ ವಿಗ್ರಹಕ್ಕೆ ಧರಿಸಿ ಪೂಜೆ ಸಲ್ಲಿಸಲಾಗುತ್ತದೆ.

ರಾಜವಂಶಸ್ಥರ ಕೊಡುಗೆ: ಮೈಸೂರು ಸಂಸ್ಥಾನದ ರಾಜವಂಶಸ್ಥರರಾದ ಜಯಚಾಮರಾಜೇಂದ್ರ ಒಡೆಯರ್ ಅವರು ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರ ಹೆಸರಿನಲ್ಲಿ ಬೆಳ್ಳಿಯ ನಾಗಾಭರಣವನ್ನು ದೇವಾಲಯಕ್ಕೆ ನೀಡಿದ್ದಾರೆ. 7 ಹೆಡೆ, 14 ಕೆಂಪು ಕಣ್ಣು, 7 ಹಸಿರು ಪಚ್ಚೆ ನಾಲಿಗೆಯುಳ್ಳ ಬೆಳ್ಳಿಯ ನಾಗಾಭರಣವನ್ನು ಷಷ್ಠಿ ಜಾತ್ರೆಯ ದಿನ ಧರಿಸಲಾಗುತ್ತದೆ. ಪ್ರತಿ ವರ್ಷ ಸುಬ್ರಹ್ಮಣ್ಯ ಷಷ್ಠಿ ದಿನ ಅದನ್ನು ಧರಿಸಲಾಗುತ್ತದೆ. ಅರಮನೆಯಲ್ಲಿ ಈ ನಾಗಾಭರಣವಿದ್ದು, ಬಿಗಿಭದ್ರತೆಯಲ್ಲಿ ತಂದು ಜಾತ್ರೆ ಮುಗಿದ ನಂತರ, ಅರಮನೆಗೆ ಕೊಂಡೊಯ್ಯಲಾಗುತ್ತದೆ. ಮಧ್ಯಾಹ್ನ 12ಗಂಟೆಗೆ ದೇವಾಲಯದ ಮುಂಭಾಗದಿಂದ ಸಿದ್ದಲಿಂಗಪುರದವರೆಗೆ ರಥೋತ್ಸವ ನೆರವೇರಲಿದೆ.



ದೇವಾಲಯದ ಪಕ್ಕದ ಹೊಲದಲ್ಲಿರುವ ಹುತ್ತಕ್ಕೆ ಹಾಲೆರೆಯುತ್ತಿರುವ ಭಕ್ತರು

ಕಳೆ ಕಟ್ಟಿದ ಜಾತ್ರೆ: ಷಷ್ಠಿ ಜಾತ್ರೆ ಹಿನ್ನೆಲೆಯಲ್ಲಿ ದೇವಾಲಯವಿರುವ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಗೆ ಹೊಂದಿಕೊಂಡಂತೆ ಸರ್ವಿಸ್ ರಸ್ತೆಯಲ್ಲಿ ಆಟಿಕೆ, ಸಿಹಿತಿನಿಸು, ವಿವಿಧ ವಸ್ತುಗಳ ಮಾರಾಟ ಮಳಿಗೆ ಸೇರಿದಂತೆ ಐಸ್‌ಕ್ರೀಂ, ಪಾನೀಯ ಮಾರಾಟದ ತಾತ್ಕಾಲಿಕ ಮಳಿಗೆಗಳು ತಲೆ ಎತ್ತಿದ್ದರಿಂದ ಜಾತ್ರೆಗೆ ಕಳೆಕಟ್ಟಿತ್ತು. ಅಲ್ಲದೆ, ಕಬ್ಬು ಮತ್ತು ಬೆಲ್ಲ ಮಾರಾಟ ಮಾಡಲಾಗುತ್ತಿತ್ತು.

ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ

ಸಿದ್ಧಲಿಂಗಪುರದ ಸುಬ್ರಹ್ಮಣ್ಯೇಶ್ವರ ದೇವಾಲಯವನ್ನು ಭಕ್ತರೇ ಜೀರ್ಣೋದ್ಧಾರ ಮಾಡಿಸಿದ್ದಾರೆ. ಪ್ರತಿವರ್ಷ ದೇವಾಲಯಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚಾಗುತ್ತಲೇ ಇದೆ. ದೇವಾಲಯಕ್ಕೆ ಬರುವ ಭಕ್ತರಿಗೆ ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆ ಮಾಡಿಕೊಡುವಂತೆ ಸ್ಥಳೀಯರಲ್ಲಿ ಮನವಿ ಮಾಡಿದ್ದು, ಅದಕ್ಕೆ ಕ್ರಮ ಕೈಗೊಳ್ಳುತ್ತೇನೆ. ನಾನು ಷಷ್ಠಿ ದಿನವೇ ಜನಿಸಿರುವುದರಿಂದ ಪ್ರತಿವರ್ಷವೂ ಸುಬ್ರಹ್ಮಣ್ಯೇಶ್ವರ ಜಾತ್ರಾ ಮಹೋತ್ಸವಕ್ಕೆ ಬಂದು ದರ್ಶನ ಪಡೆಯುತ್ತಿದ್ದೇನೆ.

– ಜಿ.ಟಿ.ದೇವೇಗೌಡ, ಶಾಸಕ

ಹುತ್ತಕ್ಕೆ ಹಾಲೆರೆದ ಭಕ್ತರು: ಸಿದ್ದಲಿಂಗಪುರ ದೇವಾಲಯದ ಪಕ್ಕದ ಹೊಲದಲ್ಲಿರುವ ಹುತ್ತಕ್ಕೆ ಭಕ್ತರು ಹಾಲೆರೆದು ಪೂಜೆ ಸಲ್ಲಿಸಿದರು. ದೇವಾಲಯಕ್ಕೆ ಬರುವ ಭಕ್ತರಿಗೆ ಸ್ಥಳದಲ್ಲಿಯೇ ಹಾಲು–ಬೆಣ್ಣೆ, ಚಿನ್ನ–ಬೆಳ್ಳಿ ನಾಗರು ಮಾರಾಟ ಮಾಡಲಾಗುತ್ತಿತ್ತು ದೇವಾಲಯಕ್ಕೆ ಹೋಗಲು ಸಾಧ್ಯವಾಗದೇ ಇದ್ದವರು ಹುತ್ತಕ್ಕೆ ಹಾಲೆರೆದು ಪೂಜೆ ಸಲ್ಲಿಸಲು ಮುಗಿ ಬಿದ್ದಿದ್ದರು.

ಬಿಗಿ ಭದ್ರತೆ: ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಗೆ ಹೊಂದಿಕೊಂಡಂತೆ ಸರ್ವಿಸ್ ರಸ್ತೆಯಲ್ಲಿರುವ ಸುಬ್ರಹ್ಮಣ್ಯೇಶ್ವರ ಸ್ವಾಮಿ ದೇವಾಲಯದ ಮುಂಭಾಗದ ಸರ್ವಿಸ್ ರಸ್ತೆಯಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿತ್ತು. ದೇವಾಲಯಕ್ಕೆ ಬರುವ ಭಕ್ತರು ದೇವರ ದರ್ಶನ ಪಡೆಯುವುದಕ್ಕಾಗಿ ಬ್ಯಾರಿಕೇಡ್ ವ್ಯವಸ್ಥೆ ಮಾಡಲಾಗಿತ್ತು. ಧರ್ಮ ದರ್ಶನ ಹಾಗೂ ಟಿಕೆಟ್ ಪಡೆದು ವಿಶೇಷ ದರ್ಶನ ಪಡೆಯಲು ಪ್ರತ್ಯೇಕ ಸಾಲಿನ ವ್ಯವಸ್ಥೆ ಕಲ್ಪಿಸಲಾಗಿತ್ತು.

ಮುರುಘಾ ಶ್ರೀಗೆ ಬಿಗ್ ರಿಲೀಫ್

ಚಿತ್ರದುರ್ಗ: ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿದ್ದ ಚಿತ್ರದುರ್ಗದ ಮುರುಘಾ ಮಠದ ಡಾ. ಶಿವಮೂರ್ತಿ ಶರಣರಿಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಬುಧವಾರ ಬಿಗ್ ರಿಲೀಫ್ ನೀಡಿದ್ದು, ಪೋಕ್ಸೋ ಪ್ರಕರಣದಲ್ಲಿ ಶ್ರೀಗಳು ಹಾಗೂ ಇತರ ಆರೋಪಿಗಳನ್ನು ಖುಲಾಸೆಗೊಳಿಸಿ ತೀರ್ಪು ನೀಡಿದೆ.

2022 ಆಗಸ್ಟ್ 31 ರಂದು ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮುರುಘಾ ಶ್ರೀಗಳ ವಿರುದ್ಧ ಪ್ರಕರಣ ದಾಖಲಾಗಿತ್ತು ಸೆಪ್ಟೆಂಬರ್ 1ರಂದು ಶ್ರೀಗಳ ಬಂಧನವಾಗಿತ್ತು. ಸುಮಾರು 14 ತಿಂಗಳ ಕಾಲ ಜೈಲಿನಲ್ಲಿದ್ದ ಶ್ರೀಗಳು 2023 ನವೆಂಬರ್ 16ರಂದು ಷರತ್ತುಬದ್ಧ ಜಾಮೀನಿನ ಮೇಲೆ ಹೊರಗೆ ಬಂದಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಚಿತ್ರದುರ್ಗದ ಎರಡನೇ ಹೆಚ್ಚುವರಿ ಸೆಷನ್ಸ್ ಕೋರ್ಟ್, ಮೊದಲ ಪೋಕ್ಸೋ ಪ್ರಕರಣದಲ್ಲಿ ಮುರುಘಾ ಶರಣರು ನಿರ್ದೋಷಿ ಎಂದು ತೀರ್ಪು ಪ್ರಕಟಿಸಿದೆ. ಪ್ರಕರಣದ ಎರಡನೇ ಆರೋಪಿ ರಶ್ಮಿ ಹಾಗೂ 4ನೇ ಆರೋಪಿ ಪರಮಶಿವಯ್ಯ ಅವರನ್ನು ಕೂಡ ನಿರ್ದೋಷಿ ಎಂದು ಕೋರ್ಟ್ ತೀರ್ಪು ನೀಡಿದ್ದು, ಮುರುಘಾಶ್ರೀ ಪರವಾಗಿ ವಕೀಲ ಸಿ.ವಿ.ನಾಗೇಶ್ ವಾದ ಮಂಡಿಸಿದ್ದರು. ಮಹತ್ವದ ತೀರ್ಪಿನ ಹಿನ್ನೆಲೆಯಲ್ಲಿ, ಆರೋಪಿ ಸ್ಥಾನದಲ್ಲಿರುವ ಮುರುಘಾ ಶರಣರು ಇಂದು ಖುದ್ದು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಅವರೊಂದಿಗೆ ಪ್ರಕರಣದ 2ನೇ ಆರೋಪಿ (ಎ–2) ರಶ್ಮಿ ಹಾಗೂ 4ನೇ ಆರೋಪಿ (ಎ–4) ಹಾಗೂ ಮಠದ ಮ್ಯಾನೇಜರ್ ಆಗಿರುವ ಪರಮಶಿವಯ್ಯ ಕೂಡ ಕೋರ್ಟ್‌ಗೆ ಆಗಮಿಸಿದ್ದರು. ಮಠದ ಹಾಸ್ಟೆಲ್‌ನ ಇಬ್ಬರು ಅಪ್ರಾಪ್ತ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿ ಮುರುಘಾಶ್ರೀ, ಲೇಡಿ ವಾರ್ಡನ್ ರಶ್ಮಿ, ಬಸವಾದಿತ್ಯ, ಮ್ಯಾನೇಜರ್ ಪರಮಶಿವಯ್ಯ ಹಾಗೂ ವಕೀಲ ಗಂಗಾಧರಯ್ಯ ವಿರುದ್ಧ ದೂರು ನೀಡಿದ್ದರು. ಈ ಸಂಬಂಧ ಮೈಸೂರಿನ ನಜರಾಬಾದ್ ಠಾಣೆಯಲ್ಲಿ ಮುರುಘಾ ಶ್ರೀ ವಿರುದ್ಧ ಮೊದಲ ಪೋಕ್ಸೋ ಕೇಸ್ ದಾಖಲಾಗಿತ್ತು.



ಪೋಕ್ಸೋ ಪ್ರಕರಣದಲ್ಲಿ ಖುಲಾಸೆಗೊಳಿಸಿ ಕೋರ್ಟ್ ತೀರ್ಪು

ಸಂತ್ರಸ್ತ ಮಕ್ಕಳ ಪರವಾಗಿ ಹೈಕೋರ್ಟ್‌ನಲ್ಲಿ ಸರ್ಕಾರ ಮೇಲ್ಮನವಿ ಸಲ್ಲಿಸಬೇಕು

ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ ಒತ್ತಾಯ



ಮೈಸೂರು,ನ.26(ಪಿಎಂ)– ಪೋಕ್ಸೋ ಪ್ರಕರಣದಲ್ಲಿ ಶಿವಮೂರ್ತಿ ಮುರುಘಾ ಶರಣರು ಹಾಗೂ ಇತರ ಇಬ್ಬರು ಆರೋಪಿಗಳು ನಿರ್ದೋಷಿಗಳು ಎಂದು ಚಿತ್ರದುರ್ಗದ ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸಿವಿಲ್ ನ್ಯಾಯಾಲಯದ ಆದೇಶ ಹೊರಬಿದ್ದ ಬಳಿಕ ಪ್ರತಿಕ್ರಿಯಿಸಿರುವ ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ, ಈ ತೀರ್ಪು ಪ್ರಶ್ನಿಸಿ ಸಂತ್ರಸ್ತ ಮಕ್ಕಳ ಪರವಾಗಿ ಹೈಕೋರ್ಟ್‌ನಲ್ಲಿ ಸರ್ಕಾರ ಮೇಲ್ಮನವಿ ಸಲ್ಲಿಸಬೇಕು ಎಂದು ಒತ್ತಾಯಿಸಿದರು.

ಮೈಸೂರಿನಲ್ಲಿ ಬುಧವಾರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿರುವ ಅವರು, ಸಂತ್ರಸ್ತ ಮಕ್ಕಳ ಪರವಾಗಿ ವಕಾಲತ್ತು ವಹಿಸಿ ಹೈಕೋರ್ಟ್ ಹಾಗೂ ಸುಪ್ರೀಂಕೋರ್ಟ್‌ವರೆಗೆ ಹೋಗುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕೋರ್ಟ್ ನೀಡಿರುವ ತೀರ್ಪನ್ನು ಗೌರವಯುತವಾಗಿ ಸ್ವೀಕರಿಸುತ್ತೇವೆ. ಆದರೆ ಮಕ್ಕಳ ಪರವಾಗಿ ಯೋಚನೆ ಮಾಡಿದಾಗ, ನೊಂದ ಮಕ್ಕಳಿಗೆ ನ್ಯಾಯ ಹುಡುಕುವ ಪ್ರಕ್ರಿಯೆ ಇನ್ನೂ ಓಡುತ್ತಲೇ ಇದೆಯಲ್ಲ ಎಂದು ಬೇಸರ ಆಗುತ್ತದೆ ಮಕ್ಕಳು ನಮ್ಮನ್ನೇ ಆಶ್ರಯಿಸಿರುವ ಕಾರಣ ಅವರ ಪ್ರತಿದಿನದ ಬೆಳವಣಿಗೆ ನೋಡುತ್ತಲೇ ಬರುತ್ತಿದ್ದೇನೆ. ಲೈಂಗಿಕ ದೌರ್ಜನ್ಯದ ಕಾರಣ ಅವರ ಮನೋ ಸಾಮಾಜಿಕ ಸ್ಥಿತಿ ಹದಗೆಟ್ಟಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಆ ಮಕ್ಕಳ ಜೀವನದ ಪುನರ್ ನಿರ್ಮಾಣ ಕಷ್ಟಕರವಾಗುತ್ತಿದೆ. ಆರಂಭದಿಂದಲೂ ಈ ವ್ಯವಸ್ಥೆಯಲ್ಲಿರುವ ಒಂದು ಭಾಗ, ಆರೋಪ ಹೊತ್ತಿರುವವರ ಪರವಾಗಿ ಕೆಲಸ ಮಾಡುತ್ತಲೇ ಬಂದಿದೆ. ಅಲ್ಲದೆ, ಕೆಲವು ಲೋಪಗಳು ಆರೋಪಿಗಳ ಪರವಾಗಿ ವರದಾನ ಆಗಿದೆ. ಒಂದು ಸಂಸ್ಥೆಯಾಗಿ ಕಳೆದ 36 ವರ್ಷಗಳಿಂದ ಬದ್ಧತೆಯಿಂದ ಮಕ್ಕಳಿಗಾಗಿ ಹೋರಾಟ ಮಾಡುತ್ತಿದ್ದೇವೆ. ಮಕ್ಕಳ ಪರವಾಗಿದ್ದು, ಅವರ ಘನತೆಯ ಜೀವನವನ್ನು ಎತ್ತಿ ಹಿಡಿಯುವುದು ಸಮಾಜದ ಆದ್ಯಕರ್ತವ್ಯ. ಮಕ್ಕಳ ಪರವಾಗಿ ಜವಾಬ್ದಾರಿಯುತ ಹೆಜ್ಜೆ ಹಾಕುತ್ತಿದ್ದೇವೆ. ನೊಂದವರಿಗೆ, ದೀನ–ದಲಿತರಿಗೆ ನ್ಯಾಯ ಒದಗಿಸುವುದು ಕಷ್ಟವಿದೆ ಎಂಬುದು ನಮಗೆ ಗೊತ್ತಿದೆ. ಮಕ್ಕಳ ಪರವಾಗಿ ಒಂದು ವ್ಯವಸ್ಥೆ ಇದೆ. ಅದು ಅವರ ರಕ್ಷಣೆ ಮಾಡುತ್ತದೆ ಎಂಬ ಆಶಯ ಹೊಂದಿದ್ದೇವೆ ಎಂದರು.

ಅಣಬೆ ಬೇಸಾಯ, ಮೌಲ್ಯವರ್ಧನೆ ತರಬೇತಿ



ಮೈಸೂರು, ನ. 26– ಐದು ದಿನಗಳ ಅಣಬೆ ಬೇಸಾಯ ಹಾಗೂ ಮೌಲ್ಯವರ್ಧನೆ ತರಬೇತಿ ಕಾರ್ಯಕ್ರಮವನ್ನು ಐಸಿಎಆರ್ ಮೈಸೂರಿನ ಕೃಷಿ ಇಲಾಖೆಯ ಕೃಷಿ ತಂತ್ರಜ್ಞ ನಿರ್ವಹಣಾ ಸಂಸ್ಥೆಯ ಸಹಯೋಗದೊಂದಿಗೆ ಜೆಎಸ್‌ಎಸ್ ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಮಂಡ್ಯಾದ ಕೃಷಿ ವಿಜ್ಞಾನಗಳ ಕೃಷಿ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಎನ್.ಎನ್. ಆಶಾ, ಅಣಬೆ ಪ್ರಭೇದಗಳು ಹಾಗೂ ಅವುಗಳ ಬೆಳೆಯಲು ಅಗತ್ಯವಿರುವ ಪರಿಸರ ತಾಪಮಾನ, ತೇವಾಂಶ, ಆದ್ರತೆ ಮತ್ತು ನೈರ್ಮಲ್ಯದ ನಿರ್ವಹಣೆ ಕುರಿತು ಮಾಹಿತಿ ನೀಡಿದರು.

ಪ್ರಗತಿಪರ ರೈತ ಮಹಿಳೆ ಶ್ರೀಮತಿ ಲಲಿತಾ, ಇತ್ತೀಚಿನ ದಿನಗಳಲ್ಲಿ ಅಣಬೆ ಬೇಸಾಯ ಒಂದು ಉದ್ಯಮವಾಗಿ ರೂಪುಗೊಂಡಿದ್ದು, ಗ್ರಾಮೀಣ ಜನತೆಗೆ ಉತ್ತಮ ಆದಾಯ ತರುವ ಉದ್ಯಮವಾಗಿದೆ. ನಗರ ಹಾಗೂ ಗ್ರಾಮೀಣ ಮಹಿಳೆಯರು, ಯುವಕರು ತಮ್ಮ ವಿರಾಮದ ಸಮಯದಲ್ಲಿ ಅಣಬೆ ಬೇಸಾಯ ಮಾಡುವುದರ ಮೂಲಕ ತಮ್ಮ ಎರಡನೆಯ ಆದಾಯವನ್ನು ವೃದ್ಧಿಸಿಕೊಳ್ಳಬಹುದು ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಜೆಎಸ್‌ಎಸ್ ಕೆವಿಕೆಯ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥ ಡಾ. ಬಿ.ಎನ್. ಜ್ಞಾನೇಶ್ ಮಾತನಾಡಿ, ಅಣಬೆ ಬೇಸಾಯ ಒಂದು ನಿರಂತರ ಆದಾಯ ತರುವ ಉದ್ಯಮವಾಗಿದ್ದು ರೈತರು ಹಾಗೂ ರೈತ ಮಹಿಳೆಯರು ತಮ್ಮ ಕೃಷಿ ಚಟುವಟಿಕೆಗಳ ಜೊತೆಗೆ ಉಪಕಸುಬನ್ನಾಗಿ ಮಾಡಿಕೊಂಡು ಅಣಬೆ ಉತ್ಪಾದನೆ ಮಾಡುವುದರ ಜೊತೆಗೆ ನುರಿತ ತಜ್ಞರಿಂದ ಅಣಬೆ ಮೌಲ್ಯವರ್ಧನೆ ತರಬೇತಿ ಪಡೆದುಕೊಂಡು ಅಣಬೆ ಮೌಲ್ಯವರ್ಧನೆ ಮಾಡಬೇಕೆಂದು ಕರೆ ನೀಡಿದರು. ಇದರಿಂದ ಉತ್ತಮ ಲಾಭಗಳಿಸಬಹುದಾಗಿದೆ ಎಂದು ತಿಳಿಸಿದರು.

ಡಿಜಿಟಲ್ ಮಾಧ್ಯಮ ಜಾಹಿರಾತು ನೀತಿ ಬಗ್ಗೆ ಅಧಿವೇಶನದಲ್ಲಿ ಗಮನ ಸೆಳೆಯುತ್ತೇನೆ

ವಿಧಾನ ಪರಿಷತ್ ಸದಸ್ಯ ಡಾ.ಕೆ.ಶಿವಕುಮಾರ್ ಭರವಸೆ



ಮೈಸೂರು, ನ.26– ಡಿಜಿಟಲ್ ಮಾಧ್ಯಮ ಜಾಹಿರಾತು ನೀತಿ ಬಗ್ಗೆ ಅಧಿವೇಶನದಲ್ಲಿ ಗಮನ ಸೆಳೆಯುತ್ತೇನೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಕೆ.ಶಿವಕುಮಾರ್ ಬರವಸೆ ನೀಡಿದರು.

ಮೈಸೂರು ವಿವಿಯ ಸೆಮಿನಾರ್ ಸಭಾಂಗಣದಲ್ಲಿ ಆಯೋಜಿಸಿದ್ದ 'ಜಸ್ಟ್ ಕನ್ನಡ@15' ವಿಶೇಷ ಸಂಚಿಕೆ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಡಿಜಿಟಲ್ ಮಾಧ್ಯಮ ಈಗ ಹೆಚ್ಚು ಬಳಕೆಗೆ ಬರುತ್ತಿದೆ. ಹೀಗಾಗಿ ಡಿಜಿಟಲ್ ಮಾಧ್ಯಮಗಳ ಜಾಹೀರಾತು ನಿಯಮಗಳು ಹೊಸದಾಗಿ ರೂಪಿಸಬೇಕು. ಆದರೆ, ಅಧಿಕಾರಿಗಳು ಈ ಬಗ್ಗೆ ನಿರ್ಲಕ್ಷ್ಯ ತೋರುತ್ತಿದ್ದಾರೆ. ಅದ್ದರಿಂದ ಡಿಜಿಟಲ್ ಮಾಧ್ಯಮಗಳಿಗೆ ಹೊಸ ಜಾಹೀರಾತು ನೀತಿ, ಪತ್ರಕರ್ತರ ಸಮಸ್ಯೆಗಳ ಬಗ್ಗೆ ಮುಂಬರುವ ವಿಧಾನ ಮಂಡಲ ಅಧಿವೇಶನದಲ್ಲಿ ಮುಖ್ಯಮಂತ್ರಿಗಳ ಗಮನ ಸೆಳೆಯುತ್ತೇನೆ ಎಂದು ಭರವಸೆ ನೀಡಿದರು.


'ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಅವರು ಮಾತನಾಡಿ, ನಾನು ಸಾಕಷ್ಟು ದೇಶಗಳಲ್ಲಿ ವಿದ್ಯಾಭ್ಯಾಸ ಹಾಗೂ ಕೆಲಸ ಮಾಡಿ ಮಾಧ್ಯಮಗಳನ್ನು ನೋಡಿ ಅವರ ಬರವಣಿಗೆಗಳನ್ನು ಕೂಡ ನೋಡಿದ್ದೇನೆ. ಆದರೇ ಎಲ್ಲೋ ಒಂದು ಕಡೆ ಎಡವುತ್ತಿದ್ದಾರೆ. ಮಾಧ್ಯಮಗಳು ಕೋರ್ಟ್ ಇದ್ದ ಹಾಗೆ. ಜಡ್ಜ್‌ಮೆಂಟ್ ಕೊಡುವ ರೀತಿಯಲ್ಲಿ ಮಾಧ್ಯಮಗಳಿರಬೇಕು. ಆಗ ಮಾತ್ರ ನಮ್ಮ ದೇಶ ಮುಂದುವರೆಯಿತ್ತದೆ ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಜಸ್ಟ್ ಕನ್ನಡ ಉಪ ಸಂಪಾದಕ ಪ್ರಶಾಂತ, ವಿಡಿಯೋ ಎಡಿಟರ್ ಆಸಿಫ್, ವಿಡಿಯೋ ಜರ್ನಲಿಸ್ಟ್ ಸುದೀಂದ್ರ ಕುಮಾರ್, ಫೋಟೊ ಜರ್ನಲಿಸ್ಟ್ ವಾಟಾಳ್ ಆನಂದ್ ಅವರನ್ನು ಸನ್ಮಾನಿಸಲಾಯಿತು.

ಹಿರಿಯ ಪತ್ರಕರ್ತ ಚೀ.ಜ.ರಾಜೀವ, ಕೆ.ಆರ್ ಆಸ್ಪತ್ರೆ ಹಿರಿಯ ವೈದ್ಯಾದೀಕಾರಿ ಡಾ.ಯೋಗೀಶ್ ಮಾತನಾಡಿದರು. ಹಿರಿಯ ವಕೀಲ ಅ.ಮಾ ಭಾಸ್ಕರ್ ಸ್ವಾಗತಿಸಿದರು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ರವಿ ಪಾಂಡವಪುರ ಕಾರ್ಯಕ್ರಮ ನಿರೂಪಿಸಿದರು. ಜಸ್ಟ್ ಕನ್ನಡ ಸಂಪಾದಕ ವಿ.ಮಹೇಶ್ ಕುಮಾರ್ ವಂದನಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರಾದ ಇ.ಸಿ ನಿಂಗರಾಜುಗೌಡ, ಡಾ.ಅನಿಲ್ ಥಾಮಸ್, ಪ್ರಭಾಕರ್ ಶಿಂಧೆ, ಮಾಜಿ ಕಾರ್ಪೋರೇಟರ್‌ಗಳಾದ ಜಗದೀಶ್, ಕೆವಿ ಮಲ್ಲೇಶ್, ಲೊಕೇಶ್ ಪಿಯಾ, ಕೆಎಸ್‌ಒಯು ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣ ಗೌಡ, 'ಲಾ ಗೈಡ್' ಕನ್ನಡ ಕಾನೂನು ಪತ್ರಿಕೆ ಗೌರವ ಸಂಪಾದಕ ಹೆಚ್.ಎನ್.ವೆಂಕಟೇಶ್, ವಕೀಲರ ಸಂಘದ ಅಧ್ಯಕ್ಷ ಲೋಕೇಶ್‌ಗೌಡ, ಹಿರಿಯ ವಕೀಲ ಹರೀಶ್ ಹೆಗಡೆ ಸೇರಿ ಪತ್ರಕರ್ತರು, ಗಣ್ಯರು ಉಪಸ್ಥಿತರಿದ್ದರು.

ಮೈಸೂರಲ್ಲಿ ಸ್ನೇಹಿತರಿಂದಲೇ ಇರಿದು ಯುವಕನ ಹತ್ಯೆ



ಮೈಸೂರು, ನ.26– ಯುವಕನೊಬ್ಬನನ್ನು ಮಾರಕಾಸ್ತ್ರಗಳಿಂದ ಇರಿದು ಕೊಲೆ ಮಾಡಿರುವ ಘಟನೆ ಉದಯಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬುಧವಾರ ಬೆಳಿಗ್ಗೆ ನಡೆದಿದೆ.

ಕೊಲೆಯಾದ ಯುವಕನನ್ನು ಭಾರತ್ ಕಾವೇರಿ ಸಿಲ್ಕ್‌ನ ನೌಕರ ಸಯ್ಯದ್ ಸುಫಿಯಾನ್ (19) ಎಂದು ಗುರುತಿಸಲಾಗಿದೆ. ಬುಧವಾರ ಬೆಳಿಗ್ಗೆ 5.40 ಗಂಟೆ ಸಮಯದಲ್ಲಿ ಸ್ನೇಹಿತನ ಜೊತೆ ಟೀ ಕುಡಿಯಲು ಹೋಗಿದ್ದ ವೇಳೆ ಅಲ್ಲೇ ಇದ್ದ ಇತರ ಸ್ನೇಹಿತರೊಂದಿಗೆ ಜಗಳವಾಗಿ ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಈ ವೇಳೆ ಮದ್ಯವ್ಯಸನಿಗಳಾದ ಇಬ್ಬರು ಯುವಕರು ಆತನನ್ನು ಚಾಕುವಿನಿಂದ ಇರಿದಿದ್ದಾರೆ. ಯುವಕ ಓಡಿಹೋಗಿ ತಪ್ಪಿಸಿಕೊಳ್ಳಲು ಯತ್ನಿಸಿದರೂ ಬೆನ್ನತ್ತಿದ ಆ ಯುವಕರು ರಸ್ತೆಯಲ್ಲಿ ಅಟ್ಟಾಡಿಸಿಕೊಂಡು ಕೊಲೆ ಮಾಡಿದ್ದಾರೆ. ಯುವಕನ ಎದೆ ಮತ್ತು ಬೆನ್ನಿನ ಭಾಗಕ್ಕೆ ಇರಿಯಲಾಗಿತ್ತು.

ಕೊಲೆ ನಡೆದ ಸ್ಥಳದಲ್ಲಿ ಸಾರ್ವಜನಿಕರು ಓಡಾಡುತ್ತಿದ್ದರೂ ಯಾರೊಬ್ಬರೂ ಈತನ ಸಹಾಯಕ್ಕೆ ಬರಲಿಲ್ಲ. ರಸ್ತೆಯಲ್ಲೆ ನರಳಾಡಿ ಯುವಕ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ.

ಈ ಎಲ್ಲಾ ಸನ್ನಿವೇಶಗಳ ದೃಶ್ಯ ಸ್ಥಳೀಯ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿದೆ. ಉದಯಗಿರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ ಘಟನೆ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಮೈಸೂರು ನಗರ ಪೊಲೀಸ್ ಕ್ರೀಡಾಕೂಟಕ್ಕೆ ಚಾಲನೆ

ಕ್ರೀಡೆಯಿಂದ ಜೀವನದಲ್ಲಿ ಶಿಸ್ತು ರೂಢಿಸಿಕೊಳ್ಳಬಹುದು

ಜಿಲ್ಲಾ ನ್ಯಾಯಾಧೀಶರಾದ ಉಷಾರಾಣಿ ಅಭಿಮತ



ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ನಗರ ಸಶಸ್ತ್ರ ಮೀಸಲು ಪಡೆ(ಸಿಎಆರ್)ಯ ಕವಾಯತು ಮೈದಾನದಲ್ಲಿ ಬುಧವಾರ ಬೆಳಗ್ಗೆ ಮೂರು ದಿನಗಳ ಪೊಲೀಸರ ವಾರ್ಷಿಕ ಕ್ರೀಡಾಕೂಟಕ್ಕೆ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಉಷಾರಾಣಿ ಚಾಲನೆ ನೀಡಿದರು.

ಮೈಸೂರು,ನ.26(ಎಂಟಿವೈ)– ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಒತ್ತಡದಿಂದ ಹೊರ ಬರುವುದರೊಂದಿಗೆ ಜೀವನದಲ್ಲಿ ಶಿಸ್ತು ಅಳವಡಿಸಿಕೊಳ್ಳಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಉಷಾರಾಣಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ನಗರ ಸಶಸ್ತ್ರ ಮೀಸಲು ಪಡೆ(ಸಿಎಆರ್)ಯ ಕವಾಯತು ಮೈದಾನದಲ್ಲಿ ಬುಧವಾರ ಬೆಳಗ್ಗೆ ಮೈಸೂರು ನಗರ ಪೊಲೀಸ್ ಇಲಾಖೆ ಆಯೋಜಿಸಿದ್ದ ಮೂರು ದಿನಗಳ ಪೊಲೀಸರ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮಾನಸಿಕ ಮತ್ತು ದೈಹಿಕ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ. ಪಠ್ಯಕ್ರಮದಿಂದ ದೊರೆಯದ ಪಾಠ ಕ್ರೀಡೆಯಿಂದ ದೊರೆಯುತ್ತದೆ. ಅಡೆತಡೆಯಿಲ್ಲದ ಜೀವನ ರೂಪಿಸಿಕೊಳ್ಳಲು ಕ್ರೀಡೆ ಸಹಕಾರಿ. ಸದಾ ಒತ್ತಡದ ನಡುವೆ ಕೆಲಸ ನಿರ್ವಹಿಸುವ ಪೊಲೀಸರು, ಬಿಡುವಿನ ವೇಳೆ ಅಥವಾ ಕೆಲ ಸಮಯ ಬಿಡುವು ಮಾಡಿಕೊಂಡು ಕ್ರೀಡೆಯಲ್ಲಿ ಭಾಗವಹಿಸುವ ಮೂಲಕ ಒತ್ತಡ ನಿವಾರಣೆ ಮಾಡಿಕೊಳ್ಳಬೇಕು. ಎಲ್ಲರೂ ಪ್ರತಿದಿನ ಕ್ರೀಡಾ ಚಟುವಟಿಕೆಗಾಗಿ ಸ್ವಲ್ಪ ಸಮಯವಾದರೂ ಮೀಸಲಿಡಬೇಕು ಎಂದು ಸಲಹೆ ನೀಡಿದರು.

ಭಾರತದ ಇತಿಹಾಸದಲ್ಲಿ ಕ್ರೀಡೆಗೆ ತನ್ನದೆ ಆದ ಭವ್ಯ ಇತಿಹಾಸವಿದೆ. ಕ್ರೀಡೆ ನಮ್ಮಲ್ಲಿ ಆತ್ಮವಿಶ್ವಾಸ ಹೆಚ್ಚಿಸುತ್ತದೆ. ಸದೃಢ ಜೀವನ ನಡೆಸಲು ಪ್ರೇರಣೆ ನೀಡುತ್ತದೆ. ಸ್ಪರ್ಧಾತ್ಮಕ ಭಾವನೆ, ಗುಂಪಿನೊಂದಿಗೆ ಹೊಂದಾಣಿಕೆ, ಸಮಯಪಾಲನೆ, ಶಿಸ್ತನ್ನು ಕ್ರೀಡೆ ಕಲಿಸುತ್ತದೆ ಎಂದರು.

ದೇಶದಲ್ಲಿ ಕ್ರೀಡಾಪಟುಗಳನ್ನು ಗೌರವಿಸುವ ಸಂಸ್ಕೃತಿ ಇದೆ. ಮಕ್ಕಳು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಲು ಪೋಷಕರು ಪ್ರೋತ್ಸಾಹ ನೀಡಬೇಕು. ಶಾಲಾ ಅವಧಿಯಲ್ಲಿಯೇ ಮಕ್ಕಳಿಗೆ ಕ್ರೀಡೆಗಳ ಬಗ್ಗೆ ಆಸಕ್ತಿ ತುಂಬಿದರೆ ಕ್ರೀಡೆಗಳಲ್ಲಿ ಸಾಧನೆ ಮಾಡಲು ಸಾಧ್ಯ. ಮುಂಬರುವ ವರ್ಷಗಳಲ್ಲಿ ಒಲಿಂಪಿಕ್ಸ್ ಕ್ರೀಡಾಕೂಟದ ಪದಕ ಪಟ್ಟಿಯಲ್ಲಿ ಮೊದಲ 10 ಸ್ಥಾನದೊಳಗೆ ದೇಶದ ಹೆಸರು ಬರಲು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಕ್ರೀಡಾಪಟುಗಳು ಆಕರ್ಷಕ ಪಥಸಂಚಲನದ ಮೂಲಕ ಅತಿಥಿಗಳಿಗೆ ಗೌರವ ವಂದನೆ ಸಲ್ಲಿಸಿದರು. ಆರ್.ಕೆ.ಸುರೇಶ್ ಕ್ರೀಡಾಪಟುಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಎನ್.ವಿಜಯಶಂಕರ್ ಕ್ರೀಡಾಜ್ಯೋತಿ ಹಿಡಿದು ಸಾಗಿದರು. ಈ ಕ್ರೀಡಾಕೂಟದಲ್ಲಿ ಸಿಎಆರ್, ನರಸಿಂಹರಾಜ ಉಪ ವಿಭಾಗ, ಕೃಷ್ಣರಾಜ ಉಪ ವಿಭಾಗ, ದೇವರಾಜ ಉಪ ವಿಭಾಗ, ವಿಜಯನಗರ ಉಪ ವಿಭಾಗ, ಸಂಚಾರ ಉಪ ವಿಭಾಗ, ವಿಶೇಷ ಪಡೆ, ಮಹಿಳಾ ಪಡೆ, ಅಶ್ವರೋಹಿ ದಳದ ಸಿಬ್ಬಂದಿ ಪಾಲ್ಗೊಂಡಿದ್ದರು. ಇಂದಿನಿಂದ ಮೂರು ದಿನಗಳ ಕಾಲ ನಗರ ಪೊಲೀಸ್ ಇಲಾಖಾ ವ್ಯಾಪ್ತಿಯ ವಿವಿಧ ಠಾಣೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪೊಲೀಸರು ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದಲ್ಲಿ ಅಂತರರಾಷ್ಟ್ರೀಯ ಕ್ರೀಡಾಪಟು ಧನುಷ್ಎಂ.ಆರ್, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಡಿಸಿಪಿಗಳಾದ ಆರ್.ಎನ್.ಬಿಂದುಮಣಿ, ಕೆ.ಎಸ್.ಸುಂದರ್ ರಾಜ್, ಮಾರುತಿ, ಸಿದ್ದನಗೌಡ ಪಾಟೀಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯ...



ಚಾಮುಂಡೇಶ್ವರಿ ಕ್ಷೇತ್ರದ ಶಾಸಕರೂ ಆದ ಮಾಜಿ ಸಚಿವ ಜಿ.ಟಿ.ದೇವೇಗೌಡರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅವರನ್ನು ಅಭಿನಂದಿಸಿ, ಶುಭಾಶಯ ಕೋರಲಾಯಿತು. ಈ ಸಂದರ್ಭದಲ್ಲಿ ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಸಿ.ಮಹದೇಶ್, ದಿ ಮೈಸೂರ್ ಕೋ–ಆಪರೇಟಿವ್ ಬ್ಯಾಂಕಿನ ಉಪಾಧ್ಯಕ್ಷ ರವಿ.ಟಿ, ಜೆಡಿಎಸ್ ಯುವ ಮುಖಂಡ ಮದನ್ ಮಹದೇಶ್, ಮುಖಂಡರಾದ ಪುಟ್ಟೇಗೌಡ, ಕಿರಣ್, ರವಿ ಇತರರು ಹಾಜರಿದ್ದಾರೆ.

ಸಂಚಾರಿ ದಂಡದಲ್ಲಿ ಶೇ.50 ರಿಯಾಯಿತಿ

ಮೈಸೂರು,ನ.26–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮೈಸೂರು ವತಿಯಿಂದ ಕರ್ನಾಟಕ ರಾಜ್ಯದಲ್ಲಿ ಪೊಲೀಸ್ ಇಲಾಖೆ, ಸಂಚಾರಿ ಇ–ಚಲನ್ ದಾಖಲಾದ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991–92ರಿಂದ 2019–20ರ ಅವಧಿಯಲ್ಲಿ ದಾಖಲಾಗಿ, ಪಾವತಿಗೆ ಬಾಕಿಯಿರುವ ಪ್ರಕರಣಗಳ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿಯನ್ನು ನೀಡಿದ್ದು, ಸದರಿ ಈ ರಿಯಾಯಿತಿಯು ನ.21 ಡಿ.12ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗಲಿದೆ. ಹಾಗಾಗಿ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕಾಗಿದ್ದು, ಉಚಿತ ಕಾನೂನು ನೆರವಿಗಾಗಿ ರಾಷ್ಟ್ರೀಯ ಸಹಾಯವಾಣಿ: 15100 ಸಂಪರ್ಕಿಸಬಹುದಾಗಿದೆ.

ಸಂವಿಧಾನ ದಿನಾಚರಣೆ-2025

ಸಮ ಸಮಾಜ ನಿರ್ಮಾಣ; ಅಸಮಾನತೆ ನಿವಾರಣೆ ಭಾರತದ ಶ್ರೇಷ್ಠ ಸಂವಿಧಾನದ ಆಶಯ



ಬೆಂಗಳೂರು, ನ. 26(ಕೆಎಂಶಿ)–ದೇಶದಲ್ಲಿದ್ದ ಅಲಿಖಿತ ಮನುಸ್ಮೃತಿ, ಮನುಷ್ಯ ವಿರೋಧಿ, ಸಮಾನತೆ ವಿರೋಧಿ ನಿಯಮಗಳಿಗೆ ಡಾ.ಅಂಬೇಡ್ಕರ್ ಸಂವಿಧಾನ ದಲ್ಲಿ ಅವಕಾಶ ಇಲ್ಲದಂತಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಸಂವಿಧಾನ ದಿನಾಚರಣೆ–2025 ಉದ್ಘಾಟಿಸಿ ಮಾತ ನಾಡಿದ ಅವರು, ಅದಕ್ಕಾಗಿಯೇ ಮನುವಾದಿಗಳು ಭಾರತದ ಸಂವಿಧಾನ ವಿರೋಧಿಸುತ್ತಾರೆ. ಇಂತಹವರನ್ನು ಗುರುತಿಸಬೇಕು ಎಂದರು.

ಸಮಸಮಾಜ ನಿರ್ಮಾಣ, ಅಸಮಾನತೆ ನಿವಾರಣೆ ಡಾ.ಅಂಬೇಡ್ಕರ್ ಮತ್ತು ಸಂವಿಧಾನದ ಆಶಯವಾಗಿದೆ. ದೇಶದ ಜನತೆಗೆ ಎಂತಹ ಸಂವಿಧಾನ ಇರಬೇಕು ಎಂಬ ಬಗ್ಗೆ ಒಂದು ವರ್ಷ ಸಂವಿಧಾನ ರಚನಾ ಸಭೆಯಲ್ಲಿ ಸಮಗ್ರ ಚರ್ಚೆ ನಡೆಸಿ ಅಂಗೀಕರಿಸಲಾಗಿದೆ.

ಭಾರತದ್ದು ಲಿಖಿತ ಸಂವಿಧಾನ, ನಮ್ಮ ದೇಶದಲ್ಲಿರುವಷ್ಟು ಜಾತಿ, ಧರ್ಮಗಳು ಬೇರೆ ಯಾವ ದೇಶದಲ್ಲೂ ಇಲ್ಲ. ನೆಲಕ್ಕೆ ಒಪ್ಪಿಗೆಯಾಗುವ ಸಂವಿಧಾನವನ್ನು ಡಾ.ಅಂಬೇಡ್ಕರ್ ನೀಡಿದರು.

ಮನುವಾದಿಗಳು ಸಂವಿಧಾನ ಡಾ.ಅಂಬೇಡ್ಕರ್‌ರಿಂದ ಆಗಿಲ್ಲ ಎಂಬುದಾಗಿ ವಾದಿಸುತ್ತಾರೆ. ಆದರೆ, ಅವರೇ ಸಂವಿಧಾನ ಶಿಲ್ಪಿ ಎನ್ನುವುದನ್ನು ಮರೆಯಬಾರದು.

ದೇಶದಲ್ಲಿನ ಜಾತಿ ವ್ಯವಸ್ಥೆ ಮತ್ತು ಅದರ ಅಪಾಯಗಳ ಅರಿವು ಡಾ.ಅಂಬೇಡ್ಕರ್ ಅವರಿಗಿತ್ತು. ಅದಕ್ಕೇ ಸಂವಿಧಾನದಲ್ಲಿ ಮೀಸಲಾತಿ ಸೇರಿಸಿದರು.

ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಂವಿಧಾನದ ಆಶಯ, ಆದರೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷ ಕಳೆದರೂ ಆಶಯ ಈಡೇರಿಲ್ಲ. ಬಸವಣ್ಣರಾದಿಯಾಗಿ ಎಲ್ಲಾ ಮಹಾತ್ಮರೂ ಜಾತಿ ವ್ಯವಸ್ಥೆ ವಿರುದ್ಧ ಹೋರಾಡಿದರೂ ಪಟ್ಟ ಭದ್ರರು ಜಾತಿ ಹೋಗಲು ಬಿಡುತ್ತಿಲ್ಲ. ಕೆಳಜಾತಿಯ ಶೂದ್ರ ವರ್ಗದವರಿಗೆ ಆರ್ಥಿಕ ಶಕ್ತಿ ಬಂದಾಗ ಮಾತ್ರ ಜಾತಿ ವ್ಯವಸ್ಥೆ ದುರ್ಬಲವಾಗುತ್ತದೆ.

ಅಸಮಾನತೆ ಇರುವಲ್ಲಿ ಸಮಾನತೆ ಸುಲಭವಾಗಿ ಬರುವುದಿಲ್ಲ. ದಲಿತರು, ಶೂದ್ರರು, ಹಿಂದುಳಿದ ವರು, ಮುಸ್ಲೀಮರು, ಅಲ್ಪಸಂಖ್ಯಾತರನ್ನು ದ್ವೇಷಿಸಿ ಎಂಬುದಾಗಿ ಯಾವ ಧರ್ಮವೂ ಹೇಳುವುದಿಲ್ಲ. ಸಂವಿಧಾನ ಅಂಗೀಕಾರಕ್ಕೆ 285 ಮಂದಿ ಸದಸ್ಯರಲ್ಲಿ 284 ಮಂದಿ ಸಹಿ ಹಾಕಿದರು. ಒಬ್ಬರು ಮಾತ್ರ ಹಾಕಲಿಲ್ಲ. ಬಹುತೇಕ ಎಲ್ಲರಿಗೂ ಒಪ್ಪಿಗೆ ಆಗುವಂತಹ ಸಂವಿಧಾನವನ್ನು ಡಾ.ಅಂಬೇಡ್ಕರ್ ರಚಿಸಿದರು.

ಸಂವಿಧಾನದ ಸಮಾನತೆ ಆಶಯ ಈಡೇರಿಸುವ ದೃಷ್ಟಿಯಿಂದ ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ಹಲವು ಭಾಗ್ಯಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಿದೆ.

ತುತ್ತು ಅನ್ನಕ್ಕಾಗಿ ಯಾರ ಮನೆ ಮುಂದೆಯೂ ನಿಲ್ಲುವ ದುಃಸ್ಥಿತಿ ಯಾರಿಗೂ ಬರಬಾರದೆಂಬ ಉದ್ದೇಶದಿಂದ ಅನ್ನಭಾಗ್ಯ, ಯಾರ ಮನೆ ಮಕ್ಕಳೂ ಬರಿಗಾಲಲ್ಲಿ ಶಾಲೆಗೆ ಹೋಗಬಾರದೆಂಬ ಕಾರಣಕ್ಕೆ ಶೂ ಭಾಗ್ಯ ತರಲಾಯಿತು. ಎಲ್ಲಾ ಭಾಗ್ಯಗಳು ಹಾಗೂ ಐದೂ ಗ್ಯಾರಂಟಿಗಳ ಹಿಂದೆ ಅಸಮಾನತೆ ನಿವಾರಿಸುವ ಮತ್ತು ಸರ್ವರಿಗೂ ಆರ್ಥಿಕ ಶಕ್ತಿ ತುಂಬುವ ಆಶಯ ಇದೆ ಎಂದರು.

ಕೆಎಸ್‌ಆರ್‌ಟಿಸಿ ನೌಕರರಿಗೆ 14 ತಿಂಗಳ ಹಿಂಬಾಕಿ ವೇತನ ಪಾವತಿಗೆ ಸಮ್ಮತಿ



ಬೆಂಗಳೂರಿನ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳ ನೇತೃತ್ವದಲ್ಲಿ ಬುಧವಾರ ವಿವಿಧ ಕಾರ್ಮಿಕ ಮುಖಂಡರೊಂದಿಗೆ ಸಭೆ ನಡೆಯಿತು.

ಮೈಸೂರು, ನ.26(ಎಸ್‌ಪಿಎನ್)– ಈ ಹಿಂದೆ ಕೆಎಸ್‌ಆರ್‌ಟಿಸಿ ನೌಕರರಿಗೆ 2022ರ ಜ.1ರಿಂದ 2023ರ ಫೆ28ರ ಅವಧಿಗೆ ಉಳಿಸಿಕೊಂಡಿದ್ದ 14 ತಿಂಗಳ ಹಿಂಬಾಕಿ ವೇತನವನ್ನು ಕೊಡುವುದಾಗಿ ರಾಜ್ಯ ಸರ್ಕಾರ ಒಪ್ಪಿಕೊಂಡಿದೆ ಎಂದು ಕಾರ್ಮಿಕ ಸಂಘಟನೆಗಳು ಜಂಟಿ ಕ್ರಿಯಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರಿನ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳ ನೇತೃತ್ವದಲ್ಲಿ ಬುಧವಾರ ನಡೆದ ಸಭೆಯಲ್ಲಿ ಸಿಐಟಿಯು, ಕೆಎಸ್ ಆರ್‌ಟಿಸಿ ಪ.ಜಾ/ ಪ.ಪಂ. ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ, ಕೆಎಸ್‌ಆರ್‌ಟಿಸಿ ನೌಕರರ ಸಂಘದ ಪದಾಧಿಕಾರಿಗಳ ಸಮ್ಮುಖದಲ್ಲಿ ರಾಜ್ಯ ಸರ್ಕಾರ ಭರವಸೆ ನೀಡಿದೆ ಎಂದು ತಿಳಿಸಿದೆ.

ರಾಜ್ಯ ಸರ್ಕಾರ ಸಾರಿಗೆ ನೌಕರರ ಹಿತಾಸಕ್ತಿಗಳಿಗೆ ಧಕ್ಕೆ ತರುವಂತಹ ಪ್ರಸ್ತಾವನೆಯನ್ನು ಕೈ ಬಿಡಬೇಕೆಂದು ಕಾರ್ಮಿಕ ಮುಖಂಡರು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದೆ.ಇನ್ನು ಮುಂದೆ 38 ತಿಂಗಳ ಬಾಕಿ ಹಣ, 2024ರ ಜ.1ರಿಂದ ವೇತನ ಪರಿಷ್ಕರಣೆ ಸೇರಿದಂತೆ ಇತರೆ ಬೇಡಿಕೆ ಕುರಿತು ಚರ್ಚಿಸುವ ಜವಾಬ್ದಾರಿ ಯನ್ನು ನಿಗಮಗಳ ವ್ಯವಸ್ಥಾಪಕ ನಿರ್ದೇಶಕರಿಗೆ ಮತ್ತು ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಯವರಿಗೆ ನೇತೃತ್ವ ವಹಿಸಬೇಕೆಂದು ಒತ್ತಾಯಿಸಲಾಗಿದೆ.

ಇದಕ್ಕೆ ಮುಖ್ಯಮಂತ್ರಿಗಳು ಒಪ್ಪಿದ್ದು, ಮುಂದಿನ ಸಭೆಯನ್ನು 2025ರ ಡಿ.6ರಂದು ಸಾರಿಗೆ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಹಾಗಾಗಿ ಈ ಎಲ್ಲಾ ಸಕಾರಾತ್ಮಕ ಬೆಳವಣಿಗೆಗಳ ಹಿನ್ನೆಲೆಯಲ್ಲಿ 2025ರ ನ.28ರಂದು ಹಮ್ಮಿಕೊಂಡಿದ್ದ ಕೆಎಸ್‌ಆರ್‌ಟಿಸಿ ನೌಕರರ ಪ್ರತಿಭಟನೆಯನ್ನು ಮುಂದೂಡಲಾಗಿದೆ. ಅಲ್ಲಿಯವರೆಗೆ ಸಾರಿಗೆ ನೌಕರರು ತಾಳ್ಮೆ ಮತ್ತು ಸಂಯಮದಿಂದ ಇರುವಂತೆ ಜಂಟಿ ಕ್ರಿಯಾ ಸಮಿತಿ ಮುಖಂಡರು ಮನವಿ ಮಾಡಿದ್ದಾರೆ.

> ಈ ಹಿಂದೆ ನಿವೃತ್ತ ಐಎಎಸ್ ಅಧಿಕಾರಿ ಶ್ರೀನಿವಾಸ ಮೂರ್ತಿ ಏಕಸದಸ್ಯ ಸಮಿತಿಯು ಸರ್ಕಾರಕ್ಕೆ ನೀಡಿರುವ ವರದಿಯಂತೆ 14 ತಿಂಗಳ ಬಾಕಿ ವೇತನವನ್ನು ಕೊಡುವುದಾಗಿಯೂ, 2026ರ ಏ.1ರಿಂದ ಮುಂದಿನ ವೇತನ ಪರಿಷ್ಕರಣೆಯನ್ನು ಒಪ್ಪುವುದಾಗಿಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಮಿಕ ಮುಖಂಡರಿಗೆ ಭರವಸೆ ನೀಡಿದ್ದಾರೆ. ಆದರೆ, ಮುಖ್ಯಮಂತ್ರಿಗಳ ಈ ಪ್ರಸ್ತಾವನೆಯನ್ನು ಜಂಟಿ ಕ್ರಿಯಾ ಸಮಿತಿಯ ಸದಸ್ಯರು ಒಕ್ಕೊರಲಿನಿಂದ ತಿರಸ್ಕರಿಸಿ 38 ತಿಂಗಳ ಬಾಕಿ ಹಣ ಹಾಗೂ 2024ರ ಜ.1ರಿಂದ ನಾಲ್ಕು ವರ್ಷದ ಅವಧಿಯ ವೇತನ ಪರಿಷ್ಕರಣೆ ವಿಷಯದಲ್ಲಿ ಸರ್ಕಾರದೊಂದಿಗೆ ಯಾವುದೇ ರಾಜೀ ಇಲ್ಲ.
> – ಜಂಟಿ ಕ್ರಿಯಾ ಸಮಿತಿ

ವಿದ್ಯಾವರ್ಧಕ ಕಾಲೇಜಲ್ಲಿ ಸಂವಿಧಾನ ದಿನಾಚರಣೆ



ಮೈಸೂರು, ನ. 26– ಸಮಾಜದಲ್ಲಿ ನಮ್ಮನ್ನು ನಾವು ಜವಾಬ್ದಾರಿಯಿಂದ ತೊಡಗಿಸಿ ಕೊಂಡಾಗ ಮಾತ್ರ ನಮಗೆ ನ್ಯಾಯ, ಸ್ವಾತಂತ್ರ್ಯ ಮತ್ತು ಸಮಾನತೆ ಸಿಗುವುದು ಎಂದು ಮೈಸೂರು ವಿಶ್ವವಿದ್ಯಾನಿಲಯ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ. ಎನ್. ಸಿ. ಸುಮತಿ ಅಭಿಪ್ರಾಯಪಟ್ಟರು.

ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಇಂದು ಆಯೋಜಿಸಿದ್ದ 76ನೇ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಅಂಕಪಟ್ಟಿಯ ಜ್ಞಾನದ ಬದಲಿಗೆ ಸಾಮಾಜಿಕ ಜ್ಞಾನ ತೀರಾ ಅವಶ್ಯಕ. ಆಗ ಮಾತ್ರ ಆರ್ಥಿಕ, ಸಾಮಾಜಿಕ, ರಾಜಕೀಯ ಮತ್ತು ಶೈಕ್ಷಣಿಕ ಪ್ರಗತಿ ಸಾಧ್ಯ. ಹಕ್ಕು ಮತ್ತು ಕರ್ತವ್ಯಗಳು ಒಂದೇ ನಾಣ್ಯದ ಎರಡು ಮುಖಗಳು ಎರಡನ್ನು ಸರಿಸಮನಾಗಿ ನಾವು ಬಳಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಮರಿಗೌಡ ಮಾತನಾಡಿ, ಜ್ಞಾನದ ಸಂಪತ್ತನ್ನು ಪಡೆದುಕೊಳ್ಳಲು ವಿಶ್ವವಿದ್ಯಾನಿಲಯದ ಪಠ್ಯ ಅವಶ್ಯಕತೆ ಇಲ್ಲ. ಅದಕ್ಕೆ ಬದಲಾಗಿ ಸಾಮಾಜಿಕ ಜ್ಞಾನವನ್ನು ಪಡೆದುಕೊಳ್ಳಬೇಕು. ಸಂವಿಧಾನ ಪ್ರತಿಯೊಬ್ಬರ ಜೀವನದಲ್ಲಿ ಎಷ್ಟು ಮುಖ್ಯ ಎಂಬುದರ ಬಗ್ಗೆ ವಿದ್ಯಾರ್ಥಿಗಳಿಗೆ ಮನದಟ್ಟು ಮಾಡುವುದರ ಮುಖಾಂತರ ಹಕ್ಕುಗಳನ್ನು ಪಡೆದುಕೊಳ್ಳುವಲ್ಲಿ ನಮ್ಮ ಬಾಧ್ಯತೆಗಳನ್ನು ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

ಎಚ್.ಆರ್.ದೀಪುಗೆ ಪಿಎಚ್.ಡಿ ಪದವಿ



ಮೈಸೂರು, ನ. 26– ಡಾ. ಎಂ.ಪಿ. ಸದಾಶಿವ ಅವರ ಮಾರ್ಗದರ್ಶನದಲ್ಲಿ ಹುಣಸೂರು ತಾಲೂಕಿನ ಹಬ್ಬನಕುಪ್ಪೆ ಗ್ರಾಮದ ಎಚ್.ಆರ್. ದೀಪು ರಸಾಯನಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಹಿಂಸಾಚಾರಕ್ಕೆ ತಿರುಗಿದ ವಿದ್ಯಾರ್ಥಿಗಳ ಪ್ರತಿಭಟನೆ

ವಿಐಟಿ ಭೋಪಾಲ್ ವಿವಿ ಕ್ಯಾಂಪಸ್ ಧ್ವಂಸ, ವಾಹನಗಳಿಗೆ ಬೆಂಕಿ

ಭೂಪಾಲ್: ಮೂಲಭೂತ ಸೌಕರ್ಯ ಕಲ್ಪಿಸುವಂತೆ ಒತ್ತಾಯಿಸಿ ವಿದ್ಯಾರ್ಥಿಗಳು ನಡೆಸುತ್ತಿದ್ದ ಪ್ರತಿಭಟನೆ ಹಿಂಸಾತ್ಮಕ ರೂಪ ಪಡೆದಿದ್ದು, ಭೂಪಾಲ್ ವಿಐಟಿ ಕ್ಯಾಂಪಸ್ ಧ್ವಂಸಗೊಳಿಸಿ, ಹಲವು ವಾಹನಗಳಿಗೆ ಬೆಂಕಿ ಹಚ್ಚಲಾಗಿದೆ.

ಮಧ್ಯಪ್ರದೇಶದ ಸೆಹೋರ್ ಜಿಲ್ಲೆಯ ವಿಐಟಿ ಭೋಪಾಲ್ ವಿಶ್ವವಿದ್ಯಾಲಯದಲ್ಲಿ ಮಂಗಳ ವಾರ ಮಧ್ಯರಾತ್ರಿಯಿಂದ ವಿದ್ಯಾರ್ಥಿಗಳು ಹೋರಾಟ ನಡೆಸುತ್ತಿದ್ದಾರೆ. ಹಿಂಸಾಚಾರ ಭುಗಿಲೆದ್ದಿದೆ ಈ ಹಿನ್ನೆಲೆಯಲ್ಲಿ ನವೆಂಬರ್ 30 ರವರೆಗೆ ವಿಶ್ವವಿದ್ಯಾಲಯವು ರಜೆ ಘೋಷಿಸಬೇಕಾಯಿತು ಎಂದು ಅಧಿಕೃತ ಮೂಲವೊಂದು ತಿಳಿಸಿದೆ.

ಶುದ್ಧವಿಲ್ಲದ ಕುಡಿಯುವ ನೀರು, ಗುಣಮಟ್ಟವಿಲ್ಲದ ಆಹಾರ ಮತ್ತು ಕೊಳಕು ಶೌಚಾಲಯಗಳಿಂದ ಬೇಸತ್ತ ಸುಮಾರು 4,000 ವಿದ್ಯಾರ್ಥಿಗಳು ಮಂಗಳವಾರ ತಡರಾತ್ರಿ ಅಷ್ಟಾ–ಪ್ರದೇಶದ ಕ್ಯಾಂಪಸ್‌ನಲ್ಲಿ ಪ್ರತಿಭಟನೆ ನಡೆಸಿದರು.

ಪರಿಸ್ಥಿತಿಯನ್ನು ನಿಯಂತ್ರಿಸಲು ವಿಶ್ವವಿದ್ಯಾಲಯದ ಭದ್ರತಾ ಸಿಬ್ಬಂದಿಯ ಆರಂಭಿಕ ಪ್ರಯತ್ನಗಳು ವಿಫಲವಾದವು, ಮತ್ತು ಬಾಲಕರ ಹಾಸ್ಟೆಲ್‌ನ ಹೊರಗೆ ಭದ್ರತಾ ಸಿಬ್ಬಂದಿ ಕೆಲವು ಪ್ರಥಮ ವರ್ಷದ ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸುತ್ತಿರುವುದನ್ನು ತೋರಿಸುವ ವೀಡಿಯೊಗಳು ಅಶಾಂತಿಯನ್ನು ಹೆಚ್ಚಿಸಿವೆ.

ಕುಡಿಯಲು ಯೋಗ್ಯವಲ್ಲದ ನೀರಿನಿಂದಾಗಿ ಕಾಮಾಲೆ ಪ್ರಕರಣಗಳು ಹೆಚ್ಚಾಗಿವೆ ಎಂದು ವಿದ್ಯಾರ್ಥಿಗಳು ಆರೋಪಿಸಿದರು, ಕೆಲವರು ಸಾವುನೋವುಗಳಾಗಿರುವ ಬಗ್ಗೆ ಸಹ ವಿದ್ಯಾರ್ಥಿಗಳು ತಿಳಿಸಿದ್ದಾರೆ. ಆದರೆ ವಿಶ್ವವಿದ್ಯಾಲಯದ ಅಧಿಕಾರಿಗಳು ಯಾವುದೇ ಸಾವುನೋವುಗಳನ್ನು ನಿರಾಕರಿಸಿದ್ದಾರೆ.

21ನೇ ವರ್ಷದ ಪುಣ್ಯಸ್ಮರಣೆ



ಶ್ರೀಮಾನ್ ಕಾಳಯ್ಯನವರು
ಭುಗತಗಳ್ಳಿ, ನಿಧನ: 27–11–2004

ನಿಮ್ಮ ಪ್ರೀತಿ ನಿಮ್ಮ ಆಶೀರ್ವಾದ ಸದಾ ನಮ್ಮ ಮೇಲಿರಲಿ. ನಿಮ್ಮ ನೆನಪಿನಲ್ಲಿ:
ಕೆ. ಚಂದ್ರಶೇಖರ ನಾಗಮಣಿ
ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರು
ಅಧ್ಯಕ್ಷ ಫಂಕ್ಷನ್ ಹಾಲ್ ಮಾಲೀಕರು
ಭುಗತಗಳ್ಳಿ ಗೇಟ್ ಹಾಗೂ ಕುಟುಂಬವರ್ಗದವರು


ಮೊದಲನೇ ವರ್ಷದ ಪುಣ್ಯಸ್ಮರಣೆ



ನಿಧನ: 27.11.2024
ಎ.ಸಿದ್ದೇಗೌಡ
ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ

ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ನಿಮ್ಮ ಒಡನಾಟದ ಕ್ಷಣಗಳು ಹಾಗೂ ನಿಮ್ಮ ಮಾತುಗಳು ನಮ್ಮ ಹೃದಯದಲ್ಲಿ ಶಾಶ್ವತವಾಗಿ ನೆಲೆಸಿವೆ.
ನಿಮ್ಮನೆನಪಿನಲ್ಲಿರುವ: ಚಿನ್ನಮ್ಮ ಮತ್ತು ಮಕ್ಕಳು ಹಾಗೂ ಕುಟುಂಬವರ್ಗದವರು

1ನೇ ವರ್ಷದ ಸವಿನೆನಪು



ಕೆ.ಪಳನಿಪ್ರಕಾಶ್
ಅನುಸೂಚಿತ ಜಾತಿ ಪಂಗಡದ [ದೌರ್ಜನ್ಯ ನಿಯಂತ್ರಣ] ಸಮಿತಿಯ ಮಾಜಿ ಸದಸ್ಯ
ನಿಧನ 27-11-2024

ನೀವು ನಮ್ಮನ್ನಗಲಿ ಇಂದಿಗೆ 1 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ ತಾಯಿ ಕಣ್ಣಮ್ಮ, ಪತ್ನಿ ಪಿ.ಜಯಲಕ್ಷ್ಮೀ, ಮಕ್ಕಳಾದ ಬಿಫೀನ್ ಚಂದ್ರಪಾಲ್ ಪಿ, ಅಕ್ಷಯ್ ಸಾಗರ್ ಪಿ, ಮತ್ತು ಕುಟುಂಬಸ್ಥರು, ಮೀನುಪೇಟೆ, ವಿರಾಜಪೇಟೆ.